ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ನವೆಂಬರ್ 14 ಶುಕ್ರವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 206 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

14.11.2025 ಶುಕ್ರವಾರ, ಮಳೆ ನಕ್ಷತ್ರ: ವಿಶಾಖ, 6.11.2025ರಿಂದ 19.11.2025 ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ, ತಿಥಿ: ದಶಮಿ, ನಕ್ಷತ್ರ: ಪುಬ್ಬ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

■ **ಭಾನವಿ ಆಸ್ಪತ್ರೆ:** ಮಧುಮೇಹ ದಿನದ ಅಂಗವಾಗಿ ಜನಜಾಗೃತಿ ಜಾಥಾ, ಚಾಲನೆ: ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಸ್ಥಳ: ಭಾನವಿ ಆಸ್ಪತ್ರೆ, ಕುವೆಂಪುನಗರ, ಬೆಳಗ್ಗೆ 8ಕ್ಕೆ.

■ **ಮೈಸೂರು ವಿವಿ ವೃತ್ತಿ ಕೇಂದ್ರ :** ಹಸ್ತಪ್ರತಿ ಬರವಣಿಗೆ, ಜರ್ನಲ್ ಪ್ರಕಟಣೆ, ಸಂಶೋಧನಾ ನೀತಿಶಾಸ್ತ್ರ ಕುರಿತು ಕಾರ್ಯಾಗಾರ, ಉದ್ಘಾಟನೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಮುಖ್ಯ ಅತಿಥಿಗಳು: ಕುಲಸಚಿವೆ ಎಂ.ಕೆ.ಸವಿತಾ, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 9.30ಕ್ಕೆ

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಅಸ್ತಮಾ, ಉಬ್ಬಸಕ್ಕೆ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.

■ **ವೀರಶೈವ ಸಾರ್ವಜನಿಕ ಸೇವಾ ಸಂಸ್ಥೆ :** ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ಹಾಗೂ ಧಾರ್ಮಿಕ ಸಭೆ, ಸಾನ್ನಿಧ್ಯ : ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು, ರಂಭಾಪುರಿ ಮಠ, ನೇತೃತ್ವ: ಅರಮನೆ ಜಪದ ಕಟ್ಟೆ ಮಠದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಮುಡುಕುತೊರೆ ತೋಪಿನ ಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಧನಗೂರು ಶ್ರೀ ವೀರಸಿಂಹಾಸನ ಸಂಸ್ಥಾನ ಮಠದ ಮುಮ್ಮಡಿ ಷಡಕ್ಷರ ದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ, ಮುಖ್ಯ ಅತಿಥಿಗಳು: ಸಂಸದ ಯದುವೀರ್ ಒಡೆಯರ್, ಶಾಸಕರಾದ ಟಿ.ಎಸ್.ಶ್ರೀವತ್ಸ, ಹೆಚ್.ಎಂ.ಗಣೇಶ್‌ಪ್ರಸಾದ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ಹಿನಕಲ್ ಬಸವರಾಜು, ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಬ್ಯಾತಹಳ್ಳಿ ನಾಗರಾಜು, ಸ್ಥಳ: ಶ್ರೀ ವೀರಶೈವ ಸಾರ್ವಜನಿಕ ಸೇವಾ ಸಂಸ್ಥೆ, ಶ್ರೀರಾಂಪುರ 2ನೇ ಹಂತ, ಬೆಳಗ್ಗೆ 10ಕ್ಕೆ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ ಬೆಳಗ್ಗೆ 10ಕ್ಕೆ

■ **ಶ್ರೀ ನಟರಾಜ ಪಬ್ಲಿಕ್ ಸ್ಕೂಲ್:** ಮಕ್ಕಳ ದಿನಾಚರಣೆ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು: ಗುರುದೇವ್ ಅಕಾಡೆಮಿ ಆಫ್ ಫೈನ್ ಆರ್ಟ್ಸ್ ನಿರ್ದೇಶಕ ಡಾ.ಚೇತನಾ ರಾಧಾಕೃಷ್ಣ, ಅಧ್ಯಕ್ಷತೆ: ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ರಿಂದ.

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು:** ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ಯುವ ರೆಡ್‌ಕ್ರಾಸ್, ಎನ್‌ಸಿಸಿ, ರೇಂಜರ್ಸ್ ಕೇಂದ್ರಗಳ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಶಾಸಕ ಕೆ.ಹರೀಶ್‌ಗೌಡ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಜೀವಧಾರ ರಕ್ತನಿಧಿ ಕೇಂದ್ರ:** ಮಕ್ಕಳ ದಿನಾಚರಣೆ ಅಂಗವಾಗಿ ಅಂಧ ಮಕ್ಕಳಿಗೆ ಉಚಿತ ಶೂ ವಿತರಣೆ ಹಾಗೂ ರಕ್ತದ ಗುಂಪು ಪರೀಕ್ಷೆ, ಮುಖ್ಯ ಅತಿಥಿಗಳು: ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಮೈಸೂರು ನಗರ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಸ್ಥಳ: ಕಿವುಡು ಮಕ್ಕಳ ಸರ್ಕಾರಿ ಶಾಲೆ, ತಿಲಕ್‌ನಗರ, ಬೆಳಗ್ಗೆ 11.30ಕ್ಕೆ

■ **ಮೈಸೂರು ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್:** ಪ್ರಥಮ ವರ್ಷದ ಬಿಇ ವಿದ್ಯಾರ್ಥಿಗಳಿಗೆ ಸೇರ್ಪಡೆ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಚಿಕ್ಕಬಳ್ಳಾಪುರ ಇನ್ಸ್‌ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಮುಖ್ಯ ಆಡಳಿತಾಧಿಕಾರಿ ಸಿ.ಎಲ್.ಆನಂದ್, ಸ್ಥಳ: ಮೈಸೆಮ್ ಕಾಲೇಜು ಆವರಣ, ಮಧ್ಯಾಹ್ನ 2 ಗಂಟೆಗೆ.

■ **ಮೈಸೂರು ವಿಶ್ವವಿದ್ಯಾನಿಲಯ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿದ್ಯಾರ್ಥಿಗಳ ಸಂಘ :** ಉಪನ್ಯಾಸ ಮಾಲಿಕೆ ವಿಶೇಷ ಉಪನ್ಯಾಸ–4, ಹಿರಿಯ ಪ್ರಾಧ್ಯಾಪಕ ಡಾ.ಜೆ. ಸೋಮಶೇಖರ್ ಅವರಿಂದ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಪುಸ್ತಕ ಕುರಿತು ಉಪನ್ಯಾಸ, ಅತಿಥಿಗಳು: ಮೈಸೂರು ವಿವಿ ಗ್ರಂಥಪಾಲಕರಾದ ಡಾ. ಪಿ. ಸರಸ್ವತಿ, ಅಧ್ಯಕ್ಷತೆ: ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಎನ್.ಎಸ್. ಹರಿನಾರಾಯಣ, ಸ್ಥಳ: ಡಾ.ಎಸ್.ಆರ್. ರಂಗನಾಥನ್ ಸಭಾಂಗಣ, ಮೈಸೂರು ವಿವಿ, ಮಧ್ಯಾಹ್ನ 3.30ಕ್ಕೆ.

■ **ಅಭಿವೃದ್ಧಿ ಆಯುಕ್ತರು (ಕರಕುಶಲ), ಜವಳಿ ಮಂತ್ರಾಲಯ, ಜೆಎಸ್‌ಎಸ್ ಮಹಾವಿದ್ಯಾಪೀಠದ ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್ :** ಗಾಂಧಿ ಶಿಲ್ಪ ಬಜಾರ್, ಕರಕುಶಲ ಹಾಗೂ ಕೈಮಗ್ಗ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಶಾಸಕ ಕೆ. ಹರೀಶ್‌ಗೌಡ, ಅಧ್ಯಕ್ಷತೆ : ಅಭಿವೃದ್ಧಿ ಆಯುಕ್ತರ ಕಚೇರಿ (ಕರಕುಶಲ), ಜವಳಿ ಮಂತ್ರಾಲಯದ ಪ್ರಾಂತೀಯ ನಿರ್ದೇಶಕ ಲಕ್ಷ್ಮಣ್ ರಾವ್ ಅತುಕುರಿ, ಮುಖ್ಯ ಅತಿಥಿಗಳು : ಅಪರ ಜಿಲ್ಲಾಧಿಕಾರಿ ಡಾ. ಪಿ. ಶಿವರಾಜು, ಹೂಟಗಳ್ಳಿ ನಗರಸಭಾ ಕಾರ್ಯಾಲಯ ಆಯುಕ್ತ ಬಿ.ಎನ್. ಚಂದ್ರಶೇಖರ್, ಅಭಿವೃದ್ಧಿ ಆಯುಕ್ತರ ಕಚೇರಿ ಉಪ ನಿರ್ದೇಶಕ ಕೆ.ಧನರಾಜನ್, ಕರಕುಶಲ ಸೇವಾ ಕೇಂದ್ರದ ಸಹಾಯಕ ನಿರ್ದೇಶಕ ಎಸ್. ವಿನೋದ್ ಕುಮಾರ್, ಸ್ಥಳ: ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ಪ್ರದೇಶ, ಸಂಜೆ 4ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ:** ಪಂಡಿತ್ ಬಾದ ರಾಮಣಾಚಾರ್ಯ ಅವರಿಂದ 'ಶ್ರೀಮತ್ ಭಾಗವತ್' ಪ್ರವಚನ, ಸ್ಥಳ: ಮಠದ ಆವರಣ, ಜಯಲಕ್ಷ್ಮೀಪುರಂ, ಸಂಜೆ 5 ಗಂಟೆಗೆ.

■ **ಕಲಾಸುರುಚಿ:** ವಿಶ್ವನಾಥ ಮಿರ್ಲೆ ನೆನಪಿನ ಮಕ್ಕಳ ಇಂಗ್ಲಿಷ್ ನಾಟಕೋತ್ಸವ, ಉದ್ಘಾಟನೆ ಎ.ಕೆ ಮೋನಪ್ಪ ಸಂಜೆ 6.30ಕ್ಕೆ ಗೀತಾ ಭಾರತಿ ಸ್ಕೂಲ್ ಆಫ್ ಎಕ್ಸಲೆನ್ಸ್ ವಿದ್ಯಾರ್ಥಿಗಳಿಂದ ಅರ್ಜುನ ದಿಲೆಮ್ಮಾ ನಾಟಕ ಪ್ರದರ್ಶನ, ಸಂಜೆ 7.15ಕ್ಕೆ ಆಚಾರ್ಯ ವಿದ್ಯಾಕುಲದ ವಿದ್ಯಾರ್ಥಿಗಳಿಂದ ಕಬುಲಿವಾಲಾ ನಾಟಕ ಪ್ರದರ್ಶನ, ಸ್ಥಳ: ಸುರುಚಿ ರಂಗಮನೆ, ಕುವೆಂಪುನಗರ.

ಮೈಸೂರು ಆಕಾಶವಾಣಿ




ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸ್ವಾತಂತ್ರ್ಯ ದೀಪ ಸ್ವರಾಜ್ಯ ಸೇನಾನಿಗಳ ಕುರಿತ ಬಾನುಲಿ ಸರಣಿ, ಪ್ರಸ್ತುತಿ: ನಿತೀಶ್ ಡಂಬಳ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ–ವಿಶ್ವ ಲಸಿಕಾ ದಿನದ ಸಂದರ್ಭದಲ್ಲಿ ಮಕ್ಕಳಿಗೆ ಲಸಿಕೆಗಳ ಅಗತ್ಯ ಮತ್ತು ಮಹತ್ವ ಕುರಿತು ತಿಳಿಸಿಕೊಡಲಿದ್ದಾರೆ ಡಾ.ಮಲ್ಲಿಕಾ ಬಿ. ನಂತರ ವಿಶ್ವ ಮಧುಮೇಹ ದಿನಾಚರಣೆಯ ಸಂದರ್ಭದಲ್ಲಿ ಮಧುಮೇಹ ಚಿಕಿತ್ಸೆಯಲ್ಲಿ ಇತ್ತೀಚಿನ ಬೆಳವಣಿಗೆಗಳು ಕುರಿತು ಡಾ. ಕಾರ್ತಿಕ್ ಉಡುಪ ಎನ್. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ, 9.30 ಗಾಂಧೀ ಸ್ಮೃತಿ, 9.35 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ, ಸಂಗೀತ ಸಂಭ್ರಮ ನಾದಲಯ ಸಂಗಮ, ಪ್ರಸ್ತುತಿ: ಹೆಚ್.ಎಲ್.ಶಿವಶಂಕರಸ್ವಾಮಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ, ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ: ಜಿ.ಕೆ.ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ, ಸಖೀ ಸಂವಾದ, ಡಿಜಿಟಲ್ ಯುಗದಲ್ಲಿ ಮಕ್ಕಳನ್ನು ಬೆಳೆಸುವುದು ಹೇಗೆ?, ಪ್ರಸ್ತುತಿ–ಸಹನ ಮತ್ತು ನೇತ್ರಾ, 4.30 ವೃತ್ತಿ ಮಾರ್ಗದರ್ಶನ, 6.50 ಕೃಷಿರಂಗ, ಹವಾಮಾನ ಮಿತ್ರ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ಬೆಂಗಳೂರು, ಸಂಶೋಧನಾ ಸಾರ, ಕೃಷಿ ಕ್ಷೇತ್ರದ ಹೊಸ ಅವಿಷ್ಕಾರ, ಪ್ರಸ್ತುತಿ–ಆರ್. ಲೋಕೇಶ್ವರಿ, 8.00 ಕನ್ನಡ ಭಾರತಿ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00 ಜನಪದ ಸಂಗೀತ, 10.30 ಸವಿನೆನಪು

ಹೋಲಿಕೆಯಾಗದ ಬಗ್ಗೆ ತೀವ್ರ ಆಕ್ಷೇಪ

ಮೈಸೂರು ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಡಿ.ದೇವರಾಜ ಅರಸು ಪ್ರತಿಮೆ ಬದಲಿಸುವ ನಿರ್ಧಾರ





ಮೈಸೂರು, ನ. 13 (ಆರ್‌ಕೆ)– ಮೈಸೂರಿನ ಸಿದ್ಧಾರ್ಥನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಪ್ರತಿಮೆ ಬದಲಿಸಲು ಜಿಲ್ಲಾಡಳಿತ ನಿರ್ಧರಿಸಿದೆ.

ಕಳೆದ 10 ದಿನಗಳ ಹಿಂದಷ್ಟೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಪ್ರತಿಮೆ ಅನಾವರಣಗೊಳಿಸಿದ್ದರು. ಆದರೆ ಪ್ರತಿಮೆಯು ಡಿ.ದೇವರಾಜ ಅರಸು ಅವರ ಬೌದ್ಧಿಕ ನೋಟಕ್ಕೆ ಹೋಲಿಕೆಯಾಗುತ್ತಿಲ್ಲ ಎಂಬ ಆಕ್ಷೇಪ ಸಾರ್ವಜನಿಕರಿಂದ ವ್ಯಾಪಕವಾಗಿ ಕೇಳಿ ಬಂದಿತ್ತು. ಅಲ್ಲದೆ, ವಿಧಾನಪರಿಷತ್ ಸದಸ್ಯ ಎ.ಎಚ್.ವಿಶ್ವನಾಥ್, ರಾಜ್ಯ ಬಿಜೆಪಿ ಒಬಿಸಿ ಮೋರ್ಚಾ ಅಧ್ಯಕ್ಷ ರಘು ಆರ್.ಕೌಟಿಲ್ಯ ಸೇರಿದಂತೆ ಹಲವು ಸಂಘಟನೆಗಳ ಪ್ರಮುಖರು ಅರಸು ಅವರ ಬೌದ್ಧಿಕ ಗುಣಲಕ್ಷಣಗಳು ಮತ್ತು ನೋಟವನ್ನು ಹೋಲುವ ಹೊಸ ಪ್ರತಿಮೆಯನ್ನು ಸ್ಥಾಪಿಸಬೇಕೆಂದು ಒತ್ತಾಯಿಸಿದರು.

ಪ್ರತಿಮೆ ಬದಲಾಯಿಸಬೇಕೆಂದು ಒತ್ತಾಯಿಸಿ ಕೆಲ ಸಂಘಟನೆಗಳು ಪ್ರತಿಭಟನೆ ಸಹ ಮಾಡಿದ್ದವು. ಪ್ರತಿಮೆಯ ಮುಖಚಹರೆ ಬಗ್ಗೆ ವ್ಯಾಪಕ ಆಕ್ಷೇಪಗಳು ಕೇಳಿ ಬಂದಿದ್ದವು. ಸಾರ್ವಜನಿಕರು ಬೇಸರಗೊಂಡಿರುವುದನ್ನು ಮನಗಂಡ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಡಿ. ದೇವರಾಜ ಅರಸು ಅವರ ಹೊಸ ಪ್ರತಿಮೆಯನ್ನು ಸ್ಥಾಪಿಸುವಂತೆ ಮೈಸೂರು ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಿದ್ದರು.

ಈ ಕುರಿತಂತೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿದ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತರೆಡ್ಡಿ ಅವರು, ನವೆಂಬರ್ 3ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಮೆ ಅನಾವರಣಗೊಳಿಸಿದ ನಂತರ ಜಿಲ್ಲಾಡಳಿತಕ್ಕೆ ಸಾರ್ವಜನಿಕರಿಂದ ಪ್ರತಿಮೆ ನೋಟದ ಬಗ್ಗೆ ಹಲವು ಆಕ್ಷೇಪಗಳು ಬರಲಾರಂಭಿಸಿದ್ದವು. ಆದ ಕಾರಣ ಮುಖ್ಯಮಂತ್ರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಡಿ.ದೇವರಾಜ ಅರಸು ಪ್ರತಿಮೆಯನ್ನು ಬದಲಿಸುವಂತೆ ಸೂಚನೆ ನೀಡಿದ ಹಿನ್ನಲೆಯಲ್ಲಿ ನಾವು ಅರಸು ಅವರ ಹೋಲುವಂತಹ ಪ್ರತಿಮೆ ಸ್ಥಾಪಿಸಲು ಮುಂದಾಗಿದ್ದೇವೆ ಎಂದರು.

ಬಹುಬೇಡಿಕೆ ಹಿನ್ನೆಲೆಯಲ್ಲಿ ಶಾಸಕ ತನ್ವೀರ್ ಸೇಠ್, ವಿಧಾನಪರಿಷತ್ ಸದಸ್ಯ ಎ.ಎಚ್.ವಿಶ್ವನಾಥ್, ದೇವರಾಜ ಅರಸು ಅವರ ಮೊಮ್ಮಗ ಸೂರಜ್ ಹೆಗಡೆ ಹಾಗೂ ಹಿಂದಿನ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಅವರು 2024ರ ಫೆಬ್ರವರಿ 19ರಂದು ಮೈಸೂರಿನ ಸಿದ್ಧಾರ್ಥನಗರದ ಡಿಸಿ ಕಚೇರಿ ಆವರಣದಲ್ಲಿ ಡಿ.ದೇವರಾಜ ಅರಸು ಅವರ ಪ್ರತಿಮೆ ಸ್ಥಾಪನೆಗೆ ಭೂಮಿ ಪೂಜೆ ನೆರವೇರಿಸಿದ್ದರು.

ಪ್ರತಿಮೆಗೆ 92 ಲಕ್ಷ ಖರ್ಚಾಗಿದ್ದು, ಇದೀಗ ಅದು ಹೋಲಿಕೆಯಾಗುತ್ತಿಲ್ಲ ಎಂಬ ಕಾರಣಕ್ಕೆ ಬದಲಿಸಲು ನಿರ್ಧರಿಸಿರುವುದರಿಂದ ಸಾರ್ವಜನಿಕರ ತೆರಿಗೆ ಹಣವು ಪೋಲಾದಂತಾಗಿದೆ. ಬೆಂಗಳೂರಿನ ವಿಧಾನಸೌಧದ ಪಶ್ಚಿಮ ಪ್ರವೇಶ ದ್ವಾರದ ಬಳಿ ಸ್ಥಾಪಿಸಿದ್ದ ಡಿ.ದೇವರಾಜ ಅರಸು ಪ್ರತಿಮೆಯು ಅರಸು ಅವರ ನೋಟಕ್ಕೆ ಹೋಲುವಂತಿರಲಿಲ್ಲ ಎಂಬ ದೂರಿನ ಹಿನ್ನೆಲೆಯಲ್ಲಿ 2003ರಲ್ಲಿ ಅಂದಿನ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರು ಪ್ರತಿಮೆ ಬದಲಿಸಲು ನಿರ್ಧರಿಸಿ, ಅದರಂತೆ ಅರಸುರವರ 89ನೇ ಜನ್ಮ ದಿನಾಚರಣೆಯಂದೇ 2004 ಆಗಸ್ಟ್ 20ರಂದು ಹೊಸ ಪ್ರತಿಮೆಯನ್ನು ಅನಾವರಣಗೊಳಿಸಲಾಗಿತ್ತು.

ಉಚಿತ ದಂತ ತಪಾಸಣಾ ಶಿಬಿರ...



ಮೈಸೂರಿನ ಭಾರತಿ ಸ್ತ್ರೀ ಸಮಾಜ ಶಾಲೆ ಆವರಣದಲ್ಲಿ ರೋಟರಿ ಮೈಸೂರು ಅಂಬಾರಿ ವತಿಯಿಂದ ಉಚಿತ ದಂತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ರೋ ಡಾ.ಸಾಗರ್, ರೋಟರಿ ವಲಯ–8ರ ರೋ.ಎಂ.ಶಿವಕುಮಾರ್, ರೋಟರಿ ಮೈಸೂರು ಅಂಬಾರಿ ಅಧ್ಯಕ್ಷ ರೋ.ಹರೀಶ್, ಕಾರ್ಯದರ್ಶಿ ರೋ ಮಂಜುನಾಥ್, ಮಾಜಿ ಅಧ್ಯಕ್ಷ ರೋ ಜಗದೀಶ್, ರೋ.ಭರತ್, ರೋ ಯದುಕೃಷ್ಣ, ನಿರ್ದೇಶಕರಾದ ರೋ.ಲೋಕೇಶ್, ಶಿಕ್ಷಕಿಯರಾದ ವನಿತಾ, ಸುಜಾತಾ, ರೂಪ, ಭಾಗ್ಯಲಕ್ಷ್ಮಿ ಪಾಲ್ಗೊಂಡಿದ್ದರು. ಮಕ್ಕಳಿಗೆ ಕೋಲ್ಗೇಟ್ ಟೂತ್‌ಪೇಸ್ಟ್, ಬ್ರಷ್‌ಗಳನ್ನು ನೀಡಲಾಯಿತು.

ನ.16ರಂದು 'ತನಿಗಂಧ ತನಗ' ಕೃತಿ ಲೋಕಾರ್ಪಣೆ

ಮೈಸೂರು,ನ.13–ಮೈಸೂರು ಸಾಹಿತ್ಯ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನದ ವಾರ್ಷಿಕೋತ್ಸವದ ಅಂಗವಾಗಿ ಕವಯಿತ್ರಿ, ಲೇಖಕಿ, ಸಂಘಟಕಿ ಹಾಗೂ ಪ್ರಕಾಶಕರು ಆಗಿರುವ ಡಾ.ಸೌಗಂಧಿಕಾ ವಿ.ಜೋಯಿಸ್ ಅವರ 'ತನಿಗಂಧ ತನಗ' ಕೃತಿಯನ್ನು ನ.16ರಂದು ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಮಹಾಕವಯಿತ್ರಿ ಡಾ.ಲತಾ ರಾಜಶೇಖರ್ ಲೋಕಾರ್ಪಣೆ ಮಾಡಲಿದ್ದಾರೆ. ಹಿರಿಯ ಹಾಯ್ಕು ಮತ್ತು ತನಗ ಕವಿಗಳು, ಹುನಗುಂದ ಸಿದ್ದಲಿಂಗಪ್ಪ ಬೀಳಗಿ ಕೃತಿ ಕುರಿತು ಮಾತನಾಡಲಿದ್ದಾರೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ನವೆಂಬರ್ 14 ಶುಕ್ರವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 206 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನಮಗೆ ನ್ಯಾಯ ಸಿಕ್ಕಿದೆ: ಡಿಕೆಶಿ



ಬೆಂಗಳೂರು, ನ.13(ಕೆಎಂಶಿ)– ಮೇಕೆದಾಟು ಯೋಜನೆ ವಿರುದ್ಧದ ತಮಿಳುನಾಡು ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿರುವುದು, ನಮಗೆ ನ್ಯಾಯ ಸಿಕ್ಕಂತಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ಪ್ರತಿಕ್ರಿಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕೆದಾಟು ಯೋಜನೆ ಡಿಪಿಆರ್ ವಿರೋಧಿಸಿ ತಮಿಳುನಾಡು ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ವಜಾಗೊಳಿಸಿರುವ ಬಗ್ಗೆ ಸಂಪೂರ್ಣ ಮಾಹಿತಿ ಲಭ್ಯವಾದ ನಂತರ ವಿವರವಾಗಿ ಮಾತನಾಡುವುದಾಗಿ ತಿಳಿಸಿದರು. ▶ 10ನೇ ಪುಟಕ್ಕೆ

ಮೇಕೆದಾಟು ಯೋಜನೆಗೆ ಶುಭ ಕಾಲ

ತಮಿಳ್ನಾಡು ತಕರಾರು ಅರ್ಜಿ ವಜಾಗೊಳಿಸಿದ 'ಸುಪ್ರೀಂ'

- ಕಾವೇರಿ ಜಲ ವಿವಾದದಲ್ಲಿ ರಾಜ್ಯಕ್ಕೆ ಮಹತ್ತರ ಜಯ
- ಕುಡಿಯುವ ನೀರು ವರ್ಗಾಯಿಸದಂತೆ ನಿರ್ದೇಶನ ಕೋರಿ ಸಲ್ಲಿಸಿದ್ದ ಮತ್ತೊಂದು ಅರ್ಜಿ ಪರಿಶೀಲನೆಗೆ ನಕಾರ
- ಯಾವುದೇ ಸಮಸ್ಯೆ ಇದ್ದರೂ ಕಾವೇರಿ ನ್ಯಾಯಮಂಡಳಿ, ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲು ಸೂಚನೆ

ಬೆಂಗಳೂರು, ನ.13(ಕೆಎಂಶಿ)–ಕರ್ನಾಟಕ ಸರ್ಕಾರದಿಂದ ಕೃಷ್ಣರಾಜ ಸಾಗರ (ಕೆಆರ್‌ಎಸ್) ಜಲಾಶಯಕ್ಕೆ ಸಮಾನಾಂತರವಾಗಿ ಮೇಕೆದಾಟು ಅಣೆಕಟ್ಟು ನಿರ್ಮಾಣ ಕ್ರಮ ಪ್ರಶ್ನಿಸಿ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಗುರುವಾರ ವಜಾಗೊಳಿಸಿದೆ.

ತಮಿಳುನಾಡಿನ ತಕರಾರು ಅರ್ಜಿ ವಜಾ ಹಿನ್ನೆಲೆಯಲ್ಲಿ ಮೇಕೆದಾಟು ಜಲಾಶಯ ನಿರ್ಮಾಣಕ್ಕೆ ಎದುರಾಗಿದ್ದ ದೊಡ್ಡ ಅಡ್ಡಿ ನಿವಾರಣೆ ಆಗಿದೆ. ಕಳೆದ ಐದು ವರ್ಷಗಳ ಹಿಂದೆ ತಮಿಳುನಾಡು ಸರ್ಕಾರ ಸಲ್ಲಿಸಿದ್ದ



ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ನ್ಯಾಯಮೂರ್ತಿ ಕೆ.ವಿನೋದ್ ಚಂದ್ರನ್ ಮತ್ತು ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಅವರನ್ನು ಒಳಗೊಂಡ ನ್ಯಾಯಪೀಠ ಅರ್ಜಿ ವಜಾಗೊಳಿಸುವ ಮೂಲಕ ಕರ್ನಾಟಕದ ರೈತರು ಮತ್ತು ಜನತೆಗೆ ಶುಭ ಸಮಾಚಾರ ನೀಡಿದೆ.

ಮೂಲ ಅರ್ಜಿ ವಜಾಗೊಳ್ಳುತ್ತಿದ್ದಂತೆ, ಕುಡಿಯುವ ನೀರನ್ನು ವರ್ಗಾಯಿಸದಂತೆ ಕರ್ನಾಟಕಕ್ಕೆ ನಿರ್ದೇಶನ ಕೋರಿ ತಮಿಳುನಾಡು ಸಲ್ಲಿಸಿದ್ದ ಮತ್ತೊಂದು ಅರ್ಜಿಯನ್ನು ಪುರಸ್ಕರಿಸಲು ನ್ಯಾಯಪೀಠ ನಿರಾಕರಿಸಿತು. ಕಾವೇರಿ ಜಲಾನಯನ ಪ್ರದೇಶದ ನೀರಿನ ವಿವಾದವನ್ನು ಈ ನ್ಯಾಯಾಲಯ ಈಗಾಗಲೇ ಇತ್ಯರ್ಥಪಡಿಸಿದೆ. ▶ 10ನೇ ಪುಟಕ್ಕೆ

ಜಲಾಶಯ ನಿರ್ಮಾಣ ಆರಂಭಕ್ಕೆ ಸಂಪುಟ ಅಸ್ತು

ಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಸಿಎಂ, ಡಿಸಿಎಂಗೆ ಅಭಿನಂದನೆ

ಬೆಂಗಳೂರು, ನ.13(ಕೆಎಂಶಿ)– ಕಾವೇರಿ ನದಿಗೆ ಮೇಕೆದಾಟು ಬಳಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಚಾಲನೆ ನೀಡಲು ಇಂದಿಲ್ಲಿ ಸೇರಿದ್ದ ಸಚಿವ ಸಂಪುಟ ತೀರ್ಮಾನ ಕೈಗೊಂಡಿದೆ.

ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕಾನೂನು ಮತ್ತು ಸಂಸದೀಯ ಖಾತೆ ಸಚಿವ ಎಚ್.ಕೆ.ಪಾಟೀಲ್, ಮೇಕೆದಾಟು ಯೋಜನೆ ಪ್ರಶ್ನಿಸಿ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಜಾಗೊಳಿಸಿದ ಹಿನ್ನೆಲೆಯಲ್ಲಿ ಯೋಜನೆ ಕೈಗೆತ್ತಿಕೊಳ್ಳಲು ಮುಂದಿನ ಹೆಜ್ಜೆ ಇಡಲಾಗುವುದು ಎಂದರು. ನ್ಯಾಯಾಲಯದ ತೀರ್ಪಿನ ಬಗ್ಗೆ ಸಂಪುಟ ಸಂತಸ ವ್ಯಕ್ತಪಡಿಸಿದ್ದಲ್ಲದೆ, ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಅವರನ್ನು ಅಭಿನಂದಿಸಲಾಯಿತು. ಮೇಕೆದಾಟು ಯೋಜನೆಗಾಗಿ ನಾವು ನಡೆಸಿದ ▶ 10ನೇ ಪುಟಕ್ಕೆ

ಮೈಸೂರು ಸರ್ಕಾರಿ ಅತಿಥಿ ಗೃಹ ನೌಕರರ ಗೃಹಗಳ ಆವರಣದಲ್ಲಿ ಶಾಸಕರು, ಸಂಸದರ ಭವನ ನಿರ್ಮಾಣ

ಸಂಪುಟ ಸಭೆ ತೀರ್ಮಾನ

ಬೆಂಗಳೂರು, ನ.13(ಕೆಎಂಶಿ)– ಮೈಸೂರು ನಗರದ ಸರ್ಕಾರಿ ಅತಿಥಿ ಗೃಹದ ನೌಕರರ ವಸತಿ ಗೃಹಗಳ ಆವರಣದಲ್ಲಿ ಶಾಸಕರ ಹಾಗೂ ಸಂಸದರ ಭವನ ನಿರ್ಮಾಣಕ್ಕೆ ಸಚಿವ ಸಂಪುಟ ಇಂದಿಲ್ಲಿ ಹಸಿರು ನಿಶಾನೆ ತೋರಿದೆ.

ಸ್ಥಳೀಯ ಜನಪ್ರತಿನಿಧಿಗಳಿಗೆ ವಸತಿ ಗೃಹ ಹಾಗೂ ಕಚೇರಿಗಳ ನಿರ್ಮಾಣಕ್ಕಾಗಿ 15 ಕೋಟಿ ರೂ. ಬಿಡುಗಡೆ ಮಾಡಿದೆ. ಜಿಲ್ಲೆ ಪ್ರತಿನಿಧಿಸುವ ಸಂಸದರು, ಶಾಸಕರು ಈ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದ್ದು, ಸಾರ್ವಜನಿಕರ ಭೇಟಿ ಹಾಗೂ ಕುಂದುಕೊರತೆ ಆಲಿಸಲು ಪ್ರತ್ಯೇಕ ಕಚೇರಿಗಳು ನಿರ್ಮಾಣವಾಗಲಿದೆ.

ಹಾಸನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಸೌಲಭ್ಯ: ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ 250 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭ, ಅದಕ್ಕೆ ಅಗತ್ಯವಿರುವ ಉಪಕರಣ, ಪೀಠೋಪಕರಣ ಮತ್ತು ಇತರ ಮೂಲಸೌಕರ್ಯ ಕಲ್ಪಿಸಲು 49 ಕೋಟಿ ರೂ.ಗಳನ್ನು ಸಂಪುಟ ಬಿಡುಗಡೆ ಮಾಡಿದೆ.

ಆಸ್ಪತ್ರೆ ಪ್ರಾರಂಭಕ್ಕೆ ಅಗತ್ಯವಿರುವ ಮೂಲ ಸೌಕರ್ಯಕ್ಕೆ 27.92 ಕೋಟಿ ರೂ. ಹಾಗೂ ಕಟ್ಟಡದ ನೆಲ ಮತ್ತು ಮೊದಲ ಮಹಡಿಗೆ ಅವಶ್ಯವಿರುವ ಸರ್ವೀಸಸ್‌ಗಳನ್ನು ನೀಡಲು 21 ಕೋಟಿ ರೂ. ಬಿಡುಗಡೆ ಮಾಡಿದೆ.

ಬಿ.ಎಸ್.ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣ ರದ್ದಿಗೆ ಹೈಕೋರ್ಟ್ ನಕಾರ!



ಬೆಂಗಳೂರು: ಬಾಲಕಿಯೊಬ್ಬಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೊ (ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯ್ದೆ) ಪ್ರಕರಣವನ್ನು ರದ್ದುಗೊಳಿಸಲು ಕರ್ನಾಟಕ ಹೈಕೋರ್ಟ್ ಗುರುವಾರ ನಿರಾಕರಿಸಿದೆ.

ನನ್ನ ವಿರುದ್ಧದ ಪ್ರಕರಣವನ್ನು ರದ್ದುಗೊಳಿಸಬೇಕು ಎಂದು ಕೋರಿ ಬಿಎಸ್ ಯಡಿಯೂರಪ್ಪ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಪೀಠದ ನ್ಯಾಯಮೂರ್ತಿ ಎಂಐ ಅರುಣ್ ವಿಚಾರಣೆ ನಡೆಸಿದರು.

ಆಪಾದಿತ ಅಪರಾಧವನ್ನು ಗಮನದಲ್ಲಿಟ್ಟುಕೊಂಡು, ಬಿಜೆಪಿ ಹಿರಿಯ ನಾಯಕನಿಗೆ ಸಮನ್ಸ್ ಜಾರಿ ಮಾಡಿದ್ದ ವಿಚಾರಣಾ ನ್ಯಾಯಾಲಯದ ಫೆಬ್ರವರಿ 28ರ ಆದೇಶವನ್ನು ಪೀಠ ಎತ್ತಿಹಿಡಿದಿದೆ. ಆದರೆ, ಪ್ರಕರಣದ ವಿಚಾರಣೆ ವೇಳೆ ಅನಗತ್ಯವಾಗಿ ವಿಚಾರಣೆಗೆ ಹಾಜರಾಗುವಂತೆ ಯಡಿಯೂರಪ್ಪ ಅವರಿಗೆ ಒತ್ತಾಯಿಸಬಾರದು. ಅವರ ಉಪಸ್ಥಿತಿ ಅಗತ್ಯವಿಲ್ಲದಿದ್ದರೆ, ವಿಚಾರಣೆಗೆ ಹಾಜರಾಗುವುದಕ್ಕೆ ವಿನಾಯಿತಿ ಕೋರಿ ಅವರ ಪರವಾಗಿ ಸಲ್ಲಿಸಲಾದ ಯಾವುದೇ ಅರ್ಜಿಯನ್ನು ವಿಚಾರಣಾ ನ್ಯಾಯಾಲಯ ಪರಿಗಣಿಸಬೇಕು ಎಂದು ಆದೇಶದಲ್ಲಿ ತಿಳಿಸಿದೆ.




ಸಂತ್ರಸ್ತೆಯ ತಾಯಿ ನೀಡಿದ ದೂರಿನ ಪ್ರಕಾರ, 2024ರ ಫೆಬ್ರವರಿಯಲ್ಲಿ ಬೆಂಗಳೂರಿನ ತಮ್ಮ ನಿವಾಸದಲ್ಲಿ ನಡೆದ ಸಭೆಯ ಸಂದರ್ಭದಲ್ಲಿ ಯಡಿಯೂರಪ್ಪ ಅವರು ತಮ್ಮ 17 ವರ್ಷದ ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

ಸದಾಶಿವನಗರ ಪೊಲೀಸರು ಮಾರ್ಚ್ 14, 2024ರಂದು ಪ್ರಕರಣ ದಾಖಲಿಸಿಕೊಂಡಿದ್ದು, ನಂತರ ಹೆಚ್ಚಿನ ತನಿಖೆಗಾಗಿ ಸಿಐಡಿಗೆ ವರ್ಗಾಯಿಸಲಾಯಿತು. ಸಿಐಡಿ ಎಫ್‌ಐಆರ್ ಮರು ದಾಖಲಿಸಿ, ಮಾಜಿ ಸಿಎಂ ವಿರುದ್ಧ ಆರೋಪಪಟ್ಟಿ ಸಲ್ಲಿಸಿತ್ತು. ಯಡಿಯೂರಪ್ಪ ಪರ ಹಾಜರಾದ ಹಿರಿಯ ವಕೀಲ ಸಿ.ವಿ. ನಾಗೇಶ್, ▶ 10ನೇ ಪುಟಕ್ಕೆ

ಬನ್ನೇರುಘಟ್ಟದಲ್ಲಿ ಸಫಾರಿ ವೇಳೆ ಮಹಿಳೆ ಮೇಲೆ ಚಿರತೆ ದಾಳಿ

ಬೆಂಗಳೂರು, ನ.13– ಬೆಂಗಳೂರು ಹೊರವಲಯದ ಬನ್ನೇರುಘಟ್ಟದಲ್ಲಿ ಸಫಾರಿ ವೇಳೆ ಮಹಿಳೆ ಮೇಲೆ ಚಿರತೆ ದಾಳಿ ಮಾಡಿರುವ ಘಟನೆ ನಡೆದಿದೆ.



ಚೆನ್ನೈ ಮೂಲದ 50 ವರ್ಷದ ವಹಿತ ಬಾನು ಮೇಲೆ ಚಿರತೆ ದಾಳಿ ಮಾಡಿದೆ. ಬನ್ನೇರುಘಟ್ಟ ಸಫಾರಿಗೆ ವಹಿತ ಬಾನು ಪತಿ ಮತ್ತು ಮಗನ ಜತೆ ಬಂದಿದ್ದರು. ಸಫಾರಿ ವಾಹನದ ಗ್ಲಾಸ್ ಓಪನ್ ಮಾಡಿ ನೋಡುತ್ತಿದ್ದರು. ಈ ವೇಳೆ ವಾಹನದ ಮೇಲೆ ಎಗರಿದ ಚಿರತೆ ವಹಿತ ಬಾನು ಕೈಗೆ ಪರಚಿದೆ. ಈ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ನಕ್ಕರೆ ಅದೇ ಸ್ವರ್ಗ

ಗುಂಡ : ನಿನ್ನ ತುಂಬಾ ಪ್ರೀತಿಸ್ತೀನಿ. ಸುಮ್ನೆ ಒಪ್ಕೋ. ಹೃದಯದಲ್ಲಿ ಇಟ್ಕೊಂಡು ರಾಣಿ ತರ ನೋಡ್ಕೋತೀನಿ.!

ಹುಡುಗಿ : ಕಾಲಲ್ಲಿ ಚಪ್ಪಲಿ ಇದೆ ನೋಡಿಲ್ಲಿ!

ಗುಂಡ : ಇರ್ಲಿ ಬಾ...ಚಪ್ಪಲಿ ಬಿಚ್ಚಿ ಬರೋಕೆ ನನ್ನ ಹೃದಯ ದೇವಸ್ಥಾನ ಅಲ್ಲ..!

ಮೈಸೂರು ಮಿತ್ರ

ಶುಕ್ರವಾರ, 14 ನವೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಸಮಯ ಗಾಯವನ್ನು ವಾಸಿ ಮಾಡುವುದಿಲ್ಲ. ಆದರೆ ಅದು ನೋವಿನೊಂದಿಗೆ ಹೇಗೆ ಬದುಕಬೇಕು ಎಂಬುದನ್ನು ಕಲಿಸುತ್ತದೆ. ನೋವನ್ನು ಬಹುಕಾಲ ಅನುಭವಿಸುವುದು ಸಹ ಒಂದು ಪಾಠ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಇಂದಿನ ಸೋಲು ನಾಳಿನ ಗೆಲುವು.

ನಿಮ್ಮ ಪತ್ರಗಳು

ಇಂದು ಶಾಲಾ ಮಕ್ಕಳಿಗೆ ಸಂಭ್ರಮದ ದಿನ



ಮಾನ್ಯರೆ,

ನವೆಂಬರ್ 14 ಎಂದರೆ ಶಾಲಾ ಮಕ್ಕಳಿಗೆ ಅದು ಕೇವಲ ರಜಾ ದಿನವಲ್ಲ. ಅದು ನಿಜವಾದ ಸಂಭ್ರಮದ ದಿನ. ನಮ್ಮ ದೇಶದ ಮೊದಲ ಪ್ರಧಾನಿಗಳಾಗಿದ್ದ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವನ್ನು ಮಕ್ಕಳ ದಿನಾಚರಣೆಯಾಗಿ ಆಚರಿಸಲಾಗುತ್ತದೆ. ಈ ವಿಶೇಷ ದಿನದಂದು, ಮೈಸೂರು ನಗರವು ಶಾಲಾ ಮಕ್ಕಳ ಕಲರವದಿಂದ ತುಂಬಿರುತ್ತದೆ. ಪ್ರತಿ ವರ್ಷ, ಪ್ರಮುಖ ಸ್ಥಳಗಳಿಗೆ ನೀಡುವ ಉಚಿತ ಪ್ರವೇಶದ ವಿಶೇಷ ಸೌಲಭ್ಯಗಳು ಮಕ್ಕಳ ಸಂತೋಷವನ್ನು ಇಮ್ಮಡಿಗೊಳಿಸುತ್ತವೆ. ಮೈಸೂರು ಮೃಗಾಲಯದಲ್ಲಿ ಸಿಂಹ, ಹುಲಿ, ಜಿರಾಫೆಗಳನ್ನು ನೋಡಿ ಮಕ್ಕಳು ಕಿರುಚಾಡಿ, ಖುಷಿಪಡುವ ದೃಶ್ಯಗಳು ಸಾಮಾನ್ಯವಾಗಿ ಕಾಣಸಿಗುತ್ತವೆ. ಅದೇ ರೀತಿ, ಮೈಸೂರು ಅರಮನೆಯ ಭವ್ಯತೆಯನ್ನು ಹಾಗೂ ದಸರಾ ವಸ್ತುಪ್ರದರ್ಶನದಲ್ಲಿನ ವೈವಿಧ್ಯಮಯ ಪ್ರದರ್ಶನಗಳನ್ನು ನೋಡಲು ಮಕ್ಕಳ ತಂಡೋಪತಂಡಗಳು ಸರತಿ ಸಾಲಿನಲ್ಲಿ ನಿಂತಿರುತ್ತವೆ. ಇನ್ನೂ ಕೆಲ ಶಾಲೆಗಳ ಮಕ್ಕಳು ಚಾಮುಂಡಿ ಬೆಟ್ಟವನ್ನೂ ಏರಿ, ಪ್ರಕೃತಿಯ ಸೌಂದರ್ಯವನ್ನು ಸವಿಯುವ ಮೂಲಕ ವಿಭಿನ್ನ ಮತ್ತು ವಿಶಿಷ್ಟವಾಗಿ ಆಚರಿಸುತ್ತಾರೆ. ಬಣ್ಣ ಬಣ್ಣದ ಸಮವಸ್ತ್ರಗಳಲ್ಲಿ, ಶಿಕ್ಷಕರ ಮಾರ್ಗದರ್ಶನದಲ್ಲಿ ಸಾಗುವ ಈ ಮಕ್ಕಳ ನಗು ಮತ್ತು ಸಂಭ್ರಮವು ಇಡೀ ಮೈಸೂರಿಗೆ ಒಂದು ಹೊಸ ಚೈತನ್ಯವನ್ನು ತರುತ್ತದೆ. ನವೆಂಬರ್ 14 ನಿಜಕ್ಕೂ ನಮ್ಮ ದೇಶದ ಭವಿಷ್ಯವಾದ ಮಕ್ಕಳ ಆನಂದಕ್ಕೆ ಮೀಸಲಾದ ಒಂದು ಸುಂದರವಾದ ಹಬ್ಬ.

–ಬಿ.ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.

ವಿವಾದದ ಮಧ್ಯೆ ಶೌಚಾಲಯವಾದ ಲ್ಯಾನ್ಸ್‌ಡೌನ್ ಬಿಲ್ಡಿಂಗ್



ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಪಾರಂಪರಿಕ ಕಟ್ಟಡಗಳು ಅಪಾಯದ ಅಂಚಿನಲ್ಲಿದ್ದು, ಕಳೆದ ಒಂದು ದಶಕದಲ್ಲಿ ಹತ್ತಾರು ಕಟ್ಟಡಗಳು ನೆಲಸಮಗೊಂಡಿವೆ ಪಾರಂಪರಿಕ ಕಟ್ಟಡಗಳನ್ನು ನವೀಕರಣ ಮಾಡಬೇಕೆ ಅಥವಾ ಪುನರ್ ನಿರ್ಮಿಸಬೇಕೇ ಎಂಬ ಗೊಂದಲದಲ್ಲೇ ಹಲವು ಕಟ್ಟಡಗಳು ಪಾಳು ಬಿದ್ದಿದ್ದು, ಸರಿಯಾದ ನಿರ್ವಹಣೆ ಇಲ್ಲದೆ ಶಿಥಿಲಾವಸ್ಥೆ ತಲುಪಿವೆ. ಪಾರಂಪರಿಕ ನಗರದ ಪ್ರಸಿದ್ಧ ಐತಿಹಾಸಿಕ ಲ್ಯಾನ್ಸ್‌ಡೌನ್ ಕಟ್ಟಡ ಕುಸಿದು ಅನೇಕ ವರ್ಷಗಳು ಕಳೆದಿವೆ.

ಲ್ಯಾನ್ಸ್‌ಡೌನ್ ಕಟ್ಟಡದ ಸ್ಥಿತಿಗತಿ ಹೇಗಿದೆ ಎಂದರೆ ಹತ್ತಿರಕ್ಕೆ ಹೋಗಲೂ ಆಗದಷ್ಟು ಗಬ್ಬುನಾತ ಮೂಗಿಗೆ ಬಡಿಯುತ್ತದೆ. ಲ್ಯಾನ್ಸ್‌ಡೌನ್ ಕಟ್ಟಡದ ಮುಂಭಾಗಕ್ಕೆ ಸುರಕ್ಷತೆಯ ದೃಷ್ಟಿಯಿಂದ ಕಬ್ಬಿಣದ ತಡೆಗೋಡೆ ನಿರ್ಮಿಸಲಾಗಿದೆ. ಆದರೆ, ಹಿಂಭಾಗದಲ್ಲಿ ಹಳೇ ಸಂತೆಪೇಟೆಗೆ ಬರುವ ಜನರಿಗೆ, ಅಂಗಡಿ ಮಾಲೀಕರಿಗೆ ಈ ಕಟ್ಟಡ ಸುಲಭ ಶೌಚಾಲಯವಾಗಿದೆ. ಇಲ್ಲಿನ ಖಾಲಿ ಗೋದಾಮುಗಳಲ್ಲಿ ಅಂಗಡಿಯ ತ್ಯಾಜ್ಯಗಳನ್ನು ತುಂಬಲಾಗುತ್ತಿದೆ. ರಾತ್ರಿ ವೇಳೆ ಕಟ್ಟಡದ ಹತ್ತಿರಕ್ಕೆ ಹೋಗಲೂ ಭಯಪಡುವ ವಾತಾವರಣವಿದೆ.ಮಳೆ ಬಂದಾಗ ಕಟ್ಟಡದ ಛಾವಣಿಗಳಿಂದ ನೀರು ಸೋರುವುದು, ಗಾರೆ ಕಳಚಿ ಬೀಳುವುದು ಸಾಮಾನ್ಯ ಸಂಗತಿ. ನವೀಕರಣ ಹಾಗೂ ಸಂರಕ್ಷಣೆ ಅಗತ್ಯವಾಗಿದೆ, ಪಾರಂಪರಿಕ ಕಟ್ಟಡಗಳನ್ನು ಇಟ್ಟಿಗೆ, ಸುಣ್ಣ, ಮಣ್ಣು ಹಾಗೂ ಕಲ್ಲುಗಳನ್ನು ಬಳಸಿ ಕಟ್ಟಲಾಗಿದೆ. ಮಳೆ ಬಂದರೆ ಕಟ್ಟಡ ನೀರನ್ನು ಶೇಖರಿಸಿ ಇಟ್ಟುಕೊಳ್ಳುತ್ತದೆ. ಇದರ ಜೊತೆಗೆ ಗಿಡಗಂಟಿ ಬೆಳೆದು ಕಟ್ಟಡ ಮತ್ತಷ್ಟು ಶಿಥಿಲಗೊಳ್ಳುತ್ತದೆ. ಹಾಗಾಗಿ ಕಾಲಕಾಲಕ್ಕೆ ಇವುಗಳ ನವೀಕರಣ ಆಗಬೇಕು. ಗಾರೆ ಮೇಲೆ ಸಿಮೆಂಟ್ ಹಾಕಿದರೆ ಅದು ಮತ್ತೆ ಬಿರುಕು ಬಿಡುತ್ತದೆ. ಪಿಲ್ಲರ್ ಹಾಕಿ ವೈಜ್ಞಾನಿಕವಾಗಿ ನವೀಕರಿಸಬೇಕು. ಹೆರಿಟೇಜ್ ಸೆಲ್ ರಚನೆ ಮಾಡಬೇಕು .ಅದರಲ್ಲಿ ಪಾರಂಪರಿಕ ತಜ್ಞರು, ನುರಿತರು ಇರಬೇಕು. ಇದರಿಂದ ಅವರು ಕಾಲಕಾಲಕ್ಕೆ ಈ ಸಮಿತಿ ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗೆ ಅಗತ್ಯತೆ ಬಗ್ಗೆ ಸಲಹೆ–ಸೂಚನೆ ನೀಡುತ್ತಾರೆ, ಸಂಬಂಧ ಪಟ್ಟ ಅಧಿಕಾರಿಗಳು ಇಲಾಖೆ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿ.

–ಗೋವಿತ್ ಕಿರಣ್, ರಾಜೇಂದ್ರನಗರ, ಕೆಸರೆ, ಮೈಸೂರು

ಮೇಕೆದಾಟು ಕಾನೂನು ಹೋರಾಟದ ಗೆಲುವಿನ ಪಾಲು ಡಿ.ಕೆ.ಶಿವಕುಮಾರ್‌ಗೆ ಸಲ್ಲಬೇಕು



ಮಾನ್ಯರೆ,

ಮೇಕೆದಾಟು ಯೋಜನೆಯ ವಿರುದ್ಧ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಆಕ್ಷೇಪಣೆ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿರುವುದು ಕರ್ನಾಟಕ ಜನತೆಗೆ ಸಂದ ಜಯವೆಂದೇ ಹೇಳಬೇಕು. ಅದರಲ್ಲೂ ಮುಖ್ಯವಾಗಿ ಬೆಂಗಳೂರು ಜನರಿಗೆ ಶಾಶ್ವತವಾಗಿ ಕುಡಿಯುವ ನೀರಿಗೆ ತೊಂದರೆ ಇಲ್ಲದಂತಾಗುತ್ತದೆ. ಯಾವುದೇ ರಾಜಕೀಯ ಪಕ್ಷವೂ ಇದರಲ್ಲಿ ರಾಜಕಾರಣ ಮಾಡಬಾರದು. ರಾಜ್ಯಕ್ಕೆ ದೊರೆತಿರುವ ಈ ಅಪೂರ್ವ ಗೆಲುವನ್ನು ಎಲ್ಲ ರಾಜಕಾರಣಿಗಳು ಮತ್ತು ಪಕ್ಷಗಳು ತುಂಬು ಹೃದಯದಿಂದ ಸ್ವಾಗತಿಸಬೇಕು. ತಮಿಳುನಾಡು ಸರ್ಕಾರ ಮತ್ತೆ ಕ್ಯಾತೆ ತೆಗೆದು ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಲು ಅವಕಾಶ ನೀಡದೇ ರಾಜ್ಯ ಸರ್ಕಾರವು ಈ ಕೂಡಲೇ ಯೋಜನೆಯನ್ನು ಕೈಗೆತ್ತಿಕೊಳ್ಳಬೇಕು. ಯಾವುದೇ ಅಡೆ ತಡೆ ಇಲ್ಲದೆ ಈ ಯೋಜನೆ ಶೀಘ್ರ ಪೂರ್ಣಗೊಳ್ಳಲಿ ಎಂಬುದೇ ಕರ್ನಾಟಕದ ಏಳು ಕೋಟಿ ಜನರ ಹರಕೆ ಮತ್ತು ಹಾರೈಕೆ. ಈ ಯೋಜನೆಯ ಸಂಪೂರ್ಣ ಯಶಸ್ಸು ಕಳೆದ 3 ವರ್ಷಗಳ ಹಿಂದೆ ಮೇಕೆದಾಟುವಿನಿಂದ ಬೆಂಗಳೂರು ತನಕ ನಡೆದ ಪಾದಯಾತ್ರೆಯ ಜವಾಬ್ದಾರಿ ಹೊತ್ತಿದ್ದ ಹಾಲಿ ಜಲ ಸಂಪನ್ಮೂಲ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಅವರ ತಂಡಕ್ಕೆ ಸಲ್ಲಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

ಜೀವನಶೈಲಿ ಮಿತಿಯಲ್ಲಿದ್ದರೆ; ಮಧುಮೇಹ ಹಿತವೇ ಆಗಿರುತ್ತೆ!



ಇಂದು ವಿಶ್ವ ಮಧುಮೇಹ ದಿನ



–ಡಾ.ವಿ.ಲಕ್ಷ್ಮೀನಾರಾಯಣ್
ಕುವೆಂಪುನಗರ, ಮೈಸೂರು.

ಪ್ರತಿ ನವೆಂಬರ್ 14, ವಿಶ್ವ ಮಧುಮೇಹ ದಿನವನ್ನಾಗಿ ಆಚರಿಸುತ್ತೇವೆ. ಅದಕ್ಕೂ ಒಂದು ಮಹತ್ವದ ಕಾರಣವಿದೆ. ಇನ್ಸುಲಿನ್ ಅನ್ನು ಕಂಡು ಹಿಡಿದ ಪ್ರಾತಃ ಸ್ಮರಣೀಯ ಡಾ.ಫ್ರೆಡರಿಕ್ ಬ್ಯಾಂಟಿಂಗ್ ಅವರ ಜನ್ಮದಿನವೂ ನವೆಂಬರ್ 14. ಈ ಮಹಾನ್ ವೈದ್ಯವಿಜ್ಞಾನಿ ಚಾರಲ್ಸ್ ಬೆಸ್ಟ್ ಎಂಬ ವೈದ್ಯ ವಿದ್ಯಾರ್ಥಿಯೊಡಗೂಡಿ ಜನವರಿ 11, 1922 ರಲ್ಲಿ ಇನ್ಸುಲಿನ್ ಕಂಡು ಹಿಡಿದರು. ಅವರಿಗೆ ಈ ಸಂದರ್ಭದಲ್ಲಿ ಕೃತಜ್ಞತೆ ಸಲ್ಲಿಸೋಣ.

ಈಗ ವಿಷಯಕ್ಕೆ ಬರೋಣ; ಟೈಪ್–2 ಮಧುಮೇಹವನ್ನು ಖಂಡಿತ ರಿವರ್ಸ್ (ಹಿಮ್ಮೆಟ್ಟಿಸುವುದು) ಮಾಡಬಹುದು. ಅದು ಮತ್ತೆ ಬರುವುದೇ ಇಲ್ಲ. ಸಂಪೂರ್ಣ ವಾಸಿಯಾಗುತ್ತದೆ ಎಂದು ಭರವಸೆ ಮೂಡಿಸುವ ಆಪ್‌ಗಳು, ಸಂಸ್ಥೆಗಳು ಈಗ ವ್ಯಾಪಕವಾಗಿ ತಲೆಯೆತ್ತಿವೆ. ಇವು ಇನ್ನು ಒಂದು ಹೆಜ್ಜೆ ಮುಂದೆ ಹೋಗಿ, ಗುಣಪಡಿಸಲಾಗದ ಟೈಪ್–1 ಮಧುಮೇಹವನ್ನು ವಾಸಿ ಮಾಡುತ್ತೇವೆ ಎಂದು ಆಶ್ವಾಸನೆ ನೀಡುತ್ತಿದ್ದಾರೆ. ನಿಜಕ್ಕೂ ಮಧುಮೇಹ ಹಿಮ್ಮೆಟ್ಟಿಸುವಿಕೆ ಸಾಧ್ಯವೇ ಇಲ್ಲ, ಉಪಶಮನ ಸಾಧ್ಯವೇ? ಎಂಬ ಪ್ರಶ್ನೆಗಳು ಮಧುಮೇಹಿಗಳನ್ನು ಬಹಳ ಕಾಲದಿಂದ ಕಾಡುತ್ತಿವೆ. ಮಧುಮೇಹ ಹಿಮ್ಮೆಟ್ಟಿಸುವ, ಇಲ್ಲವೇ ಉಪಶಮನ ಮಾಡುವ ದ್ವಂದ್ವ ಪರಿಸ್ಥಿತಿಯಲ್ಲಿ ಸತ್ಯಾಂಶವನ್ನು ಅರಿಯುವುದು ಅತ್ಯಂತ ಮಹತ್ವದ ಹಾಗೂ ಜರೂರು ವಿಚಾರವಾಗಿದೆ.

ಭಾರತದಲ್ಲಿ ಪ್ರತಿಶತ 51.7%ರಷ್ಟು ಮಂದಿ ಗುರುತಿಸಲಾಗದಂತಹ ಮಧುಮೇಹಿಗಳಿದ್ದಾರೆ. ಈ ವಿಷಯದಲ್ಲಿ ನಮ್ಮದು ಪ್ರಪಂಚದ 2ನೇ ದೇಶವಾಗಿದೆ. ಭಾರತದಲ್ಲಿ ಮಧುಮೇಹ ವ್ಯಾಪಕವಾಗಿ ಹರಡುವುದಕ್ಕೆ ದೇಹಕ್ಕೆ ಅಗತ್ಯವಿರುವುದಕ್ಕಿಂತಲೂ ಅಧಿಕ ಪ್ರಮಾಣದಲ್ಲಿ ಕಾರ್ಬೋಹೈಡ್ರೇಟ್ಸ್ ಅಂದರೆ ಪಿಷ್ಠ ಪದಾರ್ಥಗಳ ಸೇವನೆ ಪ್ರಮುಖ ಕಾರಣವಾಗಿದೆ. ಅದರಲ್ಲೂ ವಿಶೇಷವಾಗಿ ನಾರಿಲ್ಲದ, ಸರಳವಾಗಿ ಶೀಘ್ರ ಜೀರ್ಣವಾಗುವ ಪಾಲಿಷ್ಡ್ ಅಕ್ಕಿ, ಹೊಟ್ಟು ತೆಗೆದಿರುವ ಗೋಧಿ ಇತ್ಯಾದಿ ಪದಾರ್ಥಗಳು.

ಮಧುಮೇಹ ಹಿಮ್ಮೆಟ್ಟಿಸುವಿಕೆ ಮತ್ತು ಉಪಶಮನ

ಹಿಮ್ಮೆಟ್ಟಿಸುವುದು ಎಂದರೆ ಮಧುಮೇಹ ವ್ಯಾಧಿ ಸಂಪೂರ್ಣ ವಾಸಿಯಾಗಿ, ಇನ್ನು ಮುಂದೆ ಅದು ಮರುಕಳಿಸುವುದಿಲ್ಲ ಎಂಬ ಖಾತರಿ. ಉಪಶಮನ ಎಂದರೆ ಮಧುಮೇಹ ವ್ಯಾಧಿ ನಿಯಂತ್ರಣದಲ್ಲಿರುವುದು. ಆದರೆ 'ಸುಪ್ತ' ವಾಗಿದ್ದು, ಅಂತಹ ವ್ಯಕ್ತಿಯು ಎಲ್ಲಿಯವರೆಗೂ ಎಚ್ಚರಿಕೆಯಿಂದ ನಿಬಂಧನೆಗಳನ್ನು ಅನುಸರಿಸುತ್ತಿರುತ್ತಾನೋ ಅಲ್ಲಿಯವರೆಗೆ ಮಧುಮೇಹ ಬಾಧಿಸದು.

ಚಿಕಿತ್ಸೆಯ ವಿಚಾರದಲ್ಲಿ ವಾಸ್ತವ ಸಂಗತಿ

ಎಷ್ಟೇ ಆವಿಷ್ಕಾರಗಳು, ತಂತ್ರಜ್ಞಾನಗಳೂ ಬಂದಿದ್ದರೂ ಮಧುಮೇಹವನ್ನು ಹತೋಟಿಯಲ್ಲಿಡುವ ವಿಚಾರದಲ್ಲಿ ಪೂರ್ಣ ಭರವಸೆಯ, ಸಮಾಧಾನಕರ ಫಲಿತಾಂಶ ಇದುವರೆಗೂ ದೊರೆತಿಲ್ಲ. ಮೊದಮೊದಲಿಗೆ ಮಧುಮೇಹ ಔಷಧಿಗಳನ್ನು ಉಪಯೋಗಿಸುವುದರಿಂದ ಅದು ಹತೋಟಿಯಲ್ಲಿದೆ ಎಂಬುದು ಕಂಡುಬಂದರೂ ಕಾಲ ಕ್ರಮೇಣ ಹೆಚ್ಚು ಹೆಚ್ಚು ಗುಳಿಗೆಗಳನ್ನು ಉಪಯೋಗಿಸುವ ಸನ್ನಿವೇಶ ಉದ್ಭವಿಸಿ ಕೊನೆಗೆ ಡಯಾಬಿಟಿಸ್ ನಿಯಂತ್ರಣಕ್ಕೆ ಇನ್ಸುಲಿನ್ ತೆಗೆದುಕೊಳ್ಳುವ ಅನಿವಾರ್ಯತೆ ಬಂದೊದಗುವುದು ದಿಟ. ಇದು ನನ್ನ ಸುದೀರ್ಘ ಅನುಭವದ ಮಾತು.

ಈ ರೀತಿಯಲ್ಲಿ ಮಧುಮೇಹದಲ್ಲಿ ಗ್ಲೂಕೋಸ್ ನಿಯಂತ್ರಣ ಕ್ರಮೇಣ ಕ್ಷೀಣಿಸುವುದನ್ನು ಗಮನಿಸಿದರೆ ಮಧುಮೇಹಕ್ಕೆ ಚಿಕಿತ್ಸೆ ಮಾಡಬಹುದು. ಜೊತೆಗೆ ನಿಯಂತ್ರಣದಲ್ಲಿಡಬಹುದು. ಆದರೆ ಮಧುಮೇಹವನ್ನು ಸಂಪೂರ್ಣ ವಾಸಿ ಮಾಡಲಿಕ್ಕಾಗದು ಇಲ್ಲವೇ ಹಿಮ್ಮೆಟ್ಟಿಸಲಾಗದು.

ಒಂದು ಮಾತು; ಮಧುಮೇಹ ಔಷಧಿಗಳನ್ನು ಜೀವಮಾನದುದ್ದಕ್ಕೂ ನಿರಂತರವಾಗಿ ಉಪಯೋಗಿಸುವುದರಿಂದ ಅದರ ಅಡ್ಡ ಪರಿಣಾಮಗಳು, ಖರ್ಚು ವೆಚ್ಚಗಳ ಬಗ್ಗೆ ಯೋಚಿಸುವವರೆಲ್ಲರೂ ಈ ದುಗುಡ–ದುಮ್ಮಾನಗಳ ದೂರ ಮಾಡಲು ಮಧುಮೇಹ ರಹಿತರಾಗಿರಲು ಬಯಸುವುದು ಸಹಜವೇ. ಈ ದೃಷ್ಟಿಕೋನಕ್ಕನುಗುಣವಾಗಿ ಇತ್ತೀಚೆಗೆ ಮಧುಮೇಹ ಚಿಕಿತ್ಸೆ ವಿಚಾರದಲ್ಲಿ ಮಹತ್ತರ ಬೆಳವಣಿಗೆಗಳಾಗುತ್ತಿವೆ. ಮಧುಮೇಹವನ್ನು ಸಂಪೂರ್ಣವಾಗಿ ಹಿಮ್ಮೆಟ್ಟಿಸುವ ಪ್ರಯತ್ನಗಳು ನಡೆಯುತ್ತಿವೆ. ಇದರ ಫಲಶ್ರುತಿ ಎಂದರೆ 2ನೇ ನಮೂನೆ ಮಧುಮೇಹವನ್ನು ಉಪಶಮನ ಮಾಡಬಹುದು. ಆದರೆ ಅದು ದೀರ್ಘಕಾಲ ಸಮತೋಲನದಲ್ಲಿರುತ್ತದೆ ಎಂಬುದು ಖಾತರಿಯಲ್ಲ.

> “ ಭಾರತದಲ್ಲಿ ಪ್ರತಿಶತ 51.7%ರಷ್ಟು ಮಂದಿ ಗುರುತಿಸಲಾಗದಂತಹ ಮಧುಮೇಹಿಗಳಿದ್ದಾರೆ. ಈ ವಿಷಯದಲ್ಲಿ ನಮ್ಮದು ಪ್ರಪಂಚದ 2ನೇ ದೇಶವಾಗಿದೆ. ಭಾರತದಲ್ಲಿ ಮಧುಮೇಹ ವ್ಯಾಪಕವಾಗಿ ಹರಡುವುದಕ್ಕೆ ದೇಹಕ್ಕೆ ಅಗತ್ಯವಿರುವುದಕ್ಕಿಂತಲೂ ಅಧಿಕ ಪ್ರಮಾಣದಲ್ಲಿ ಕಾರ್ಬೋಹೈಡ್ರೇಟ್ಸ್ ಅಂದರೆ ಪಿಷ್ಠ ಪದಾರ್ಥಗಳ ಸೇವನೆ ಪ್ರಮುಖ ಕಾರಣವಾಗಿದೆ. ಅದರಲ್ಲೂ ವಿಶೇಷವಾಗಿ ನಾರಿಲ್ಲದ, ಸರಳವಾಗಿ ಶೀಘ್ರ ಜೀರ್ಣವಾಗುವ ಪಾಲಿಷ್ಡ್ ಅಕ್ಕಿ, ಹೊಟ್ಟು ತೆಗೆದಿರುವ ಗೋಧಿ ಇತ್ಯಾದಿ ಪದಾರ್ಥಗಳು.

ಮಧುಮೇಹ ಉಪಶಮನ ಸಾಧಿಸುವ ಪ್ರಾಯೋಗಿಕ ವಿಧಾನಗಳು

ಕೆಲವು ಪ್ರಮುಖ ಅಧ್ಯಯನಗಳಿಂದ ತಿಳಿದು ಬಂದ ವಿಚಾರ, ಗ್ಲೂಕೋಸ್ ನಿಯಂತ್ರಣ ಮಾಹಿತಿಯಂತೆ, ಕಡಿಮೆ ಕ್ಯಾಲೊರಿಸ್ (ಸರಳ ಪಿಷ್ಠ) ಆಹಾರ ಮತ್ತು ಕಡಿಮೆ ಕಾರ್ಬೋಹೈಡ್ರೇಟ್ಸ್ (ಸಮ್ಮಿಶ್ರ ಪಿಷ್ಠ) ಆಹಾರ ಸೇವನೆಯ ಜೀವನ ಶೈಲಿಯನ್ನು ಅಳವಡಿಸಿಕೊಳ್ಳುವುದರಿಂದ ಮಧು ಮೇಹ ಉಪಶಮನ ಸಾಧ್ಯವಿದೆ.

ಆಹಾರದ ವಿಚಾರದಲ್ಲಿ ಅಮೆರಿಕನ್ ಡಯಾಬಿಟಿಸ್ ಸಂಸ್ಥೆಯವರು ಹೇಳುವುದರತ್ತ ಎಲ್ಲರೂ ಹೆಚ್ಚು ಗಮನ ನೀಡುತ್ತಿದ್ದಾರೆ. ಆದರೆ, ನಮ್ಮ ಭಾರತ ದೇಶದಲ್ಲಿ 'ಚರಕ' 'ಸಂಹಿತಾ' ಮತ್ತು 'ಸುಶ್ರುತ ಸಂಹಿತಾ' ಆಯುರ್ವೇದದ ಪ್ರಾಚೀನ ವೈದ್ಯಕೀಯ ಕೃತಿಗಳು. ನಮ್ಮಲ್ಲಿದ್ದಂತಹ ವೈದ್ಯ ಪಂಡಿತರು ವ್ಯಾಧಿಗಳು ಬಾರದಂತೆ ರೋಗ ನಿರೋಧ ಮದ್ದುಗಳ ವಿಚಾರವಾಗಿ 4 ಜೀವನ ಶೈಲಿ ತತ್ವಗಳನ್ನು ಪ್ರತಿಪಾದಿಸಿದ್ದಾರೆ;

ಆಚಾರ–ನಾವು ದಿನ ನಿತ್ಯ ಅನುಸರಿಸುವ ವಿಧಿ–ವಿಧಾನ

ಆಹಾರ–ಸೂಕ್ತ ಆಹಾರ. 'ಊಟ ಬಲ್ಲವನಿಗೆ ರೋಗವಿಲ್ಲ' ಎಂಬ ಗಾದೆ ಮಾತೇ ಇದೆ.

ವ್ಯಾಯಾಮ–ದೇಹಕ್ಕೆ ಅಗತ್ಯವಾದ ಹಾವ–ಭಾವಗಳು.

ಯೋಗ–ಮನಸ್ಸನ್ನು ಸಮತೋಲನೆಯಲ್ಲಿಟ್ಟುಕೊಳ್ಳುವುದು. ಈ ನಾಲ್ಕು ಜೀವನ ಶೈಲಿಯ ತತ್ವಗಳನ್ನು ಯಾರು ಚಾಚೂ ತಪ್ಪದೆ ಅನುಸರಿಸುತ್ತಾರೋ ಅವರಿಗೆ ವ್ಯಾಧಿಗಳು ದೂರ–ದೂರ.

ಹಿಮ್ಮುಖ ಪಡೆದಿದ್ದ ಮಧುಮೇಹ ಮತ್ತೊಮ್ಮೆ ಹಿಂದಿರುಗಿ ಬರುವುದು ಬಹುತೇಕ ಮಧುಮೇಹಿಗಳಲ್ಲಿ ಕಂಡುಬಂದಿದೆ. ಕಾರಣ ಅವರು ಅಳವಡಿಸಿಕೊಂಡಿದ್ದ ಆಹಾರ ಪದ್ಧತಿಗಳನ್ನು ಉಪೇಕ್ಷೆ ಮಾಡಿ, ಸೂಕ್ತ ಜೀವನಶೈಲಿ ಅನುಸರಿಸದಿದ್ದಾಗ ಮಧುಮೇಹ ಉಲ್ಬಣಿಸುವುದುಂಟು. ಒಂದು ಎಚ್ಚರಿಕೆಯ ವಿಚಾರ; 2ನೇ ನಮೂನೆ ಮಧುಮೇಹವನ್ನು ಹಿಮ್ಮೆಟ್ಟಿಸಬಹುದಾದರೂ, 1ನೇ ನಮೂನೆ ಮಧುಮೇಹದವರಿಗೆ ಇದು ಅನ್ವಯಿಸುವುದಿಲ್ಲ. ಏಕೆಂದರೆ ಅದಾಗಲೇ ಅನುಸರಿಸುತ್ತಿರುವ ಇನ್ಸುಲಿನ್ ನಿಲ್ಲಿಸಿದರೆ ಪ್ರಾಣಾಪಾಯ ಖಾತರಿ.

ಮಧುಮೇಹ ಹಿಮ್ಮೆಟ್ಟಿಸುವ ವಿಚಾರದಲ್ಲಿ ಇಲ್ಲವೇ ಉಪಶಮನದ ವಿಚಾರದಲ್ಲಿ ನಮ್ಮಲ್ಲಿರಬೇಕಾದ ಒಂದು ಆಶಾವಾದವೆಂದರೆ; ಪ್ರಪಂಚದ ವೈಜ್ಞಾನಿಕ ಕ್ಷೇತ್ರವು ಮಧುಮೇಹವನ್ನು ವಾಸಿಮಾಡುವ ದಿಕ್ಕಿನಲ್ಲಿ ಸಂಭವನೀಯ ಅಥವಾ ಸಾಧ್ಯವಾಗಬಲ್ಲ ವಿಧಿ–ವಿಧಾನಗಳನ್ನು ನೋಡಿದ ನಂತರ ಗೋಚರವಾಗುತ್ತಿರುವುದೇನೆಂದರೆ, ನಾವು ಮಧುಮೇಹ ಉಪಶಮನಕ್ಕೆ ಹತ್ತಿರದಲ್ಲಿದ್ದೇವೆ.

ಬಾಬರಿ ಮಸೀದಿ ಧ್ವಂಸಕ್ಕೆ ಸೇಡು: ಡಿ.6, ಸರಣಿ ಬಾಂಬ್ ಸ್ಫೋಟಕ್ಕೆ ಸಂಚು; 32 ಕಾರು ಸಜ್ಜುಗೊಳಿಸಿದ್ದ ಉಗ್ರರು



ನವದೆಹಲಿ,ನ.13–ಕೆಂಪುಕೋಟೆ ಬಳಿ ಕಾರು ಸ್ಫೋಟ ಪ್ರಕರಣದ ತನಿಖೆ ನಡೆಸುತ್ತಿರುವ ಅಧಿಕಾರಿಗಳಿಗೆ ಬೆಚ್ಚಿ ಬೀಳಿಸುವಂತಹ ಮಾಹಿತಿಗಳು ಸಿಗುತ್ತಿವೆ. ಬಾಬರಿ ಮಸೀದಿ ಧ್ವಂಸದ ಸೇಡು ತೀರಿಸಿಕೊಳ್ಳಲು ಡಿ.6ರಂದು ದೆಹಲಿಯ 6 ಕಡೆ ಸೇರಿದಂತೆ ದೇಶದ ವಿವಿಧ ಕಡೆಗಳಲ್ಲಿ ಸರಣಿ ಬಾಂಬ್ ಸ್ಫೋಟ ನಡೆಸಲು ಉಗ್ರರು ಸಂಚು ರೂಪಿಸಿದ್ದರು.

ಸ್ಫೋಟಕ ವಸ್ತು ಸಾಗಿಸಲು 32 ಕಾರುಗಳ ಸಜ್ಜು: ಸ್ಫೋಟಕ ವಸ್ತುಗಳು, ಬಾಂಬ್ ಮತ್ತಿತರ ಸರಕುಗಳನ್ನು ಸಾಗಿಸಲು ಮಾರುತಿ ಸುಜುಕಿ ಬ್ರೇಜಾ, ಮಾರುತಿ ಸ್ವಿಫ್ಟ್ ಡಿಜೈರ್ ಮತ್ತು ಫೋರ್ಡ್ ಇಕೋಸ್ಪೋರ್ಟ್ ಸೇರಿದಂತೆ ಮೂವತ್ತೆರಡು ಕಾರುಗಳನ್ನು ಸಜ್ಜುಗೊಳಿಸಲಾಗುತ್ತಿತ್ತು ಎಂದು ಮೂಲಗಳು ತಿಳಿಸಿವೆ.

ಡಿ.6ರಂದು ಅಯೋಧ್ಯೆಯಲ್ಲಿನ 16ನೇ ಶತಮಾನದ ಬಾಬರಿ ಮಸೀದಿಯ ಧ್ವಂಸಕ್ಕೆ ಸೇಡು ತೀರಿಸಿಕೊಳ್ಳಲು ದೇಶದ ಕೆಲವಡೆಗಳಲ್ಲಿ ಸರಣಿ ಬಾಂಬ್ ಸ್ಫೋಟ ನಡೆಸಲು ಸೋಮವಾರ ಸಂಜೆ ಸ್ಫೋಟಗೊಂಡ ಹುಂಡೈ ಐ20 ಕಾರನ್ನು ಬಳಸಿಕೊಳ್ಳಲು ಯೋಜಿಸಲಾಗಿತ್ತು.

ಇಲ್ಲಿವರೆಗೂ ನಾಲ್ಕು ಕಾರುಗಳು ಪತ್ತೆ: ಇಲ್ಲಿಯವರೆಗೆ ಗುರುತಿಸಲಾದ ನಾಲ್ಕು ಕಾರುಗಳು ಹಳೆಯದಾಗಿದ್ದು, ಅವುಗಳನ್ನು ಹಲವು ಬಾರಿ ಮರು ಮಾರಾಟ ಮಾಡಿದ್ದರಿಂದ ಅವುಗಳನ್ನು ಪತ್ತೆಹಚ್ಚುವುದು ಪೊಲೀಸರಿಗೆ ಕಷ್ಟಕರವಾಗಿತ್ತು. ಆದಾಗ್ಯೂ, ಈಗ ನಾಲ್ಕೂ ಕಾರುಗಳು ಪತ್ತೆಯಾಗಿವೆ. ಬ್ರೆಝಾ ಕಾರು ಹರಿಯಾಣದ ಅಲ್–ಫಲಾಹ್ ಸ್ಕೂಲ್ ಆಫ್ ಮೆಡಿಕಲ್ ಸೈನ್ಸಸ್ ಅಂಡ್ ರಿಸರ್ಚ್ ಸೆಂಟರ್ ಆವರಣದಲ್ಲಿ ಕಂಡುಬಂದಿದೆ. ಇದು ಭಯೋತ್ಪಾದಕರ ಚಟುವಟಿಕೆಗಳ ಕೇಂದ್ರಬಿಂದುವಾಗಿದೆ. ನೋಂದಣಿ ಸಂಖ್ಯೆ (DL10CK 0458) ಇಕೋಸ್ಪೋರ್ಟ್ ಕಾರು ಬುಧವಾರ ತಡರಾತ್ರಿ ಹರಿಯಾಣದ ಫರಿದಾಬಾದ್‌ನಲ್ಲಿ ಪತ್ತೆಯಾಗಿದೆ. ಇದರ ಹಿಂದಿನ ಸೀಟಿನಲ್ಲಿ ಯುವಕನೊಬ್ಬ ಮಲಗಿರುವುದು ಕಂಡುಬಂದಿದ್ದು, ಆತನನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ. ಇನ್ನೂ ಸೋಮವಾರ ವಶಕ್ಕೆ ಪಡೆಯಲಾದ ಮಾರುತಿ ಡಿಜೈರ್ ಕಾರಿನಲ್ಲಿ ಅಸಾಲ್ಟ್ ರೈಫಲ್ ಮತ್ತು ಮದ್ದುಗುಂಡುಗಳು ಪತ್ತೆಯಾಗಿವೆ.



ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಮೈಸೂರು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ನೂತನ ಉಪ ನಿರ್ದೇಶಕ ಡಿ.ಉದಯಕುಮಾರ್ (ಆಡಳಿತ) ಅವರನ್ನು ಸನ್ಮಾನಿಸಲಾಯಿತು. ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕನ್ನಡ ಸಾಹಿತ್ಯ ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ, ಕನ್ನಡಪರ ಹೋರಾಟಗಾರ ಶಿವಶಂಕರ್, ದಲಿತ ವೇದಿಕೆಯ ರೇವಣ್ಣ, ಶಿಕ್ಷಣಾಧಿಕಾರಿ ಅನಂತರಾಜು, ನಿರೂಪ ವೆಸ್ಲಿ, ಪತ್ರಾಂಕಿತ ಸಹಾಯಕ ಎಂ.ಕೆ.ಗಣೇಶ್, ಎಂ.ನಾರಾಯಣ್ ಇದ್ದರು.

ಹಿರಿಯ ಸಹಕಾರಿ ವೈ.ಎನ್. ಶಂಕರೇಗೌಡರಿಗೆ ರಾಜ್ಯ ಮಟ್ಟದ 'ಸಹಕಾರ ರತ್ನ' ಪ್ರಶಸ್ತಿ



ಮೈಸೂರು,ನ.13–ರಾಜ್ಯದಲ್ಲಿ ಸಹಕಾರ ಚಳವಳಿಯ ಬೆಳವಣಿಗೆಗೆ ಸಲ್ಲಿಸಿರುವ ಗಮನಾರ್ಹ ಸೇವೆಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಮಾಜಿ ನಿರ್ದೇಶಕ ವೈ.ಎನ್.ಶಂಕರೇಗೌಡ ಅವರಿಗೆ ರಾಜ್ಯ ಮಟ್ಟದ ಪ್ರತಿಷ್ಠಿತ 'ಸಹಕಾರ ರತ್ನ' ಪ್ರಶಸ್ತಿ ಲಭಿಸಿದೆ.

ನಾಳೆ(ಶುಕ್ರವಾರ) ಬೆಂಗಳೂರಿನ ಗಾಯತ್ರಿ ವಿಹಾರ್, ಗೇಟ್ ನಂ:4, ಪ್ಯಾಲೇಸ್ ಗ್ರೌಂಡ್ಸ್, ಮೇಕ್ರಿ ಸರ್ಕಲ್ ಹತ್ತಿರ, ಬೆಂಗಳೂರು ಇಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ವೈ.ಎನ್.ಶಂಕರೇಗೌಡರು ಸಹಕಾರ ಕ್ಷೇತ್ರದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪನ್ನು ಮೂಡಿಸಿದ್ದಾರೆ. ನಾಡಿನ ಸಹಕಾರಿ ಚಳವಳಿಯ ಬೆಳವಣಿಗೆಯಲ್ಲಿ ಮಹತ್ತರ ಕೊಡುಗೆಗಳನ್ನು ನೀಡುತ್ತಾ ಬಂದಿದ್ದಾರೆ. 2007–08ನೇ ಸಾಲಿನಲ್ಲಿ ಸಾವಯವ ರಸಗೊಬ್ಬರ ತಯಾರಿಕೆಗಾಗಿ ಪ್ರಧಾನಮಂತ್ರಿಗಳಿಂದ ರಾಷ್ಟ್ರಪ್ರಶಸ್ತಿ ಪಡೆದಿದ್ದಾರೆ.

2019–20ರ ಸಾಲಿನಲ್ಲಿ ಅತ್ಯುತ್ತಮ ಸಿನಿಮಾ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರದಿಂದ ನರಸಿಂಹರಾಜು ಪ್ರಶಸ್ತಿ ಪಡೆದರು. ಅದೇ ವರ್ಷ ಗ್ರಾಮೀಣಾಭಿವೃದ್ಧಿಗಾಗಿ ರಾಜ್ಯಮಟ್ಟದ ಹೆಚ್. ನರಸಿಂಹಯ್ಯ ಪ್ರಶಸ್ತಿ ಪಡೆದರು. ಕೃಷಿಕರಾಗಿ ಯಶಸ್ಸನ್ನು ಕಂಡಿರುವ ಇವರು, ಸಮಾಜಸೇವೆಯಲ್ಲೂ ಮುಂಚೂಣಿಯಲ್ಲಿದ್ದಾರೆ. ತಮ್ಮ ಹುಟ್ಟೂರಾದ ಟಿ.ನರಸೀಪುರ ತಾಲೂಕು ಬನ್ನೂರಿನ ಯಾಚೇನಹಳ್ಳಿ ಗ್ರಾಮವನ್ನು ಇಡೀ ದೇಶದಲ್ಲೇ ಮಾದರಿಯಾಗುವಂತೆ ಸಹಕಾರತತ್ವದಡಿಯಲ್ಲಿ ಅಭಿವೃದ್ಧಿ ಮಾಡುವುದರ ಮೂಲಕ ಸಹಕಾರಿ ಕ್ರಾಂತಿಯನ್ನೇ ಮಾಡಿದ್ದಾರೆ. ಶ್ರೀಯುತರು ಮೈಸೂರಿನ ಹಲವು ಸಹಕಾರಿ ಸಂಘ–ಸಂಸ್ಥೆಗಳಲ್ಲಿ ಸಕ್ರಿಯರಾಗಿದ್ದಾರೆ. ಇವರು ಮೈಸೂರಿನ ಜ್ಞಾನಬುತ್ತಿ ಸಂಸ್ಥೆಯ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಜ್ಞಾನಬುತ್ತಿ ಸಂಸ್ಥೆ ಅವರನ್ನು ಅಭಿನಂದಿಸಿದೆ.

ಬುಡಕಟ್ಟು ಜನರಿಗೆ 8 ಸಾವಿರ ಮನೆ ನಿರ್ಮಾಣಕ್ಕೆ 160 ಕೋಟಿಗೆ ಅನುಮೋದನೆ

ಬುಡಕಟ್ಟು ಸಂಶೋಧನಾ ಸಂಸ್ಥೆ ನಿರ್ದೇಶಕ ಯೋಗೀಶ್ ಮಾಹಿತಿ

ಮೈಸೂರು,ನ.13(ಎಂಟಿವೈ)– ಅರಣ್ಯ ಆಧಾರಿತ ಬುಡಕಟ್ಟು ಜನರ ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2025–26ನೇ ಸಾಲಿನಲ್ಲಿ 200 ಕೋಟಿ ರೂ. ಮೀಸಲಿಟ್ಟಿದ್ದು, ಅದರಲ್ಲಿ 160 ಕೋಟಿ ವೆಚ್ಚದಲ್ಲಿ 8 ಸಾವಿರ ಮನೆ ಕಟ್ಟಲು ಅನುಮೋದನೆ ಮಾಡಿದ್ದಾರೆ ಎಂದು ಕರ್ನಾಟಕ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಟಿ.ಯೋಗೀಶ್ ತಿಳಿಸಿದ್ದಾರೆ.

ಮೈಸೂರಿನ ಬೋಗಾದಿಯಲ್ಲಿರುವ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ನಡೆದ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಶಸ್ತಿಪತ್ರ ವಿತರಿಸಿ ಮಾತನಾಡಿದ ಅವರು, ಚಾಮರಾಜನಗರ ಜಿಲ್ಲೆಯೊಂದರಲ್ಲೇ 3 ಸಾವಿರ ಮನೆಗಳ ಬೇಡಿಕೆ ಬಂದಿದೆ. ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೋರೇಷನ್‌ನಲ್ಲಿ ಒಂದು ಮನೆ ಕಟ್ಟಲು 2.39 ಲಕ್ಷ ಕೊಡುತ್ತಾರೆ. ಆದರೆ ಮುಖ್ಯಮಂತ್ರಿಗಳು ಬುಡಕಟ್ಟು ಜನರ ಮನೆ ಕಟ್ಟಲು 1 ಮನೆಗೆ 4 ಲಕ್ಷದ 50 ಸಾವಿರ ನಿಗದಿ ಮಾಡಿದ್ದಾರೆ. ಇದಕ್ಕೆ ಸರ್ಕಾರದ ಆದೇಶವು ಆಗಿದೆ. ಮೊದಲ ಹಂತದಲ್ಲಿ ಆಶ್ರಮ ಶಾಲೆಗಳಿಗೆ 200 ಶಿಕ್ಷಕರನ್ನು ನೇಮಕ ಮಾಡಲು ತೀರ್ಮಾನಿಸಿದ್ದೇವೆ. ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ನಿಮ್ಮ ವಿಚಾರ, ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಒಂದು ವೇದಿಕೆಯಾಗಿದೆ. ಬುಡಕಟ್ಟು ಸಮುದಾಯದ ಜನರು ಮದ್ಯಪಾನದ ಚಟಕ್ಕೆ ದಾಸರಾಗದೇ ತಮ್ಮ ಅಭಿವೃದ್ಧಿಯ ಜೊತೆಗೆ ಸಂಸ್ಕೃತಿಯನ್ನು ಉಳಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.



ಮೈಸೂರಿನ ಬೋಗಾದಿಯಲ್ಲಿರುವ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ನಡೆದ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು.

ಪ್ರೊ.ಡಿ.ಆನಂದ್ ಮಾತನಾಡಿ, ಬುಡಕಟ್ಟು ಜನರಿಗೆ ಆಧುನಿಕ ಶಿಕ್ಷಣದ ಅವಶ್ಯಕತೆ ಇದ್ದು ಸರ್ಕಾರ ಬುಡಕಟ್ಟು ಜನರಿಗೆ ಗಟ್ಟಿನೆಲೆಯಾಗುವಂತಹ ಯೋಜನೆಗಳನ್ನು ರೂಪಿಸಬೇಕು. ಈಗ ಆಗಬೇಕಾಗಿರುವ ಅಧ್ಯಯನಗಳೆಂದರೆ ಬುಡಕಟ್ಟು ಜನಾಂಗದ ಒಳಿತಿಗಾಗಿ ಅಧ್ಯಯನ ಮಾಡಬೇಕು. ಶಿಕ್ಷಣ ವ್ಯವಸ್ಥೆಯಲ್ಲಿ ಶಾಲಾ ಮಟ್ಟದಿಂದ ವಿವಿವರೆಗೆ ಪಠ್ಯಕ್ರಮದಲ್ಲಿ ಬುಡಕಟ್ಟು ಜನಾಂಗದ ವಿಷಯವನ್ನು ಸೇರಿಸಿ ಅದನ್ನು ಪಾಠ ಮಾಡಲು ಬುಡಕಟ್ಟು ಜನಾಂಗದವರಿಗೆ ಅವಕಾಶ ಮಾಡಿಕೊಡಬೇಕು ಎಂದರು.

ಸಮಾರಂಭದಲ್ಲಿ ಮೈಸೂರು ವಿವಿ ಸಮಾಜ ಕಾರ್ಯ ಅಧ್ಯಯನ ವಿಭಾಗದ ಮುಖ್ಯಸ್ಥೆ ಡಾ.ಹೆಚ್.ಪಿ.ಜ್ಯೋತಿ, ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪ ನಿರ್ದೇಶಕರಾದ ಹೆಚ್.ಸಿ.ಗಿರಿಜಾಂಬ, ಡಾ.ಕಲಾವತಿ, ಡಾ.ಟಿ.ಎಸ್. ವೆಂಕಟೇಶ್, ಲೆಕ್ಕಾಧಿಕಾರಿ ಬಿ.ಎಸ್.ಭವ್ಯ, ಕಚೇರಿ ಅಧೀಕ್ಷಕಿ ಎಂ.ವಿ.ನಾಗರತ್ನ, ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮುಧೋಳದಲ್ಲಿ ಕಬ್ಬು ಬೆಳೆಗಾರರ ರೋಷಾಗ್ನಿ: 100ಕ್ಕೂ ಹೆಚ್ಚು ಕಬ್ಬು ತುಂಬಿದ ಟ್ರ್ಯಾಕ್ಟರ್ ಟ್ರಾಲಿಗಳಿಗೆ ಬೆಂಕಿ



ಮುಧೋಳ, ನ.13– ಪ್ರತಿ ಟನ್ ಕಬ್ಬಿಗೆ 3,500 ರೂ. ಘೋಷಿಸುವಂತೆ ಆಗ್ರಹಿಸಿ ಕಬ್ಬು ಬೆಳೆಗಾರರು ನಡೆಸಿರುವ ಹೋರಾಟ ಮತ್ತಷ್ಟು ತೀವ್ರ ಸ್ವರೂಪಕ್ಕೆ ತಿರುಗಿದೆ. ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ಸೈದಾಪುರ ಗ್ರಾಮದ ಸಮೀರವಾಡಿಯ ಗೋದಾವರಿ ಕಾರ್ಖಾನೆ ಬಳಿ ಸಾಲಾಗಿ ನಿಲ್ಲಿಸಿದ್ದ 100ಕ್ಕೂ ಹೆಚ್ಚು ಕಂಬು ತುಂಬಿದ ಟ್ರ್ಯಾಕ್ಟರ್ ಟ್ರಾಲಿಗಳಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳಗಾವಿಯಲ್ಲಿ ಧಗಧಗಿಸಿದ್ದ ಕಬ್ಬಿನ ಜ್ವಾಲೆ ತಣ್ಣಗಾಗುತ್ತಿದ್ದಂತೆ ಬಾಗಲಕೋಟೆಯ ಮುಧೋಳದಲ್ಲಿ ಕಬ್ಬು ಕಿಡಿ ಹೊತ್ತಿಕೊಂಡಿತ್ತು. ಸರ್ಕಾರ ನಿಗದಿ ಪಡಿಸಿದ 3300 ರೂಪಾಯಿಗೆ ವಿರೋಧ ವ್ಯಕ್ತಪಡಿಸಿದ್ದ ಮುಧೋಳ ರೈತರು ಕಳೆದೊಂದು ವಾರದಿಂದ ಪ್ರತಿಭಟನೆ ನಡೆಸಿದ್ದರು. ಇಂದು ಮುಧೋಳ ಪಟ್ಟಣವನ್ನು ಬಂದ್ ಮಾಡಿದ್ದರು. ಸಕ್ಕರೆ ಕಾರ್ಖಾನೆ ಮಾಲೀಕರೇ ಮಾತುಕತೆಗೆ ಬರಬೇಕು. ಪ್ರತಿ ಟನ್ ಕಬ್ಬಿಗೆ 3500 ರೂ. ನೀಡಬೇಕು ಎಂದು ಪಟ್ಟು ಹಿಡಿದಿದ್ದರು. ಆದರೆ ಇಂದು ಆಕ್ರೋಶದ ಕಟ್ಟೆ ಹೊಡೆದಿದೆ.

ನಮ್ಮ ಜೊತೆಗೆ ಕಾರ್ಖಾನೆ ಮಾಲೀಕರು ಮಾತುಕತೆಗೆ ಬಂದಿಲ್ಲ ಎಂದು ಕೆಲ ರೈತರು ಸಿಟ್ಟಾಗಿದ್ದರು. ಸಮೀರವಾಡಿ ಬಳಿಯ ಗೋದಾವರಿ ಕಾರ್ಖಾನೆ ಮೆರವಣಿಗೆ ಹೊರಟಿದ್ದರು. ಬೆಳಗ್ಗೆಯಿಂದಲೇ ಟ್ರ್ಯಾಕ್ಟರ್ ರ್‍ಯಾಲಿ ಮಾಡಿದ್ದರು. ಸಮೀರವಾಡಿಯ ಗೋದಾವರಿ ಕಾರ್ಖಾನೆಗೆ ರೈತರು ಮುತ್ತಿಗೆ ಹಾಕಲು ಹೊರಟಿದ್ದರು. ಆಗ ಕಾರ್ಖಾನೆಗೆ ಕಬ್ಬು ಸಾಗಿಸುತ್ತಿದ್ದ ಟ್ರ್ಯಾಕ್ಟರ್‌ಗಳನ್ನು ಕಂಡು ಅವನ್ನು ನೆಲಕ್ಕುರುಳಿಸಿ ಬೆಂಕಿ ಹಚ್ಚಿದ್ದಾರೆ.

ಕಿಡಿಗೇಡಿಗಳ ಕೆಲಸ: ಘಟನೆ ಬಗ್ಗೆ ಮಾಧ್ಯಮದ ಜೊತೆ ಮಾತನಾಡಿದ ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ಅವರು, ಇದು ರೈತರು ಮಾಡಿರುವ ಕೆಲಸ ಅಲ್ಲ. ಕೆಲ ಕಿಡಿಗೇಡಿಗಳು ಮಾಡಿರುವ ಕೆಲಸ. ಜಿಲ್ಲಾ ಸಚಿವರು ಮೂರು ದಿನದಿಂದ ಮುಧೋಳದಲ್ಲಿದ್ದಾರೆ. ರೈತರು–ಕಾರ್ಖಾನೆ ಮಾಲೀಕರ ಜೊತೆ ಮಾತುಕತೆ ಮಾಡುತ್ತಿದ್ದಾರೆ. ಇಡೀ ರಾಜ್ಯದಲ್ಲಿ ಎಲ್ಲೂ ಕೂಡ ರೈತರು ಹೀಗೆ ಮಾಡಿಲ್ಲ, ಹಾಗಾಗಿ ಇದು ರೈತರ ಹೆಸರಲ್ಲಿ ಕಿಡಿಗೇಡಿಗಳು ಮಾಡಿದ್ದು ಎಂದಿದ್ದಾರೆ. ಸರ್ಕಾರ ಏನು ಮಾಡಬೇಕು ಎಲ್ಲಾ ಮಾಡಿದೆ. ಯಾರದ್ದೋ ಮನಸ್ಸಿನಲ್ಲಿ ಅಸೂಯೆ ಇರಬೇಕು. ರೈತರಾದವರು ಯಾರೂ ಕೂಡ ಈ ರೀತಿ ಮಾಡುವುದಿಲ್ಲ. ಇತಿಹಾಸದಲ್ಲಿ ಯಾವ ಸರ್ಕಾರವೂ ಕೊಡದ ದರ ನಾವು ಕೊಟ್ಟಿದ್ದೇವೆ. ರಾಜ್ಯದಲ್ಲಿ ಇಡೀ ರೈತರು ತುಂಬಾ ಸಂತೋಷದಿಂದ ಇದ್ದಾರೆ. ಆದರೆ, ಇದು ಕೆಲವು ಕಿಡಿಗೇಡಿಗಳು ಮಾಡಿರುವ ಕೆಲಸ ಎಂದು ಅವರು ಹೇಳಿದ್ದಾರೆ.

ಘಟನೆ ಬಗ್ಗೆ ಮಾಹಿತಿ ಪಡೆದ ಸಿಎಂ ಸಿದ್ದರಾಮಯ್ಯ: ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ದೂರವಾಣಿ ಮೂಲಕ ಬಾಗಲಕೋಟೆ ಡಿಸಿ, ಎಸ್‌ಪಿಯಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ತಿಮ್ಮಾಪುರ ಜೊತೆಯೂ ಫೋನ್‌ನಲ್ಲಿ ಚರ್ಚೆ ಮಾಡಿದ್ದು, ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡುವಂತೆ ಸಿಎಂ ಸೂಚಿಸಿದ್ದಾರೆ.

ರೈತ ಸಂಘದ ಮುಖಂಡರ ಖಂಡನೆ

ಮೈಸೂರು, ನ.13– ಮುಧೋಳದಲ್ಲಿ ಕಬ್ಬು ತುಂಬಿದ್ದ ಟ್ರ್ಯಾಕ್ಟರ್ ಟ್ರ್ಯಾಲಿ ಗಳಿಗೆ ಬೆಂಕಿ ಹೊತ್ತಿಸಿದ ಘಟನೆಯನ್ನು ಕರ್ನಾಟಕ ರಾಜ್ಯ ರೈತ ಸಂಘವು ತೀವ್ರವಾಗಿ ಖಂಡಿಸಿ, ಇದಕ್ಕೆ ಸರ್ಕಾರದ ನಿರ್ಲಕ್ಷ್ಯ ಧೋರಣೆಯೇ ಕಾರಣ ಎಂದಿದೆ.



ಬಡಗಲಪುರ ನಾಗೇಂದ್ರ

ಈ ಸಂಬಂಧ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಪತ್ರಿಕಾ ಹೇಳಿಕೆ ನೀಡಿದ್ದು, ಮುಧೋಳದಲ್ಲಿ ಸಕ್ಕರೆ ಕಾರ್ಖಾನೆ ಮುಂದೆ ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಾಕಿ ಸುಟ್ಟಿರುವ ಕೃತ್ಯವನ್ನು ಯಾರೇ ಮಾಡಿದ್ದರೂ ಖಂಡನೀಯ ಎಂದಿದ್ದಾರೆ. ಕಳೆದ 15 ದಿನಗಳಿಂದಲೂ ರೈತರು ಕಬ್ಬಿನ ಬಾಕಿ ಪಾವತಿ ಮತ್ತು ಬೆಲೆ ಹೆಚ್ಚಿಸುವಂತೆ ಶಾಂತಿಯುತ ಪ್ರತಿಭಟನೆ ನಡೆಸುತ್ತಾ ಬಂದಿದ್ದಾರೆ. ಈ ನಡುವೆ ನ.8ರಂದು ನಿಗಧಿ ಮಾಡಿದ ಬೆಲೆಗೆ ಅಸಮ್ಮತಿ ಸೂಚಿಸಿ ಮುಧೋಳ, ಹಾವೇರಿ, ಬೀದರ್‌ನಲ್ಲಿ ಪ್ರತಿಭಟನೆ ಮುಂದುವರೆಸಿದ್ದಾರೆ. ಆದರೆ ಈ ಭಾಗದ ರೈತರು ಮತ್ತು ಕಾರ್ಖಾನೆ ಮಾಲೀಕರೊಂದಿಗೆ ಮಾತನಾಡಿ, ಸಮಸ್ಯೆ ಪರಿಹರಿಸುವಲ್ಲಿ ನಿರ್ಲಕ್ಷ್ಯ ತಳೆದಿರುವ ಸರ್ಕಾರದ ನೀತಿಯೇ ಈ ಘಟನೆಗೆ ಕಾರಣವಾಗಿದೆ. ರೈತರು ಶಾಂತಿಯುತ ಚಳವಳಿ ಮುಂದುವರೆಸಬೇಕು. ಯಾವುದೇ ಕಿಡಿಗೇಡಿ ತನಕ್ಕೂ ಅವಕಾಶ ನೀಡಬಾರದು. ಮುಧೋಳದಲ್ಲಿ ರೈತ ಮುಖಂಡರು ಅಹಿಂಸಾ ಮಾರ್ಗದಲ್ಲಿ ಹೋರಾಟ ನಡೆಸಿದ್ದಾರೆ. ಚಳವಳಿಕಾರರಿಂದ ಈ ಘಟನೆ ನಡೆದಿಲ್ಲ, ಇದರ ಹಿಂದೆ ಸ್ಥಾಪಿತ ಹಿತಾಸಕ್ತಿಗಳ ಹುನ್ನಾರ ಮತ್ತು ಕೈವಾಡ ಇದೆ ಎಂಬುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಸಕ್ಕರೆ ಕಾರ್ಖಾನೆ ಮಾಲೀಕರ ಮೇಲೂ ಗುಮಾನಿ ವ್ಯಕ್ತವಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಈ ಘಟನೆ ಬಗ್ಗೆ ಸರ್ಕಾರ ನ್ಯಾಯಾಂಗ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಕೂಡಲೇ ರೈತ ಮುಖಂಡರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರೊಂದಿಗೆ ಚರ್ಚೆ ನಡೆಸಬೇಕು. ಕೇಂದ್ರ ಸರ್ಕಾರವೂ ತನ್ನ ಜವಾಬ್ದಾರಿ ನಿಭಾಯಿಸಬೇಕು. ಆ ಭಾಗದವರೇ ಆದ ಕೇಂದ್ರ ಆಹಾರ ಸಚಿವ ಪ್ರಹ್ಲಾದ್ ಜೋಶಿ ಅವರು ಮಧ್ಯ ಪ್ರವೇಶಿಸಿ, ಪರಿಹಾರ ಕಂಡುಕೊಳ್ಳಬೇಕು. ಈ ನಿಟ್ಟಿನಲ್ಲಿ ಆ ಭಾಗದ ಸಂಸದರಾದ ಮಾಜಿ ಸಿಎಂ ಬೊಮ್ಮಾಯಿ ಪ್ರಯತ್ನಿಸಬೇಕು ಎಂದು ಆಗ್ರಹಿಸಿದ್ದಾರೆ.



ಮೈಸೂರು ಮಿತ್ರ 46
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು



ಉಪ ನಿರ್ದೇಶಕರ ಕಛೇರಿ ಶಾಲಾ ಶಿಕ್ಷಣ ಇಲಾಖೆ
ಹಾಸನ ಜಿಲ್ಲೆ, ಹಾಸನ–573201
E-mail: ddpi.edu.karhas@nic.in Ph:08172-268234
ಸಂಖ್ಯೆ:ಲೆಪ2/ಜಿ.ಪಂ.ನಿಧಿ.ಅ.ಸಾ.ಖ/08/2025–26.
ದಿನಾಂಕ:12.11.2025

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ

ಹಾಸನ ಜಿಲ್ಲೆಯ 25 ಸರ್ಕಾರಿ ಪ್ರೌಢ ಶಾಲೆಗಳಿಗೆ ಜಿಲ್ಲಾ ಪಂಚಾಯತ್ ಅಂಕ್ ಡಾಕ್ಯೂಮೆಂಟ್ ಅನುದಾನದಲ್ಲಿ ಇಂಟರ್‍ಯಾಕ್ಟೀವ್ ಪೆನಲ್ ಬೋರ್ಡ್ (ಸ್ಮಾರ್ಟ್ ಕ್ಲಾಸ್) ಸಾಮಗ್ರಿಗಳನ್ನು ಖರೀದಿಸಲು ಅರ್ಹ ಸಂಸ್ಥೆ/ಏಜೆನ್ಸಿಗಳಿಂದ ಅಲ್ಪಾವದಿ ಟೆಂಡರ್ ಅನ್ನು KPPP ಮುಖಾಂತರ ಅಂತರ್ಜಾಲ https://kppp.karnataka.gov.in ನಲ್ಲಿ ದ್ವಿಲಕೋಟೆ ಪದ್ಧತಿಯಲ್ಲಿ ಆಹ್ವಾನಿಸಲಾಗಿದೆ. ಆಸಕ್ತಿ ಇರುವ ಅರ್ಹ ಸಂಸ್ಥೆ/ಏಜೆನ್ಸಿಯವರು ಅರ್ಜಿ ಸಲ್ಲಿಸಲು ಕೋರಿದೆ. ಟೆಂಡರ್ ಅಂದಾಜು ಮೊತ್ತ : 50,00,000/– ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 12–11–2025 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 26–11–2025, 4-00 P.M ತಾಂತ್ರಿಕ ಅರ್ಜಿಗಳನ್ನು ತೆರೆಯುವ ದಿನಾಂಕ: 28–11–2025, 11.00 A.M ಆರ್ಥಿಕ ಬಿಡ್ ತೆರೆಯುವ ದಿನಾಂಕ: 01.12.2025 ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9743237434 ಸಂಪರ್ಕಿಸಬಹುದು.

ಸಹಿ/– ಉಪ ನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ.
ವಾಸಾಸಂಇ/ಹಿಸನಿ/ಹಾಸನ/761/ಕೆಎಸ್‌ಎಂಸಿಎ/2025–26

ಸಾರ್ವಜನಿಕ ಪ್ರಕಟಣೆ

ನನ್ನ ಕಕ್ಷಿದಾರರು ಈ ಕೆಳಗೆ ಉದಾಹರಿಸಿರುವ ಅನುಸೂಚಿ ಸ್ವತಾದ ಸರ್ವೆ ನಂ: 118/3 ವಿಸ್ತೀರ್ಣ 15 ಗುಂಟೆ, ಬೆಟ್ಟದಬೀಡು ಗ್ರಾಮ, ಹಂಪಾಪುರ ಹೋಬಳಿ, ಹೆಚ್.ಡಿ. ಕೋಟೆ ತಾ. (ಇಲ್ಲಿಂದ ಮುಂದೆ ಅನೂಸೂಚಿ ಸ್ವತ್ತು ಎಂದು ಸಂಭೋದಿಸಲ್ಪಡುವ) ಸ್ವತ್ತನ್ನು ಮೈಸೂರು ನಗರದ ಡಿ ಬ್ಲಾಕ್ ರಾಮಕೃಷ್ಣ ನಗರದ ಮನೆ ಸಂಖ್ಯೆ: 100ರಲ್ಲಿ ವಾಸವಾಗಿರುವ ಗಣೇಶ್ ರವರ ಪುತ್ರನಾದ ರಾಜೇಶ್ ಜಿ. ರವರಿಂದ ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು. ಮೂಲತಃ ಸರ್ವೆ ನಂ: 118 ವಿಸ್ತೀರ್ಣ 3 ಎಕರೆ 28 ಗುಂಟೆ ತಿಮ್ಮೇಗೌಡ ರವರಿಗೆ ದರ್ಕಾಸು ಮೂಲಕ ಮಂಜೂರಾತಿಯಾಗಿದ್ದು, ತಿಮ್ಮೇಗೌಡರ ಮರಣ ನಂತರ ಅವರ ಮಗನಾದ ನರಸಿಮ್ಮೇಗೌಡರವರಿಗೆ MRI/97-98ರಂತೆ ವರ್ಗಾಯಿಸಲ್ಪಟ್ಟಿರುತ್ತದೆ. ದಿವಂಗತ ತಿಮ್ಮೇಗೌಡರವರು ಕೆಂಪಮ್ಮ ರವರನ್ನು ವಿವಾಹವಾಗಿ ಅವರುಗಳಿಗೆ ದೊಡ್ಡ ತಾಯಮ್ಮ, ನೀಲಮ್ಮ, ಶಿವಮ್ಮ, ಸಾಕಮ್ಮ, ನರಸಿಂಹೇಗೌಡ, ಮರಮ್ಮ ಎಂಬ ಮಕ್ಕಳುಗಳು ಜನಿಸಿದ್ದು, ಮಾರಾಟಗಾರರು, ತಿಮ್ಮೇಗೌಡರ ಮಕ್ಕಳಾದ ಶಿವಮ್ಮ, ಸಾಕಮ್ಮ, ಮರಮ್ಮರವರು ಬಾಲ್ಯಾವಸ್ಥೆಯಲ್ಲೇ ಮರಣ ಹೊಂದಿದ್ದು ಅವರುಗಳಿಗೆ ವಿವಾಹವಾಗದೆ ಇದ್ದುದರಿಂದ ಯಾವುದೇ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿರುವುದಿಲ್ಲ ಎಂದು ತಿಳಿಸಿರುತ್ತಾರೆ. ದಿನಾಂಕ: 27/08/21 ರಂದು ಶ್ರೀಮತಿ ದೊಡ್ಡತಾಯಮ್ಮ ಮತ್ತು ನೀಲಮ್ಮರವರು ತಮ್ಮ ಆಸಕ್ತಿಯನ್ನು ನರಸಿಂಹೇಗೌಡರವರಿಗೆ ನೋಂದಾಯಿತ ಹಕ್ಕು ಖುಲಾಸೆ ಪತ್ರದ ಮೂಲಕ ಹೆಚ್.ಡಿ.ಕೋಟೆ ಉಪನೋಂದಣಾಧಿಕಾರಿಗಳ ಕಛೇರಿಯ ದಸ್ತಾವೇಜು ಸಂಖ್ಯೆ: 1ರ ನೋಂದಣಿ ಸಂಖ್ಯೆ:HDK/1/02496/2021-22ರಂತೆ ಬಿಡುಗಡೆ ಮಾಡಿರುವುದು ಸರಿಯಷ್ಟೆ. ಅದೇ ರೀತಿ ದಿನಾಂಕ: 25/11/2021ರಂದು ಅನುಸೂಚಿ ಸ್ವತ್ತನ್ನು ನರಸಿಂಹೇಗೌಡರು ಅವರ ಹೆಂಡತಿ ಮಕ್ಕಳ ಒಡಗೂಡಿ ಡಿ.ಸಿ. ಮೋಹನಕುಮಾರ್ ರವರಿಗೆ ನೋಂದಾಯಿತ ಕ್ರಯ ಪತ್ರದ ಮೂಲಕ 1ನೇ ಪುಸ್ತಕದ ದಸ್ತಾವೇಜು ಸಂಖ್ಯೆ: HDK/1/04667/2021-22 ರಂತೆ ಮಾರಾಟ ಮಾಡಿದ್ದು, ನಂತರದಲ್ಲಿ ಮಾನ್ಯ ತಹಶೀಲ್ದಾರ್‌ರವರು ಡಿ.ಸಿ. ಮೋಹನ ಕುಮಾರ್ ರವರಿಗೆ MR 20/21–22 ದಿನಾಂಕ:30/12/21ರಂತೆ RTC ವರ್ಗಾಯಿಸಿ, ನಂತರದಲ್ಲಿ ದಿನಾಂಕ:04/09/2023 ರಂದು ಮೋಹನ ಕುಮಾರ್ ಡಿ.ಸಿ ರವರು ರಾಕೇಶ್ ಜಿ. ರವರಿಗೆ ನೋಂದಾಯಿತ ದಾಖಲೆ ಸಂಖ್ಯೆ: HDK/1/0300618/2023–24 ರಂತೆ ಮಾರಾಟ ಮಾಡಿ, ದಿನಾಂಕ:13/09/23ರಂದು MRHN2/2023-24 ರಂತೆ ರಾಕೇಶ್ ಜಿ. ರವರ ಹೆಸರಿಗೆ ವರ್ಗಾಯಿಸಲ್ಪಟ್ಟಿರುತ್ತದೆ. ಮೇಲೆ ಹೇಳಿದ ಕ್ರಯಕ್ಕೆ ಡಿ.ಸಿ. ಮೋಹನ ಕುಮಾರ್ ಮತ್ತವರ ಕುಟುಂಬದವರ ವಾರಸುದಾರರಾಗಲಿ ಯಾ ತಿಮ್ಮೇಗೌಡರ ಮಕ್ಕಳಾದ ಶಿವಮ್ಮ, ಸಾಕಮ್ಮ, ಮರಮ್ಮರವರ ವಾರಸುದಾರರಾಗಲಿ ಇತರೆ ಸಾರ್ವಜನಿಕರಾಗಲಿ, ಬೇರೆ ಯಾರಾದರೂ ಆಸಕ್ತಿ ಮತ್ತು ಕ್ರಯದ ಕರಾರು, ಜಪ್ತಿ, ಆದೇಶಗಳು ಇದ್ದಲ್ಲಿ ಈ ಕೆಳಗೆ ನಮೂದಿಸಿರುವ ವಕೀಲರ ಕಛೇರಿಗೆ ತಕರಾರನ್ನು ಪತ್ರಿಕಾ ಪ್ರಕಟಣೆಯಾದ 7 ದಿನಗಳೊಳಗಾಗಿ ಸಂಬಂಧಪಟ್ಟ ದಾಖಲೆಯೊಂದಿಗೆ ಕಳುಹಿಸಿ ಕೊಡಬೇಕಾಗಿ ನೀಡಿರುವ ಪ್ರಕಟಣೆ. ಒಂದು ವೇಳೆ ಯಾವುದೇ ತಕರಾರು ಬಾರದಿದ್ದಲ್ಲಿ ನಮ್ಮ ಕಕ್ಷಿದಾರರು ಸ್ವತ್ತನ್ನು ಕ್ರಯಕ್ಕೆ ಪಡೆಯುತ್ತಾರೆ. ನಂತರದಲ್ಲಿ ಬರುವ ತಕರಾರನ್ನು ಮಾನ್ಯ ಮಾಡುವುದಿಲ್ಲವೆಂದು ತಿಳಿಯಬಯಸುತ್ತೇವೆ.

ಅನುಸೂಚಿ ಸ್ವತ್ತು

ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ ತಾಲ್ಲೂಕು, ಹಂಪಾಪುರ ಹೋಬಳಿ, ಬೆಟ್ಟದಬೀಡು ಗ್ರಾಮದಲ್ಲಿರುವ ಸರ್ವೆನಂ:118/3ರ ವಿಸ್ತೀರ್ಣ 15 ಗುಂಟೆ ಜಮೀನಿಗೆ ಚೆಕ್ಕುಬಂದಿ; ಪೂರ್ವಕ್ಕೆ: ಸರ್ವೆ ನಂ: 124 ಮೋಹನಕುಮಾರ ಡಿ. ಸಿ ರವರ ಜಮೀನು, ಪಶ್ಚಿಮಕ್ಕೆ: ಸರ್ವೆ ನಂ: 118/2ರ ರಾಜ್‌ಕುಮಾರ್ ರವರ ಜಮೀನು, ಉತ್ತರಕ್ಕೆ : ಸರ್ವೇ ನಂ: 124 ಮೋಹನಕುಮಾರ ಡಿ. ಸಿ. ರವರ ಜಮೀನು, ದಕ್ಷಿಣಕ್ಕೆ: 124ರ ಜಮೀನು.

ಸಹಿ/– ಸುಬ್ರಮಣ್ಯ .ಜೆ, ವಕೀಲರು,
ಕಛೇರಿ: 890/4, ಮೊದಲನೇ ಮಹಡಿ, ಮೂರನೇ ಹಂತ, 1ನೇ ಮೈನ್, ಲಕ್ಷ್ಮೀಪುರಂ,
ಮೈಸೂರು–570004 ಮೊ: 9844154581
ದಿನಾಂಕ : 12/11/2025

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಮೈಸೂರು ಜಿಲ್ಲೆ, ನಂಜನಗೂಡು ಟೌನ್, ಆರ್.ಪಿ.ರಸ್ತೆ ಎಕ್ಸ್‌ಟೆನ್ಷನ್, 12ನೇ ಕ್ರಾಸ್‌ಯಲ್ಲಿ ವಾಸವಾಗಿರುವ ಚಂಪಲಾಲ್ ಜೈನ್ ರವರ ಮಗನಾದ ಜಯಂತಿಲಾಲ್ ಜೈನ್ ರವರ ಇರಾದೆಯ ಮೇರೆಗೆ ಈ ಮೂಲಕ ಸಮಸ್ತ ಸಾರ್ವಜನಿಕರ ಗಮನಕ್ಕೆ ತರುವುದೇನೆಂದರೆ:–

ಈ ಕೆಳಗೆ ನಮೂದಿಸಿರುವ ಷೆಡ್ಯೂಲ್ ಸ್ವತ್ತನ್ನು ಮೇಲ್ಕಂಡ ನಮ್ಮ ಕಕ್ಷಿದಾರರು ನಂಜನಗೂಡು ತಾಲ್ಲೂಕು, ಕಸಬಾ ಹೋಬಳಿ, ಕಳಲೆ ಗ್ರಾಮದ ತೆಲಗುಶೆಟ್ಟರ ಬೀದಿಯಲ್ಲಿ ವಾಸವಾಗಿರುವ ಷೆಡ್ಯೂಲ್ ಸ್ವತ್ತಿನ ಈಗಿನ ಮಾಲೀಕರುಗಳಾದ ಗೌರಮ್ಮ ಕೋಂ ಲೇಟ್ ವಿ. ಗೊಜ್ಜಶೆಟ್ಟಿ ಮತ್ತು ಅವರ ಕುಟುಂಬದವರಿಂದ ಶುದ್ಧ ಕ್ರಯಕ್ಕೆ ಪಡೆಯಲು ಸದರಿಯವರಿಂದ ಒಂದು ಕ್ರಯದ ಕರಾರು ಪತ್ರವನ್ನು ಮಾಡಿಕೊಂಡಿರುತ್ತಾರೆ. ಸದರಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಬೇರೆ ಯಾರಿಗಾದರೂ ಯಾವ ರೀತಿಯಾದ ಹಕ್ಕು ಬಾಧ್ಯತೆ, ಆಸಕ್ತಿ, ವಗೈರೆ ಇದ್ದಲ್ಲಿ ಸದರಿಯವರು ಈ ಪ್ರಕಟಣೆಯ ದಿನಾಂಕ ದಿಂದ 5 ದಿನಗಳೊಳಗಾಗಿ ಸೂಕ್ತ ದಾಖಲಾತಿ ಗಳೊಂದಿಗೆ ನಮ್ಮನ್ನು ಕಛೇರಿಯಲ್ಲಿ ಭೇಟಿ ಮಾಡಿ ಪರಿಹರಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ನಮ್ಮ ಕಕ್ಷಿದಾರರು ಬೇರೆ ಯಾರಿಂದಲೂ ಯಾವ ರೀತಿಯಾದ ಆಕ್ಷೇಪಗಳಿರುವುದಿಲ್ಲವೆಂದು ಭಾವಿಸಿ ಕ್ರಯದ ವ್ಯವಹಾರಕ್ಕೆ ಮುಂದಾಗುತ್ತಾರೆ. ವಾಯಿದಾ ನಂತರ ಬರಬಹುದಾದ ಯಾವುದೇ ಆಕ್ಷೇಪಗಳಿಗೆ ನಮ್ಮ ಕಕ್ಷಿದಾರರು ಬಾಧ್ಯರಲ್ಲವೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್

ಮೈಸೂರು ಜಿಲ್ಲೆ, ನಂಜನಗೂಡು ಟೌನ್, ಎಂ.ಜಿ.ಎಸ್. ರಸ್ತೆಯಲ್ಲಿರುವುದು ನಗರಸಭೆ ನಮೂನೆ 3ರ ಪ್ರಕಾರ ಸ್ವತ್ತಿನ ಸಂಖ್ಯೆ **11-3-126H**, ಸ್ವತ್ತಿನ ನಿರ್ಧರಣ ಸಂಖ್ಯೆ **4570/4328/H** ರ ಸ್ವತ್ತಿನ ವಿಸ್ತೀರ್ಣ ಪೂ:ಪ – 2.743205 ಮೀಟರ್, ಉ.ದ.– 16.154463 ಮೀಟರ್, ಒಟ್ಟು ವಿಸ್ತೀರ್ಣ 44.3150 ಚದರ ಮೀಟರ್‌ವುಳ್ಳ ಸ್ವತ್ತಿಗೆ ಚೆಕ್ಕುಬಂದಿ:– ಪೂರ್ವಕ್ಕೆ: ಶ್ರೀಮತಿ ವೆಂಕಟಮ್ಮ ಕೋಂ ವೆಂಕಟಸ್ವಾಮಿಶೆಟ್ಟಿ ರವರ ಸ್ವತ್ತು ; ಪಶ್ಚಿಮಕ್ಕೆ: ಕೆ.ಮಂಜುನಾಥ ಬಿನ್ ಲೇಟ್ ಹೆಚ್.ವಿ. ಕೃಷ್ಣಶೆಟ್ಟಿ ರವರ ಸ್ವತ್ತು ; ಉತ್ತರಕ್ಕೆ : ಎಂ.ಜಿ.ಎಸ್. ರಸ್ತೆ ; ದಕ್ಷಿಣಕ್ಕೆ: ಕೆ. ಶಿವಕುಮಾರ ರವರ ಸ್ವತ್ತು.

ಈ ಮಧ್ಯೆ ಇರುವ 44.3150 ಚದರ ಮೀಟರ್‌ವುಳ್ಳ ಸ್ವತ್ತನ್ನು ನಮ್ಮ ಕಕ್ಷಿದಾರರು ಕ್ರಯಕ್ಕೆ ಪಡೆದುಕೊಳ್ಳುವ ಸ್ವತ್ತಾಗಿರುತ್ತದೆ ಎಂದು ತಿಳಿಯಪಡಿಸಲಾಗಿದೆ.

Sd/- Sohan Kumar B.A., LL.B.,
Advocate,
KAR - 1026/03, Chamalapur Street, Cinema Road,
Nanjangud. Mob: 9844262892
ಸ್ಥಳ: ನಂಜನಗೂಡು
ದಿನಾಂಕ: 13–11–2025

ಸಾರ್ವಜನಿಕ ಪ್ರಕಟಣೆ

ನನ್ನ ಕಕ್ಷಿದಾರರು ಈ ಕೆಳಗೆ ಉದಾಹರಿಸಿರುವ ಅನುಸೂಚಿ ಸ್ವತ್ತಾದ ಸರ್ವೆ ನಂ: 124ರ 1 ಎಕರೆ 34 ಗುಂಟೆ ಬೆಟ್ಟದಬೀಡು ಗ್ರಾಮ, ಹಂಪಾಪುರ ಹೋಬಳಿ, ಹೆಚ್.ಡಿ.ಕೋಟೆ ತಾ.(ಇಲ್ಲಿಂದ ಮುಂದೆ ಅನೂಸೂಚಿ ಸ್ವತ್ತೆಂದು ಸಂಭೋದಿಸಲ್ಪಡುವ) ಸ್ವತ್ತನ್ನು ಮೈಸೂರು ನಗರದ ಡಿ ಬ್ಲಾಕ್ ರಾಮಕೃಷ್ಣ ನಗರದ ಮನೆ ಸಂಖ್ಯೆ: 3ರಲ್ಲಿ ವಾಸವಾಗಿರುವ ಗಣೇಶ್ ರವರ ಪುತ್ರನಾದ ರಾಕೇಶ್ ಜಿ., ರವರಿಂದ ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು, ಮೂಲತ: ಅನುಸೂಚಿ ಸ್ವತ್ತು ಹಳೆಯ ಸಂಖ್ಯೆ: 119, ಬ್ಲಾಕ್ 3, 1 ಎಕರೆ 34 ಗುಂಟೆ, ದಿನಾಂಕ: 04/02/1999ರ ಅಧಿಕೃತ ಜ್ಞಾಪನಾ ಸಂಖ್ಯೆ: ಎಲ್.ಎನ್.ಡಿ (ಹೆಚ್) 87/95–96 ಸಾಗುವಳಿ ಚೀಟಿಯ ಅನ್ವಯ ಶ್ರೀಮತಿ ದೊಡ್ಡತಾಯಮ್ಮ ಕೋಂ ಶಂಭುಗೌಡ ರವರಿಗೆ ಮಂಜೂರಾಗಿದ್ದು, ದಿ. 14/02/2006ರಂತೆ ಖಾತೆಯಾಗಿದ್ದು, ದಿನಾಂಕ: 14/02/2017ರಲ್ಲಿ ಎಲ್.ಎನ್.ಡಿ. ಸಿ.ಆರ್ 156/2017–18ರಂತೆ ದುರಸ್ಥಿಯಾಗಿ ಸರ್ವೆ ನಂ: 124 ಎಂದು ಎಂ. ಆರ್ ಸಂಖ್ಯೆ: 52/19–20ರಂತೆ ಆಗಿದ್ದು, ದಿನಾಂಕ: 26/12/2014ರ ಮುಕ್ತಿಯಾರ್ ನಾಮೆ ಸಂಖ್ಯೆ HDK-4-60092-14-15ರಂತೆ ದೊಡ್ಡ ತಾಯಮ್ಮ ಮತ್ತವರ ಕುಟುಂಬದವರು ಡಿ.ಸಿ. ಮೋಹನ ಕುಮಾರ ರವರಿಗೆ ಮಾರಾಟದ ಹಕ್ಕನ್ನು ನೀಡಿ ದಿನಾಂಕ: 26/06/2020ರಂದು ದೊಡ್ಡ ತಾಯಮ್ಮ ಮತ್ತವರ ಕುಟುಂಬದವರು ಮೋಹನ ಕುಮಾರ್ ಡಿ.ಸಿ ರವರಿಗೆ ಕ್ರಯ ಸಾಧನ ಮಾಡಿ ಕೊಟ್ಟಿದ್ದು, ದಿನಾಂಕ: 29/06/20ರಂದು ಎಂ.ಆರ್. ಸಂಖ್ಯೆ H1 ರಂತೆ ಡಿ.ಸಿ. ಮೋಹನ ಕುಮಾರ್ ರವರ ಹೆಸರಿಗೆ ಖಾತಾ ವರ್ಗಾಯಿ ಸಲ್ಪಟ್ಟಿರುತ್ತದೆ, ದಿನಾಂಕ: 04/09/2023ರಂದು ಡಿ.ಸಿ. ಮೋಹನಕುಮಾರ್ ಮತ್ತವರ ಕುಟುಂಬ ದವರು ಅನುಸೂಚಿ ಸ್ವತ್ತನ್ನು ರಾಕೇಶ್ ಜಿ. ರವರಿಗೆ ಕ್ರಯ ಸಾಧನ ಮಾಡಿಕೊಟ್ಟಿದ್ದು, ದಿ. 13/09/2023 ರಂತೆ MR. H7 ರಂತೆ RTC ರಾಕೇಶ್ ಜಿ. ರವರ ಹೆಸರಿಗೆ ವರ್ಗಾಯಿಸಲ್ಪಟ್ಟಿರುತ್ತದೆ.

ಮೇಲೆ ಹೇಳಿದ ಕ್ರಯಕ್ಕೆ ದೊಡ್ಡ ತಾಯಮ್ಮ ಮತ್ತವರ ಕುಟುಂಬದವರ ವಾರಸುದಾರರಾಗಲಿ, ಮೋಹನ ಕುಮಾರ್ ಮತ್ತವರ ಕುಟುಂಬದವರ ವಾರಸುದಾರರಾಗಲಿ, ಯಾ ಇತರೆ ಸಾರ್ವಜನಿಕರಾಗಲಿ, ಬೇರೆ ಯಾರಾದರೂ ಆಸಕ್ತಿ ಮತ್ತು ಕ್ರಯದ ಕರಾರು, ಜಪ್ತಿ, ಆದೇಶಗಳು ಇದ್ದಲ್ಲಿ ಈ ಕೆಳಗೆ ನಮೂದಿಸಿರುವ ವಕೀಲರ ಕಛೇರಿಗೆ ತಕರಾರನ್ನು ಪತ್ರಿಕಾ ಪ್ರಕಟಣೆಯಾದ 7 ದಿನಗಳೊಳಗಾಗಿ ಸಂಬಂಧಪಟ್ಟ ದಾಖಲೆಯೊಂದಿಗೆ ಕಳುಹಿಸಿಕೊಡಬೇಕಾಗಿ ನೀಡಿರುವ ಪ್ರಕಟಣೆ. ಒಂದು ವೇಳೆ ಯಾವುದೇ ತಕರಾರು ಬಾರದಿದ್ದಲ್ಲಿ ನಮ್ಮ ಕಕ್ಷಿದಾರರು ಸ್ವತ್ತನ್ನು ಕ್ರಯಕ್ಕೆ ಪಡೆಯುತ್ತಾರೆ. ನಂತರದಲ್ಲಿ ಬರುವ ತಕರಾರನ್ನು ಮಾನ್ಯ ಮಾಡುದಿಲ್ಲವೆಂದು ತಿಳಿಯಬಯಸುತ್ತೇವೆ.

ಅನುಸೂಚಿ ಸ್ವತ್ತು

ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ ತಾಲ್ಲೂಕು, ಹಂಪಾಪುರ ಹೋಬಳಿ, ಬೆಟ್ಟದಬೀಡು ಗ್ರಾಮದಲ್ಲಿರುವ ಸರ್ವೆ ನಂ.124ರ 1 ಎಕರೆ 34 ಗುಂಟೆ ಜಮೀನು, ಪೂರ್ವಕ್ಕೆ: ಶಂಭು ಗೌಡರವರ ಜಮೀನು, ಪಶ್ಚಿಮಕ್ಕೆ: ಗವಿ ಗೌಡರವರ ಜಮೀನು, ಉತ್ತರಕ್ಕೆ : ನಿಂಗೇಗೌಡರವರ ಜಮೀನು, ದಕ್ಷಿಣಕ್ಕೆ: ರಸ್ತೆ.

ಸಹಿ/– ಸುಬ್ರಮಣ್ಯ .ಜೆ, ವಕೀಲರು,
ಕಛೇರಿ: 890/4, ಮೊದಲನೇ ಮಹಡಿ, ಮೂರನೇ ಹಂತ, 1ನೇ ಮೈನ್, ಲಕ್ಷ್ಮೀಪುರಂ,
ಮೈಸೂರು–570004 ಮೊ: 9844154581
ದಿನಾಂಕ : 12/11/2025





ಮೈಸೂರಲ್ಲಿ ಭಾರತದ ಮೊದಲ ರೇಷ್ಮೆ ಮ್ಯೂಸಿಯಂ ಸ್ಥಾಪನೆ

● ಮುಂದಿನ ಹಣಕಾಸು ವರ್ಷದಿಂದ 2 ವರ್ಷದಲ್ಲಿ ಮ್ಯೂಸಿಯಂ ಸ್ಥಾಪನೆ ಪೂರ್ಣ ● ಮೈಸೂರು ಸಿಎಸ್‌ಬಿ ಕೇಂದ್ರದಲ್ಲಿ ರೇಷ್ಮೆ ವಸ್ತು ಸಂಗ್ರಹಾಲಯ ಸ್ಥಾಪನೆ ● ರೇಷ್ಮೆ ಸಾಂಪ್ರದಾಯಿಕ, ಪರಂಪರೆಯನ್ನು ಪ್ರದರ್ಶಿಸಲು ತೀರ್ಮಾನ; ರೇಷ್ಮೆ ಹುಳುವಿನಿಂದ ಸೀರೆ ನೇಯ್ಗೆವರೆಗಿನ ಚಿತ್ರಣ ಕಣ್ಣಿಗೆ ಕಟ್ಟಲಿದೆ



ಸಾಂದರ್ಭಿಕ ಚಿತ್ರ

ಬೆಂಗಳೂರು, ನ.13– ಭಾರತದ ಅತೀ ದೊಡ್ಡ ರೇಷ್ಮೆ ಉತ್ಪಾದಕ ರಾಜ್ಯವಾದ ಕರ್ನಾಟಕದ ಕಿರೀಟಕ್ಕೆ ಮತ್ತೊಂದು ಗರಿ ಮೂಡಿದೆ. ರೇಷ್ಮೆ ಸೀರೆಗಳಿಗೆ ಹೆಸರುವಾಸಿಯಾದ ಮೈಸೂರಿನಲ್ಲಿ ದೇಶದ ಮೊದಲ ರೇಷ್ಮೆ ಮ್ಯೂಸಿಯಂ ಸ್ಥಾಪಿಸಲಾಗುತ್ತಿದೆ. ಈ ಸಂಗ್ರಹಾಲಯವು ಭಾರತದಲ್ಲಿ ರೇಷ್ಮೆಯ ಸಂಪೂರ್ಣ ಇತಿಹಾಸವನ್ನು ಹಾಗೂ ರೇಷ್ಮೆಗೂಡಿನಿಂದ ಉಡುಪು ತಯಾರಿಸುವವರೆಗೆ ಪ್ರಕ್ರಿಯೆಯನ್ನು ಪ್ರದರ್ಶಿಸುತ್ತದೆ.

ಕೇಂದ್ರ ಸರ್ಕಾರವು ಈಗಾಗಲೇ ಜಮ್ಮು ಮತ್ತು ಕಾಶ್ಮೀರದಲ್ಲಿ ರೇಷ್ಮೆ ಪ್ರವಾಸೋದ್ಯಮವನ್ನು ಪ್ರಾರಂಭಿಸಿದೆ. ಅಸ್ಸಾಂನ ತೋಪಟಲಿಯಲ್ಲಿ ಮತ್ತೊಂದು ಸರ್ಕ್ಯೂಟ್ ಅನ್ನು ಸ್ಥಾಪಿಸುವ ಕಾರ್ಯ ಪ್ರಗತಿಯಲ್ಲಿದೆ. ರಾಜ್ಯ ಸರ್ಕಾರ ಮತ್ತು ಕೇಂದ್ರವು ಈ ಎರಡು ರಾಜ್ಯಗಳಲ್ಲಿ ರೇಷ್ಮೆ ಸರಪಳಿ ಮತ್ತು ಬಟ್ಟೆಯನ್ನು ಜನಪ್ರಿಯಗೊಳಿಸುತ್ತಿದ್ದರೆ, ಮೈಸೂರಿನಲ್ಲಿ, ರೇಷ್ಮೆ ದಾರವನ್ನು ಹೇಗೆ ಸಂಗ್ರಹಿಸಲಾಗುತ್ತದೆ ಎಂಬುದನ್ನು ಪ್ರದರ್ಶಿಸುವ ವಸ್ತುಸಂಗ್ರಹಾಲಯವನ್ನು ತೆರೆಯಲಾಗುತ್ತಿದೆ.

ರೇಷ್ಮೆ ಹುಳುವಿನ ಪ್ಯೂಪಾ ಹಂತದಿಂದ ಅದನ್ನು ಬಟ್ಟೆಯಾಗಿ ಹೇಗೆ ನೇಯಲಾಗುತ್ತದೆ ಎಂಬುದರವರೆಗೆ ಇಲ್ಲಿ ತೋರಿಸಲಾಗುತ್ತದೆ ಎಂದು ಕೇಂದ್ರ ರೇಷ್ಮೆ ಮಂಡಳಿಯ (CSB) ರಾಷ್ಟ್ರೀಯ ರೇಷ್ಮೆ ಹುಳು ಬೀಜ ಸಂಸ್ಥೆ (NSSO) ನಿರ್ದೇಶಕಿ ಡಾ. ಮಂತಿರಾ ಮೂರ್ತಿ ವಿವರಿಸಿದ್ದಾರೆ.

ಇದು ಮೊದಲ ಮತ್ತು ವಿಶಿಷ್ಟ ವಸ್ತುಸಂಗ್ರಹಾಲಯವಾಗಲಿದೆ. ಇಲ್ಲಿ ಕೆಲಸ ಮಾಡಲು ಮೀಸಲಾದ ತಂಡವನ್ನು ನಿಯೋಜಿಸಲಾಗುತ್ತಿದೆ. ಟೆಂಡರ್‌ಗಳನ್ನು ಅಂತಿಮಗೊಳಿಸಿದ ನಂತರ ಯೋಜನೆಯ ಒಟ್ಟು ವೆಚ್ಚವನ್ನು ತಿಳಿಸಲಾಗುವುದು. 120 ಎಕರೆ ಪ್ರದೇಶದಲ್ಲಿ ಹರಡಿರುವ ಮೈಸೂರಿನಲ್ಲಿರುವ ಸಿಎಸ್‌ಬಿ ಕೇಂದ್ರದಲ್ಲಿ ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲಾಗುವುದು ಎಂದು ಅವರು ಹೇಳಿದರು.

ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲು, ಸಿಎಸ್‌ಬಿ ಅಧಿಕಾರಿಗಳು ಚೀನಾ ಮತ್ತು ಇಟಲಿಯಲ್ಲಿ ಇದೇ ರೀತಿಯ ಕೇಂದ್ರಗಳನ್ನು ಅಧ್ಯಯನ ಮಾಡಿದ್ದಾರೆ. ಇಟಲಿಯಲ್ಲಿನ ಅತ್ಯುತ್ತಮ ಸಂಗ್ರಹಗಳು ಮತ್ತು ಚೀನಾದಲ್ಲಿ 2000 ವರ್ಷಗಳಷ್ಟು ಹಳೆಯ ಸಂಗ್ರಹಗಳನ್ನು ಸಹ ಅಧ್ಯಯನ ಮಾಡಿದ್ದಾರೆ. ವಸ್ತು ಸಂಗ್ರಹಾಲಯದಲ್ಲಿ ಪ್ರದರ್ಶಿಸಲು ಎಲ್ಲಾ ರೇಷ್ಮೆ ಉತ್ಪಾದಿಸುವ ರಾಜ್ಯಗಳು ಮತ್ತು ರೈತರಿಂದ ಸಾಂಪ್ರದಾಯಿಕ ಮತ್ತು ಪರಂಪರೆ ಸಂಗ್ರಹಗಳನ್ನು ಸಂಗ್ರಹಿಸುವ ಕೆಲಸ ಪ್ರಾರಂಭವಾಗಿದೆ.

ಮ್ಯೂಸಿಯಂ ಪ್ರದರ್ಶನವು ನಿಜವಾದ ರೇಷ್ಮೆಯನ್ನು ಹೇಗೆ ಗುರುತಿಸುವುದು ಎಂಬುದನ್ನು ತೋರಿಸುತ್ತದೆ. ಮುಂಬರುವ ಹಣಕಾಸು ವರ್ಷದಿಂದ ಎರಡು ವರ್ಷಗಳಲ್ಲಿ ಅದನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಿದ್ದೇವೆ. ಇಲ್ಲಿ ಹಳೆಯ ಸಂಗ್ರಹಗಳನ್ನು ಪ್ರದರ್ಶಿಸಲಾಗುವುದು. ರೇಷ್ಮೆ ಹುಳದ ಪ್ರಾಮುಖ್ಯತೆ ಮತ್ತು ಮೂಲ ಹಾಗೂ ನಕಲಿ ರೇಷ್ಮೆಯನ್ನು ಹೇಗೆ ಗುರುತಿಸುವುದು ಎಂಬುದರ ವಿವರಗಳನ್ನು ಸಹ ವಿವರಿಸಲಾಗುವುದು.

ಈ ಯೋಜನೆಗಾಗಿ ತಜ್ಞರು ಮತ್ತು ರೈತರನ್ನು ಬಳಸಿಕೊಳ್ಳಲಾಗುತ್ತಿದೆ. ಯೋಜನೆಯನ್ನು ಪ್ರವಾಸೋದ್ಯಮ ಸಚಿವಾಲಯವು ಉತ್ತೇಜಿಸುತ್ತಿದೆ ಎಂದು ಸಿಎಸ್‌ಬಿ ಸದಸ್ಯ ಶಿವಕುಮಾರ್ ಪೆರಿಯಸಾಮಿ ಹೇಳಿದರು.

ವಸ್ತುಸಂಗ್ರಹಾಲಯವು ರೇಷ್ಮೆ ಉಪ ಉತ್ಪನ್ನಗಳನ್ನು ಪ್ರದರ್ಶಿಸುವ ವಿಭಾಗವನ್ನು ಸಹ ಒಳಗೊಂಡಿರುತ್ತದೆ. ರೇಷ್ಮೆ ಪ್ರೋಟೀನ್ ಮತ್ತು ಸೌಂದರ್ಯವರ್ಧಕಗಳು ಮತ್ತು ಔಷಧಾಲಯದಲ್ಲಿ ಬಳಸುವ ಇತರ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆಯಲ್ಲಿ ಏರಿಕೆ ಕಂಡುಬಂದಿದೆ. ವಸ್ತುಸಂಗ್ರಹಾಲಯಕ್ಕೆ ಭೇಟಿ ನೀಡುವ ಜನರಿಗೆ ಈ ಪ್ರವೃತ್ತಿಯನ್ನು ಪ್ರದರ್ಶಿಸಲಾಗುವುದು ಎಂದು ಹೇಳಿದರು. ಸೆರಿ–ಸ್ಟೇಟ್ಸ್ ಆಫ್ ಇಂಡಿಯಾ 2024 ರ ಪ್ರಕಾರ ಕರ್ನಾಟಕವು ದೇಶದ ರೇಷ್ಮೆ ಉತ್ಪಾದನೆಯಲ್ಲಿ ಸುಮಾರು ಶೇಕಡಾ 32ರಷ್ಟು ಕೊಡುಗೆ ನೀಡುತ್ತದೆ. 11,526 ರೇಷ್ಮೆ ಕೃಷಿ ಗ್ರಾಮಗಳಿವೆ, 1,48,704 ರೇಷ್ಮೆ ಕೃಷಿ ರೈತರು ಮತ್ತು 6,749 ರೀಲರ್‌ಗಳಿಗೆ ವಸತಿ ಇದೆ.

ಟಿಪ್ಪು ಸುಲ್ತಾನ್ ಕಾಲದಲ್ಲಿ ಈ ಪ್ರದೇಶದಲ್ಲಿ ರೇಷ್ಮೆ ಕೃಷಿಯನ್ನು ಪರಿಚಯಿಸಿ ಪ್ರೋತ್ಸಾಹಿಸಲಾಯಿತು. ಪ್ರಾಥಮಿಕ ರೇಷ್ಮೆಗೂಡು ಉತ್ಪಾದನಾ ಪ್ರದೇಶಗಳಲ್ಲಿ ಚಿಕ್ಕಬಳ್ಳಾಪುರ, ಕೋಲಾರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಬೆಂಗಳೂರು ಗ್ರಾಮಾಂತರ ಸೇರಿವೆ. ನಂತರ ಇದನ್ನು ಅನೇಕ ಸ್ಥಳಗಳಿಗೆ ವಿಸ್ತರಿಸಲಾಗಿದೆ. 2023–24ರಲ್ಲಿ ಕರ್ನಾಟಕವು 12,463 ಟನ್ ರೇಷ್ಮೆಯನ್ನು ಉತ್ಪಾದಿಸಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಇದರಲ್ಲಿ 2,806 ಟನ್ ಬೈವೋಲ್ಟೈನ್ ರೇಷ್ಮೆ ಮತ್ತು 9,657 ಟನ್ ಮಿಶ್ರತಳಿ ರೇಷ್ಮೆಗಳಿವೆ.


ನಾಳೆ ಸಂಜೆ ಬಿವಿಬಿಯಲ್ಲಿ ದಾಸರ ಪದಗಳು ಕಾರ್ಯಕ್ರಮ



ವಿದ್ವಾನ್ ಪುತ್ತೂರು ನರಸಿಂಹ ನಾಯಕ್



ರಾಘವೇಂದ್ರ ಜೋಷಿ



ಗಣೇಶ್ ಭಟ್



ವೆಂಕಟೇಶ್ ಪುರೋಹಿತ್

ಮೈಸೂರು, ನ. 13– ಬೆಂಗಳೂರು ಇನ್ಫೋಸಿಸ್ ಪ್ರತಿಷ್ಠಾನ, ಭಾರತೀಯ ವಿದ್ಯಾಭವನ, ಬೆಂಗಳೂರು–ಮೈಸೂರು ಸಂಯುಕ್ತ ಆಶ್ರಯದಲ್ಲಿ 159ನೇ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ನ. 15 ರಂದು ಸಂಜೆ 6 ಗಂಟೆಗೆ ವಿಜಯನಗರ 1ನೇ ಹಂತದಲ್ಲಿರುವ ಭಾರತೀಯ ವಿದ್ಯಾಭವನದಲ್ಲಿ ದಾಸರ ಪದಗಳು ಕಾರ್ಯಕ್ರಮ ಏರ್ಪಡಿಸಲಾಗಿದೆ.

ವಿದ್ವಾನ್ ಪುತ್ತೂರು ನರಸಿಂಹ ನಾಯಕ್ ಅವರಿಂದ ಗಾಯನವಿದೆ. ಪಕ್ಕವಾದ್ಯದಲ್ಲಿ ರಾಘವೇಂದ್ರ ಜೋಷಿ–ತಬಲ, ಗಣೇಶ್ ಭಟ್–ಕೀಬೋರ್ಡ್, ವೆಂಕಟೇಶ್ ಪುರೋಹಿತ್–ಮಂಜಿರ ಸಾಥ್ ನೀಡಲಿದ್ದಾರೆ.

ವಿದ್ವಾನ್ ಪುತ್ತೂರು ನರಸಿಂಹ ನಾಯಕ್ ಪರಿಚಯ

ಖ್ಯಾತ ಸಂಗೀತ ನಿರ್ದೇಶಕ ಮತ್ತು ಹಿನ್ನೆಲೆ ಗಾಯಕ ಪುತ್ತೂರು ನರಸಿಂಹ ನಾಯಕ್ ಅವರು ಓರ್ವ ಬಹುಮುಖ ಪ್ರತಿಭೆ ಹಾಗೂ ಐದು ದಶಕಗಳ ಹೆಚ್ಚು ಕಾಲ ಕರ್ನಾಟಕದ ಅತ್ಯಂತ ಗೌರವಾನ್ವಿತ ಸಂಗೀತ ದಿಗ್ಗಜರಲ್ಲಿ ಒಬ್ಬರು.

1971ರಲ್ಲಿ 12 ನೇ ವಯಸ್ಸಿನಲ್ಲಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದ ಅವರು, ಅಂದಿನಿಂದ ಭಾರತ ಮತ್ತು ವಿದೇಶಗಳಲ್ಲಿ 5,000 ಕ್ಕೂ ಹೆಚ್ಚು ಸಂಗೀತ ಕಚೇರಿಗಳಲ್ಲಿ ಪ್ರದರ್ಶನ ನೀಡಿದ್ದಾರೆ.

ಪುತ್ತೂರು ನರಸಿಂಹ ನಾಯಕ್ ಅವರು ಪ್ರಮುಖ ಭಾರತೀಯ ಭಾಷೆಗಳಾದ ಕನ್ನಡ, ಹಿಂದಿ, ಸಂಸ್ಕೃತ, ಮರಾಠಿ, ತಮಿಳು, ತೆಲುಗು, ಕೊಂಕಣಿ ಮತ್ತು ತುಳು ಭಾಷೆಗಳಲ್ಲಿ 10,000ಕ್ಕೂ ಹೆಚ್ಚು ಭಕ್ತಿಗೀತೆಗಳಿಗೆ ತಮ್ಮ ಸುಮಧುರ ಧ್ವನಿಯನ್ನು ನೀಡಿದ್ದಾರೆ. ಈ ಮೈಲಿಗಲ್ಲು ಸಾಧಿಸಿದ ಕರ್ನಾಟಕದ ಮೊದಲ ಗಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. 1981 ರಿಂದ 2013 ರವರೆಗೆ 38 ವರ್ಷಗಳ ಕಾಲ ಭಕ್ತಿ ಸಂಗೀತ ಕ್ಷೇತ್ರದಲ್ಲಿ ಕ್ರಾಂತಿಯನ್ನುಂಟು ಮಾಡಿದ ಗಾಯಕರು.

ಕರ್ನಾಟಕ ಮತ್ತು ಭಾರತದ ಸಂತರ ಸಂಯೋಜನೆಗಳಾದ ಭಕ್ತಿ ಚಳುವಳಿಯನ್ನು ಪುನರುಜ್ಜೀವನಗೊಳಿಸುವಲ್ಲಿ ಅವರ ಅತ್ಯುತ್ತಮ ಕೊಡುಗೆ ಅಡಗಿದೆ. ಅವರು ಸುಮಾರು 1,200 ಹಾಡುಗಳಿಗೆ ಸಂಗೀತ ಸಂಯೋಜಿಸಿದ್ದಾರೆ. ಅವುಗಳ ಧ್ವನಿಮುದ್ರಣ ಮತ್ತು ಜನಸಾಮಾನ್ಯರನ್ನು ತಲುಪುವಂತೆ ಮಾಡಿದ್ದಾರೆ. ಅವುಗಳಲ್ಲಿ 500 ಕ್ಕೂ ಹೆಚ್ಚು ಹಾಡುಗಳು ಅಪಾರ ಜನಪ್ರಿಯತೆಯನ್ನು ಗಳಿಸಿವೆ. ಅವರ ಕೊಡುಗೆಗಳು ಲಘು ಸಂಗೀತ (ಸುಗಮ ಸಂಗೀತ), 40ಕ್ಕೂ ಹೆಚ್ಚು ಚಲನಚಿತ್ರಗಳಿಗೆ ಜಾನಪದ ಮತ್ತು ಹಿನ್ನೆಲೆ ಗಾಯನಕ್ಕೂ ವಿಸ್ತರಿಸಿದೆ.

ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಕ್ರೆಡಿಟ್ ಪ್ರಶಸ್ತಿ (ಕರ್ನಾಟಕ ಸರ್ಕಾರ), ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಜೀವಮಾನದ ಸಾಧನೆ ಪ್ರಶಸ್ತಿ, ಆರ್ಯಭಟ್ಟ ಪ್ರಶಸ್ತಿ, ಗಾಯಕರ ನಾಯಕ ಪ್ರಶಸ್ತಿ (ಕನ್ನಡ ಕೂಟ, USA), ಹರಿದಾಸ ಸಂಗೀತ ರತ್ನ ಪ್ರಶಸ್ತಿ (ಗುಲ್ಬರ್ಗ ಹರಿದಾಸ ಪ್ರತಿಷ್ಠಾನ), ಕೊಂಕಣಿ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಮತ್ತು ಕನ್ನಡ ಸಂಘಗಳಿಂದ ಪ್ರಶಸ್ತಿಗಳು, ಸಿಂಗಾಪುರದಲ್ಲಿ, ಬಹ್ರೇನ್, ಶಾರ್ಜಾ ಮತ್ತು ಯು.ಎಸ್. ಪ್ರಶಸ್ತಿಗಳು ಲಭಿಸಿವೆ

ಇಂದಿನಿಂದ ಭಾರತ–ದ.ಆಫ್ರಿಕಾ ಮೊದಲ ಟೆಸ್ಟ್

ಮೈಸೂರು, ನ.13(ವಿವಿಹೆಚ್)– ಬಹುನಿರೀಕ್ಷಿತ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಣ ಟೆಸ್ಟ್ ಸರಣಿ ಇಂದಿನಿಂದ ಆರಂಭವಾಗಲಿದೆ.

ಆಸೀಸ್ ಸರಣಿ ಮುಗಿಸಿ ತವರಿಗೆ ಮರಳಿರುವ ಭಾರತ ತಂಡ, ತನ್ನ ಮುಂದಿನ ಸರಣಿಯನ್ನು ಡಿಫೆಂಡಿಂಗ್ ಟೆಸ್ಟ್ ಚಾಂಪಿಯನ್ಸ್ ದಕ್ಷಿಣ ಆಫ್ರಿಕಾ ವಿರುದ್ಧ ಆಡಲಿದೆ. ಈ ಟೂರ್ನಿಗೆ ಭಾರತವೇ ಆತಿಥ್ಯ ವಹಿಸಿದೆ.

ಶುಭ್‌ಮನ್ ಗಿಲ್ ಟೆಸ್ಟ್ ನಾಯಕನಾಗಿ ತವರಿನಲ್ಲಿ ತಂಡವನ್ನು ಮುನ್ನಡೆಸಲಿದ್ದಾರೆ. ರವೀಂದ್ರ ಜಡೇಜಾ, ವಾಷಿಂಗ್‌ಟನ್ ಸುಂದರ್ ಮೇಲೆ ಹೆಚ್ಚಿನ ಜವಾಬ್ದಾರಿಯಿದ್ದು, ವಿಕೆಟ್ ಕೀಪಿಂಗ್ ನಿರ್ವಹಣೆ ಕನ್ನಡಿಗ ಕೆ.ಎಲ್. ರಾಹುಲ್ ಮೇಲಿದೆ. ಯುವ ಬ್ಯಾಟರ್ ನಿತೀಶ್ ಕುಮಾರ್ ರೆಡ್ಡಿ ಅನುಪಸ್ಥಿತಿಯಲ್ಲಿ ಜಾರ್ಖಂಡ್ ಪ್ರತಿಭೆ ಧ್ರುವ್ ಜುರೆಲ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಭಾರತ ಮತ್ತು ಹರಿಣ ಪಡೆ ಈವರೆಗೆ ಟೆಸ್ಟ್‌ನಲ್ಲಿ 44 ಬಾರಿ ಮುಖಾಮುಖಿಯಾಗಿದ್ದು, ಹರಿಣ ಪಡೆ 18 ರಲ್ಲಿ ಗೆಲುವು ಸಾಧಿಸಿದ್ದರೆ, ಭಾರತ 16 ಪಂದ್ಯಗಳನ್ನು ಗೆದ್ದಿದೆ. ಇನ್ನು 10 ಪಂದ್ಯಗಳು ಡ್ರಾನಲ್ಲಿ ಅಂತ್ಯಗೊಂಡಿವೆ.

ದಕ್ಷಿಣ ಆಫ್ರಿಕಾದ ಈ ಭಾರತ ಪ್ರವಾಸದಲ್ಲಿ ಟೆಸ್ಟ್, ಏಕದಿನ ಮತ್ತು ಟಿ20 ಸರಣಿಗಳನ್ನು ಇದೇ ನ.14 ರಿಂದ ಡಿ.19ರ ವರೆಗೆ ಮೂರು ಮಾದರಿಯ ಪಂದ್ಯಗಳು ನಡೆಯಲಿವೆ. ಇನ್ನು ಟೀಂ ಇಂಡಿಯಾ ಏಕದಿನ ತಂಡದಲ್ಲಿ ರೋಹಿತ್, ಕೊಹ್ಲಿ ಕಾಣಿಸಿಕೊಳ್ಳಲಿದ್ದಾರೆ.


ನವೆಂಬರ್ 14 ರಿಂದ ಟೂರ್ನಿ ಆರಂಭವಾಗಲಿದ್ದು, ಮೊದಲು ಟೆಸ್ಟ್ ಸರಣಿಯು ನ.14 ರಿಂದ ನ.26 ರವರೆಗೆ ನಡೆಯಲಿದೆ. ಇದರ ನಂತರ ನ.30 ರಿಂದ ಡಿ.6 ರವರೆಗೆ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಲಿದೆ. ಅಂತಿಮವಾಗಿ ಎರಡೂ ತಂಡಗಳು ಐದು ಪಂದ್ಯಗಳ ಟಿ20 ಸರಣಿ ಆಡಲಿವೆ. ಈ ಟಿ20 ಸರಣಿ ಡಿ.9 ರಂದು ಪ್ರಾರಂಭವಾಗಿ ಡಿ.19 ರವರೆಗೆ ನಡೆಯಲಿದೆ.

ಮೊದಲ ಟೆಸ್ಟ್ ಪಂದ್ಯ ನ.14 ರಿಂದ 18 ವರೆಗೆ ಭಾರತದ ಕ್ರಿಕೆಟ್ ಕಾಶಿ ಕೋಲ್ಕೊತ್ತಾದ ಈಡನ್ ಗಾರ್ಡನ್ ಮೈದಾನದಲ್ಲಿ ನಡೆಯಲಿದೆ. ಈ ಪಂದ್ಯವನ್ನು ಸ್ಟಾರ್ ಸ್ಪೋರ್ಟ್ಸ್ ಚಾನೆಲ್‌ನಲ್ಲಿ ಲೈವ್ ವೀಕ್ಷಣೆ ಮಾಡಬಹುದು. ಮೊಬೈಲ್ ಲೈವ್ ಸ್ಟ್ರೀಮಿಂಗ್ ಜಿಯೋ ಸ್ಟಾರ್‌ನಲ್ಲಿ ಲಭ್ಯವಿದೆ.

ಟೆಸ್ಟ್ ಸರಣಿ ವೇಳಾಪಟ್ಟಿ
ಮೊದಲ ಟೆಸ್ಟ್: ನ.14 ರಿಂದ 18, ಕೋಲ್ಕತ್ತಾ
ಎರಡನೇ ಟೆಸ್ಟ್: ನ.22 ರಿಂದ 26, ಗುವಾಹಟಿ
ಏಕದಿನ ಸರಣಿ ವೇಳಾಪಟ್ಟಿ
ಮೊದಲ ಏಕದಿನ ಪಂದ್ಯ: ನ.30, ರಾಂಚಿ
ಎರಡನೇ ಏಕದಿನ ಪಂದ್ಯ: ಡಿ.3, ರಾಯ್‌ಪುರ
ಮೂರನೇ ಏಕದಿನ ಪಂದ್ಯ: ಡಿ.6, ವಿಶಾಖಪಟ್ಟಣಂ
ಟಿ20 ಸರಣಿ ವೇಳಾಪಟ್ಟಿ
ಮೊದಲ ಪಂದ್ಯ: ಡಿ.9, ಕಟಕ್
ಎರಡನೇ ಪಂದ್ಯ: ಡಿ.11, ನ್ಯೂ ಚಂಡೀಗಢ
ಮೂರನೇ ಪಂದ್ಯ: ಡಿ.14, ಧರ್ಮಶಾಲಾ
ನಾಲ್ಕನೇ ಪಂದ್ಯ: ಡಿ.17, ಲಕ್ನೋ
ಐದನೇ ಪಂದ್ಯ: ಡಿ.19, ಅಹಮದಾಬಾದ್

ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಡ್ರೋನ್ ಕ್ಯಾಮರಾಗಳ ನಿಗಾ ಒದಗಿಸಿ; ಸಿಎಂ ಸೂಚನೆ

● ಕೃಪಾಕರ, ಸೇನಾನಿ–ಸಂಜಯ್ ಗುಬ್ಬಿ ಸೇರಿದಂತೆ ತಜ್ಞರ ಜೊತೆ ಚರ್ಚಿಸಿ ವೈಜ್ಞಾನಿಕ ಮಾರ್ಗಗಳನ್ನು ರೂಪಿಸಲು ನಿರ್ದೇಶನ ● ಸಂಘರ್ಷ ತಪ್ಪಿಸಲು 8 ಅಂಶಗಳ ಯೋಜನೆಗೆ ಸಿಎಂ ಅಸ್ತು ● ಅಗತ್ಯ ಸಿಬ್ಬಂದಿ, ಅನುದಾನ ಸೇರಿ ಸರ್ಕಾರದ ಎಲ್ಲಾ ನೆರವಿನ ಭರವಸೆ



ಬೆಂಗಳೂರು,ನ.13– ಮಾನವ–ವನ್ಯಜೀವಿ ಸಂಘರ್ಷ ತಪ್ಪಿಸಲು ಡ್ರೋಣ್ ಕ್ಯಾಮರಾಗಳ ನಿಗಾ ಹೆಚ್ಚಿಸಿ, ಕೃಪಾಕರ, ಸೇನಾನಿ–ಸಂಜಯ್ ಗುಬ್ಬಿ ಸೇರಿದಂತೆ ತಜ್ಞರ ಜೊತೆ ಚರ್ಚಿಸಿ, ವೈಜ್ಞಾನಿಕ ಮಾರ್ಗಗಳನ್ನು ರೂಪಿಸುವಂತೆ ಸೂಚನೆಗಳನ್ನು ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಗತ್ಯ ಸಿಬ್ಬಂದಿ, ಅನುದಾನ ಸೇರಿ ಸರ್ಕಾರದಿಂದ ಎಲ್ಲಾ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ವಯಸ್ಸಾದ ಕಾರಣ, ಯುವ ಹುಲಿಗಳ ದಾಳಿಯಿಂದ ಗಾಯಗೊಂಡ ಹಾಗೂ ಇನ್ನಿತರೆ ಕಾರಣಗಳಿಂದ ಅರಣ್ಯ ಪ್ರದೇಶದಿಂದ ಹೊರಗೆ ಸಂಚರಿಸುತ್ತಿರುವ 15ರಿಂದ 20 ಹುಲಿಗಳನ್ನು ಡ್ರೋನ್ ಕ್ಯಾಮರಾ ನೆರವಿನಿಂದ ತಕ್ಷಣ ಹಿಡಿಯಲು ಕ್ರಮ ಜರುಗಿಸಿ ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈಗಾಗಲೇ 8 ಕುಮ್ಕಿ ಆನೆಗಳನ್ನು ಕಾರ್ಯಾಚರಣೆಗೆ ಬಳಸಲಾಗುತ್ತಿದ್ದು, ಅಗತ್ಯಕ್ಕೆ ತಕ್ಕಂತೆ ಸಿಬ್ಬಂದಿ ಮತ್ತು ಸ್ಕ್ವಾಡ್‌ಗಳ ಸಂಖ್ಯೆಯನ್ನು ಸಂಘರ್ಷಪೀಡಿತ ಅರಣ್ಯ ಪ್ರದೇಶದಲ್ಲಿ ಬಳಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು. ಈ ಬಗ್ಗೆ ಸಮಗ್ರ ಚರ್ಚೆ ನಡೆಸಿದ ಬಳಿಕ ಮುಖ್ಯಮಂತ್ರಿಗಳು, ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ 8 ಅಂಶದ ಕಾರ್ಯಕ್ರಮಕ್ಕೆ ಸಮ್ಮತಿ ಸೂಚಿಸಿದರು.

ಮಾನವ–ವನ್ಯಜೀವಿ ಸಂಘರ್ಷ ಇರುವ ಪ್ರದೇಶಗಳನ್ನು ಗುರುತಿಸುವುದು ಮತ್ತು ಯಾವ ಸ್ವರೂಪದ ಸಂಘರ್ಷ ಇದೆ ಎಂದು ಪಟ್ಟಿ ಮಾಡುವುದು. ಮಾನವ ಸಂಪನ್ಮೂಲದ ನಿರ್ವಹಣೆ ಸಂಬಂಧ ಸಂಘರ್ಷದ ತೀವ್ರತೆ ಆಧಾರದ ಮೇಲೆ ಅಧಿಕಾರಿ, ಸಿಬ್ಬಂದಿಯ ನಿಯೋಜಿಸುವುದು. ಅರಣ್ಯದ ಅಂಚಿನ ಗ್ರಾಮಗಳಲ್ಲಿ ಗಸ್ತು ಹೆಚ್ಚಳ ಮಾಡುವುದು ಹಾಗೂ ರಿಜಿಸ್ಟರ್ ನಿರ್ವಹಣೆ. ಹಿರಿಯ ಅಧಿಕಾರಿಗಳು ನಿಯಮಿತವಾಗಿ ಅರಣ್ಯದಂಚಿನ, ಅದರಲ್ಲೂ ಮಾನವ–ವನ್ಯಜೀವಿ ಸಂಘರ್ಷ ಇರುವ ಗ್ರಾಮದಲ್ಲಿ ವಾಸ್ತವ್ಯ ಹೂಡುವುದು. ಸ್ಥಳೀಯರನ್ನು ತೊಡಗಿಸಿಕೊಳ್ಳುವುದು, ಅರಣ್ಯದಂಚಿನ ಗ್ರಾಮದ ಉತ್ಸಾಹಿ ಯುವಕರು ಮತ್ತು ಹಿರಿಯರನ್ನು ಗುರುತಿಸಿ 'ಅರಣ್ಯ ಮಿತ್ರ' ಎಂದು ಪರಿಗಣಿಸಿ ಗಸ್ತು, ವನ್ಯಜೀವಿ ಸೆರೆ ಕಾರ್ಯಾಚರಣೆ ವೇಳೆ ಅವರ ಸೇವೆ ಬಳಸಿಕೊಳ್ಳುವುದು. ವನ್ಯಜೀವಿ ಸಂರಕ್ಷಣೆ ಕಾರ್ಯಾಚರಣೆಗೆ ವನ್ಯಜೀವಿಗಳು ಸಂಚರಿಸುವ ಕಾರ್ಯತಂತ್ರ ಸ್ಥಳಗಳಲ್ಲಿ 24X7 ವಾಹನ ಮತ್ತು ಅರಣ್ಯ ಸಿಬ್ಬಂದಿ ಲಭ್ಯವಾಗುವಂತೆ ಮಾಡುವುದು. ವನ್ಯಜೀವಿ ಸೆರೆ, ವನ್ಯಜೀವಿ ದಾಳಿ ಮಾಡಿದಾಗ ಏನು ಮಾಡಬೇಕು ಎಂಬ ಬಗ್ಗೆ ಮಾಹಿತಿ ನೀಡಲು ಅಣಕು ಪ್ರದರ್ಶನ ಏರ್ಪಡಿಸುವುದು. ಜಿಲ್ಲಾ ಮಟ್ಟದಲ್ಲಿ ಸಮನ್ವಯ, ಸಹಯೋಗ ಸಮಿತಿ ರಚನೆ. ತಾಲೂಕು ಮಟ್ಟದಲ್ಲಿ ಉಪಸಮಿತಿ ರಚನೆ ಮಾಡಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ನೆರವು ಪಡೆಯುವುದು. ಈ ಸಮಿತಿ ನಿಯಮಿತವಾಗಿ ಸಭೆ ನಡೆಸಿ ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಶ್ರಮಿಸುವುದು ಎಂಬ ಪ್ರಮುಖ 8 ಅಂಶಗಳ ಕಾರ್ಯಕ್ರಮಕ್ಕೆ ಅವರು ಸಮ್ಮತಿಸಿದರು.

ಕರ್ನಾಟಕದಲ್ಲಿ ಆನೆಗಳ ಸಂಖ್ಯೆ 6,395 ಇದ್ದು, ರಾಜ್ಯ ದೇಶದಲ್ಲಿ ಮೊದಲ ಸ್ಥಾನದಲ್ಲಿದೆ. ಹುಲಿ ಸಂಖ್ಯೆ 563 ಇದ್ದು, ದೇಶದಲ್ಲಿ ಎರಡನೇ ಸ್ಥಾನವನ್ನು ಕರ್ನಾಟಕ ಅಲಂಕರಿಸಿದೆ. 1,879 ಚಿರತೆಗಳನ್ನು ಹೊಂದಿರುವ ರಾಜ್ಯವು ದೇಶದಲ್ಲಿ ಮೂರನೇ ಸ್ಥಾನದಲ್ಲಿದೆ ಎಂಬ ವಿಚಾರವನ್ನು ಇದೇ ವೇಳೆ ಸಭೆಗೆ ತಿಳಿಸಲಾಯಿತು.

ವನ್ಯಜೀವಿ ಹಾವಳಿಯಿಂದ ಕಳೆದ 4 ವರ್ಷಗಳಲ್ಲಿ ರಾಜ್ಯದಲ್ಲಿ 2022–23ರಲ್ಲಿ 57, 2023–24ರಲ್ಲಿ 65, 2024–25ರಲ್ಲಿ 46, 2025–26ರಲ್ಲಿ 32 ಮಾನವ ಜೀವ ಹಾನಿ ಸಂಭವಿಸಿದೆ. ಚಾಮರಾಜನಗರ, ಕೊಡಗು, ಹಾಸನ, ಮೈಸೂರು ಹಾಗೂ ರಾಮನಗರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಾನವ ಪ್ರಾಣಹಾನಿ ಪ್ರಕರಣಗಳು ಸಂಭವಿಸಿದೆ. ಕಳೆದ ಮೂರು ವರ್ಷಗಳಿಗೆ ಹೋಲಿಸಿದರೆ 2024–25ರಲ್ಲಿ ಮಾನವ ಪ್ರಾಣ ಹಾನಿ ಪ್ರಕರಣಗಳಲ್ಲಿ ಶೇ.30ರಷ್ಟು ಕಡಿತವಾಗಿದೆ ಎಂಬ ಅಂಶಗಳನ್ನು ಸಭೆಯ ಗಮನಕ್ಕೆ ತರಲಾಯಿತು.

ವನ್ಯಜೀವಿಗಳು ಆಹಾರ ಹುಡುಕಿಕೊಂಡು ಹೊರಗೆ ಬರುವುದನ್ನು ನಿಗ್ರಹಿಸಬೇಕು. ಬೇಸಿಗೆಯ ಕಾಲದಲ್ಲಿ ವನ್ಯಜೀವಿಗಳಿಗೆ ಅರಣ್ಯದೊಳಗೆ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಅರಣ್ಯದಲ್ಲಿ ವ್ಯಾಪಕವಾಗಿ ಹರಡುವ ಲಂಟಾನ ಕಳೆ ತೆಗೆಯಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ವನ್ಯಪ್ರಾಣಿಗಳ ಮೇವಿಗೆ ಕೊರತೆ ಉಂಟಾಗುತ್ತದೆ ಎಂದು ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಯಿತು.

ಅರಣ್ಯ ಸಚಿವ ಈಶ್ವರ ಖಂಡ್ರೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಸೇರಿದಂತೆ ಅರಣ್ಯ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ಜೆಡಿಎಸ್‌ನಿಂದ ಶಾಸಕನಾದಾಗ ಕಾಂಗ್ರೆಸ್ ಮುಗಿಸಿದ್ದೆ; ಆ ಸಂದರ್ಭ ಮತ್ತೆ ಬರಬಹುದು!

ಸ್ವಪಕ್ಷದ ವಿರುದ್ಧ ಕೆ.ಎನ್.ರಾಜಣ್ಣ ಮತ್ತೆ ಗುಡುಗು



ತುಮಕೂರು, ನ.13– ಮುಂದಿನ ದಿನದಲ್ಲಿ ಜಿಲ್ಲೆಯಲ್ಲಿ ಕಾಂಗ್ರೆಸ್ ಖಾಲಿಯಾಗಬಹುದು. ಅಂತಹ ಕಾಲ ಬರಬಹುದು ಎಂದು ಸಿಎಂ ಸಿದ್ದರಾಮಯ್ಯ ಆಪ್ತ, ಮಾಜಿ ಸಚಿವ ಕೆಎನ್ ರಾಜಣ್ಣ ಸ್ವಪಕ್ಷದ ವಿರುದ್ಧವೇ ಗುಡುಗಿದ್ದಾರೆ.


ನಿನ್ನೆ ತುಮಕೂರು ಜಿಲ್ಲೆ ಮಧುಗಿರಿ ತಾಲೂಕಿನ ದೊಡ್ಡೆರಿಯ ಜನಸಂಪರ್ಕ ಸಭೆಯ ವೇದಿಕೆಯಲ್ಲಿ ಭಾಷಣದ ವೇಳೆ ಈ ಹೇಳಿಕೆ ನೀಡಿದ ಮಾಜಿ ಸಚಿವ ಕೆ.ಎನ್ ರಾಜಣ್ಣ ಅವರು, 2004ರಲ್ಲಿ ನಾನು ಜೆಡಿಎಸ್‌ನಿಂದ ಶಾಸಕರಾಗಿ ಗೆದ್ದೆ. ಆಗ ಕಾಂಗ್ರೆಸ್ ಪಕ್ಷ ನನಗೆ ಗೌರವ ಕೊಡಲಿಲ್ಲ. ಆದ್ದರಿಂದ ಜಿಲ್ಲೆಯಲ್ಲಿ ಕಾಂಗ್ರೆಸ್ ಅನ್ನು ಸಂಪೂರ್ಣವಾಗಿ ವೈಟ್ ವಾಶ್ ಮಾಡಿದ್ದೆ. ಈಗ ಮತ್ತೆ ಆ ಸಂದರ್ಭ ಬರುತ್ತೋ ಇಲ್ವೋ ಗೊತ್ತಿಲ್ಲ. ನೋಡೋಣ, ಏನಾಗುತ್ತದೆ ಎಂದರು.

ರಾಜಕೀಯದಲ್ಲಿ ಶಾಶ್ವತವಾಗಿ ಯಾರೂ ಶತ್ರುಗಳೂ ಇಲ್ಲ, ಮಿತ್ರರೂ ಇಲ್ಲ. ನಾವು ಜಾತಿ ರಹಿತವಾಗಿ, ಪಕ್ಷ ರಹಿತವಾಗಿ ಬಡವರಿಗಾಗಿ ಕೆಲಸ ಮಾಡಿದಾಗ ಅವರ ಆಶೀರ್ವಾದವೇ ನಮಗೆ ಆನೆ ಬಲ. ನಾನು ಮೋಟರ್ ಸೈಕಲ್ ರ್‍ಯಾಲಿ ನೋಡಿದ್ದೇನೆ. ಈಗ ಒಬ್ಬರೂ ಕಾಂಗ್ರೆಸ್ ಬಾವುಟ ಹಿಡಿದಿಲ್ಲ ಯಾಕೆ. ಎಲ್ಲರೂ ನೂರಾರು ಬಾವುಟಗಳನ್ನು ಹಿಡಿಯುವವರು ಯಾರೂ ಹಿಡಿದಿಲ್ಲ ಅನ್ನೋದು ನನಗೆ ಆಶ್ಚರ್ಯ. ಅದಿರಲಿ, ಮುಂದೆ ಯಾವ ಬಾವುಟ ಹಿಡಿಬೇಕು, ಏನು ಮಾಡಬೇಕು ಅಂತ ನೀವೇ ತೀರ್ಮಾನ ಮಾಡಿ. ನಾನಂತೂ ಚುನಾವಣೆಗೆ ನಿಲ್ಲಲ್ಲಾ ಎಂದ ಮೇಲೆ ಆ ಪ್ರಶ್ನೆ ನನಗಿಲ್ಲ ಎಂದರು.

ನಾನು ಜನರನ್ನ ನಂಬಿ ರಾಜಕಾರಣ ಮಾಡಿದವನು. ನನ್ನದು ಸ್ವಂತ ತಾಲೂಕು ತುಮಕೂರು. ಆದರೂ ಮಧುಗಿರಿಯಲ್ಲಿ ಎಂಎಲ್‌ಎ ಆಗಿ ಹಲವು ಬಾರಿ ಗೆದ್ದಿದ್ದೇನೆ ನನಗೂ ಮಧುಗಿರಿಗೂ ಏನು ಸಂಬಂಧ ಎಂದು ನಾನೇ ಕೆಲವು ಬಾರಿ ಕುಳಿತು ಯೋಚನೆ ಮಾಡುತ್ತೇನೆ. ಮಧುಗಿರಿಯಲ್ಲಿ ನಾನು ಇಷ್ಟು ಬಾರಿ ಎಂಎಲ್‌ಎ ಆಗಿ ಬಿಟ್ಟಿದ್ದೇನೆ. ಏನು ಋಣನೋ, ಸಂಬಂಧ ಇದೆಯೋ ಗೊತ್ತಿಲ್ಲ. ನಾನು ಎಂಎಲ್‌ಎ ಆದರೆ ತುಮಕೂರು ಸಿಟಿಯಲ್ಲಿ ಅಥವಾ ಗ್ರಾಮಾಂತರದಲ್ಲಾಗಬೇಕು. ತುಮಕೂರು ನನ್ನ ಸ್ವಂತ ತಾಲೂಕು. ಆದರೆ ಮಧುಗಿರಿ ಕ್ಷೇತ್ರದ ಜನರು ನನಗೆ ರಾಜಕೀಯ ಜನ್ಮ ನೀಡಿದರು ಎಂದು ಭಾವುಕರಾದರು.

ಜೆಡಿಎಸ್ ಕಟ್ಟಿದವರಲ್ಲಿ ನಾನೂ ಒಬ್ಬ; ನಾನೇಕೆ ಪಕ್ಷ ಬಿಡಬೇಕು?

● ಶಾಸಕ ಜಿ.ಟಿ.ದೇವೇಗೌಡರ ಪ್ರಶ್ನೆ ● ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಕೊನೆ ಘಳಿಗೆಯಲ್ಲಿ ನನ್ನ ಹೆಸರು ಕೈಬಿಟ್ಟರು ● ಪಕ್ಷ ಕಟ್ಟಿದ ನನ್ನನ್ನ ಈಗ ಎಲ್ಲಾ ಸಮಿತಿಯಿಂದ ಕೈಬಿಟ್ಟಿದ್ದಾರೆ; ಇಷ್ಟೆಲ್ಲಾ ಆದರೂ ನಾನು ಜೆಡಿಎಸ್‌ನಲ್ಲೇ ಇರುತ್ತೇನೆ



ಬೆಂಗಳೂರು, ನ.13– ಜೆಡಿಎಸ್ ಕೋರ್ ಕಮಿಟಿಗೆ ಕೊಕ್ ಬೆನ್ನಲ್ಲೇ ಜೆಡಿಎಸ್ ವರಿಷ್ಠರ ವಿರುದ್ಧ ಶಾಸಕ ಜಿ.ಟಿ.ದೇವೇಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪಕ್ಷದ ಸಮಿತಿಯಿಂದ ನನ್ನನ್ನು ಕೈಬಿಡಲಾಗಿದೆ. ಯಾವ ಸಮಿತಿಯಲ್ಲೂ ನಾನಿಲ್ಲ. ಹೀಗಾಗಿ ನಾನು ಪಕ್ಷದ ಕಚೇರಿಗೆ ಹೋಗುವುದಿಲ್ಲ. ಕ್ಷೇತ್ರದಲ್ಲೇ ಇದ್ದು ಜನರ ಕೆಲಸ ಮಾಡುತ್ತೇನೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕನಾಗುವ ಆಸೆ ನನಗೇನೂ ಇರಲಿಲ್ಲ. ಆಸೆ ತೋರಿಸಿ, ಏನನ್ನೂ ಹೇಳದೆ ನನ್ನ ಹೆಸರನ್ನು ಕೈಬಿಡಲಾಗಿತ್ತು. ಇದರಿಂದ ಬೇಸರವಾಯಿತು ಎಂದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ನೀನು ಎಂದು ಪಕ್ಷದ ಪ್ರಮುಖರು ಹೇಳಿದ್ದರು. ನಾನು ಕಚೇರಿ, ಸಿಬ್ಬಂದಿ ಎಲ್ಲವನ್ನೂ ಸಿದ್ಧ ಮಾಡಿಕೊಂಡಿದ್ದೆ. ನಿಖಿಲ್ ಕುಮಾರಸ್ವಾಮಿ ಕೂಡ ನನಗೆ ಶುಭಾಶಯ ಹೇಳಿದ್ದರು. ಆದರೆ ಮರುದಿನ ಸ್ಪೀಕರ್ ಕಚೇರಿಗೆ ಸುರೇಶ್‌ಬಾಬು ಹೆಸರು ಕಳಿಸಿದ್ದರು ಎಂದು ತಮಗೆ ಆದ ಅನ್ಯಾಯವನ್ನು ವಿವರಿಸಿದರು.

ಯಾವ ಕಾರಣಕ್ಕಾಗಿ ನನ್ನ ಹೆಸರನ್ನು ಕೈಬಿಡಲಾಯಿತು ಎಂಬುದನ್ನು ಕುಮಾರಸ್ವಾಮಿ ಅವರು ಈವರೆಗೂ ತಿಳಿಸಿಲ್ಲ. ಅಂದಿನಿಂದ ನನ್ನ ಪಾಡಿಗೆ ನಾನು, ಅವರ ಪಾಡಿಗೆ ಅವರು ಇದ್ದಾರೆ. ಅವರಿಗೆ ಪಕ್ಷಕ್ಕಾಗಿ ಕೆಲಸ ಮಾಡಿದವರು ಬೇಡವಾಗಿದ್ದಾರೆ. ಬದಲಿಗೆ ಚಾಡಿ ಹೇಳುವವರು ಅವರಿಗೆ ಪ್ರಿಯರಾಗುತ್ತಾರೆ ಎಂದರು.

ಪಕ್ಷ ವಿರೋಧಿ ಚಟುವಟಿಕೆ ಮಾಡಿಲ್ಲ: ಇಷ್ಟಾದರೂ ನಾನು ಪಕ್ಷ ವಿರೋಧಿ ಚಟುವಟಿಕೆ ಮಾಡಿಲ್ಲ. ಪಕ್ಷದ ಪರವಾಗಿಯೇ ಕೆಲಸ ಮಾಡಿದ್ದೇನೆ. ಕ್ಷೇತ್ರದಲ್ಲಿ ಕೆಲಸ ಮಾಡಿಕೊಂಡು ಹೋಗುತ್ತಿದ್ದೇನೆ. ನಾನು ಕೋರ್ ಕಮಿಟಿ ಅಧ್ಯಕ್ಷನಾಗಿ ಅನೇಕ ಸಭೆ ಮಾಡಿದ್ದೇನೆ. ಅರ್ಧ ರಾಜ್ಯ ಸುತ್ತಿದ್ದೇನೆ. ನಾನು ಈಗಲೂ ಜನತಾದಳದಲ್ಲೇ ಇದ್ದೇನೆ. ಜಿಲ್ಲೆಯಲ್ಲಿ ನಾನೇ ಪಕ್ಷ ಕಟ್ಟುತ್ತೇನೆ. ಈಗ ನಾನು ಶಾಸಕ ಅಷ್ಟೆ. ಎಲ್ಲಾ ಸ್ಥಾನದಿಂದ ತೆಗೆದಿದ್ದಾರೆ. ಹಾಗಾಗಿ ಕೋರ್ ಕಮಿಟಿ ಸಭೆಗೆ ಹೋಗುವುದಿಲ್ಲ ಎಂದರು.

ಸಿಎಂ ಪರ ಮಾತನಾಡಿಲ್ಲ: ಜಿಟಿಡಿ ಸಿದ್ದರಾಮಯ್ಯ ಪರವಾಗಿ ಮಾತನಾಡುತ್ತಾರೆ ಎಂಬ ವಿಚಾರವಾಗಿ ಸ್ಪಷ್ಟನೆ ಕೊಟ್ಟ ಅವರು, ನಾನು ಕುಮಾರಸ್ವಾಮಿ ಅವರನ್ನೂ ಹೊಗಳಿದ್ದೇನೆ. ಸಿದ್ದರಾಮಯ್ಯ ಅವರನ್ನೂ ಹೊಗಳಿದ್ದೇನೆ. ತೆಗಳುವಾಗ ತೆಗಳಬೇಕು, ಹೊಗಳುವಾಗ ಹೊಗಳಬೇಕು. ಸಿದ್ದರಾಮಯ್ಯ ಅವರ ಜೊತೆ 25 ವರ್ಷ ಕೆಲಸ ಮಾಡಿದ್ದೆ. ಅವರ ವಿರುದ್ಧ ಹೋರಾಡುವ ಹೊಣೆಯನ್ನು ಪಕ್ಷ ನೀಡಿದಾಗ, ಹೋರಾಡಿದೆ. ಆಗಿನ ನನ್ನ ನಿಷ್ಠೆ ಪಕ್ಷದ ನಾಯಕರಿಗೆ ಕಾಣಲಿಲ್ಲವೇ ಎಂದು ಪ್ರಶ್ನೆಯೊಂದಕ್ಕೆ ಮರುಪ್ರಶ್ನೆ ಹಾಕಿದರು.

ಮುಡಾ ಪ್ರಕರಣದಲ್ಲಿ ಕೋರ್ಟ್ ಆದೇಶ ನೀಡುತ್ತದೆ. ನ್ಯಾಯಾಲಯ ರಾಜೀನಾಮೆ ಕೊಡು ಅಂದರೆ ಕೊಡಬೇಕು. ಅಶೋಕ್, ಕುಮಾರಸ್ವಾಮಿ ರಾಜೀನಾಮೆ ಕೊಡು ಅಂದರೆ ಏಕೆ ಕೊಡಬೇಕು? ಎಂದು ಪ್ರಶ್ನಿಸಿದ್ದೆ ಎಂದು ತಿಳಿಸಿದರು.

ಕೋರ್ ಕಮಿಟಿ ಅಧ್ಯಕ್ಷನಾಗಿ ಪಕ್ಷ ಕಟ್ಟಿದ್ದೇನೆ. ಸಿದ್ದರಾಮಯ್ಯ ಜೆಡಿಎಸ್ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಹೋದ ಮೇಲೂ ಜೆಡಿಎಸ್ ಪಕ್ಷದಲ್ಲಿ ಒಬ್ಬನೇ ಇದ್ದು ಪಕ್ಷ ಕಟ್ಟಿದ್ದೆ. ಕುಮಾರಸ್ವಾಮಿ, ದೇವೇಗೌಡರ ಜೊತೆ ಪಕ್ಷ ಕಟ್ಟಿದ್ದೇನೆ. ನಾನು ಜೆಡಿಎಸ್‌ನೊಂದಿಗೆ ಕೂಡಿಕೆ ಮಾಡಿಕೊಂಡವನಲ್ಲ ಪಕ್ಷವನ್ನು ಕಟ್ಟಿದವರಲ್ಲಿ ನಾನೂ ಒಬ್ಬ. ನಾನೇಕೆ ಪಕ್ಷ ಬಿಡಬೇಕು? ಪಕ್ಷದಲ್ಲೇ ಇರುತ್ತೇನೆ ಎಂದು ಸ್ಪಷ್ಟಪಡಿಸಿದರು.

ದೇಶವನ್ನೇ ಬೆಚ್ಚಿ ಬೀಳಿಸಿದ್ದ ಕಿಚ್ಚುಗುತ್ತಿ ಮಾರಮ್ಮ ದೇಗುಲದ ಪ್ರಸಾದದಲ್ಲಿ ವಿಷ ಪ್ರಾಶನ ಪ್ರಕರಣದ ಮೊದಲ ಆರೋಪಿ ಮಹದೇವಸ್ವಾಮಿಗೆ ಜಾಮೀನು

● ವೈದ್ಯಕೀಯ ಚಿಕಿತ್ಸೆಗೆ ಹೈಕೋರ್ಟ್ ಷರತ್ತಿನ ಜಾಮೀನು ಮಂಜೂರು ● ಘಟನೆಯಲ್ಲಿ 17 ಮಂದಿ ಸಾವಿಗೀಡಾಗಿ 123 ಮಂದಿ ಅಸ್ವಸ್ಥರಾಗಿದ್ದರು



ಮಹದೇವಸ್ವಾಮಿ

ಚಾಮರಾಜನಗರ, ನ.13– ಇಡೀ ದೇಶವನ್ನೇ ಬೆಚ್ಚಿ ಬೀಳಿಸಿದ್ದ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಸುಳ್ವಾಡಿ ಗ್ರಾಮದ ಕಿಚ್ಚುಗುತ್ತಿ ಮಾರಮ್ಮ ದೇಗುಲದ ಪ್ರಸಾದದಲ್ಲಿ ವಿಷ ಪ್ರಾಸನ ದುರಂತದ ನಾಲ್ವರು ಆರೋಪಿಗಳ ಪೈಕಿ ಎ–1 ಆರೋಪಿಯಾಗಿರುವ, ಮಹದೇಶ್ವರಬೆಟ್ಟದ ಸಾಲೂರು ಮಠದ ಹಿಂದಿನ ಕಿರಿಯ ಸ್ವಾಮೀಜಿ ಇಮ್ಮಡಿ ಮಹದೇವಸ್ವಾಮಿಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಕಳೆದ 7 ವರ್ಷದಿಂದ ಜೈಲಿನಲ್ಲಿರುವ ಈತ ಅನಾರೋಗ್ಯದ ಹಿನ್ನಲೆಯಲ್ಲಿ ಜಾಮೀನು ಕೋರಿ ಹೈಕೋರ್ಟ್ ಮೊರೆ ಹೋಗಿದ್ದ. ವಿಚಾರಣೆ ನಡೆಸಿದ ಹೈಕೋರ್ಟಿನ ಏಕಸದಸ್ಯ ಪೀಠದ ನ್ಯಾಯಮೂರ್ತಿ ರಾಚಯ್ಯ ಅವರು ವೈದ್ಯಕೀಯ ಚಿಕಿತ್ಸೆಗೆಂದು ಒಂದು ವರ್ಷದ ಅವಧಿಗೆ ಆತನಿಗೆ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದ್ದಾರೆ.

ಈ ಪ್ರಕರಣದಲ್ಲಿ ಇಮ್ಮಡಿ ಮಹದೇವಸ್ವಾಮಿ, ಆತನ ಪ್ರೇಯಸಿ ಅಂಬಿಕಾ, ಆಕೆಯ ಪತಿ ಮಾದೇಶ ಹಾಗೂ ದೊಡ್ಡಯ್ಯ ಎಂಬುವರನ್ನು ಪೊಲೀಸರು ಬಂಧಿಸಿ, ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿದ್ದಾರೆ. ಈ ಆರೋಪಿಗಳು ಈ ಹಿಂದೆ ಜಾಮೀನಿಗಾಗಿ ಸುಪ್ರೀಂ ಕೋರ್ಟಿನ ಕದವನ್ನೂ ತಟ್ಟಿದ್ದರು. ಆದರೆ, ಇದೊಂದು ಗಂಭೀರ ಪ್ರಕರಣವಾಗಿರುವುದರಿಂದ ಸುಪ್ರೀಂಕೋರ್ಟ್ ಇವರ ಅರ್ಜಿಯನ್ನು ತಿರಸ್ಕರಿಸಿತ್ತು.

ಏನಿದು ಘಟನೆ: ಕಿಚ್ಚುಗುತ್ತಿ ಮಾರಮ್ಮ ದೇವಾಲಯದ ಆಡಳಿತ ಮಂಡಳಿಯ ಟ್ರಸ್ಟಿಗಳ ನಡುವಿನ ತಿಕ್ಕಾಟವೇ ಈ ದುರಂತಕ್ಕೆ ಕಾರಣವಾಗಿತ್ತು ಹೆಚ್ಚು ಆದಾಯ ಹೊಂದಿದ್ದ ದೇವಾಲಯದ ಹಿಡಿತ ಸಂಪೂರ್ಣವಾಗಿ ತಮ್ಮ ಕೈಗೆ ಬರಬೇಕು, ಆಡಳಿತ ಮಂಡಳಿಯ ಇನ್ನೊಂದು ಬಣಕ್ಕೆ ಕೆಟ್ಟ ಹೆಸರು ತರಬೇಕು ಎಂಬ ಉದ್ದೇಶದಿಂದ ಭಕ್ತರಿಗೆ ನೀಡುವ ಪ್ರಸಾದದಲ್ಲಿ ವಿಷ ಬೆರೆಸಲಾಗಿತ್ತು. ಈ ಕೃತ್ಯದ ರೂವಾರಿಗಳು ಮಹದೇವಸ್ವಾಮಿ, ಅಂಬಿಕಾ, ಮಾದೇಶ. ಮತ್ತೊಬ್ಬ ಆರೋಪಿ ದೊಡ್ಡಯ್ಯ. ವೈಯಕ್ತಿಕ ದ್ವೇಷದಿಂದ ಈ ಕೃತ್ಯದಲ್ಲಿ ಸಹಕರಿಸಿದ್ದ. ಈ ಪ್ರಕರಣದಲ್ಲಿ ದೇವಸ್ಥಾನಕ್ಕೆ ಬಂದು ಪ್ರಸಾದ ಸ್ವೀಕರಿಸಿದವರಲ್ಲಿ 17 ಮಂದಿ ಸಾವನ್ನಪ್ಪಿ, 123 ಮಂದಿ ತೀವ್ರವಾಗಿ ಅಸ್ವಸ್ಥಗೊಂಡಿದ್ದರು.

ಸುದೀರ್ಘ ವಿಚಾರಣೆ: ರಾಷ್ಟ್ರದ ಗಮನ ಸೆಳೆದಿದ್ದ ಈ ಘಟನೆ ನಡೆದು ನಾಲ್ಕು ದಿನಗಳ ಬಳಿಕ ಅಂದರೆ, 2018ರ ಡಿ.19ರಂದು ಇಮ್ಮಡಿ ಮಹದೇವಸ್ವಾಮಿ ಸೇರಿ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದರು. ಅಂದಿನಿಂದ ಇವರೆಲ್ಲರೂ ಜೈಲಿನಲ್ಲಿದ್ದಾರೆ. ಸಾಲೂರು ಮಠದ ಕಿರಿಯ ಸ್ವಾಮೀಜಿಯಾಗಿದ್ದ ಇಮ್ಮಡಿ ಮಹದೇವಸ್ವಾಮಿ, ಈ ಕೃತ್ಯ ನಡೆಸಿರುವುದು ಮೊದಲಿಗೆ ಭಕ್ತರಲ್ಲಿ ಆಘಾತವನ್ನುಂಟು ಮಾಡಿತ್ತು. ನಂತರ ಭಕ್ತರು ಸಭೆ ಸೇರಿ ಆತನನ್ನು ಪೀಠದಿಂದ ವಜಾಗೊಳಿಸಿದ್ದರು.

ನಿಲ್ಲದ ಸಂತ್ರಸ್ತರ ಗೋಳು : ಘಟನೆ ನಡೆದು 7 ವರ್ಷ ಕಳೆದರೂ ದುರಂತದ ಸಂತ್ರಸ್ತರ ಗೋಳು ಇನ್ನೂ ನಿಂತಿಲ್ಲ. ಅಸ್ವಸ್ಥಗೊಂಡವರಿಗೆ ಆಗ ಸರ್ಕಾರದ ವತಿಯಿಂದಲೇ ಮೈಸೂರಿನ ವಿವಿಧ ಖಾಸಗಿ ಆಸ್ಪತ್ರೆಗಳಲ್ಲಿ ಉತ್ತಮ ಚಿಕಿತ್ಸೆ ನೀಡಲಾಗಿತ್ತಾದರೂ ಅವರಲ್ಲಿ ಅನೇಕರು ಈಗಲೂ ಕೆಲ ಖಾಯಿಲೆಗಳಿಂದ ನರಳುತ್ತಿದ್ದು, ದುಡಿಯಲು ಆಗದಂತಹ ಪರಿಸ್ಥಿತಿಯಲ್ಲಿ ದ್ದಾರೆ. ಘಟನೆ ಸಂಭವಿಸಿದ ಸಂದರ್ಭ ಹಾಗೂ ಚುನಾವಣೆ ವೇಳೆ ಗ್ರಾಮಕ್ಕೆ ಭೇಟಿ ನೀಡಿದ ಜನಪ್ರತಿನಿಧಿಗಳು ನಿಮ್ಮೊಂದಿಗೆ ಸರ್ಕಾರ ಇರುತ್ತದೆ. ನಿಮಗೆ ಅಗತ್ಯ ನೆರವು ನೀಡುತ್ತೇವೆ ಎಂದು ನೀಡಿದ್ದ ಭರವಸೆ ಇನ್ನೂ ಈಡೇರಿಲ್ಲ ಹೀಗಾಗಿ, ಘಟನೆಯಿಂದ ತಮ್ಮವರನ್ನೂ ಕಳೆದುಕೊಂಡು ಅನಾಥವಾದ ಕುಟುಂಬಗಳು, ದೇಹದ ಅಂಗಾಂಗ ವೈಕಲ್ಯ, ಹಲವು ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವವರು ಇಂದಿಗೂ ಸಂಕಷ್ಟದಲ್ಲೇ ಜೀವನ ಕಳೆಯುತ್ತಿದ್ದಾರೆ.

ಈಡೇರದ ಸರ್ಕಾರದ ಭರವಸೆ: ಘಟನೆ ಸಂಭವಿಸಿದ ಸಂದರ್ಭದಲ್ಲಿ ಅಂದು ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಹಲವು ಜನಪ್ರತಿನಿಧಿಗಳು ಸಂತ್ರಸ್ತರನ್ನು ಭೇಟಿ ಮಾಡಿ ದುರಂತದಿಂದ ಮೃತಪಟ್ಟ 17 ಮಂದಿಯ ಕುಟುಂಬದ ಓರ್ವ ಸದಸ್ಯರಿಗೆ ಸರ್ಕಾರಿ ನೌಕರಿ, 2 ಎಕರೆ ಜಮೀನು, ಆರೋಗ್ಯ ಸೇವೆ ಕಲ್ಪಿಸುವ ಭರವಸೆ ನೀಡಿದ್ದರು.

ಆದರೆ, ಇದರಲ್ಲಿ 7 ಮಂದಿಗಷ್ಟೇ ನೌಕರಿ ದೊರತಿದೆ. ಇನ್ನೂ 10 ಮಂದಿಗೆ ಯಾವುದೇ ಉದ್ಯೋಗ ದೊರತಿಲ್ಲ. ಘಟನೆ ನಡೆದ ವೇಳೆ ಒಂದಷ್ಟು ಪರಿಹಾರದ ಹಣವನ್ನು ನೀಡಿದ್ದು ಬಿಟ್ಟರೆ ಬೇರೆ ಯಾವುದೇ ಭರವಸೆ ಈವರೆವಿಗೂ ಈಡೇರಿಲ್ಲ ಎಂದು ಗ್ರಾಮಸ್ಥರೊಬ್ಬರು ನೋವಿನಿಂದ ನುಡಿದಿದ್ದಾರೆ.

ಮೈಸೂರು ಮಿತ್ರ

ಶುಕ್ರವಾರ 14 ನವೆಂಬರ್ 2025

ಇಂದು ಮಕ್ಕಳ ದಿನಾಚರಣೆ

ವಿದ್ಯಾರ್ಥಿಗಳಿಗೆ ಮೃಗಾಲಯ, ವಸ್ತುಪ್ರದರ್ಶನಕ್ಕೆ ಉಚಿತ ಪ್ರವೇಶ

- ಸಮವಸ್ತ್ರ, ಗುರುತಿನ ಚೀಟಿ ಕಡ್ಡಾಯ
- ವಸ್ತುಪ್ರದರ್ಶನದಲ್ಲಿ ಲಘು ಭೋಜನದ ವ್ಯವಸ್ಥೆ





ಮೈಸೂರು, ನ.13(ಎಂಟಿವೈ)–ನಾಳೆ (ಶುಕ್ರವಾರ) ಮಕ್ಕಳ ದಿನಾಚರಣೆ ಹಿನ್ನೆಲೆಯಲ್ಲಿ ಮೈಸೂರು ಮೃಗಾಲಯ ಹಾಗೂ ದಸರಾ ವಸ್ತುಪ್ರದರ್ಶನಕ್ಕೆ ಮಕ್ಕಳಿಗೆ ಉಚಿತ ಪ್ರವೇಶ ನೀಡಲು ನಿರ್ಧರಿಸಲಾಗಿದ್ದು, ದಸರಾ ವಸ್ತುಪ್ರದರ್ಶನಕ್ಕೆ ಬರುವ ಮಕ್ಕಳಿಗೆ ಸಿಹಿ ತಿನಿಸಿನೊಂದಿಗೆ ಲಘು ಭೋಜನದ ವ್ಯವಸ್ಥೆ ಮಾಡಲಾಗಿದೆ.

ಮೃಗಾಲಯಕ್ಕೆ: ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕಿ ಪಿ.ಅನುಷಾ ಮಾತನಾಡಿ, ಮಕ್ಕಳ ದಿನಾಚರಣೆ ಹಿನ್ನೆಲೆಯಲ್ಲಿ ಶುಕ್ರವಾರ(ನ.14) ಮೃಗಾಲಯಕ್ಕೆ ಬೆಳಗ್ಗೆ 8.30ರಿಂದ ಮಧ್ಯಾಹ್ನ 12 ಗಂಟೆವರೆಗೆ 12 ವರ್ಷದೊಳಗಿನ ಮಕ್ಕಳಿಗೆ ಉಚಿತ ಪ್ರವೇಶಾವಕಾಶವಿರುತ್ತದೆ. ವಿದ್ಯಾರ್ಥಿಗಳು ಸಮವಸ್ತ್ರದೊಂದಿಗೆ ಐಡಿ ಕಾರ್ಡ್ ತರಬೇಕು. ಮಧ್ಯಾಹ್ನ 12 ಗಂಟೆ ನಂತರ ಬಂದರೆ ಪ್ರವೇಶ ಶುಲ್ಕ ನೀಡಬೇಕು. ಮೃಗಾಲಯದಲ್ಲಿ ವಿದ್ಯಾರ್ಥಿಗಳ ಭದ್ರತೆಗೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಪ್ರೀತಿಯಿಂದ ಆಹ್ವಾನ: ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಮಾತನಾಡಿ, ಮಕ್ಕಳ ದಿನಾಚರಣೆ ಅಂಗವಾಗಿ ದಸರಾ ವಸ್ತು ಪ್ರದರ್ಶನ ವೀಕ್ಷಣೆಗೆ ಬರುವ ವಿದ್ಯಾರ್ಥಿಗಳಿಗೆ ಬೆಳಗ್ಗೆ 11.30ರಿಂದ ಸಂಜೆ 5 ಗಂಟೆವರೆಗೆ ಉಚಿತ ಪ್ರವೇಶಾವಕಾಶ ಕಲ್ಪಿಸಲಾಗಿದೆ. ಅವರನ್ನು ಪ್ರೀತಿಯಿಂದ ಸ್ವಾಗತಿಸುತ್ತೇವೆ. ಈಗಾಗಲೇ ಡಿಡಿಪಿಐ ಮತ್ತು ಬಿಇಒಗಳೊಂದಿಗೆ ಸಭೆ ನಡೆಸಲಾಗಿದ್ದು, ದೈಹಿಕ ಶಿಕ್ಷಕರೊಂದಿಗೆ ವಿದ್ಯಾರ್ಥಿಗಳನ್ನು ಕಳುಹಿಸಿಕೊಡುವಂತೆ ಮನವಿ ಮಾಡಲಾಗಿದೆ. ವಸ್ತುಪ್ರದರ್ಶನ ಆವರಣದಲ್ಲಿ ಕಡಲೆಕಾಯಿ, ಕಿತ್ತಳೆಹಣ್ಣು ಬಿಸ್ಕೆಟ್ ಹಾಗೂ ಐಸ್‌ಕ್ರೀಂ ನೀಡಲಾಗುತ್ತದೆ. ಮಧ್ಯಾಹ್ನದ ನಂತರ 3 ಸಾವಿರ ಮಕ್ಕಳಿಗೆ ರೈಸ್‌ಬಾತ್, ಮೊಸರನ್ನ ವಿತರಿಸಲಾಗುತ್ತದೆ ಎಂದರು.

ಮಕ್ಕಳು ಆಗಮಿಸುವ ಹಿನ್ನೆಲೆಯಲ್ಲಿ ಬೆಳಗ್ಗೆ 11 ಗಂಟೆಯಿಂದಲೇ ವಸ್ತುಪ್ರದರ್ಶನದ ಎಲ್ಲಾ ಸರ್ಕಾರಿ ಮಳಿಗೆಗಳನ್ನು ತೆರೆಯಲು ಸೂಚನೆ ನೀಡಲಾಗಿದೆ. ಸಂಗೀತ ಕಾರಂಜಿ ಆನ್ ಮಾಡಲಾಗುತ್ತದೆ. ಕಾಳಿಂಗರಾವ್ ರಂಗ ಮಂಟಪದಲ್ಲಿ ವಿವಿಧ ಕಲಾತಂಡಗಳಿಂದ ಗೀತ ಗಾಯನ, ನೃತ್ಯ ಕಾರ್ಯಕ್ರಮ ಆಯೋಜಿಸಲಾಗಿದೆ. ದೇಶದ ಪ್ರಥಮ ಪ್ರಧಾನಿ ಜವಾಹರಲಾಲ್ ನೆಹರು ಅವರ ಕುರಿತು ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದೆ. 3–4 ಅಮ್ಯೂಸ್‌ಮೆಂಟ್‌ನಲ್ಲಿ ಮಕ್ಕಳಿಗೆ ಉಚಿತವಾಗಿ ಆಟ ಆಡುವ ಅವಕಾಶ ಕಲ್ಪಿಸಲಾಗಿದೆ. ಚುರುಮುರಿ, ಡೆಲ್ಲಿ ಹಪ್ಪಳ ಮಳಿಗೆಗಳಲ್ಲಿ ಶೇ.50ರಷ್ಟು ರಿಯಾಯಿತಿ ದರದಲ್ಲಿ ತಿನಿಸು ನೀಡುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ವಿಶ್ವನಾಥ ಮಿರ್ಲೆ ನೆನಪಿನ ಮಕ್ಕಳ ಇಂಗ್ಲೀಷ್ ನಾಟಕೋತ್ಸವ

ಮೈಸೂರು, ನ. 13–ಕಲಾಸುರುಚಿ ವಿಶ್ವನಾಥ ಮಿರ್ಲೆ ನೆನಪಿನ ಮಕ್ಕಳ ಇಂಗ್ಲೀಷ್ ನಾಟಕೋತ್ಸವವನ್ನು 2016 ರಿಂದ ಸಂಘಟಿಸಿ ನಡೆಸುತ್ತಿದೆ. ಕೊವಿಡ್ ವರ್ಷಗಳನ್ನು ಹೊರತುಪಡಿಸಿ ನಿರಂತರವಾಗಿ ಪ್ರತಿವರ್ಷ ಈ ನಾಟಕೋತ್ಸವ ನಡೆಯುತ್ತಿದೆ. ಈ ಬಾರಿಯ ನಾಟಕೋತ್ಸವವನ್ನು ನ.14ರಿಂದ 16ರವರೆಗೆ ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ಮೈಸೂರು ನಗರದ ಏಳು ಶಾಲೆಗಳು ಭಾಗವಹಿಸುತ್ತಿವೆ. ಕಾರ್ಯಕ್ರಮದ ಉದ್ಘಾಟನೆಯನ್ನು, ಎ.ಕೆ.ಮೋನಪ್ಪ ಶುಕ್ರವಾರ ಸಂಜೆ 6ಕ್ಕೆ ಸುರುಚಿ ರಂಗಮನೆಯಲ್ಲಿ ನಡೆಸಿಕೊಡಲಿದ್ದಾರೆ. ಸಂಜೆ 6.30ಕ್ಕೆ ಗೀತಾ ಭಾರತಿ ಸ್ಕೂಲ್ ಆಫ್ ಎಕ್ಸಲೆನ್ಸ್ ವಿದ್ಯಾರ್ಥಿಗಳಿಂದ ಅರ್ಜುನ ದಿಲೆಮ್ಮಾ ನಾಟಕ ಪ್ರದರ್ಶನ, ಸಂಜೆ 7.15ಕ್ಕೆ ಆಚಾರ್ಯ ವಿದ್ಯಾಕುಲದ ವಿದ್ಯಾರ್ಥಿಗಳಿಂದ ಕಬುಲಿವಾಲಾ ನಾಟಕ ಪ್ರದರ್ಶನವಿದೆ.

ಮೈಸೂರು ವಿಶ್ವವಿದ್ಯಾನಿಲಯದ 96ನೇ ವಾರ್ಷಿಕ ಅಂತರ ಕಾಲೇಜು ಅಥ್ಲೆಟಿಕ್ಸ್ ಕ್ರೀಡಾಕೂಟ

ಪುರುಷರ ವಿಭಾಗದಲ್ಲಿ ಮಾನಸಗಂಗೋತ್ರಿ ಕ್ರೀಡಾ ಮಂಡಳಿ, ಮಹಿಳಾ ವಿಭಾಗದಲ್ಲಿ ಟಿ.ನರಸೀಪುರ ಪಿಆರ್‌ಎಂ ವಿಜಯ ಕಾಲೇಜಿಗೆ ಸಮಗ್ರ ಪ್ರಶಸ್ತಿ





ಮೈಸೂರು ವಿಶ್ವವಿದ್ಯಾನಿಲಯದ 96ನೇ ವಾರ್ಷಿಕ ಅಂತರ ಕಾಲೇಜು ಅಥ್ಲೆಟಿಕ್ಸ್ ಕ್ರೀಡಾಕೂಟದ ಪುರುಷರ ವಿಭಾಗದಲ್ಲಿ ಮಾನಸಗಂಗೋತ್ರಿ ಸ್ನಾತಕೋತ್ತರ ಕ್ರೀಡಾ ಮಂಡಳಿ ಹಾಗೂ ಮಹಿಳೆಯರ ವಿಭಾಗದಲ್ಲಿ ಟಿ.ನರಸೀಪುರದ ಪಿ.ಆರ್.ಎಂ ವಿಜಯ ಕಾಲೇಜು ತಂಡ ಸಮಗ್ರ ಪ್ರಶಸ್ತಿ ಪಡೆದವು.

ಮೈಸೂರು,ನ.13(ಎಂಕೆ)– ಮೈಸೂರು ವಿಶ್ವವಿದ್ಯಾನಿಲಯದ 96ನೇ ವಾರ್ಷಿಕ ಅಂತರ ಕಾಲೇಜು ಅಥ್ಲೆಟಿಕ್ಸ್ ಕ್ರೀಡಾಕೂಟದ ಪುರುಷರ ವಿಭಾಗದಲ್ಲಿ ಮಾನಸ ಗಂಗೋತ್ರಿ ಸ್ನಾತಕೋತ್ತರ ಕ್ರೀಡಾ ಮಂಡಳಿ ಹಾಗೂ ಮಹಿಳೆಯರ ವಿಭಾಗದಲ್ಲಿ ಟಿ.ನರಸೀಪುರದ ಪಿ.ಆರ್.ಎಂ ವಿಜಯ ಕಾಲೇಜು ತಂಡ ಸಮಗ್ರ ಪ್ರಶಸ್ತಿ ಪಡೆದವು.

ಮೈಸೂರು ವಿಶ್ವವಿದ್ಯಾನಿಲಯದ ಓವೆಲ್ ಮೈದಾನ (ಅಥ್ಲೆಟಿಕ್ಸ್ ಮೈದಾನ)ದಲ್ಲಿ ಮೂರು ದಿನಗಳ ಕಾಲ ನಡೆದ ಕ್ರೀಡಾಕೂಟದಲ್ಲಿ ಅತ್ಯುತ್ತಮ ಪ್ರದರ್ಶನದೊಂದಿಗೆ ಪುರುಷರ ವಿಭಾಗದಲ್ಲಿ ಮಾನಸಗಂಗೋತ್ರಿ ಸ್ನಾತಕೋತ್ತರ ಕ್ರೀಡಾ ಮಂಡಳಿ ಅಧಿಕ ಪದಕಗಳೊಂದಿಗೆ 125 ಅಂಕಗಳನ್ನು ಗಳಿಸುವ ಮೂಲಕ ಸಮಗ್ರ ಪ್ರಶಸ್ತಿ ಪಡೆದರೆ, 74 ಅಂಕಗಳೊಂದಿಗೆ ಮೈಸೂರಿನ ಯುವ ರಾಜ ಕಾಲೇಜು ರನ್ನರ್ ಅಪ್ ಹಾಗೂ 41 ಅಂಕಗಳೊಂದಿಗೆ ಮೈಸೂರಿನ ಎಸ್‌ಬಿಆರ್‌ಆರ್ ಎಂಎಫ್‌ಜಿಸಿ 2ನೇ ರನ್ನರ್ ಅಪ್ ಸ್ಥಾನವನ್ನು ಪಡೆದುಕೊಂಡಿತು. ಹಾಗೆಯೇ ಮೈಸೂರು ಟಿಟಿಎಲ್ ಕಾಲೇಜ್ ಆಫ್ ಬ್ಯುಸಿನೆಸ್ ಅಂಡ್ ಮ್ಯಾನೇಜ್‌ಮೆಂಟ್‌ನ ಆರ್.ಪ್ರಜ್ವಲ್, 100 ಮೀಟರ್ ಓಟದಲ್ಲಿ 10.80 ಸೆಕೆಂಡುಗಳಲ್ಲಿ ಗುರಿ ತಲುಪುವ ಜೊತೆಗೆ 946 ಅಂಕ ಪಡೆದು ಅತ್ಯುತ್ತಮ ಕ್ರೀಡಾಪಟುವಾಗಿ ಹೊರಹೊಮ್ಮಿದರು.

ಮಹಿಳೆಯರ ವಿಭಾಗದಲ್ಲಿ 83 ಅಂಕಗಳಿಸುವ ಮೂಲಕ ಟಿ.ನರಸೀಪುರದ ಪಿ.ಆರ್.ಎಂ ವಿಜಯ ಕಾಲೇಜು ತಂಡ ಸಮಗ್ರ ಪ್ರಶಸ್ತಿ ಪಡೆದರೆ, 70 ಅಂಕಗಳೊಂದಿಗೆ ಟೆರೇಷಿಯನ್ ಕಾಲೇಜು ಹಾಗೂ 40 ಅಂಕಗಳೊಂದಿಗೆ ಪಿಜಿ ಎಸ್‌ಸಿ ಎಂಜಿಎಂ ಮೊದಲ ಮತ್ತು ಎರಡನೇ ರನ್ನರ್ ಅಪ್ ಸ್ಥಾನ ಪಡೆದವು. ಜೆಎಸ್‌ಎಸ್ ಮಹಿಳಾ ಕಾಲೇಜಿನ ಹರ್ಷಿತಾ, 100 ಮೀಟರ್ ಓಟದಲ್ಲಿ 12.34 ಸೆಕೆಂಡುಗಳಲ್ಲಿ ಗುರಿ ತಲುಪುವುದರ ಜೊತೆಗೆ 925 ಅಂಕಗಳನ್ನು ಪಡೆದು ಅತ್ಯುತ್ತಮ ಕ್ರೀಡಾಪಟು ಎನಿಸಿದರು.

82 ಕಾಲೇಜುಗಳು ಭಾಗಿ: ಮೂರು ದಿನಗಳ ಅಂತರ ಕಾಲೇಜು ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ 82 ಕಾಲೇಜುಗಳಿಂದ 431 ಪುರುಷರು ಮತ್ತು 342 ಮಹಿಳಾ ಕ್ರೀಡಾಪಟುಗಳು ಭಾಗವಹಿಸಿದ್ದರು. ಕ್ರೀಡಾಕೂಟದ ಬಳಿಕ ನಡೆದ ಸಮಾರೋಪ ಸಮಾರಂಭದಲ್ಲಿ ವಿಜೇತ ತಂಡಗಳಿಗೆ ನಿವೃತ್ತ ಪ್ರಾಧ್ಯಾಪಕ ಡಾ.ಬಿ. ಬಸವಲಿಂಗು, ಕಾಲೇಜು ಆಡಳಿತ ಮಂಡಳಿ ನಿರ್ದೇಶಕ ಡಾ.ಕೆ.ಮಂಟೇಲಿಂಗು ಬಹುಮಾನ ವಿತರಿಸಿದರು. ಈ ವೇಳೆ ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಸಿ.ವೆಂಕಟೇಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಆಗ್ರಹಿಸಿ ರೈತರ ಪ್ರತಿಭಟನೆ



ಮೈಸೂರಿನ ಅರಣ್ಯ ಭವನದ ಮುಂದೆ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರು, ನ.13(ಎಂಟಿವೈ)– ಮೈಸೂರು ಜಿಲ್ಲೆಯಲ್ಲಿ ಹೆಚ್ಚಾಗಿರುವ ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ರೈತ ಪರ್ವದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಅಶೋಕಪುರಂನಲ್ಲಿರುವ ಅರಣ್ಯ ಭವನದ ಮುಂದೆ ಪ್ರತಿಭಟನೆ ನಡೆಸುತ್ತಿದ್ದ ರೈತ ಸಂಘಟನೆ ಕಾರ್ಯಕರ್ತರು ಅರಣ್ಯ ಭವನಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು. ಆದರೆ, ಪೊಲೀಸರು ಅರಣ್ಯ ಭವನದ ಪ್ರವೇಶ ದ್ವಾರದ ಬಳಿಯೇ ಪ್ರತಿಭಟನೆ ಮಾಡುವಂತೆ ತಡೆ ಹಿಡಿದರು.

ಮೈಸೂರು ಜಿಲ್ಲೆಯ ವಿವಿಧೆಡೆ ಕಳೆದ ಒಂದು ತಿಂಗಳ ಅಂತರದಲ್ಲಿ ಆನೆ, ಹುಲಿ, ಕಾಡಂದಿಗಳು ರೈತರ ಮೇಲೆ ದಾಳಿ ಮಾಡಿವೆ. ಸರಗೂರು ತಾಲೂಕಿನ ವಿವಿಧ ಗ್ರಾಮದಲ್ಲಿ ಮೂವರು ರೈತರು ಹುಲಿ ದಾಳಿಯಿಂದ ಮೃತಪಟ್ಟಿದ್ದು, ಕಾಡಂಚಿನ ರೈತರು ಭಯದ ವಾತಾವರಣದಲ್ಲಿ ಜೀವನ ನಡೆಸುವಂತಾಗಿದೆ. ಜಿಲ್ಲೆಯ ವಿವಿಧ ಭಾಗಗಳಲ್ಲಿ ಜಾನುವಾರುಗಳ ಮೇಲೂ ಹುಲಿ ದಾಳಿ ಮಾಡಿದೆ. ಹುಲಿ ದಾಳಿ ಮತ್ತೆ ಮತ್ತೆ ಪುನರಾವರ್ತನೆಯಾಗುತ್ತಿದ್ದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಒಂದೆಡೆ ಅಕ್ರಮ ರೆಸಾರ್ಟ್‌ಗಳು, ಹೋಮ್ ಸ್ಟೇಗಳು ತಲೆ ಎತ್ತಿರುವುದರಿಂದ ರಾತ್ರಿ ವೇಳೆ ಮೋಜು ಮಸ್ತಿ ನಡೆಸಲು ಫೈರ್ ಕ್ಯಾಂಪ್, ಕರ್ಕಶ ಧ್ವನಿವರ್ಧಕ ಅಳವಡಿಸುವ ಮೂಲಕ ಕಾಡುಪ್ರಾಣಿಗಳಿಗೆ ಹಿಂಸೆ ನೀಡುತ್ತಿದ್ದಾರೆ. ಇದರಿಂದ ಪ್ರಾಣಿಗಳು ಭಯಪಟ್ಟು ನಾಡಿನ ಕಡೆಗೆ ಮುಖ ಮಾಡಿವೆ ಎಂದು ದೂರಿದರು.

ಸ್ಥಳೀಯ ರೈತರು ತಮ್ಮ ದಿನನಿತ್ಯದ ಕೃಷಿ ಚಟುವಟಿಕೆಗೆ ತೆರಳಲು, ಜಾನುವಾರುಗಳನ್ನು ಮೇಯಿಸಲು ಹೋಗಲು ಭಯಪಡುತ್ತಿದ್ದಾರೆ. ಹೀಗಾಗಿ ಇಂತಹ ಘಟನೆಗಳು ಮರುಕಳಿಸದಂತೆ, ರೈತರಿಗೆ ಧೈರ್ಯ ನೀಡುವ ಸಲುವಾಗಿ ಅಕ್ರಮವಾಗಿ ತಲೆ ಎತ್ತಿರುವ ಹೋಮ್ ಸ್ಟೇ, ರೆಸಾರ್ಟ್‌ಗಳನ್ನು ಕೂಡಲೇ ಬಂದ್ ಮಾಡಿಸಬೇಕು. ಕಾಡು ಪ್ರಾಣಿಗಳಿಂದ ಜನರನ್ನು ರಕ್ಷಿಸಲು ಕ್ರಮ ವಹಿಸುವ ಜತೆಗೆ, ನಾಡಿನೆಡೆಗೆ ಪ್ರಾಣಿಗಳು ಬಾರದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಘೋಷಿಸುವಂತೆ ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ರಾಜ್ಯ ರೈತ ಸಂಘ ರೈತ ಪರ್ವದ ಅಧ್ಯಕ್ಷ ಅರುಣ್‌ಕುಮಾರ್, ಪ್ರಧಾನ ಕಾರ್ಯದರ್ಶಿ, ಡಾ.ಉಮಾಪತಿ, ಗೌರವಾಧ್ಯಕ್ಷ ಕುಮಾರ, ರಾಜ್ಯ ಕಾರ್ಯದರ್ಶಿ ಚಾಮರಾಜು, ಕಾರ್ಯಾಧ್ಯಕ್ಷ ನವೀನ ಕುಮಾರ್, ಕಾನೂನು ಸಲಹೆಗಾರ ಸತೀಶ್ ಕುಮಾರ್, ಉಪಾಧ್ಯಕ್ಷರಾದ ಭರತ್ ಕಡಕೊಳ, ನಾಗೇಶ್ ಬಂಡಿಪಾಳ್ಯ, ವಿಜಯ್‌ಗೌಡ, ಅಬ್ದುಲ್ ಶುಕೂರ್, ಜಯರಾಮೇಗೌಡ, ಸೋಮಣ್ಣ ಭಾಗ್ಯಮ್ಮ ಚಾಂದಿನಿ, ಕೃಷ್ಣನಾಯಕ್, ಸಿದ್ದಲಿಂಗೇಗೌಡ ಭಾಗವಹಿಸಿದ್ದರು.

ಕೊತ್ವಾಲ್ ಶಿಷ್ಯ ಪುಟ್ಟಸ್ವಾಮಿಯಿಂದ ನನಗೆ ಜೀವ ಬೆದರಿಕೆ ಇತ್ತು

ಬೆಂಗಳೂರು, ನ.13– ರೌಡಿ ಕೊತ್ವಾಲ್ ರಾಮಚಂದ್ರನ ಜೊತೆ ಇದ್ದ ಪುಟ್ಟಸ್ವಾಮಿಯಿಂದ ನನಗೆ ಜೀವ ಬೆದರಿಕೆ ಇತ್ತು. ಆದರೆ, ನಾನು ಹೆದರಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಹೇಳಿದ್ದಾರೆ.



ಗಾಂಧಿನಗರದಲ್ಲಿ ಪ್ರದೇಶ ಕುರುಬರ ಸಂಘ ಮತ್ತು ವಿದ್ಯಾರ್ಥಿನಿಲಯದ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಹಿಂದೆ ರೌಡಿ ಕೊತ್ವಾಲ್ ರಾಮಚಂದ್ರನ ಜೊತೆ ಇದ್ದ ಪುಟ್ಟಸ್ವಾಮಿಯಿಂದ ಜೀವ ಬೆದರಿಕೆ ಇತ್ತು. ನಾನು ಹೆದರಲಿಲ್ಲ. ಕುರುಬರ ಸಂಘದ ವಿಚಾರದಲ್ಲಿ ಭಾಗಿ ಆಗದಂತೆ ನನಗೆ ಬೆದರಿಕೆ ಇತ್ತು. ಆದರೂ ನಾನು ಹೆದರದೆ ಗ್ರಾಮೀಣ ಭಾಗದ ಸಂಘದ ನಿರ್ದೇಶಕರ ಬೆಂಬಲದಲ್ಲಿ ದಾವಣಗೆರೆಯ ಮಲ್ಲಪ್ಪ ಅವರನ್ನು ರೌಡಿ ಪುಟ್ಟಸ್ವಾಮಿ ವಿರುದ್ಧ ಸಂಘದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆಗೆ ನಿಲ್ಲಿಸಿದೆ. ಪುಟ್ಟಸ್ವಾಮಿ ನ್ಯಾಯಾಲಯಕ್ಕೆ ಹೋದರೂ ತೀರ್ಪು ನಮ್ಮ ಪರವಾಗಿ ಬಂತು. ಹೀಗೆ ಸಂಘವನ್ನು ನಾನು ಉಳಿಸಿದ್ದೆ ಎಂದು ಹೇಳಿದ್ದಾರೆ.

ಪತ್ರಿಕಾ ವಿತರಕರಿಂದ ಸಾಧಕರಿಗೆ ಸನ್ಮಾನ



ಮೈಸೂರು ಪತ್ರಿಕಾ ವಿತರಕ ಕ್ಷೇಮಾಭಿವೃದ್ಧಿ ಸಂಘದಿಂದ ವಿಧಾನಪರಿಷತ್ ಸದಸ್ಯ ಕೆ.ಶಿವಕುಮಾರ್, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಅಂಶಿ ಪ್ರಸನ್ನಕುಮಾರ್, ಉಡಿಗಾಲ ಮಹದೇವಪ್ಪ, ಕೆಯುಡಬ್ಲ್ಯೂಜೆ ಕಾರ್ಯಕಾರಿಣಿ ಸದಸ್ಯ ಬಿ.ರಾಘವೇಂದ್ರ, ಹಿರಿಯ ವಿತರಕ ಜವರಪ್ಪ ಅವರನ್ನು ಸನ್ಮಾನಿಸಲಾಯಿತು.

ಮೈಸೂರು,13(ಎಂಕೆ)– ಮೈಸೂರಿನ ಚಿಕ್ಕಗಡಿಯಾರದ ಎದುರು ಪತ್ರಿಕಾ ವಿತರಕ ಕ್ಷೇಮಾಭಿವೃದ್ಧಿ ಸಂಘ ಹಾಗೂ ಎಸ್.ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದ ವತಿಯಿಂದ ವಿಧಾನಪರಿಷತ್ ಸದಸ್ಯ ಕೆ.ಶಿವಕುಮಾರ್, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್, ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ನಿರ್ದೇಶಕರಾಗಿ ಆಯ್ಕೆಯಾದ ಬಿ.ರಾಘವೇಂದ್ರ, ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಗೌರಿಶಂಕರ, ನಂದಿಧ್ವಜ ಸಂಘದ ಅಧ್ಯಕ್ಷ ಉಡಿಗಾಲ ಮಹದೇವಪ್ಪ ಹಾಗೂ ಕಳೆದ ವರ್ಷ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಿಕಾ ವಿತರಕ ಜವರಪ್ಪ ಅವರನ್ನು ಗುರುವಾರ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿದ ಬಳಿಕ ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಮಾತನಾಡಿ, ಮಳೆ, ಗಾಳಿ ಮತ್ತು ಚಳಿ ಎನ್ನದೆ ಪತ್ರಿಕೆಗಳನ್ನು ಮನೆ ಮನೆಗೆ ವಿತರಿಸುವ ಪತ್ರಿಕಾ ವಿತರಕರ ಅನುಕೂಲಕ್ಕಾಗಿ ಸ್ಟ್ಯಾಂಡ್ ನಿರ್ಮಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

ಮೈಸೂರು ನಗರದ ಮೂರು ಕಡೆ ಬೆಳಗಿನ ಜಾವ ಪತ್ರಿಕೆಗಳನ್ನು ವಿತರಿಸಲಾಗುತ್ತದೆ. ಕೆ.ಆರ್.ವೃತ್ತದ ವಿತರಕರಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ 10–15 ಲಕ್ಷ ರೂ. ಅನುದಾನದಲ್ಲಿ ಸ್ಟ್ಯಾಂಡ್ ನಿರ್ಮಿಸಿಕೊಡಲಾಗುವುದು. ಇದಕ್ಕೆ ಮೂರು ಜಾಗಗಳನ್ನು ಗುರುತಿಸಿ, ನಗರಪಾಲಿಕೆ ಆಯುಕ್ತರಿಗೆ ಪತ್ರ ನೀಡಿ. ಮುಂದಿನ ಪ್ರಕ್ರಿಯೆ ನಡೆಸಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಪತ್ರಿಕೆಗಳು, ಪತ್ರಕರ್ತರು ಬೆಳೆಯಬೇಕಾದರೆ ಪತ್ರಿಕಾ ವಿತರಕರ ಪಾತ್ರ ಪ್ರಮುಖವಾದುದು. ಹೀಗಾಗಿ ವಿತರಕರು ಮತ್ತು ಅವರ ಕುಟುಂಬದವರು ಅನಾರೋಗ್ಯಕ್ಕೀಡಾದಲ್ಲಿ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ವೈದ್ಯಕೀಯ ವೆಚ್ಚ ಮರುಭರಿಸಲು ಪ್ರಯತ್ನಿಸಲಾಗುವುದು. ಈಗಾಗಲೇ ಕಾಡಾ ಕಚೇರಿ ಆವರಣದಲ್ಲಿ ಜಾಗ ಗುರುತಿಸಲಾಗಿದೆ. ಅಲ್ಲಿಯೇ ವಿತರಕರಿಗೆ ಸ್ಟ್ಯಾಂಡ್ ನಿರ್ಮಿಸಿದರೆ ಅನುಕೂಲವಾಗುತ್ತದೆ ಎಂದು ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜೆ.ಎಸ್.ಹೋಮದೇವ್ ಹೇಳಿದ್ದು, ಈ ಬಗ್ಗೆ ಪಾಲಿಕೆ ಆಯುಕ್ತರೊಂದಿಗೆ ಸ್ಥಳ ಪರಿಶೀಲಿಸಿ ಕ್ರಮವಹಿಸುವುದಾಗಿ ಹೇಳಿದರು.


ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜೆ.ಎಸ್.ಹೋಮದೇವ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಮುಖಂಡ ರಾಜೇಶ್‌ಕುಮಾರ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಎಂ.ನಾಗರಾಜು, ಪ್ರಧಾನ ಕಾರ್ಯದರ್ಶಿ ಸಿ.ಶಿವಣ್ಣ, ಪತ್ರಿಕಾ ಕಾರ್ಯದರ್ಶಿ ಶ್ರೀಕಾಂತ್, ಸಲಹೆಗಾರರಾದ ಸಿ.ಆರ್. ದತ್ತಾತ್ರೇಯ, ಹರಿರಾವ್, ಎಸ್.ನಾಗೇಶ್ ಕಾವ್ಯಪ್ರಿಯ, ಸಿ.ರಾಜಶೇಖರ್, ಗೋವಿಂದ್ ಶೆಟ್ಟಿ, ಕನಕ ರತ್ನ, ಈಶ್ವರ ಪ್ರಸಾದ್, ಪ್ರಕಾಶ್, ನಂಜುಂಡಯ್ಯ, ಈಶ್ವರ, ಆರಾಧ್ಯ, ಚಂದ್ರು, ಜೈದೇವ್, ಹೊನ್ನಪ್ಪ, ಮಹೇಶ್, ಗುಂಡಪ್ಪ, ಶಿವಣ್ಣ, ಕಿರಣ್, ಸಂತೋಷ್, ಜಿ.ಕುಮಾರ್, ಪ್ರಭಾಕರ್‌ರಾವ್ ಮತ್ತಿತರರು ಉಪಸ್ಥಿತರಿದ್ದರು.

ಕಳ್ಳತನ ಯತ್ನ ವಿಫಲ, ಕೋಪಕ್ಕೆ ಬ್ಯಾಂಕ್‌ಗೆ ಬೆಂಕಿ ಹಚ್ಚಿದ ಕದೀಮರು

ಯಲ್ಲಾಪುರ: ದರೋಡೆ ಯತ್ನ ವಿಫಲಗೊಂಡ ಹಿನ್ನೆಲೆಯಲ್ಲಿ ಕೋಪಗೊಂಡ ದುಷ್ಕರ್ಮಿಗಳು ಬ್ಯಾಂಕಿಗೆ ಬೆಂಕಿ ಹಚ್ಚಿ ಪರಾರಿಯಾಗಿರುವ ಘಟನೆ ಯಲ್ಲಾಪುರದ ಉಮ್ಮಚ್ಗಿಯಲ್ಲಿ ನಡೆದಿದೆ.

ಬ್ಯಾಂಕಿಗೆ ಬೆಂಕಿ ಹಚ್ಚಿದ ಪರಿಣಾಮ ಬ್ಯಾಂಕ್ ಒಳಗಿದ್ದ ಕಂಪ್ಯೂಟರ್, ಸಿಸಿಟಿವಿ ಹಾಗೂ ವಿವಿಧ ದಾಖಲೆಗಳು ಸುಟ್ಟು ಕರಕಲಾಗಿದೆ ಯಲ್ಲಾಪುರದ ಕರ್ನಾಟಕ ಗ್ರಾಮೀಣ ವಿಕಾಸ್ ಬ್ಯಾಂಕಿನ ಕಿಟಕಿಗಳನ್ನು ಒಡೆದು ಒಳಪ್ರವೇಶಿಸಿರುವ ಕಳ್ಳರು, ಕ್ಯಾಷ್ ರೂಮ್ ಬಾಗಿಲು ತೆರೆಯಲು ಯತ್ನಿಸಿದ್ದಾರೆ. ಈ ವೇಳೆ ಸೈರನ್ ಮೊಳಗಲು ಪ್ರಾರಂಭಿಸಿದೆ. ಸೈರನ್ ನಿಲ್ಲಿಸಲು ಯತ್ನಿಸಿದರೂ ಸಾಧ್ಯವಾಗಿಲ್ಲ. ಬಳಿಕ ಸಿಕ್ಕಿಬೀಳುವ ಭಯದಿಂದ ಬ್ಯಾಂಕಿಗೆ ಬೆಂಕಿ ಹಚ್ಚಿ ಪರಾರಿಯಾಗಿದ್ದಾರೆ. ಬಳಿಕ ನೆರೆಹೊರೆಯವರು ಬ್ಯಾಂಕಿನಿಂದ ಹೊಗೆ ಬರುತ್ತಿರುವುದನ್ನು ನೋಡಿ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಪೊಲೀಸರು, ಅಗ್ನಿಶಾಮಕ ದಳ ಸ್ಥಳಕ್ಕೆ ಬಂದು ಬೆಂಕಿ ನಂದಿಸಿದ್ದಾರೆ. ಪರಿಶೀಲನೆ ನಡೆಸಿದ ಪೊಲೀಸರಿಗೆ ಬ್ಯಾಂಕಿನ ಕಿಟಕಿ ಒಡೆದಿರುವುದು, ಸಿಸಿಟಿವಿ ಮತ್ತು ಡಿಜಿಟಲ್ ರೆಕಾರ್ಡರ್ ಹಾನಿಗೊಳಗಾಗಿದೆ. ಕಳ್ಳರು ಸಿಸಿಟಿವಿ ಕ್ಯಾಮೆರಾಗಳ ಸಂಪರ್ಕ ಕಡಿತಗೊಳಿಸಲು ಪ್ರಯತ್ನಿಸಿರಬಹುದು. ಇದರಿಂದಾಗಿ ಬೆಂಕಿ ಅವಘಡ ಸಂಭವಿಸಿರಬಹುದು ಎನ್ನಲಾಗಿದೆ.



ಯುವಪೀಳಿಗೆಯಲ್ಲಿ ಸತ್ಯ, ಅಹಿಂಸೆ ಬಿತ್ತುವ ಜವಾಬ್ದಾರಿ ಎಲ್ಲರದ್ದಾಗಿದೆ

- ಶಿಕ್ಷಣ ತಜ್ಞ ಜಯದೇವ್ ಪ್ರತಿಪಾದನೆ
- ಮೈವಿವಿ ಬಿ.ಎನ್.ಬಹದ್ದೂರ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ ಗಾಂಧಿ ಜಯಂತಿ; ಕನ್ನಡ ರಾಜ್ಯೋತ್ಸವ ಆಚರಣೆ



ಮೈಸೂರು ವಿವಿ ಬಿ.ಎನ್.ಬಹದ್ದೂರ್ ಸಭಾಂಗಣದಲ್ಲಿ 'ಗಾಂಧಿ ಜಯಂತಿ' ಹಾಗೂ ಕನ್ನಡ ರಾಜ್ಯೋತ್ಸವ' ಆಚರಿಸಲಾಯಿತು.

ಮೈಸೂರು,ನ.13(ಎಂಕೆ)–ಅಹಿಂಸೆ ಮತ್ತು ಸತ್ಯ ಮಾನವ ಧರ್ಮವಾಗಬೇಕು ಎಂಬುದು ಮಹಾತ್ಮ ಗಾಂಧೀಜಿಯವರ ಪರಮ ವಿಚಾರವಾಗಿತ್ತು ಎಂದು ಶಿಕ್ಷಣ ಚಿಂತಕ ಪ್ರೊ.ಜಿ.ಎಸ್.ಜಯದೇವ ಸ್ಮರಿಸಿದರು.

ಮಾನಸಗಂಗೋತ್ರಿಯ ಬಿ.ಎನ್. ಬಹದ್ದೂರ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸೈನ್ಸಸ್ ವತಿಯಿಂದ ವಿಭಾಗದ ಸಭಾಂಗಣದಲ್ಲಿ ಆಯೋಜಿಸಿದ್ದ ಗಾಂಧಿ ಜಯಂತಿ ಹಾಗೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ 'ಗಾಂಧೀ ತತ್ವಗಳ ಪ್ರಸ್ತುತತೆ' ಕುರಿತು ಮಾತನಾಡಿದ ಅವರು, ಸತ್ಯವೇ ದೇವರು ಎಂಬುದು ತಮ್ಮ ಅಹಿಂಸಾತ್ಮಕ ಹೋರಾಟದ ಮೂಲಕವೇ ಜಗತ್ತಿಗೆ ಸಾರಿದ ಮಹನೀಯ ಮಹಾತ್ಮ ಗಾಂಧೀಜಿ ಎಂದು ನೆನೆದರು.

ಮಹಾತ್ಮ ಗಾಂಧೀಜಿಯವರನ್ನು ಇಡೀ ಜಗತ್ತು ಗೌರವಿಸುತ್ತದೆ. ಆದರೆ, ಅವರ ತತ್ವಾದರ್ಶಗಳನ್ನು ಅರ್ಥಮಾಡಿಕೊಳ್ಳುವಲ್ಲಿ ವಿಫಲವಾಗಿದ್ದೇವೆ. ಎಲ್ಲರಿಗೂ ಬದುಕುವ ಆಸೆ ಒಂದು ಕಡೆಯಾದರೆ, ಎಲ್ಲರನ್ನು ಸಾಯಿಸಬೇಕು ಎಂಬ ಹೇಯ ಕೃತ್ಯಗಳು ಮತ್ತೊಂದೆಡೆ ನಡೆಯುತ್ತಿರುವುದು ವಿಷಾದನೀಯ. ಆದ್ದರಿಂದ ಮುಂಬರುವ ಪೀಳಿಗೆಯಲ್ಲಾದರೂ ಸತ್ಯ, ಅಹಿಂಸೆ ವಿಚಾರಗಳನ್ನು ಬಿತ್ತುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ಸತ್ಯವಿದ್ದಲ್ಲಿ ಜ್ಞಾನ, ಜ್ಞಾನವಿದ್ದಲ್ಲಿ ಸತ್ಯ. ಸತ್ಯವು ಭಾವ, ಕ್ರಿಯೆ ಮತ್ತು ಮಾತಿನಲ್ಲಿ ವ್ಯಕ್ತವಾಗಬೇಕು. ಸತ್ಯವೇ ನಮ್ಮ ಬದುಕಿನ ಉಸಿರಾಗಬೇಕು. ಮನದಲ್ಲಿ, ನಡೆ–ನುಡಿಯಲ್ಲಿ ಸತ್ಯವನ್ನೇ ಪಾಲಿಸಬೇಕೆಂಬುದು ಗಾಂಧೀಜಿಯವರ ಆಶಯವಾಗಿದ್ದು, ಅವರ ಆಶಯದಂತೆ ನಾವು ಮತ್ತು ನಮ್ಮ ಮುಂದಿನ ಜನಾಂಗ ನಡೆಯಬೇಕು ಎಂದರು.

ಅಭಿಮಾನದಿಂದ ಬಳಸಬೇಕು: ಕನ್ನಡ ರಾಜ್ಯೋತ್ಸವ ಕುರಿತು ಮಾತನಾಡಿದ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಸಿ.ನಾಗಣ್ಣ, ಮಾತೃ ಭಾಷೆಯ ಮೇಲೆ ನಮಗೆ ಪ್ರೀತಿ ಏಕೆ ಕಡಿಮೆಯಾಗುತ್ತಿದೆ ಎಂಬುದರ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ. ನಮ್ಮ ಸಂಸ್ಕೃತಿ, ಸಂಸ್ಕಾರ ಮತ್ತು ಮೌಲ್ಯಗಳು ಮಾತೃಭಾಷೆಯಿಂದಲೇ ಬಂದಿದೆ. ಆದ್ದರಿಂದ ಮಾತೃಭಾಷೆಯನ್ನು ಕೀಳಾಗಿ ಕಾಣದೆ ಅಭಿಮಾನದಿಂದ ಬಳಸಬೇಕು ಎಂದು ಸಲಹೆ ನೀಡಿದರು.

ಮೈಸೂರು ವಿವಿ ಬಿಮ್ಸ್‌ನ ಹಿರಿಯ ಪ್ರಾಧ್ಯಾಪಕ ಪ್ರೊ.ಡಿ.ಆನಂದ್ ಮಾತನಾಡಿ, ಕನ್ನಡ ಅದ್ಭುತ ಹಾಗೂ ಸ್ವತಂತ್ರ ಭಾಷೆಯಾಗಿದೆ. ಉಚ್ಚರಿಸಿದಂತೆಯೇ ಬರೆಯಬಹುದಾದ ಏಕೈಕ ಭಾಷೆ ಕನ್ನಡ. ಸಹೃದಯಿ ಕನ್ನಡಿಗರು ಎಲ್ಲರನ್ನು ಸ್ವೀಕರಿಸುವಂತೆಯೇ ಇತರೆ ಭಾಷೆಯನ್ನು ಪ್ರೀತಿಸೋಣ, ಗೌರವಿಸೋಣ ಎಂದು ಹೇಳಿದರು. ಬಿಮ್ಸ್ ನಿರ್ದೇಶಕ ಪ್ರೊ.ಆರ್.ಮಹೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪ್ರಾಧ್ಯಾಪಕ ಪ್ರೊ.ಎಸ್.ಜೆ.ಮಂಜುನಾಥ್, ಪ್ರೊ.ಅಮೂಲ್ಯ ಮತ್ತಿತರರಿದ್ದರು.

ದೇಶ – ವಿದೇಶ

ವರನಿಗೆ ಇರಿತ; ದಾಳಿಕೋರನನ್ನು 2 ಕಿ.ಮೀ. ಬೆನ್ನಟ್ಟಿದ ಡ್ರೋನ್!

ಅಮರಾವತಿ: ವಿವಾಹ ವೇದಿಕೆಯಲ್ಲೇ ವರನಿಗೆ ಇರಿದ ದಾಳಿಕೋರನನ್ನು ವಿವಾಹ ಚಿತ್ರೀಕರಣಕ್ಕೆ ಆಗಮಿಸಿದ್ದ ಛಾಯಾ ಗ್ರಾಹಕನ ಡ್ರೋಣ್ ಎರಡು ಕಿ.ಮೀ. ದೂರ ಬೆನ್ನಟ್ಟಿನ ಪ್ರಕರಣ ಬೆಳಕಿಗೆ ಬಂದಿದೆ. ಮಹಾರಾಷ್ಟ್ರದ ಅಮರಾವತಿಯಲ್ಲಿ ರಾಘೋ ಜಿತೇಂದ್ರ ಬಕ್ಷಿ ಎಂಬಾತ ವೇದಿಕೆಯಲ್ಲಿ ವರನಿಗೆ ಮೂರು ಬಾರಿ ಇರಿದು ಪರಾರಿಯಾಗಲೆತ್ನಿಸಿದ್ದ. ತಕ್ಷಣವೇ ವಿಡಿಯೋಗ್ರಾಫರ್ ದಾಳಿಕೋರನನ್ನು ಡ್ರೋನ್ ಸಹಾಯದಿಂದ ಬೆನ್ನಟ್ಟಿದ. ದಾಳಿಕೋರ ಹಾಗೂ ಮತ್ತೊಬ್ಬ ವ್ಯಕ್ತಿ ಮೋಟರ್ ಸೈಕಲ್‌ನಲ್ಲಿ ತಪ್ಪಿಸಿ ಕೊಳ್ಳುವ ಯತ್ನ ಮಾಡುತ್ತಿದ್ದಂತೆಯೇ ಎರಡು ಕಿಲೋ ಮೀಟರ್ ದೂರದವರೆಗೂ ಡ್ರೋಣ್‌ನಲ್ಲಿ ದಾಳಿಕೋರನನ್ನು ಬೆನ್ನಟ್ಟಲಾಯಿತು. ಆ ಬಳಿಕ ಪೊಲೀಸರು ಡ್ರೋನ್ ದೃಶ್ಯಾವಳಿ ತುಣುಕುಗಳನ್ನು ಪಡೆದು ಆರೋಪಿ ಗುರುತು ದೃಢಪಡಿಸಿದರು. ಡಿಜೆ ಡ್ಯಾನ್ಸ್ ವೇಳೆ ನಡೆದ ಸಣ್ಣ ಜಗಳ ದಾಳಿಗೆ ಕಾರಣ ಎಂದು ಆರಂಭಿಕ ತನಿಖೆಯಿಂದ ತಿಳಿದುಬಂದಿದೆ. ಆರೋಪಿಗಳಿಗಾಗಿ ಪೊಲೀಸರು ಶೋಧ ಮುಂದುವರಿಸಿದ್ದಾರೆ. ಗಾಯಾಳು ವರ ಸಜಲ್‌ರಾಮ್ ಸಮುದ್ರ (22) ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.



43 ದಿನಗಳ ಆಡಳಿತ ಬಿಕ್ಕಟ್ಟು ಅಂತ್ಯ: ಮಸೂದೆಗೆ ಅಧ್ಯಕ್ಷ ಟ್ರಂಪ್ ಸಹಿ

ವಾಷಿಂಗ್ಟನ್: 'ಅಲ್ಪಾವಧಿಗೆ ಅಗತ್ಯವಿದ್ದ ವೆಚ್ಚ ಮಸೂದೆಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹಿ ಹಾಕಿದ್ದರಿಂದಾಗಿ, ಕಳೆದ 43 ದಿನಗಳಿಂದ ಅಮೆರಿಕದಲ್ಲಿ ತಲೆದೋರಿದ್ದ ಆಡಳಿತ ಬಿಕ್ಕಟ್ಟು ಅಂತ್ಯಗೊಂಡಿದೆ.



ಇದರೊಂದಿಗೆ, ವಿವಿಧ ಇಲಾಖೆಗಳು ಅಲ್ಪಾವಧಿಗೆ ಕಾರ್ಯನಿರ್ವಹಿಸಲು ಅಗತ್ಯವಿರುವ ಅನುದಾನ ಲಭ್ಯವಾಗಿದೆ. ಆರೋಗ್ಯ ವಿಮೆ ಸಬ್ಸಿಡಿ ಮುಂದುವರಿಸುವ ವಿಷಯದಲ್ಲಿ ಡೆಮಾಕ್ರಟಿಕ್ ಮತ್ತು ರಿಪಬ್ಲಿಕನ್ ಪಕ್ಷಗಳ ನಡುವೆ ಹಗ್ಗ ಜಗ್ಗಾಟ ನಡೆದಿತ್ತು. ಇದಕ್ಕಾಗಿ ಹಾಕಲಾದ ಮತದಲ್ಲಿ 222–209 ಮತಗಳಿಂದ ಆಡಳಿತಾರೂಢ ರಿಪಬ್ಲಿಕನ್ ಪಕ್ಷ ಹಿಡಿತ ಸಾಧಿಸಿತು. ಮಸೂದೆಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹಿ ಬೀಳುತ್ತಿದ್ದಂತೆ 43 ದಿನಗಳ ಬಿಕ್ಕಟ್ಟು ಅಂತ್ಯಗೊಂಡಿತು. ಇಷ್ಟು ದಿನಗಳ ಕಾಲ ನೌಕರಿ ಇಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದ ಕಾರ್ಮಿಕರು, ಗುರುವಾರದಿಂದ ಮತ್ತೆ ತಮ್ಮ ಕಚೇರಿಗಳತ್ತ ಹೆಜ್ಜೆ ಹಾಕಿದರು. ಆರೋಗ್ಯ ಸೇವೆಗಳಿಗೆ ಅಮೆರಿಕ ಕುಟುಂಬಗಳು ದುಪ್ಪಟ್ಟು ವೆಚ್ಚ ಮಾಡಬೇಕಾಗುತ್ತದೆ. ಜನರು ಇಂತಹ ಪರಿಸ್ಥಿತಿಯನ್ನು ಎಂದಿಗೂ ಎದುರಿಸಿರಲಿಲ್ಲ ಎಂದು ಸೆನೆಟ್‌ನಲ್ಲಿ ಡೆಮಾಕ್ರಟಿಕ್ ನಾಯಕ ಚಕ್ ಶುಮರ್ ಪ್ರತಿಕ್ರಿಯಿಸಿದ್ದಾರೆ.

ರಾಷ್ಟ್ರೀಯ ಉದ್ಯಾನವನ, ಅಭಯಾರಣ್ಯಗಳ 1 ಕಿ.ಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಿಷೇಧ

ನವದೆಹಲಿ: ದೇಶದ ರಾಷ್ಟ್ರೀಯ ಉದ್ಯಾನವನಗಳು ಮತ್ತು ವನ್ಯಜೀವಿ ಅಭಯಾರಣ್ಯಗಳ ಸುತ್ತಲಿನ ಒಂದು ಕಿ.ಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ಚಟುವಟಿಕೆಗಳನ್ನು ನಿಷೇಧ ಮಾಡುವಂತೆ ಸುಪ್ರೀಂ ಕೋರ್ಟ್ ಆದೇಶಿಸಿದೆ. ಈ ರೀತಿಯ ಗಣಿಗಾರಿಕೆ ಕಾರ್ಯಾಚರಣೆಗಳು ವನ್ಯಜೀವಿಗಳು ಮತ್ತು ಪರಿಸರ ಸಮತೋಲನಕ್ಕೆ ಗಂಭೀರ ಅಪಾಯವನ್ನುಂಟು ಮಾಡುತ್ತವೆ ಎಂದು ಸುಪ್ರೀಂಕೋರ್ಟ್ ಹೇಳಿದೆ.



ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮತ್ತು ನ್ಯಾಯಮೂರ್ತಿ ಕೆ.ವಿನೋದ್ ಚಂದ್ರನ್ ಅವರನ್ನೊಳಗೊಂಡ ನ್ಯಾಯಪೀಠವು ಜಾರ್ಖಂಡ್‌ನ ಸಾರಂಡಾ ವನ್ಯಜೀವಿ ಅಭಯಾರಣ್ಯ ಮತ್ತು ಸಸಂಗದಬುರು ಸಂರಕ್ಷಣಾ ಮೀಸಲು ಪ್ರದೇಶವನ್ನು ಸಂರಕ್ಷಿತ ಪ್ರದೇಶಗಳಾಗಿ ಘೋಷಿಸುವುದಕ್ಕೆ ಸಂಬಂಧಿಸಿದ ಅರ್ಜಿಗಳ ವಿಚಾರಣೆ ನಡೆಸಿದೆ.

ಸಂರಕ್ಷಿತ ಪ್ರದೇಶಗಳಿಂದ 1 ಕಿ.ಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ಚಟುವಟಿಕೆಗಳು ವನ್ಯಜೀವಿಗಳಿಗೆ ಅಪಾಯಕಾರಿ ಎಂಬುದು ಈ ನ್ಯಾಯಾಲಯದ ಸ್ಥಿರ ದೃಷ್ಟಿಕೋನವಾಗಿದೆ ಎಂದು ನ್ಯಾಯಪೀಠ ಹೇಳಿದೆ.

ಚೀನಾದಲ್ಲಿ 1500 ವರ್ಷಗಳಷ್ಟು ಹಳೆಯ ದೇವಾಲಯಕ್ಕೆ ಬೆಂಕಿ

ಚೀನಾ: ಇಲ್ಲಿನ ಜಿಯಾಂಗ್ಸು ಪ್ರಾಂತ್ಯದ ಜಾಂಗ್ಜಿಯಾಗ್ಯಾಂಗ್‌ನ್‌ಲ್ಲಿರುವ 1,500 ವರ್ಷಗಳಷ್ಟು ಹಳೆಯದಾದ ಯೋಂಗ್‌ಕಿಂಗ್ ದೇವಾಲಯದಲ್ಲಿ ಭಾರಿ ಬೆಂಕಿ ಕಾಣಿಸಿಕೊಂಡಿದೆ. ಇದಕ್ಕೆ ಸಂಬಂಧಿಸಿದ ವಿಡಿಯೋ ವೈರಲ್ ಆಗಿದೆ. ಶತಮಾನಗಳಷ್ಟು ಹಳೆಯದಾದ ಬೌದ್ಧ ವಾಸ್ತುಶಿಲ್ಪ ಮತ್ತು ಆಧ್ಯಾತ್ಮಿಕ ಮಹತ್ವಕ್ಕೆ ಹೆಸರುವಾಸಿಯಾದ ಈ ಪ್ರಾಚೀನ ದೇವಾಲಯದ, ಸಂಕೀರ್ಣದೊಳಗಿನ ಬಹುಮಹಡಿ ಮಂಟಪಗಳು ಸುಟ್ಟುಹೋಗಿವೆ. ಸ್ಥಳೀಯ ಅಧಿಕಾರಿಗಳ ಪ್ರಕಾರ, ಬೆಂಕಿಯನ್ನು ಬಹುತೇಕ ನಿಯಂತ್ರಣಕ್ಕೆ ತರಲಾಗಿದ್ದು, ಇಲ್ಲಿಯವರೆಗೆ ಯಾವುದೇ ಸಾವುನೋವುಗಳು ಸಂಭವಿಸಿಲ್ಲ. ಮಾಹಿತಿ ಪಡೆದ ತಕ್ಷಣ ಅಗ್ನಿಶಾಮಕ ದಳ ಮತ್ತು ತುರ್ತು ತಂಡಗಳು ಸ್ಥಳಕ್ಕೆ ಧಾವಿಸಿವೆ. ಬೆಂಕಿಯ ಕಾರಣವನ್ನು ಪ್ರಸ್ತುತ ತನಿಖೆ ನಡೆಸಲಾಗುತ್ತಿದ್ದು, ದೋಷಪೂರಿತ ವೈರಿಂಗ್, ಧೂಪದ್ರವ್ಯ ಬಳಕೆ ಕಾರಣ ಎನ್ನುವ ತನಿಖೆ ನಡೆಸಲಾಗುತ್ತಿದೆ.



ಉತ್ತರಪ್ರದೇಶ ಮದರಸಾದಲ್ಲಿ ಓದಿದ್ದ ಇಬ್ಬರು ಶಂಕಿತ ಉಗ್ರರ ಬಂಧನ

ಮುಜಾಫರ್‌ನಗರ: ಇಲ್ಲಿನ ಮದರಸಾದಲ್ಲಿ ಓದ್ದಿದ್ದ ಇಬ್ಬರು ಶಂಕಿತ ಉಗ್ರರನ್ನು ಗುಜರಾತ್ ಭಯೋತ್ಪಾದನಾ ವಿರೋಧಿ ದಳದ (ಎಟಿಎಸ್) ಅಧಿಕಾರಿಗಳು ಬಂಧಿಸಿದ್ದಾರೆ.



ಶಮ್ಲಿ ಜಿಲ್ಲೆಯ ಜಿಂಜನಾ ನಗರದ ಆಜಾದ್ ಸುಲೇಮಾನ್ ಶೇಖ್ (20) ಮತ್ತು ಲಖೀಂಪುರ ಖೇರಿಯ ಮೊಹಮ್ಮದ್ ಸುಹೇಲ್ ಖಾನ್ (23) ಬಂಧಿತರು. ಬುಧಾನಾ ಮದರಸಾದ ಮುಖ್ಯಸ್ಥ ಮಾತನಾಡಿ, ಎಟಿಎಸ್ ಅಧಿಕಾರಿಗಳು ಬಂಧಿಸಿದ ಇಬ್ಬರೂ ಇದೇ ಮದರಾಸಾದಲ್ಲಿ ಓದಿದ್ದಾರೆ. ಆದರೆ ಬಹಳ ಹಿಂದೆಯೇ ಮದರಸಾ ತೊರೆದಿದ್ದಾರೆ. ಆಜಾದ್ ಶೇಖ್ 2018–19ರ ಸಮಯದಲ್ಲಿ ಓದುತ್ತಿದ್ದ.

ಕೋವಿಡ್ ಲಾಕ್‌ಡೌನ್ ವೇಳೆ ಮದರಸಾ ಬಂದ್ ಆಗಿತ್ತು. ಆ ಸಂದರ್ಭದಲ್ಲಿ ಹೋದವನು ಮತ್ತೆ ಹಿಂತಿರುಗಲಿಲ್ಲ. ಸುಹೇಲ್ ಮೂರು ತಿಂಗಳ ಹಿಂದೆ ಸೇರಿಕೊಂಡಿದ್ದ. ಆದರೆ ತಂದೆಗೆ ಅನಾರೋಗ್ಯ ಎಂದು ನವೆಂಬರ್ 5ರಂದು ಹೋದವನು ಮತ್ತೆ ಬರಲಿಲ್ಲ. ಮಾಧ್ಯಮಗಳ ಮೂಲಕ ಇವರಿಬ್ಬರ ಬಂಧನವಾಗಿರುವುದು ತಿಳಿಯಿತು' ಎಂದು ಮಾಹಿತಿ ನೀಡಿದ್ದಾರೆ.

ಸರ್ದಾರ್ ವಲ್ಲಭಬಾಯಿ ಪಟೇಲ್ ಜನ್ಮದಿನದ ಅಂಗವಾಗಿ 'ಏಕತಾ ನಡಿಗೆ'

ಸಂಸದರು, ರಾಜಕಾರಣಿಗಳು, ಶಾಲಾ-ಕಾಲೇಜು, ಸಂಘ-ಸಂಸ್ಥೆಗಳು, ಸಾರ್ವಜನಿಕರು ಭಾಗಿ

ಮಡಿಕೇರಿ,ನ.13– ದೇಶದ ಏಕತಾ ಪುರುಷ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮ ದಿನದ ಪ್ರಯುಕ್ತ 'ಏಕತಾ ನಡಿಗೆ' ಪೊನ್ನಂಪೇಟೆಯಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಬಳಿಕ ಬಸ್ ನಿಲ್ದಾಣದಿಂದ ಗೋಣಿಕೊಪ್ಪದ ಪರಿಮಳ ಮಂಗಳ ವಿಹಾರದವರೆಗೆ ಯದುವೀರ್ ಒಡೆಯರ್ ಅವರ ಮುಂದಾಳತ್ವದಲ್ಲಿ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು. ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು ಪೊನ್ನಂಪೇಟೆ ಬಸ್ ನಿಲ್ದಾಣದಿಂದ ಗೋಣಿಕೊಪ್ಪ ಮುಖ್ಯ ರಸ್ತೆಯಲ್ಲಿ ಕಾಲ್ನಡಿಗೆ ಮೂಲಕ ಸಾಗಿ ಗೋಣಿಕೊಪ್ಪ ಪರಿಮಳ ಮಂಗಳ ವಿಹಾರದಲ್ಲಿ ಸಮಾವೇಶಗೊಂಡರು.

ಸಭಾ ಕಾರ್ಯಕ್ರಮಕ್ಕೆ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭ ಮಾತನಾಡಿದ ಸಂಸದ ಯದುವೀರ್ ಒಡೆಯರ್ ಅವರು, ಸರ್ದಾರ್ ವಲ್ಲಭಬಾಯಿ ಪಟೇಲ್ ಅವರು ಅನೇಕ ಒಪ್ಪಂದಗಳ ಮೂಲಕ ಭಾರತದ ಏಕತೆಗಾಗಿ ಕೊನೆ ಉಸಿರಿನವರೆಗೂ ಶ್ರಮಿಸಿದ್ದರು. ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೂ ಭಾರತ ಸದೃಢ ರಾಷ್ಟ್ರವಾಗಿ ಹೊರಹೊಮ್ಮಲು ಇವರ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.

ಮೈಸೂರು ಸಂಸ್ಥಾನದೊಂದಿಗೆ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಸಂಬಂಧವನ್ನು ಸಂಸದರು ವಿವರಿಸಿದರು. ಸರ್ದಾರ್ ವಲ್ಲಭಬಾಯಿ ಪಟೇಲರು ಉಪ ಪ್ರಧಾನಿಯಾಗಿದ್ದ ಸಂದರ್ಭ ಅಂದಿನ ಮಹಾರಾಜಾ ಜಯ ಚಾಮರಾಜ ಒಡೆಯರ್ ಅವರು ಪಟೇಲ್ ಅವರಿಗೆ ಸಂಚರಿಸಲು ವಿಮಾನ ನೀಡಿದ ಕುರಿತು ಸ್ಮರಿಸಿದರು. ಇಂದಿಗೂ ಆ ವಿಮಾನವನ್ನು ಹುಡುಕುತ್ತಿದ್ದು ಅದನ್ನು ಹಿಂಪಡೆದು ಸಂರಕ್ಷಿಸುವ ಉದ್ದೇಶ ಹೊಂದಿದ್ದೇವೆ ಎಂದು ಮಾಹಿತಿ ನೀಡಿದರು. ಮುಖ್ಯವಾಗಿ ಮುಂದಿನ ಪೀಳಿಗೆಗೆ ದೇಶದ ಬಗ್ಗೆ ಗೌರವ, ಏಕತಾ ಮನೋಭಾವ ಬೆಳೆಸುವಲ್ಲಿ ಹೆಚ್ಚಿನ ಗಮನ ಹರಿಸಬೇಕೆಂದರು.



ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನೇತೃತ್ವದಲ್ಲಿ ನಡೆದ 'ಏಕತಾ ನಡಿಗೆ'.

ಮಾಜಿ ಶಾಸಕ ಅಪ್ಪಚ್ಚು ರಂಜನ್ ಮಾತನಾಡಿ, ಸರ್ದಾರ್ ವಲ್ಲಭಬಾಯಿ ಪಟೇಲ್ ಅವರು ಕಬ್ಬಡಿ ಕ್ರೀಡಾ ಕೂಟ ಹಾಗೂ ಗಣೇಶ ಚತುರ್ಥಿಯನ್ನು ಆಚರಿಸುವುದರ ಮೂಲಕ ಎಲ್ಲರನ್ನು ಒಗ್ಗೂಡಿಸಿ ಸ್ವತಂತ್ರ ಹೋರಾಟದಲ್ಲಿ ಭಾಗವಹಿಸಿದ್ದರು. ಸ್ವತಂತ್ರ ಸಿಕ್ಕಿದ ನಂತರ ಭಾರತದ ಉಪ ಪ್ರಧಾನಮಂತ್ರಿಯಾಗಿ ಕಾರ್ಯನಿರ್ವಹಿಸಿದರು. ಅವರಿಗೆ ಗೃಹ ಖಾತೆ ನೀಡಿದಾಗ ಸಮರ್ಥವಾಗಿ ನಿಭಾಯಿಸಿ, ಎಲ್ಲ ರಾಜ್ಯಗಳನ್ನು ಒಗ್ಗೂಡಿಸಿ ಭಾರತ ಕಟ್ಟುವ ಕಾರ್ಯದಲ್ಲಿ ಕೈಜೋಡಿಸಿದ್ದರು. ಭಾರತವನ್ನು ಕಟ್ಟುವ ಕಾರ್ಯದಲ್ಲಿ ನಿರತರಾಗಿದ್ದ ಇವರನ್ನು ಸರ್ದಾರ್ ಪಟ್ಟ ಹಾಗೂ ಭಾರತ ರತ್ನ ಬಿರುದು ನೀಡಿ ಗೌರವಿಸಲಾಯಿತು ಎಂದು ಸ್ಮರಿಸಿದರು.

ಕೊಡಗು ಜಿಲ್ಲಾ ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ರವಿ ಕಾಳಪ್ಪ ಮಾತನಾಡಿ, ಭಾರತ ದೇಶ ಸ್ವಾವಲಂಬಿಯಾಗಬೇಕೆಂಬ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಅವರು ಭಾರತವನ್ನು ವಿಶ್ವದಲ್ಲಿಯೇ ಆರ್ಥಿಕತೆಯಲ್ಲಿ 4ನೇ ಸ್ಥಾನಕ್ಕೆ ಏರುವಂತೆ ಮಾಡಿದ್ದಾರೆ. ಇತರೆ ದೇಶಗಳು ನಮ್ಮ ಸ್ವದೇಶಿ ವಸ್ತುಗಳ ಮೇಲೆ ಅಧಿಕ ತೆರಿಗೆ ವಿಧಿಸಿ ಆರ್ಥಿಕತೆಯನ್ನು ಕುಗ್ಗಿಸಲು ಸಾಕಷ್ಟು ಪ್ರಯತ್ನ ನಡೆಸುತ್ತಿದ್ದಾರೆ. ದೇಶದ ಜನರು ಸ್ವದೇಶಿ ವಸ್ತುಗಳನ್ನು ಬಳಸಿ ಭಾರತದ ಪ್ರಗತಿಗೆ ಸಹಕರಿಸಬೇಕು. ಭಾರತ ದೇಶ ಸ್ವಾವಲಂಬಿಯಾಗಬೇಕಾದರೆ ಜನರು ಮೊದಲು ಸ್ವದೇಶಿ ವಸ್ತುಗಳನ್ನು ಬಳಸುವಂತೆ ಆಗಬೇಕೆಂದರು.

ಗೋಣಿಕೊಪ್ಪ ಕಾವೇರಿ ಕಾಲೇಜು ವಿದ್ಯಾರ್ಥಿಗಳಿಂದ ಕೊಡಗಿನ ಸಾಂಪ್ರದಾಯಿಕ ನೃತ್ಯಗಳಾದ ಕತ್ತಿಯಾಟ್, ಕೋಲಾಟ್ ಹಾಗೂ ಉಮ್ಮತ್ತಾಟ್ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಏಕತಾ ನಡಿಗೆಯಲ್ಲಿ ಭಾಗವಹಿಸಿದ ಎಲ್ಲಾ ಶಾಲಾ ವಿದ್ಯಾರ್ಥಿಗಳಿಗೆ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು. ಇದೇ ಸಂದರ್ಭ ಮಿಸ್ಟರ್ ಇಂಡಿಯಾ ಯೂನಿವರ್ಸ್ 2025ಕ್ಕೆ ಆಯ್ಕೆಯಾದ ಕರಿನೆರವಂಡ ಬಿಷನ್ ಮಾದಪ್ಪ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭ ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಮಾಜಿ ಶಾಸಕ ಕೆ.ಜಿ. ಬೋಪಯ್ಯ, ಮೈ ಭಾರತ್ ಕೊಡಗು ಜಿಲ್ಲಾ ಯುವ ಒಕ್ಕೂಟ ಅಧಿಕಾರಿ ಕೆಟಿ. ಉಲ್ಲಾಸ್, ಕೊಡಗು ಜಿಲ್ಲಾ ಸಹಕಾರ ಯೂನಿಯನ್ ಸಂಘದ ಅಧ್ಯಕ್ಷ ರಾಬಿನ್ ದೇವಯ್ಯ, ಕೊಡಗು ಜಿಲ್ಲಾ ಯುವ ಒಕ್ಕೂಟ ಅಧ್ಯಕ್ಷ ಪಿ.ಪಿ. ಸುಕುಮಾರ್, ಕೊಡಗು ಯುವ ಒಕ್ಕೂಟ ಸಂಚಾಲಕ ವಿ.ಕೆ.ಲೋಕೇಶ್, ಮಡಿಕೇರಿ ನಗರಸಭಾ ಅಧ್ಯಕ್ಷೆ ಕಲಾವತಿ, ಗೋಣಿಕೊಪ್ಪ ಕಾವೇರಿ ಕಾಲೇಜು ಕಾರ್ಯದರ್ಶಿ ಕೆ.ಸಿ ಬೋಪಣ್ಣ ಹಾಜರಿದ್ದರು.

ಮಡಿಕೇರಿಯಲ್ಲಿ ನವಜಾತ ಶಿಶು ಪತ್ತೆ

ಮಡಿಕೇರಿ,ನ.13– ಮಡಿಕೇರಿ ಅರಣ್ಯ ಭವನ ಮುಂಭಾಗ ನವಜಾತ ಶಿಶುವಿನ ಮೃತದೇಹ ಪತ್ತೆಯಾಗಿದೆ. 15 ದಿನಗಳ ಹಿಂದೆ ಮಗು ಜನಿಸಿರುವ ಸಾಧ್ಯತೆ ಇದ್ದು, 3 ದಿನಗಳ ಹಿಂದೆ ಶಿಶು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ಪೊದೆಯೊಳಗೆ ಎಸೆದಿದ್ದ ಶಿಶುವಿನ ಮೃತದೇಹ ಕೊಳೆಯುವ ಹಂತಕ್ಕೆ ತಲುಪಿದ್ದು, ಬೀದಿ ನಾಯಿಗಳು ರಸ್ತೆ ಬದಿಗೆ ಎಳೆದು ತಂದು ಹಾಕಿವೆ.

ಘಟನಾ ಸ್ಥಳಕ್ಕೆ ನಗರ ವೃತ್ತ ನಿರೀಕ್ಷಕ ಪಿ.ಕೆ.ರಾಜು, ಠಾಣಾಧಿಕಾರಿ ಅನ್ನಪೂರ್ಣ, ಕ್ರೈಂ ಸಿಬ್ಬಂದಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ಹಕ್ಕುಗಳ ರಕ್ಷಣಾ ಘಟಕ ಅಧಿಕಾರಿಗಳು ತೆರಳಿ ಪರಿಶೀಲನೆ ನಡೆಸಿದ್ದಾರೆ.

ಜಿಲ್ಲಾಸ್ಪತ್ರೆಯಲ್ಲಿ ಮೃತ ಶಿಶುವಿನ ಮರಣೋತ್ತರ ಪರೀಕ್ಷೆ ನಡೆಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಈ ಘಟನೆ ಕುರಿತು ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತ ನವಜಾತ ಶಿಶುವಿನ ಪೋಷಕರ ಪತ್ತೆಗಾಗಿ ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ.

ಹಾರಂಗಿ ಹಿನ್ನೀರಿನ ದುರಂತ : ಮತ್ತೊಂದು ಮೃತದೇಹ ಪತ್ತೆ

ಮಡಿಕೇರಿ,ನ.13– ಕುಶಾಲನಗರ ಸಮೀಪದ ಹೇರೂರು ಗ್ರಾಮದ ಹಾರಂಗಿ ಹಿನ್ನೀರಿನಲ್ಲಿ ಈಜಲು ತೆರಳಿ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದ ಮತ್ತೋರ್ವ ಯುವಕ ಕಾಲೂರು ಗ್ರಾಮ ನಿವಾಸಿ ಚನ್ನಪಂಡ ತಮ್ಮಯ್ಯ ಎಂಬವರ ಪುತ್ರ ತರುಣ್ ತಿಮ್ಮಯ್ಯ(17) ಎಂಬಾತನ ಮೃತದೇಹ ಪತ್ತೆಯಾಗಿದೆ.

ಅಗ್ನಿ ಶಾಮಕ ದಳ ಸಿಬ್ಬಂದಿಗಳು ಗುರುವಾರ ಬೆಳಗ್ಗೆ ಕಾರ್ಯಾಚರಣೆ ನಡೆಸಿ ಮೃತದೇಹವನ್ನು ನೀರಿನಿಂದ ಹೊರ ತೆಗೆದಿದ್ದಾರೆ. ಮಡಿಕೇರಿ ಜ್ಯೂನಿಯರ್ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಚನ್ನಪಂಡ ತರುಣ್ ತಿಮ್ಮಯ್ಯ, ಹೆಬ್ಬೆಟ್ಟಗೇರಿ ಗ್ರಾಮದ ಪಾಂಡೀರ ಚಂಗಪ್ಪ ಅವರುಗಳು ಬುಧವಾರ ಮಧ್ಯಾಹ್ನ ಸುಂಟಿಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯ ಹೇರೂರು ಗ್ರಾಮಕ್ಕೆ ತೆರಳಿ ಹಾರಂಗಿ ಹಿನ್ನೀರಿನಲ್ಲಿ ಈಜಲು ಇಳಿದಿದ್ದರು. ಈ ವೇಳೆ ನೀರಿನ ಆಳದಲ್ಲಿ ಇಬ್ಬರು ಯುವಕರು ಮುಳುಗಿ ಮೃತಪಟ್ಟಿದ್ದರು. ಶೋಧ ನಡೆಸಿದ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಮತ್ತು ದುಬಾರೆ ರಿವರ್ ರ‍್ಯಾಫ್ಟರ್‌ಗಳು ಚಂಗಪ್ಪ ಎಂಬಾತನ ಮೃತದೇಹವನ್ನು ನೀರಿನಿಂದ ಹೊರ ತೆಗೆದಿದ್ದರು.

ಗುರುವಾರ ಮತ್ತೆ ಕಾರ್ಯಾಚರಣೆ ನಡೆಸಿದ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ತರುಣ್ ತಿಮ್ಮಯ್ಯ ಎಂಬಾತನ ಮೃತದೇಹವನ್ನು ಹೊರ ತೆಗೆದಿದ್ದಾರೆ. ಈ ಘಟನೆ ಕುರಿತು ಸುಂಟಿಕೊಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಬೀದಿ ನಾಯಿಗಳ ಉಪಟಳ ತಡೆಗೆ ಆಗ್ರಹಿಸಿ ಕರವೇ ಪ್ರತಿಭಟನೆ



ಕುಶಾಲನಗರ ಪಟ್ಟಣದಲ್ಲಿ ಬೀದಿ ನಾಯಿಗಳ ಉಪಟಳ ಮಿತಿ ಮೀರುತ್ತಿದ್ದು, ನಾಯಿಗಳ ಹಾವಳಿ ನಿಯಂತ್ರಣಕ್ಕೆ ಒತ್ತಾಯಿಸಿ ಟಿ.ಎ.ನಾರಾಯಣ ಗೌಡ ಬಣದ ಕರ್ನಾಟಕ ರಕ್ಷಣಾ ವೇದಿಕೆ ಕುಶಾಲನಗರ ತಾಲೂಕು ಘಟಕದಿಂದ ಪ್ರತಿಭಟನೆ ನಡೆಸಲಾಯಿತು. ಕರವೇ ತಾಲೂಕು ಅಧ್ಯಕ್ಷ ಬಿ.ಜೆ. ಅಣ್ಣಯ್ಯ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಸಂಚಾಲಕಿ ದೀಪಾ ಪೂಜಾರಿ, ಜಿಲ್ಲಾಧ್ಯಕ್ಷೆ ಜ್ಯೋತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಿವ್ಯ ದೇವಾಂಗ, ಮಡಿಕೇರಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಆನಂದ್, ಜಿಲ್ಲಾ ಯುವ ಘಟಕದ ಅಧ್ಯಕ್ಷ ಸಾಗರ್, ತಾಲೂಕು ಗೌರವಾಧ್ಯಕ್ಷ ಧನರಾಜ್, ಉಪಾಧ್ಯಕ್ಷ ಎಸ್.ಎಸ್.ಫಯಾಜುದ್ದೀನ್ ಮತ್ತಿತರರು ಪಾಲ್ಗೊಂಡಿದ್ದರು.

ರಾಜು ಕಾಗೆ ಗಡಿಪಾರಿಗೆ ಆಗ್ರಹಿಸಿ ಪ್ರತಿಭಟನೆ

ರಾಜ್ಯ ಸರ್ಕಾರ ಶಾಸಕ ರಾಜು ಕಾಗೆ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ : ಶ್ರೀನಿವಾಸಗೌಡ

ಚಾಮರಾಜನಗರ, ನ.13– ಉತ್ತರ ಕರ್ನಾಟಕವನ್ನು ಪ್ರತ್ಯೇಕ ರಾಜ್ಯವನ್ನಾಗಿಸುವಂತೆ ಕನ್ನಡ ವಿರೋಧಿ ಹೇಳಿಕೆ ನೀಡಿರುವ ಶಾಸಕ ರಾಜು ಕಾಗೆ ಗಡಿಪಾರಿಗೆ ಒತ್ತಾಯಿಸಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಭುವನೇಶ್ವರಿ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾನಿರತರು ರಾಜುಕಾಗೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಕನ್ನಡ ದ್ರೋಹಿ ಕಾಗವಾಡದ ಶಾಸಕ ರಾಜುಕಾಗೆ ಕರ್ನಾಟಕವನ್ನು ವಿಭಜನೆ ಮಾಡಬೇಕು. ಉತ್ತರ ಕರ್ನಾಟಕವನ್ನು ಪ್ರತ್ಯೇಕ ರಾಜ್ಯ ಮಾಡಬೇಕು ಎಂದು ಹೇಳುವ ಮೂಲಕ ಕನ್ನಡ ವಿರೋಧಿ ಹೇಳಿಕೆ ನೀಡಿದ್ದಾರೆ. ಅವರ ಹೇಳಿಕೆಯನ್ನು ರಾಜ್ಯ ಸರ್ಕಾರ ತೀವ್ರವಾಗಿ ಪರಿಗಣಿಸಿ ಅವರನ್ನು ರಾಜ್ಯದಿಂದ ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿದರು.



ಉತ್ತರ ಕರ್ನಾಟಕವನ್ನು ಪ್ರತ್ಯೇಕ ರಾಜ್ಯವನ್ನಾಗಿಸುವಂತೆ ಕನ್ನಡ ವಿರೋಧಿ ಹೇಳಿಕೆ ನೀಡಿರುವ ಶಾಸಕ ರಾಜು ಕಾಗೆ ಗಡಿಪಾರಿಗೆ ಒತ್ತಾಯಿಸಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಮುಖ್ಯಮಂತ್ರಿ ಸಿದ್ಧರಾಮಯ್ಯನವರೇ ನೀವು ಕನ್ನಡ ಕಾವಲು ಸಮಿತಿ ಅಧ್ಯಕ್ಷರಾಗಿದ್ದವರು. ನಿಮ್ಮ ಸರ್ಕಾರದಲ್ಲಿ ನಿಮ್ಮ ಶಾಸಕ ಕನ್ನಡ ವಿರೋಧಿ ಹೇಳಿಕೆ ನೀಡಿದ್ದರು ಕೂಡ ನೀವು ಯಾವುದೇ ರೀತಿ ಕ್ರಮಕೈಗೊಳ್ಳದಿರುವುದು ಅತ್ಯಂತ ಖಂಡನೀಯವಾದದ್ದು, ಕರ್ನಾಟಕ ಏಕೀಕರಣಕ್ಕಾಗಿ ಅನೇಕ ಮಹನೀಯರು ಹೋರಾಟ ಮಾಡಿದ ಕಾರಣದಿಂದ ಅಖಂಡ ಕರ್ನಾಟಕ ರಚನೆ ಆಗಿದೆ ನವೆಂಬರ್ ಮಾಸದಲ್ಲಿ ಶಾಸಕ ರಾಜು ಕಾಗೆ ಕನ್ನಡ ವಿರೋಧಿ ಹೇಳಿಕೆ ನೀಡಿರುವುದು ಸರಿಯಲ್ಲ. ತಕ್ಷಣವೇ ರಾಜ್ಯ ಸರ್ಕಾರ ರಾಜುಕಾಗೆ ವಿರುದ್ಧ ಕ್ರಮಕೈಗೊಳ್ಳಬೇಕು ಇಲ್ಲದಿದ್ದರೆ ನಮ್ಮ ಹೋರಾಟ ತೀವ್ರಸ್ವರೂಪ ಪಡೆದುಕೊಳ್ಳಲಿದೆ ಎಂದು ಶ್ರೀನಿವಾಸಗೌಡ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ನಿಜಧ್ವನಿ ಗೋವಿಂದರಾಜು, ಚಾ.ವೆಂ.ರಾಜ್‌ಗೋಪಾಲ್, ಪಣ್ಯದಹುಂಡಿ ರಾಜು, ಮುತ್ತಿಗೆ ಗೋವಿಂದರಾಜು, ಆಟೋ ಲಿಂಗರಾಜು, ತಾಂಡವಮೂರ್ತಿ, ಮಹೇಶ್‌ಗೌಡ, ವೀರಭದ್ರಪ್ಪ, ಜಗದೀಶ್, ರಾಚಪ್ಪ ಕಾರರು ಹಾಜರಿದ್ದರು.

ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ರೈತರು, ವರ್ತಕರ ಕುಂದು ಕೊರತೆ ಸಭೆ

ಚಾಮರಾಜನಗರ. ನ.13– ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಎಪಿಎಂಸಿ ಅಧ್ಯಕ್ಷ ಎಂ.ಬಿ.ಗುರುಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ರೈತರು ಹಾಗೂ ವರ್ತಕರ ಸಮ್ಮುಖದಲ್ಲಿ ಕುಂದುಕೊರತೆ ಸಭೆ ನಡೆಯಿತು.

ಸಭೆಯಲ್ಲಿ ಹಾಜರಿದ್ದ ರೈತರು ತಾವು ಮಾರುಕಟ್ಟೆಗೆ ತರುವ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ಮಧ್ಯಾಹ್ನ 12 ಗಂಟೆಯವರೆಗೂ ಕಾಯಬೇಕಿದೆ.

ಹರಾಜು ಪ್ರಕ್ರಿಯೆಯನ್ನು ಬೇಗನೆ ಪ್ರಾರಂಭಿಸಬೇಕು, ರೈತರು ವಿಶ್ರಾಂತಿ ಪಡೆಯಲು ಒಂದು ವಿಶ್ರಾಂತಿಗೃಹ ನಿರ್ಮಿಸಿ ಕೊಡಬೇಕು, ಶುದ್ದ ಕುಡಿಯುವ ನೀರು ಒದಗಿಸಲು ಎಪಿಎಂಸಿ ಆಡಳಿತ ಮುಂದಾಗಬೇಕು ಎಂದು ಒತ್ತಾಯಿಸಿದರು.

ರೈತರ ಕುಂದುಕೊರತೆ ಆಲಿಸಿದ ಎಪಿಎಂಸಿ ಅಧ್ಯಕ್ಷ ಎಂ.ಬಿ.ಗುರುಸ್ವಾಮಿ ಮಾತನಾಡಿ, ರೈತರ ಬೇಡಿಕೆಯಂತೆ ಬೆಳಗ್ಗೆ 10.30ಕ್ಕೆ ಹರಾಜು ಪ್ರಕ್ರಿಯೆ ನಡೆಸಲು ಕ್ರಮವಹಿಸಲಾಗುವುದು, ರೈತರು ವಿಶ್ರಾಂತಿ ಪಡೆಯಲು ಒಂದು ವಿಶ್ರಾಂತಿಗೃಹ ನಿರ್ಮಿಸಿಕೊಡಬೇಕು, ಶುದ್ದಕುಡಿಯುವ ನೀರು ಒದಗಿಸುವ ಸಂಬಂಧ ಸಮಿತಿ ನಿರ್ದೇಶಕರ ಜತೆ ಸಭೆ ನಡೆಸಿ, ಚರ್ಚೆ ಮಾಡುವ ಮೂಲಕ ಅನುಷ್ಠಾನ ಮಾಡಲಾಗುವುದು ಎಂದು ಭರವಸೆ ನೀಡಿದರು.



ಚಾಮರಾಜನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಎಪಿಎಂಸಿ ಅಧ್ಯಕ್ಷ ಗುರುಸ್ವಾಮಿ ಬೆಲ್ಲದ ಗೋದಾಮುಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು.


ಇದೇ ವೇಳೆ ಅಧ್ಯಕ್ಷ ಎಂ.ಬಿ.ಗುರುಸ್ವಾಮಿ ಬೆಲ್ಲದ ಗೋದಾಮುಗಳಿಗೆ ಭೇಟಿನೀಡಿ, ಪರಿಶೀಲಿಸಿ, ಆವರಣ ಸೇರಿದಂತೆ ಗೋದಾಮುಗಳಲ್ಲಿ ಸ್ವಚ್ಛತೆ ಕಾಪಾಡುವಂತೆ ವರ್ತಕರಲ್ಲಿ ಮನವಿ ಮಾಡಿದರು. ನಿರ್ದೇಶಕ ವೆಂಕಟರಾವ್ ಸಾಠೆ, ಎಪಿಎಂಸಿ ಕಾರ್ಯದರ್ಶಿ ಜಗದೀಶ್ ಸೇರಿದಂತೆ ವರ್ತಕರು, ರೈತರು ಹಾಜರಿದ್ದರು.

ತಡೆಗೋಡೆಗೆ ಬೈಕ್ ಡಿಕ್ಕಿ; ಬೈಕ್ ಸವಾರನಿಗೆ ಗಂಭೀರ ಗಾಯ

ಕೊಳ್ಳೇಗಾಲ,ನ.13– ಪಟ್ಟಣದ ಹೊರವಲಯದ ಎಸ್‌ಡಿಎ ವಾಕ್ ಮತ್ತು ಶ್ರವಣದೋಷ ಶಾಲೆ ಮುಂಭಾಗದ ರಸ್ತೆಯಲ್ಲಿ ಬೈಕ್ ಅಪಘಾತ ಹಿನ್ನೆಲೆ ಬೈಕ್ ಸವಾರ ತೀವ್ರವಾಗಿ ಗಾಯಗೊಂಡಿರುವ ಘಟನೆ ಗುರುವಾರ ಜರುಗಿದೆ.

ದೊಡ್ಡಿಂದುವಾಡಿ ಗ್ರಾಮದ ರಂಗಸ್ವಾಮಿ ಎಂಬುವರ ಪುತ್ರ ರವಿ(33) ಗಾಯಾಳು ರವಿ ಅನ್ಯ ಕಾರ್ಯನಿಮಿತ್ತ ಕೊಳ್ಳೇಗಾಲ ಪಟ್ಟಣಕ್ಕೆ ಬಂದು ವಾಪಸ್ಸು ದೊಡ್ಡಿಂದುವಾಡಿಗೆ ತೆರಳುವ ವೇಳೆ ಬೈಕ್ ಆಯತಪ್ಪಿ ರಸ್ತೆ ಬದಿಯ ತಡೆಗೋಡೆಯ ಕಲ್ಲಿಗೆ ಡಿಕ್ಕಿ ಹೊಡೆದರು. ಇದರಿಂದ ಸವಾರ ತೀವ್ರವಾಗಿ ಗಾಯಗೊಂಡಿದ್ದು ತಕ್ಷಣ ಅಂಬ್ಯುಲೆನ್ಸ್ ಮೂಲಕ ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ಕರೆತಂದು ಪ್ರಾಥಮಿಕ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ರವಾನಿಸಿ ಮುಂದಿನ ಕ್ರಮ ಕೈಗೊಳ್ಳಲಾಗಿದೆ.

'ಕರ್ನಾಟಕ ಸಹಕಾರ ರತ್ನ' ಪ್ರಶಸ್ತಿಗೆ ಎಚ್.ಎಸ್.ನಂಜುಂಡ ಪ್ರಸಾದ್ ಆಯ್ಕೆ



ನಂಜುಂಡ ಪ್ರಸಾದ್

ಗುಂಡ್ಲುಪೇಟೆ, ನ.13(ಸೋಮ್.ಜಿ)– ಚಾಮರಾಜನಗರ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರು ಹಾಗೂ ಚಾಮುಲ್ ನಿರ್ದೇಶಕರು ಆದ ಎಚ್.ಎಸ್.ನಂಜುಂಡ ಪ್ರಸಾದ್ ಅವರಿಗೆ 2025ನೇ ಸಾಲಿನ 'ಕರ್ನಾಟಕ ಸಹಕಾರ ರತ್ನ' ಪ್ರಶಸ್ತಿಗೆ ಚಾಮರಾಜನಗರ ಜಿಲ್ಲೆಯಿಂದ ಸಹಕಾರ ಇಲಾಖೆಯ ವತಿಯಿಂದ ರಾಜ್ಯ ಸರ್ಕಾರ ಆಯ್ಕೆ ಮಾಡಲಾಗಿದೆ.

ಇವರು ಚಾಮುಲ್ ಅಧ್ಯಕ್ಷರಾಗಿ ಹಾಗೂ ಕೆಎಂಎಫ್ ನಿರ್ದೇಶಕರಾಗಿ ಮತ್ತು 2ನೇ ಬಾರಿ ಚಾಮುಲ್ ನಿರ್ದೇಶಕರಾಗಿ. ಹಾಗೂ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾಗಿ ಪ್ರಸ್ತುತ ಸೇವೆ ಸಲ್ಲಿಸುತ್ತಿದ್ದಾರೆ ಮತ್ತು ಹಾಲಹಳ್ಳಿ ಪಿಎಸಿಸಿಎಸ್ ಸ್ಥಾಪಿಸಿ ಸಂಸ್ಥಾಪಕ ಅಧ್ಯಕ್ಷರಾಗಿ ಮತ್ತು ಹಾಲಹಳ್ಳಿ ಎಂಪಿಸಿಎಸ್ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದಾರೆ. ಇವರು ಸಹಕಾರ ಕ್ಷೇತ್ರಕ್ಕೆ ನೀಡಿರುವ ಸೇವೆಯನ್ನು ಮನಗಂಡು ಚಾಮರಾಜನಗರ ಜಿಲ್ಲೆಯಿಂದ ಕರ್ನಾಟಕ ಸಹಕಾರ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ತಲಕಾಡಿನಲ್ಲಿ ಕಾಲು ಜಾರಿ ಕೊಚ್ಚಿಹೋಗಿದ್ದ ವ್ಯಕ್ತಿಯ ಶವ ಕೊಳೆತ ಸ್ಥಿತಿಯಲ್ಲಿ ಪತ್ತೆ



ಕೊಳ್ಳೇಗಾಲ: ತಲಕಾಡಿಗೆ ಪ್ರವಾಸಕ್ಕೆ ಆಗಮಿಸಿದ್ದ ವೇಳೆ ನೀರಿನಲ್ಲಿ ಕೊಚ್ಚಿ ಹೋಗಿದ್ದ ವ್ಯಕ್ತಿಯ ಮೃತದೇಹ ಗುರುವಾರ ದಾಸನಪುರ ಕಾವೇರಿ ನದಿಯಲ್ಲಿ ಕೊಳತೆ ಸ್ಥಿತಿಯಲ್ಲಿ ಪತ್ತೆಯಾಗಿದೆ.

ಚನ್ನರಾಯಪಟ್ಟಣ ತಾಲೂಕಿನ ಚಲ್ಯ ಗ್ರಾಮದ ಹನುಮಂತಪ್ಪ (58) ಎಂಬಾತ ಮೃತ ದುರ್ದೈವಿ. ಈತ ನ.11ರಂದು ಕುಟುಂಬ ಸಮೇತ ಪ್ರವಾಸಕ್ಕಾಗಿ ತಲಕಾಡಿಗೆ ಆಗಮಿಸಿ ನೀರಿನಲ್ಲಿ ಈಜಲು ತೆರಳಿದ್ದ ವೇಳೆ ಕಾಲು ಜಾರಿ ನೀರಿನಲ್ಲಿ ಕೊಚ್ಚಿ ಹೋಗಿದ್ದು ಕೊಳ್ಳೇಗಾಲ ತಾಲೂಕಿನ ದಾಸನಪುರ ಕಾವೇರಿ ನದಿ ತೀರದಲ್ಲಿ ಗುರುವಾರ ಕೊಳೆತ ಸ್ಥಿತಿಯಲ್ಲಿ ಮೃತ್ತದೇಹ ಪತ್ತೆಯಾಗಿದ್ದು, ಈ ಸಂಬಂಧ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು, ಇಲ್ಲಿನ ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಬಳಿಕ ವಾರಸುದಾರರಿಗೆ ಒಪ್ಪಿಸಿ ಮುಂದಿನ ಕ್ರಮಕೈಗೊಳ್ಳಲಾಗಿದೆ.

ಪಾಂಡವಪುರ ತಾಲೂಕು ಕಚೇರಿಗೆ ಡಿಸಿ ದಿಢೀರ್ ಭೇಟಿ

ಪಾಂಡವಪುರ: ತಾಲೂಕು ಕಚೇರಿಯ ತಹಸೀಲ್ದಾರ್ ಮತ್ತು ಸಿಬ್ಬಂದಿಗಳ ವಿರುದ್ಧ ಸಾಕಷ್ಟು ಆರೋಪಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ್ ಅವರು ಗುರುವಾರ ತಾಲೂಕು ಕಚೇರಿಗೆ ದಿಢೀರ್ ಭೇಟಿಕೊಟ್ಟು ಪರಿಶೀಲಿಸಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ತಹಶೀಲ್ದಾರ್ ಬಸವರೆಡ್ಡಪ್ಪರೋಣದ ಅವರು ಸಾರ್ವಜನಿಕರಿಗೆ ಸ್ಪಂದಿಸಿ ಕೆಲಸ ಮಾಡುತ್ತಿಲ್ಲ, ಕಚೇರಿಯಲ್ಲಿ ದಲ್ಲಾಳಿಗಳ ಹಾವಳಿ ಸೇರಿದಂತೆ ಹಲವು ಭ್ರಷ್ಟಾಚಾರದ ಆರೋಪಗಳು ಕೇಳಿಬಂದಿದ್ದವು, ಆ ಹಿನ್ನೆಲೆಯಲ್ಲಿ ಭೇಟಿಕೊಟ್ಟ ಜಿಲ್ಲಾಧಿಕಾರಿಗಳು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಆರೋಪ ಮಾಡಿದ ಸಾರ್ವಜನಿಕರಿಂದ ಅಧಿಕೃತವಾಗಿ ಅರ್ಜಿ ಮೂಲಕ ದೂರು ಸ್ವೀಕರಿಸಿ ಕ್ರಮ ಕೈಗೊಳ್ಳುವುದಕ್ಕಾಗಿ ಭರವಸೆ ನೀಡಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಸಾರ್ವಜನಿಕರಿಂದ ಕುಂದುಕೊರತೆ ಸಂಬಂಧವಾಗಿ ಜನರಿಂದ ಮಾಹಿತಿ ಪಡೆದು ಅಹವಾಲು ಸ್ವೀಕರಿಸುವ ಸಂಬಂಧ ಕಚೇರಿಗೆ ಭೇಟಿ ಕೊಟ್ಟು ಪರಿಶೀಲನೆ ನಡೆಸಿದ್ದೇವೆ. ಸಾರ್ವಜನಿಕರು ಯಾವುದೇ ದೂರು ನೀಡಬೇಕಾದರು ಲಿಖಿತ ರೂಪದಲ್ಲಿ ಸಲ್ಲಿಸಬೇಕು. ಆಗ ಮಾತ್ರ ನಾವು ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಪೌತಿ ಖಾತೆ ಆಂದೋಲನ ನಡೆಯುತ್ತಿವೆ. ಪೌತಿ ಖಾತೆಗಾಗಿ ಜನರು ಯಾವುದೇ ಕಚೇರಿ, ವಿಎ, ಆರ್‌ಐಗಳ ಬಳಿ ಅಲೆದಾಡುವ ಅಗತ್ಯವಿಲ್ಲ. ತಾಲೂಕು ಹಾಗೂ ಜಿಲ್ಲಾಡಳಿತವೇ ನೇರವಾಗಿ ತಮ್ಮ ಮನೆಯ ಮುಂದೆ ಬಂದು ಪೌತಿ ಖಾತೆ ಮಾಡುತ್ತಿದೆ. ಮರಣ ಹೊಂದಿದವರ ಆರ್‌ಟಿಸಿ, ರೈತರ ಮರಣ ಧೃಡೀಕರಣ ಪತ್ರ, ವಂಶವೃಕ್ಷ ನೀಡಿ ಸಂಬಂಧಿಸಿದ ಕುಟುಂಬಸ್ಥರು ಪೌತಿ ಖಾತೆ ಮಾಡಿಸಿಕೊಳ್ಳಬೇಕು, ಇದಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಜಮೀನು ದುರಸ್ತಿಗೊಳಿಸುವ ಪ್ರಕರಣಗಳನ್ನು ಸಹ ಜಿಲ್ಲಾಡಳಿತ ಕೈಗೆತ್ತಿಕೊಂಡಿದೆ ಎಂದರು.



ಪಾಂಡವಪುರ ತಾಲೂಕು ಕಚೇರಿಗೆ ಜಿಲ್ಲಾಧಿಕಾರಿ ಡಾ.ಕುಮಾರ್ ದಿಢೀರ್ ಭೇಟಿ ನೀಡಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಭೂ ಸುರಕ್ಷ ಯೋಜನೆಗೆ ಸಂಬಂಧಿಸಿದಂತೆ ಪಾಂಡವಪುರ ತಾಲೂಕನ್ನು ಪೈಲೆಟ್ ತಾಲೂಕನ್ನಾಗಿ ಪರಿಗಣಿಸಿದ್ದೇವೆ. ಹಳೇ ದಾಖಲೆಗಳು ಸಮರ್ಪಕವಾಗಿ ಜನರಿಗೆ ಸಿಗುತ್ತಿಲ್ಲ ಎಂಬ ಕಾರಣಕ್ಕೆ ಎಲ್ಲಾ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಕಂಪ್ಯೂಟರ್‌ಗೆ ಅಪ್‌ಲೋಡ್ ಮಾಡಲಾಗುತ್ತಿದೆ. ಈ ಕೆಲಸ ತಾಲೂಕಿನಲ್ಲಿ ಈಗಾಗಲೇ ಶೇ.60ರಷ್ಟು ಪೂರ್ಣಗೊಂಡಿದೆ. ದಿನ ನಿತ್ಯ ಕಂಪ್ಯೂಟರ್‌ಗೆ ಅಪ್‌ಲೋಡ್ ಮಾಡಲಾಗುತ್ತಿದೆ ಎಂದು ತಿಳಿಸಿದರು.

ತಾಲೂಕು ಕಚೇರಿಗಳಲ್ಲಿ ದಲ್ಲಾಳಿಗಳ ಅಗತ್ಯವಿಲ್ಲ. ಖಾತೆ ಬದಲಾವಣೆ ಸೇರಿದಂತೆ ಯಾವುದೇ ಕೆಲಸಗಳು ನಡೆಯಬೇಕಾದರು ರೈತರು ಕಂಪ್ಯೂಟರ್ ಮೂಲಕವೇ ಅರ್ಜಿ ಸಲ್ಲಿಸಬೇಕಾಗಿರುವುದರಿಂದ ದಲ್ಲಾಳಿಗಳ ಅಗತ್ಯ ಕಚೇರಿಯಲ್ಲಿ ಇರುವುದಿಲ್ಲ. ಸಾರ್ವಜನಿಕರು ಸಹ ಇದನ್ನು ಅರ್ಥೈಸಿಕೊಳ್ಳಬೇಕು ಎಂದರು.

ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಲು ಸಾರ್ವಜನಿಕರು ಮುಗಿಬಿದ್ದರು, ಅರ್ಜಿ ಸ್ವೀಕರಿಸಿದ ಜಿಲ್ಲಾಧಿಕಾರಿಗಳು ತ್ವರಿತವಾಗಿ ಸಾರ್ವಜನಿಕರಿಗೆ ಸ್ಪಂದಿಸಿ ಕೆಲಸ ಮಾಡಿ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು. ಸಾರ್ವಜನಿಕರು ಕೆಲಸ ಕಾರ್ಯಗಳಿಗೆ ಕಚೇರಿಗೆ ಅಲೆದಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ತಹಶೀಲ್ದಾರ್‌ಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಕೆ.ಆರ್.ಶ್ರೀನಿವಾಸ್, ತಹಸೀಲ್ದಾರ್ ಬಸವರೆಡ್ಡಪ್ಪರೋಣದ, ಉಪ ತಹಸೀಲ್ದಾರ್ ಸಂತೋಷ್, ಶಿರಸ್ತೇದಾರ್ ಮೋಹನ್, ಹಲವರು ಇದ್ದರು.

ನಾಗಮ್ಮ ನಿಧನ

ಕೆ.ಆರ್.ಪೇಟೆ: ತಾಲೂಕಿನ ಶೀಳನೆರೆ ಹೋಬಳಿಯ ಮರುವನಹಳ್ಳಿ ಗ್ರಾಮದ ನಾಗಮ್ಮ(94) ಗುರುವಾರ ನಿಧನರಾದರು.



ಮೃತರು ತಾಲೂಕು ರೈತ ಸಂಘದ ಮಾಜಿ ಅಧ್ಯಕ್ಷರು ಹಾಗೂ ಜಿಲ್ಲಾ ರೈತ ಸಂಘದ ಉಪಾಧ್ಯಕ್ಷರಾದ ಮರುವನಹಳ್ಳಿಶಂಕರ್ ಸೇರಿದಂತೆ ಐವರು ಪುತ್ರರು ಹಾಗೂ ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯ ಕ್ರಿಯೆ ಸ್ವಗ್ರಾಮ ಮರುವನಹಳ್ಳಿಯಲ್ಲಿ ಗುರುವಾರ ಮಧ್ಯಾಹ್ನ ನಡೆಯಿತು.

ಇನ್ನರ್‌ವ್ಹೀಲ್ ಸಂಸ್ಥೆಯಿಂದ ಕನ್ನಡ ರಾಜ್ಯೋತ್ಸವ ಆಚರಣೆ

ಭಾರತೀನಗರ: ಭಾರತೀನಗರದ ಇನ್ನರ್‌ವಿಲ್ ಸಂಸ್ಥೆಯ ವತಿಯಿಂದ ಲಕ್ಷ್ಮಿ ಮಂಜುಳಾ ಬೋರೇಗೌಡ ಅವರ ನಿವಾಸದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಜರುಗಿತು.



ಇನ್ನರ್ ವಿಲ್ ಸಂಸ್ಥೆಯ ಅಧ್ಯಕ್ಷೆ ಧರಣಿ ಪುಟ್ಟೇಗೌಡ ಮಾತನಾಡಿ, ಕನ್ನಡ ಭಾಷೆ ಶ್ರೀಮಂತವಾಗಿದ್ದು, ಪ್ರೀತಿಸಿ ಪೋಷಿಸುವ ಜವಾಬ್ದಾರಿ ಪ್ರತಿಯೊಬ್ಬರದ್ದಾಗಿದೆ. ಭಾಷೆಯ ಬಗ್ಗೆ ಅಭಿಮಾನ ಕೇವಲ ನವಂಬರ್ ತಿಂಗಳಿಗೆ ಮಾತ್ರ ಸೀಮಿತವಾಗಿರಬಾರದು. ಅದು ಪ್ರತಿನಿತ್ಯ ನಿತ್ಯೋತ್ಸವವಾಗಬೇಕು. ಕನ್ನಡ ನಾಡಿನಲ್ಲಿ ಹೊರರಾಜ್ಯದಿಂದ ಬಂದಂತವರಿಗೆ ಹೆಚ್ಚು ಉದ್ಯೋಗಗಳು ಸಿಗುವುದರ ಜೊತೆಗೆ ಸೌಲಭ್ಯಗಳನ್ನು ಕೂಡ ಅನುಭವಿಸುತ್ತಿದ್ದಾರೆಂದು ವಿಷಾಧಿಸಿದರು.

ಇದೇ ವೇಳೆ ವೈಜ್ಞಾನಿಕ ಸಂಶೋಧನಾ ವಿಭಾಗದಲ್ಲಿ ಸಂಶೋಧನೆ ಮಾಡಿ ಪ್ರತಿಷ್ಠಿತ ಏಷ್ಯಾ ಬುಕ್ ಆಫ್ ರೆಕಾರ್ಡ್ಸ್ ಇಂಡಿಯಾ ಮತ್ತು ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಸ್ಥಾನ ಪಡೆದ ಬಿದರಹೊಸಹಳ್ಳಿಯ ರಾಜಣ್ಣ ರೇಖಾ ದಂಪತಿಗಳ ಪುತ್ರ ಬಿ.ಆರ್.ಪ್ರತೀಕ್‌ಗೌಡ ಅವರನ್ನು ಸನ್ಮಾನಿಸಿ ಗೌರವಿಸಿದರು.

ಇದೇ ವೇಳೆ ಇನ್ನರ್‌ವಿಲ್ ಕಾರ್ಯದರ್ಶಿ ಸವಿತ, ಲಕ್ಷ್ಮಿ ಮಂಜುಳಾ ಬೋರೇಗೌಡ, ಜಯಲಕ್ಷ್ಮಿ ವೆಂಕಟೇಗೌಡ ಹಲವರಿದ್ದರು.

ಪ್ರೇಮಂ ಮಧುರಂ
ಈ ವಾರ ತೆರೆಗೆ



ಪ್ರತಿಯೊಬ್ಬರ ಜೀವನದಲ್ಲಿ ಒಮ್ಮೆಯಾದರೂ ಪ್ರೀತಿ ಆಗಿರುತ್ತದೆ. ಅದು ಸೋತಿರಬಹುದು ಅಥವಾ ಗೆದ್ದಿರಬಹುದು, ಇಂಥದೇ ಕಥಾಹಂದರ ಒಳಗೊಂಡ ಚಿತ್ರ ಪ್ರೇಮಂ ಮಧುರಂ ಇಂದಿನಿಂದ ರಾಜ್ಯಾದ್ಯಂತ ತೆರೆ ಕಾಣುತ್ತಿದೆ. ಇತ್ತೀಚೆಗೆ ಈ ಚಿತ್ರದ ಟ್ರೈಲರ್, ಆಡಿಯೋ ಬಿಡುಗಡೆಯಾಯಿತು. ಅರಗೊಂಡ ಶೇಖರರೆಡ್ಡಿ ಅವರ ನಿರ್ಮಾಣದ ಈ ಚಿತ್ರಕ್ಕೆ ಗಾಂಧಿ.ಎ.ಬಿ. ಅವರು ಕಥೆ, ಚಿತ್ರಕಥೆ ಬರೆದು ನಿರ್ದೇಶಿಸುವ ಜತೆಗೆ ನಾಯಕನಾಗಿಯೂ ನಟಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು, ಪೂನಾ ಫಿಲಂ ಇನ್ಸ್‌ಟಿಟ್ಯೂಟ್‌ನಲ್ಲಿ ತರಬೇತಿ ಪಡೆದು, ಕೆಲ ನಿರ್ದೇಶಕರ ಜತೆ ಕೆಲಸ ಮಾಡಿದ್ದೇನೆ. ಈಗಿನ ಯುವಜನತೆಗೆ ಕನೆಕ್ಟ್ ಆಗುವಂಥ ಸಾಕಷ್ಟು ಸನ್ನಿವೇಶಗಳು ಚಿತ್ರದಲ್ಲಿವೆ. ಪ್ರತಿಯೊಬ್ಬರ ಬದುಕಲ್ಲಿ ಪ್ರೀತಿ ಗೆದ್ದಿರುತ್ತದೆ, ಇಲ್ಲವೆ ಸೋತಿರುತ್ತದೆ. ಅವರೆಲ್ಲರಿಗೂ ಈ ಚಿತ್ರ ಅನ್ವಯವಾಗುತ್ತದೆ. ನಾನು ಶಾಲೆ, ಕಾಲೇಜ್‌ನಲ್ಲಿ ಓದುವಾಗ ನೋಡಿದ, ತಿಳಿದುಕೊಂಡ



ಒಂದಷ್ಟು ಘಟನೆಗಳನ್ನೇ ಇಟ್ಟುಕೊಂಡು ಈ ಚಿತ್ರ ಮಾಡಿದ್ದೇನೆ. ಮೂರು ಹಂತಗಳಲ್ಲಿ ಪ್ರೀತಿ ಹೇಗಿರುತ್ತೆ ಎಂದು ಚಿತ್ರದ ಮೂಲಕ ತೋರಿಸಿದ್ದೇವೆ, ಬೆಂಗಳೂರು, ಮಂಗಳೂರು, ಬೈಂದೂರು, ಉಡುಪಿ ಕಾಲ್ತೋಡು ಮತ್ತು ಮಲ್ಪೆ ಬೀಚ್ ಸುತ್ತಮುತ್ತ ಚಿತ್ರೀಕರಿಸಿದ್ದೇವೆ ಎಂದರು.

ನಿರ್ಮಾಪಕ ಶೇಖರರೆಡ್ಡಿ ಮಾತನಾಡುತ್ತಾ, ನನ್ನ ಹುಟ್ಟೂರು ತಿರುಪತಿಯಾದರೂ, ಬದುಕು ಕಂಡುಕೊಂಡಿದ್ದು ಬೆಂಗಳೂರಲ್ಲಿ. ಇಲ್ಲಿನ ಋಣ ಹಾಗೂ ಕನಿಷ್ಠ 10 ಪ್ರತಿಭೆಗಳಿಗೆ ಬದುಕು ಕೊಡಲೆಂದು ನಾನೀ ಚಿತ್ರವನ್ನು ನಿರ್ಮಿಸಿದ್ದೇನೆ. ಈ ಹುಡುಗರು ಏನೋ ಸಾಧನೆ ಮಾಡಿದ್ದಾರೆ. ಅವರಿಗೆ ನಿಮ್ಮ ಬೆಂಬಲ ಬೇಕು ಎಂದರು.

ನಾಯಕಿಯರಾದ ಐಶ್ವರ್ಯ ದಿನೇಶ್, ಅನುಷಾ ಜೈನ್ ತಮ್ಮ ಅನುಭವಗಳನ್ನು ಹಂಚಿಕೊಂಡರು. ಸಿಹಿಕಹಿ ಚಂದ್ರು, ರಾಜೇಶ್ವರಿ, ಲಪಂಗ ರಾಜ, ಅನೂಪ್ ಅಗಸ್ತ್ಯ ಹಾಗೂ ಇತರರು ಉಳಿದ ಪಾತ್ರಗಳಲ್ಲಿದ್ದಾರೆ. ಚಿತ್ರದ ಮೂರು ಹಾಡುಗಳಿಗೆ ವಿಶಾಲ್ ಆಲಾಪ ಸಂಗೀತ ಸಂಯೋಜಿಸಿದ್ದಾರೆ. ಮಂಜುನಾಥ ಹೆಗಡೆ ಅವರ ಛಾಯಾಗ್ರಹಣ, ಸಂಜೀವ್ ಜಾಗಿರದಾರ್ ಅವರ ಸಂಕಲನ, ಶ್ರೀಮಾನ್ ಗಂಧರ್ವ ಅವರ ಹಿನ್ನಲೆ ಸಂಗೀತ ಈ ಚಿತ್ರಕ್ಕಿದೆ.

ಸಂದೇಶ್ ಎನ್. ನಿರ್ಮಾಣದ
'ಜಿಎಸ್‌ಟಿ' ಟ್ರೈಲರ್

ನಟ, ನಿರೂಪಕ ಸೃಜನ್ ಲೋಕೇಶ್ ಇದೀಗ ಡೈರೆಕ್ಟರ್ ಕ್ಯಾಪ್ ತೊಟ್ಟಿದ್ದಾರೆ. ಪ್ರತಿಷ್ಠಿತ ಸಂದೇಶ್ ಪ್ರೊಡಕ್ಷನ್ಸ್ ಮೂಲಕ ಸಂದೇಶ್ ಎನ್. ನಿರ್ಮಾಣದ 'ಜಿಎಸ್‌ಟಿ' ಚಿತ್ರಕ್ಕೆ ಆಕ್ಷನ್‌ಕಟ್ ಹೇಳಿದ್ದಾರೆ. ಹಿರಿಯ ನಿರ್ಮಾಪಕ ಸಂದೇಶ್ ನಾಗರಾಜ್ ಅರ್ಪಿಸುತ್ತಿರುವ ಈ ಚಿತ್ರ ನ.28ಕ್ಕೆ ತೆರೆಗೆ ಬರುತ್ತಿದೆ. ನಟ ಉಪೇಂದ್ರ, ಚಿತ್ರದ ಟ್ರೈಲರನ್ನು ತಮ್ಮದೇ ಶೈಲಿಯಲ್ಲಿ ಆಕ್ಷನ್ ಹೇಳುವ ಮೂಲಕ ಬಿಡುಗಡೆ ಮಾಡಿದರು.



ಈ ಸಂದರ್ಭದಲ್ಲಿ ನಿರ್ದೇಶಕ ಸೃಜನ್ ಮಾತನಾಡುತ್ತಾ, 'ಜಿಎಸ್‌ಟಿ' ಎಂದರೆ ಘೋಸ್ಟ್ ಇನ್ ಟ್ರಬಲ್. ಈ ಸಿನಿಮಾ ನನ್ನ ಕನಸು. ಅದನ್ನು ನನಸು ಮಾಡಿದವರು ನಿರ್ಮಾಪಕ ಸಂದೇಶ್. ಈ ಚಿತ್ರದ ವಿಶೇಷ ಎಂದರೆ ನಮ್ಮ ತಾತಾ ಸುಬ್ಬಯ್ಯನಾಯ್ಡು ಅವರು 'ಭಕ್ತಪ್ರಹ್ಲಾದ' ಚಿತ್ರದಲ್ಲಿ ನಮ್ಮ ತಂದೆಯನ್ನು ಚಿತ್ರರಂಗಕ್ಕೆ ಪರಿಚಯಿಸಿದರು. ನಂತರ ನಮ್ಮ ತಂದೆಯ ನಿರ್ದೇಶನದ 'ಭುಜಂಗಯ್ಯನ ದಶಾವತಾರ'ದ ಮೂಲಕ ನಾನು ಚಿತ್ರರಂಗಕ್ಕೆ ಬಂದೆ. ಈಗ ನನ್ನ ಮಗ ಸುಕೃತ್ ನನ್ನ ನಿರ್ದೇಶನದ ಚಿತ್ರದಿಂದ ಬೆಳ್ಳಿತೆರೆ ಪ್ರವೇಶಿಸಿದ್ದಾನೆ. ಇದು ಭಾರತೀಯ ಚಿತ್ರರಂಗದಲ್ಲೇ ಪ್ರಥಮ ಎನ್ನಬಹುದು ಎಂದರು. ಎಲ್ಲರ ಶ್ರಮದಿಂದ ನ.28ರಂದು ಚಿತ್ರ ತೆರೆಗೆ ಬರಲಿದೆ. ಮತ್ತೊಂದು ವಿಶೇಷವೆಂದರೆ, ನನ್ನ ಮೊದಲ ಚಿತ್ರಕ್ಕೆ ಲೆಜೆಂಡರಿ ಕ್ರಿಕೆಟರ್ ಸಚಿನ್ ತೆಂಡೂಲ್ಕರ್ ಅವರು ಶುಭಹಾರೈಸಿ, ತಮ್ಮ ರುಜುಹಾಕಿದ ಬ್ಯಾಟ್ ಗಿಫ್ಟ್ ನೀಡಿದ್ದಾರೆ ಎಂದರು.



ನಿರ್ಮಾಪಕ ಸಂದೇಶ್ ಮಾತನಾಡುತ್ತಾ, ನಮ್ಮ ಸಂಸ್ಥೆಯ 34ನೇ ಚಿತ್ರವಿದು ನಾನು ಚಿತ್ರದ ಕಥೆ ಕೇಳಿಲ್ಲ. ಸೃಜನ್ ನನ್ನ ಸ್ನೇಹಿತ. ಒಳ್ಳೆ ಚಿತ್ರವನ್ನೇ ಮಾಡಿರುತ್ತಾರೆಂಬ ನಂಬಿಕೆಯಿದೆ ಎಂದರು. ನಟಿ ಗಿರಿಜಾ ಲೋಕೇಶ್ ಮಾತನಾಡುತ್ತಾ, ಚಿತ್ರರಂಗದ ಹಲವು ಪ್ರಥಮಗಳು ನಮ್ಮ ಕುಟುಂಬದ್ದೇ ಎಂಬ ಹೆಮ್ಮೆ ನಮಗಿದೆ ಎಂದರು.

ನೈಜ ಘಟನೆ ಆಧಾರಿತ '1979 ಅನ್‌ಟೋಲ್ಡ್ ಸ್ಟೋರಿ'

ತೊಂಬತ್ತರ ದಶಕದಲ್ಲಿ ಪಶ್ಚಿಮ ಬಂಗಾಳದಲ್ಲಿ ನಡೆದ ನೈಜ ಘಟನೆಯನ್ನು ಆಧಾರವಾಗಿಟ್ಟುಕೊಂಡು ನಿರ್ಮಿಸಲಾದ ಚಿತ್ರ '1979 ಅನ್‌ಟೋಲ್ಡ್ ಸ್ಟೋರಿ'. ಬಿಡುಗಡೆಗೆ ಸಿದ್ಧವಾಗಿರುವ ಈ ಚಿತ್ರಕ್ಕೆ ಪುಷ್ಪರಾಜ್ ಕತೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶಿಸಿದ್ದಾರೆ. ಇತ್ತೀಚೆಗೆ ಈ ಚಿತ್ರದ ಪೋಸ್ಟರನ್ನು ಆ ದಿನಗಳು ಖ್ಯಾತಿಯ ನಟ ಚೇತನ್ ಬಿಡುಗಡೆಗೊಳಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದರು.



ಇವರ ಪ್ರಯತ್ನ ಚೆನ್ನಾಗಿದೆ ಕನ್ನಡಕ್ಕೆ ಹೊಸತನದ ಕಾನ್ಸೆಪ್ಟ್ ಇದು. ಇವರೆಷ್ಟು ಪ್ರತಿಭಾವಂತರು ಎಂಬುದು ಚಿತ್ರದ ದೃಶ್ಯಗಳನ್ನು ನೋಡಿದಾಗ ತಿಳಿಯಿತು. ಕನ್ನಡ ಸಿನಿಮಾಗಳು ಪ್ಯಾನ್ ಇಂಡಿಯಾ ಮಟ್ಟದಲ್ಲಿ ವಿಶ್ವಾದ್ಯಂತ ಪ್ರಸಿದ್ದಿ ಪಡೆಯುತ್ತಿವೆ. ಅದರಲ್ಲೂ ಪ್ಯಾನ್ ಇಂಡಿಯಾ ಕಥೆಗಳನ್ನು ಕರ್ನಾಟಕ್ಕೆ ತಂದು, ಇತಿಹಾಸದಲ್ಲಿ ಮುಚ್ಚಿ ಹಾಕಿರುವ ವಿಷಯಗಳನ್ನು ಜನತೆಗೆ ಪರಿಚಯಿಸುವ ಇವರ ಪ್ರಯತ್ನ ನಿಜಕ್ಕೂ ಶ್ಲಾಘನೀಯ ಎಂದು ಚೇತನ್ ಚಿತ್ರತಂಡವನ್ನು ಮೆಚ್ಚಿಕೊಂಡರು.

ನಿರ್ದೇಶಕ ಪುಷ್ಪರಾಜ್ ಮಾತನಾಡುತ್ತಾ, ವೆಸ್ಟ್ ಬೆಂಗಾಳ್‌ನಲ್ಲಿ ನಡೆದ ಘಟನೆ ಆಧಾರವಾಗಿಟ್ಟುಕೊಂಡು ಮಾಡಿದ ಚಿತ್ರ, ರೇಫ್ಯೂಜಿಗಳ ಕಥೆ. ಪಿರಿಯಾಡಿಕ್ ಡ್ರಾಮಾ ಜಾನರ್‌ನಲ್ಲಿ ಮೂಡಿಬಂದಿರುವ ಈ ಚಿತ್ರದ ಕಥೆಗೆ ಬೇಕಾದ ಲೊಕೇಶನ್ ಕೋಲಾರದಲ್ಲಿ ನಮಗೆ ಸಿಕ್ಕಿತ್ತು. ವಲಸೆ ಬರುವ ಜನರ ಜೀವನ, ಅವರ ಕಷ್ಟಗಳೇನು ಅಂತ ಚಿತ್ರದಲ್ಲಿ ಹೇಳಿದ್ದೇವೆ. ನಿರಾಶ್ರಿತರ ಸಮುದಾಯ ತಮ್ಮ ಅಸ್ತಿತ್ವವನ್ನು ಉಳಿಸಿಕೊಳ್ಳಲು ಯಾವ ರೀತಿ ಹೋರಾಟ ನಡೆಸುತ್ತಾರೆ. ಅಲ್ಲಿ ನಡೆಯುವ ದಬ್ಬಾಳಿಕೆಯ ವಿರುದ್ದ ಹೇಗೆ ಕ್ರಾಂತಿ ಆರಂಭವಾಗುತ್ತದೆ ಎಂಬುದನ್ನು ನಮ್ಮ ಚಿತ್ರದ ಮೂಲಕ ಹೇಳಲಾಗಿದೆ ಎಂದು ತಿಳಿಸಿದರು.

ಅಚ್ಚು, ಸುಜಿತ್, ಅಮೃತಾ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಉಳಿದಂತೆ ದುರ್ಗಾ, ಪ್ರೀತಿ, ತಕ್ಷಾ ರಾಮ್. ನಿರಂಜನ್, ಧನುಷ್ ಇತರೆ ತಾರಾಬಳಗದಲ್ಲಿದ್ದಾರೆ. ಜಸ್ವಂತ್ ಪಸುಪುಲೇಟಿ ಅವರ ಸಂಗೀತ, ಚಾಲಾಕಿ ಚರಣ್ ಅವರ ಛಾಯಾಗ್ರಹಣ ಈ ಚಿತ್ರಕ್ಕಿದೆ. ಕೋಲಾರ, ತೇರಳ್ಳಿ, ಯರಗೋಳದ ಸುತ್ತಮುತ್ತ 1979 ಅನ್‌ಟೋಲ್ಡ್ ಸ್ಟೋರಿ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಮನಂ ಮೂವೀ ಮೇಕರ್ಸ್ ಬ್ಯಾನರ್‌ನಲ್ಲಿ ಬಿ.ಎಂ. ಶ್ರೀನಿವಾಸ್ ಈ ಚಿತ್ರವನ್ನು ನಿರ್ಮಿಸಿದ್ದಾರೆ

ಇಂದಿನಿಂದ ಉಡಾಳನ ಆಟ ಶುರು



ದಾವಣಗೆರೆಯ ರವಿ ಶಾಮನೂರು ಹಾಗೂ ಯೋಗರಾಜ್‌ಭಟ್ ಸೇರಿ ನಿರ್ಮಿಸಿರುವ, ಅಮೋಲ್ ಪಾಟೀಲ್ ನಿರ್ದೇಶನದ ಚಿತ್ರ ಉಡಾಳ ಇಂದಿನಿಂದ ರಾಜ್ಯಾದ್ಯಂತ ತೆರೆ ಕಾಣುತ್ತಿದೆ. ಪೃಥ್ವಿ ಶಾಮನೂರು ನಾಯಕನಾಗಿ ನಟಿಸಿರುವ ಈ ಚಿತ್ರದ ಟ್ರೇಲರನ್ನು ನವೀನ್ ಶಂಕರ್ ಹಾಗೂ ನಿಶ್ವಿಕಾ ನಾಯ್ಡು ಬಿಡುಗಡೆಗೊಳಿಸಿ, ಶುಭ ಹಾರೈಸಿದರು. ಮಾಜಿ ಸಚಿವ ಹೆಚ್. ಆಂಜನೇಯ ಮುಖ್ಯ ಅತಿಥಿಗಳಾಗಿದ್ದರು.


ವೇದಿಕೆಯಲ್ಲಿ ಯೋಗರಾಜ್ ಭಟ್ ಮಾತನಾಡುತ್ತಾ, ನಗಿಸುವುದು ಅಷ್ಟು ಸುಲಭವಲ್ಲ ನಗು ಬರುವುದೂ ಅಷ್ಟು ಸುಲಭವಲ್ಲ. ಆದರೆ ನಿರ್ದೇಶಕ ಅಮೋಲ್ ಪಾಟೀಲ್, ನಾಯಕ ಪೃಥ್ವಿ ಶಾಮನೂರು ಸೇರಿದಂತೆ 20 ಜನ ಕಲಾವಿದರ ತಂಡವನ್ನಿಟ್ಟುಕೊಂಡು ಉಡಾಳ ಚಿತ್ರದ ಮೂಲಕ ನಗುವಿನ ರಸದೌತಣವನ್ನೇ ಬಡಿಸಿದ್ದಾರೆ. ಪ್ರಾಧ್ಯಾಪಕರಾಗಿದ್ದ ರವಿ ಶಾಮನೂರು ಈ ಸಿನಿಮಾಗೆ ಬಂಡಾವಾಳ ಹೂಡಿದ್ದಾರೆ. ಪೃಥ್ವಿ ಸ್ವಲ್ಪ ದಿನಗಳಲ್ಲಿ ಸ್ಟಾರ್ ಆಗುತ್ತಾನೆ ಎಂದು ಭವಿಷ್ಯ ನುಡಿದರು.

ರವಿ ಶಾಮನೂರು ಮಾತನಾಡುತ್ತಾ, ಭಟ್ಟರ ಜೊತೆ ಸೇರಿ ನಿರ್ಮಿಸಿರುವ ಎರಡನೇ ಚಿತ್ರವಿದು. ನನಗೆ ಒಂದೊಳ್ಳೆಯ ತಂಡ ಸಿಕ್ಕಿದ್ದು, ಚಿತ್ರ ಅಂದುಕೊಂಡ ಹಾಗೇ ಮೂಡಿಬಂದಿದೆ ಎಂದರು.

ನಿರ್ದೇಶಕ ಅಮೋಲ್ ಪಾಟೀಲ್ ಮಾತನಾಡುತ್ತಾ, ಉತ್ತರ ಕರ್ನಾಟಕದ ಸೊಗಡನ್ನು ಊಟದಲ್ಲಿ ಉಪ್ಪಿನಕಾಯಿ ಇದ್ದ ಹಾಗೆ ಕೆಲವು ಚಿತ್ರಗಳಲ್ಲಿ ಬಳಸಿಕೊಳ್ಳಲಾಗಿತ್ತು. ಆದರೆ ನಮ್ಮ ಚಿತ್ರ ಫುಲ್ ಮೀಲ್ಸ್ ಥರ. ಉತ್ತರ ಕರ್ನಾಟಕದ್ದೇ ಈ ಸಿನಿಮಾ. ಇಡೀ ಚಿತ್ರದ ಕಥೆ ವಿಜಾಪುರದಲ್ಲೇ ನಡೆಯುತ್ತದೆ. ಉತ್ತರ ಕರ್ನಾಟಕದ ಸುಂದರತೆ ಚಿತ್ರದಲ್ಲಿದೆ. ನಿರ್ಮಾಪಕರು ಹೇಳಿದ ಹಾಗೆ ಒಂದೊಳ್ಳೆ ತಂಡದ ಸಹಕಾರದಿಂದ ಒಂದೊಳ್ಳೆ ಚಿತ್ರ ನಿರ್ಮಾಣವಾಗಿದೆ ಎಂದರು.

ನಾಯಕ ನಟ ಪೃಥ್ವಿ ಶಾಮನೂರು ಮಾತನಾಡುತ್ತಾ, ವಿಜಯಪುರದ ಒಬ್ಬ ಟೂರಿಸ್ಟ್ ಗೈಡಾಗಿ ಚಿತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಟೀಸರ್, ಹಾಡುಗಳನ್ನು ಮೆಚ್ಚಿಕೊಂಡಿರುವ ಜನ ಟ್ರೇಲರ್‌ಗೂ ಪ್ರಶಂಸೆ ನೀಡುತ್ತಿದ್ದಾರೆ. ಹೋದ ಕಡೆಯಲ್ಲೆಲ್ಲಾ ನನ್ನನ್ನು ಉಡಾಳನೆಂದೇ ಗುರುತಿಸುತ್ತಿದ್ದಾರೆ ಎಂದರು. ಸಂಗೀತ ನಿರ್ದೇಶಕ ಚೇತನ್ ಡ್ಯಾವಿ, ಗಾಯಕಿ ಸೃಷ್ಟಿ ಶಾಮನೂರು, ಹಿರಿಯ ನಟ ಬಲರಾಜ್‌ವಾಡಿ, ಬಿರಾದಾರ್ ಇವರೆಲ್ಲ ಚಿತ್ರದ ಬಗ್ಗೆ ಮಾತನಾಡಿದರು.

ಸಿನಿಪದಬಂಧ-602



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______
ವಿಳಾಸ ______
ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1. ಹಾಳಾಗದ ರಾಜಣ್ಣನ ಗೃಹಕ್ಕೆ ವೈ. ಆರ್.ಸ್ವಾಮಿ ನಿರ್ದೇಶಕ 6
3. ದೇವರಾಜ್ – ತ್ಯಾಗರಾಜ್ ಪರಾಕ್ರಮಿಗಳು 4
6. '_ _ _ _ _ _ ಮಧುರ ಮೌನ ಮಿಡಿವ ಹೃದಯ....', 6
9. ಆರ್. ನಾಗೇಂದ್ರರಾವ್ – ಮೀನಾಕ್ಷಿ ಅವರ ಮುಖ್ಯ ಭೂಮಿಕೆಯ ಚಿತ್ರ 5
10. ಇರುಳಿನ ನಟಿ 3
11. ಅಂಬರೀಷ್ – ಗೀತಾ ಕಂಡ "ಬ್ರಹ್ಮಾಂಡ" 4
12. ಅಂಬರೀಷ್ – ಜಯಮಾಲಾಳ ಪ್ರೀತಿಯಲ್ಲಿ ದ್ವೇಷವಿದೆ 5
15. 'ಆಕಾಶವೇ ಬೀಳಲಿ ಮೇಲೆ ನಾನೆಂದು ನಿನ್ನವನು...', ಗೀತೆಯ ಚಿತ್ರ 6
18. ಶಿಲ್ಪಾ – ಶ್ವೇತಾ ಅಭಿನಯಕ್ಕೆ ಶಶಿಕುಮಾರ್, ಅಭಿಜಿತ್ ಜೊತೆಯಾದರು 6
19. ಜಿಂದಾಬಾದ್ ಚಿತ್ರದ ನಾಯಕ 3

ಮೇಲಿನಿಂದ ಕೆಳಕ್ಕೆ

1. ವಿಷ್ಣುವರ್ಧನ್ – ಸುಹಾಸಿನಿ ಬೆಲೆ ಬಾಳುವ ಮಣಿ ಪೋಣಿಸಿದ್ದಾರೆ 5
2. ಸುವಾಸನೆಯುಳ್ಳ ಒಂದು ಬಗೆಯ ಪತ್ರೆ 2
4. ವಿಜ್ಞಾನ ಓದಿದವಳು 2
5. ಯುದ್ಧ ಭೂಮಿಗೆ ಹೀಗೊಂದು ಹೆಸರು 4
7. ವಿಷ್ಣು, ಪ್ರಭಾಕರ್, ಸೋನಾಕ್ಷಿ, ಡಾಲಿ ಅಭಿನಯದ ಚಿತ್ರ 5
8. ಈ ಹಿರಿಯ ಪೋಷಕ ನಟ ಈಗ ನಮ್ಮೊಂದಿಗಿಲ್ಲ 4
11. ನಾಗಮಂಡಲ ಚಿತ್ರದ ನಾಯಕಿ 5
12. ಅರ್ಜುನ್ ಸರ್ಜಾ – ಖುಷ್ಬುವಿನ ಪ್ರೀತಿಯ ಜ್ವಾಲೆ 3
13. ಜಯಸಿಂಹ ಚಿತ್ರದ ವಿಷ್ಣುವಿನ ಜೊತೆಗಾರ್ತಿ 4
14. ತಬರನ ಕಥೆಯ ಹೀರೋ 5
16. ವಿಷ್ಣುವರ್ಧನ್ – ರೂಪಿಣಿ ಅಭಿನಯದ ಚಿತ್ರ 2
17. ಗುರುದೇಶಪಾಂಡೆ ಚಿತ್ರದಲ್ಲಿ ಚಿರಂಜೀವಿ ಸರ್ಜಾ ಮಾಡಿದ ವಧೆ 3

ಸಿನಿ ಪದಬಂಧ 601ರ ಉತ್ತರ

ಅ	ವ	ಳಿ	ಜ	ವ	ಳಿ		ಪ್ರೇ	ಮ	ಜಾ	ಲ
ಮೃ			ಮು					ಜ್ಞ		ಕ್ಷಿ
ತ	ವ	ರಿ	ನ	ಸಿ	ರಿ		ಅ			ದೇ
ಬಿಂ				ರಿ		ಅ	ನು	ಪ	ಲ್ಲ	ವಿ
ದು	ನಿ	ಯಾ		ಚಂ			ಭ			
				ದ		ದೇ	ವ	ಯಾ	ನಿ	
ಶು	ಭ	ಮಿ	ಲ	ನ		ವ				ಸಾ
ಭ		ಲ್ಲಿ			ಕೆ	ರ	ಳಿ	ದ	ಸಿಂ	ಹ
ಶ್ರೀ		ಮಾ		ಮ		ಮ		ತ್ತ		ಸ
	ದೇ	ವ	ರೆ	ಲ್ಲಿ	ದ್ದಾ	ನೆ				ಸಿಂ
				ಗೆ				ಕ	ಲ	ಹ

ವಿಜೇತರು: ರಾಘು, ಡಿ.ಸುಬ್ಬಯ್ಯ ರಸ್ತೆ, ಚಾಮರಾಜ ಮೊಹಲ್ಲಾ, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಟ್ರೈಲರ್‌ನಲ್ಲಿ ಇನಿಯನ ಆತ್ಮ..!



ಸ್ನೇಹಿತರ ತಂಡವೊಂದು ಪರಿಚಯವಿಲ್ಲದ ಜಾಗಕ್ಕೆ ಹೋದಾಗ ಅಲ್ಲಿ ಅವರಿಗೆ ಎದುರಾಗುವ ಭಯಾನಕ ಸನ್ನಿವೇಶಗಳು, ಎದುರಿಸುವ ಆತಂಕದ ಸನ್ನಿವೇಶಗಳನ್ನು ಹಾರರ್ ಹಿನ್ನೆಲೆಯಲ್ಲಿ ಹೇಳುವ ಚಿತ್ರ ಇನಿಯನ ಆತ್ಮ. ಈ ಶುಕ್ರವಾರ ತೆರೆ ಕಾಣುತ್ತಿರುವ ಈ ಚಿತ್ರಕ್ಕೆ ನರೇಶ್ ಸಿದ್ದಘಟ್ಟ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಶ್ರೀವಿನಾಯಕ ವೆಂಕಟೇಶ್ವರ ಫಿಲಂಸ್ ಅಡಿ ಬಿ.ಕಲಾವತಿ ಅವರು ನಿರ್ಮಿಸಿರುವ ಈ ಹಾರರ್ ಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು.

ಈ ಸಂದರ್ಭದಲ್ಲಿ ನಿರ್ದೇಶಕ ನರೇಶ್ ಸಿದ್ದಘಟ್ಟ ಮಾತನಾಡುತ್ತಾ, ಇನಿಯನ ಆತ್ಮ ಎಂದರೆ ಪ್ರಿಯತಮನ ಆತ್ಮ. ದುಷ್ಟಶಕ್ತಿ ಹಾಗೂ ದೈವಶಕ್ತಿಯ ಸಂಘರ್ಷದ ಕಥೆ ಚಿತ್ರದಲ್ಲಿದೆ, ಏಳು ಜನ ಯುವಕ, ಯುವತಿಯರ ತಂಡ ದೂರದ ಸ್ಥಳವೊಂದಕ್ಕೆ ಪ್ರವಾಸ ಹೊರಡುತ್ತಾರೆ. ಅಲ್ಲಿ ಇವರನ್ನೇ ಗುರಿಯಾಗಿಸಿಕೊಂಡು ಒಂದಷ್ಟು ಆತಂಕಕಾರಿ ಘಟನೆಗಳು ನಡೆಯುತ್ತವೆ. ಅದಕ್ಕೆ ಕಾರಣವೇನು ಎನ್ನುವುದೇ ನಮ್ಮ ಚಿತ್ರದ ಕಾನ್ಸೆಪ್ಟ್, ಕರ್ಮ ಯಾರನ್ನೂ ಬಿಡುವುದಿಲ್ಲ ಎಂಬುದನ್ನು ನಮ್ಮ ಚಿತ್ರದ ಮೂಲಕ ಹೇಳಲು ಪ್ರಯತ್ನಿಸಿದ್ದೇವೆ ಎ.ಟಿ. ರವೀಶ್ ಅವರ ಸಂಗೀತ ಸಂಯೋಜನೆ, ಚರಣ್‌ತೇಜ್ ಅವರ ಛಾಯಾಗ್ರಹಣ ಈ ಚಿತ್ರಕ್ಕಿದೆ. ಮಂಗಳೂರು, ಕೋಲಾರ, ನಂದಿ ಬೆಟ್ಟ ಹಾಗೂ ಚಿಕ್ಕಾಬಳ್ಳಾಪುರದ ಸುತ್ತಮುತ್ತ ಚಿತ್ರದ ಚಿತ್ರೀಕರಣ ನಡೆಸಲಾಗಿದೆ ಎಂದು ಹೇಳಿದರು.

ನಿರ್ಮಾಪಕಿ ಕಲಾವತಿ ಮಾತನಾಡುತ್ತಾ, ಸಿನಿಮಾ ಮಾಡುವವರ ಕಷ್ಟ ಏನೆಂಬುದು ಈ ಚಿತ್ರ ಮಾಡುವಾಗ ನನಗೆ ಗೊತ್ತಾಯ್ತು, ಸಾಕಷ್ಟು ಅಡೆ ತಡೆ, ತೊಂದರೆಗಳನ್ನು ಎದುರಿಸಿ ಚಿತ್ರವನ್ನು ರಿಲೀಸ್ ಹಂತಕ್ಕೆ ತಂದಿದ್ದೇವೆ. ಜನರಿಗೆ ಇಷ್ಟವಾಗುತ್ತೆ ಎಂಬ ನಂಬಿಕೆಯಿದೆ ಎಂದು ಹೇಳಿದರು. ಈ ಚಿತ್ರದಲ್ಲಿ ನಾಯಕನಾಗಿ ಸಿದ್ದಾರ್ಥ್ ಹರಿ, ನಾಯಕಿಯಾಗಿ ನಿಶಾರೆಡ್ಡಿ ನಟಿಸಿದ್ದು, ಉಳಿದಂತೆ ಕೋಲಾರ ಸೂರ್ಯ, ರಾಜವೀರ್, ಕಿಟ್ಟಿ ತಾಳಿಕೋಟಿ ಆದಿ ಮಧುಗಿರಿ, ಸುಶ್ಮಿತ, ನಯನ ಮುಂತಾದವರು ಬಣ್ಣ ಹಚ್ಚಿದ್ದಾರೆ.



ಗೂಡ್ಸ್ ವಾಹನಕ್ಕೆ ಮಿನಿ ಬಸ್ ಡಿಕ್ಕಿ: ಚಾಲಕ ಸಾವು, 6 ಮಂದಿಗೆ ಗಾಯ

ಹೆಚ್.ಡಿ.ಕೋಟೆ: ಗೂಡ್ಸ್ ವಾಹನಕ್ಕೆ ಮಿನಿ ಬಸ್ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಗೂಡ್ಸ್ ವಾಹನ ಚಾಲಕ ಸಾವನ್ನಪ್ಪಿ ಆರು ಮಂದಿ ಕೂಲಿಗಳು ಗಂಭೀರವಾಗಿ ಗಾಯಗೊಂಡಿರುವ ಘಟನೆ ಕೋಟೆ-ಹುಣಸೂರು ಮುಖ್ಯ ರಸ್ತೆಯ ಟೈಗರ್ ಬ್ಲಾಕ್ ಗ್ರಾಮದಲ್ಲಿ ಸಂಭವಿಸಿದೆ.


ಗುರುಸ್ವಾಮಿ

ಮೇಟಿಕುಪ್ಪೆ ಗ್ರಾಮದ ಗುರುಸ್ವಾಮಿ(51) ಮೃತ ಚಾಲಕ. ಮಂಡ್ಯ ಜಿಲ್ಲೆ ಮದ್ದೂರು ಗ್ರಾಮದ ನಾಗಮ್ಮ, ಅನ್ನಪೂರ್ಣ, ಕಾವ್ಯ, ಕೆಆರ್‌ಎಸ್ ಸಂತೆಮಾಳ ಗ್ರಾಮದ ಶಿಲ್ಪ, ಲಕ್ಷ್ಮಮ್ಮ, ಕಿರಣ ಗಂಭೀರವಾಗಿ ಗಾಯಗೊಂಡಿದ್ದು ಅವರುಗಳನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ದಾಖಲು ಮಾಡಲಾಗಿದೆ.

ಗುರುವಾರ ಸಂಜೆ ಅಣ್ಣೂರು ಗ್ರಾಮ ದಿಂದ ಗೂಡ್ಸ್ ವಾಹನ ನಂಜನಗೂಡಿಗೆ ಆರು ಮಂದಿ ಕೂಲಿ ಆಳುಗಳನ್ನು ಕರೆದುಕೊಂಡು ಟೈಗರ್ ಬ್ಲಾಕ್ ಗ್ರಾಮದ ಬಳಿ ಬರುತ್ತಿದ್ದಾಗ ಎಚ್.ಡಿ.ಕೋಟೆಯಿಂದ ಹುಣಸೂರಿಗೆ ತೆರಳುತ್ತಿದ್ದ ಮಿನಿ ಬಸ್ ಡಿಕ್ಕಿ ಹೊಡೆದಿದೆ.

ಮಿನಿ ಬಸ್ ಡಿಕ್ಕಿ ಹೊಡೆದ ರಭಸಕ್ಕೆ ಗೂಡ್ಸ್ ವಾಹನ ಪಲ್ಟಿ ಹೊಡೆದು ಚಾಲಕ ಗುರುಸ್ವಾಮಿ ಸ್ಥಳದಲ್ಲಿ ಮೃತಪಟ್ಟಿದ್ದಾನೆ. ಕೂಲಿ ಆಳುಗಳು ಗಂಭೀರವಾಗಿ ಗಾಯಗೊಂಡು ನರಳಾಡುತ್ತಿದ್ದಾಗ ಟೈಗರ್ ಬ್ಲಾಕ್ ಗ್ರಾಮಸ್ಥರು ತುರ್ತು ವಾಹನದ ಮೂಲಕ ಎಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಗೆ ಕಳಿಸಿಕೊಟ್ಟರು. ನಂತರ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಮೈಸೂರಿಗೆ ಕಳುಹಿಸಿಕೊಡಲಾಯಿತು.

ಹೆಚ್.ಡಿ.ಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸರ್ಕಲ್ ಇನ್ಸ್‌ಪೆಕ್ಟರ್ ಗಂಗಾಧರ್ ತನಿಖೆ ಕೈಗೊಂಡಿದ್ದಾರೆ.

ತಂಬಾಕು ಬೆಳೆಗಾರರಿಗೆ ನ್ಯಾಯಯುತ ದರ ನೀಡಿ

ಪಿರಿಯಾಪಟ್ಟಣದಲ್ಲಿ ತಂಬಾಕು ಮಂಡಳಿ ಅಧಿಕಾರಿಗಳ ಸಭೆಯಲ್ಲಿ ಯದುವೀರ್ ಆಗ್ರಹ

ಪಿರಿಯಾಪಟ್ಟಣ, ನ.13– ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪಿರಿಯಾಪಟ್ಟಣದಲ್ಲಿ ತಂಬಾಕು ಬೆಳೆಗಾರರ ಸಂಖ್ಯೆ ಹೆಚ್ಚಾಗಿದ್ದು, ಇವರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ತಂಬಾಕು ಮಂಡಳಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಚನೆ ನೀಡಿದ್ದೇನೆ ಎಂದು ಮೈಸೂರು–ಕೊಡಗು ಸಂಸದ ರಾದ ಯದುವೀರ್ ಕೃಷ್ಣದತ್ತ ಚಾಮ ರಾಜ ಒಡೆಯರ್ ತಿಳಿಸಿದ್ದಾರೆ.

ಪಿರಿಯಾಪಟ್ಟಣದಲ್ಲಿ ತಂಬಾಕು ಮಂಡಳಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಬೆಳೆಗಾರರ ಹಿತ ಕಾಪಾಡಲು ನಮ್ಮ ಕೇಂದ್ರ ಬಿಜೆಪಿ ಸರ್ಕಾರ ಬದ್ಧವಾಗಿದೆ ಎಂದರು.

ಮಂಡಳಿಯ ನಿರ್ದೇಶಕರು ಮತ್ತು ರೈತ ರೊಂದಿಗೆ ತಂಬಾಕು ಬೆಳೆಯುವ ಸಮುದಾ ಯದ ತುರ್ತು ಕಾಳಜಿಗಳನ್ನು ಗಮನಕ್ಕೆ ತರಲಾಯಿತು. ನಂತರ ಇದಕ್ಕೆ ಪರಿಹಾರ ಒದಗಿಸುವ ಬಗ್ಗೆ ಚರ್ಚೆ ನಡೆಸಲಾಯಿತು ಎಂದು ಹೇಳಿದ್ದಾರೆ. ರೈತರಿಗೆ ನ್ಯಾಯಯುತ ಬೆಲೆ ಸಿಗಬೇಕಾದರೆ ದರ ಹೆಚ್ಚಿಸಬೇಕು, ತಂಬಾಕು ಹರಾಜು ಮತ್ತು ಬಿಡ್ಡಿಂಗ್ ಪ್ರಕ್ರಿ ಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು, ತಂಬಾಕು ಮಂಡಳಿ ಕಚೇರಿಗಳಿಗೆ ಭೇಟಿ ನೀಡುವ ರೈತರಿಗೆ ಸೌಲಭ್ಯಗಳು ಮತ್ತು ಸೌಕರ್ಯಗಳನ್ನು ಒದಗಿಸಬೇಕು ಎಂದು ಸಭೆಯಲ್ಲಿ ಸೂಚನೆ ನೀಡಲಾಯಿತು ಎಂದು ಸಂಸದರು ತಿಳಿಸಿದ್ದಾರೆ.


ತಂಬಾಕು ರೈತರು ಮತ್ತು ಮಂಡಳಿಯ ಅಧಿಕಾರಿಗಳೊಂದಿಗೆ ಮಾತನಾಡುತ್ತಿರುವ ಸಂಸದ ಯದುವೀರ್.

7 ಕೋಟಿ ಹಗರಣವನ್ನು ನಿಷ್ಪಕ್ಷಪಾತ ತನಿಖೆಗಾಗಿ ಸಿಬಿಐಗೆ ವಹಿಸಬೇಕು. ನೋಂದಾಯಿತ ಕಾರ್ಡ್‌ದಾರರಿಗೆ ಮದುವೆ ಮತ್ತು ಶಿಕ್ಷಣ ಉದ್ದೇಶಗಳಿಗಾಗಿ ಸಾಲದ ಮಿತಿ ಹೆಚ್ಚಿಸಬೇಕು. ರೈತನ ಮರಣದ ಸಂದರ್ಭದಲ್ಲಿ ಕುಟುಂಬಗಳಿಗೆ ನೀಡಲಾಗುವ ಪರಿಹಾರದ ಮೊತ್ತವನ್ನು ಹೆಚ್ಚಿಸಬೇಕು (ಪ್ರಸ್ತುತ 50,000) ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸಂಸದರು ಮಾಹಿತಿ ನೀಡಿದ್ದಾರೆ.

ರೈತ ಸಮುದಾಯಕ್ಕೆ ನ್ಯಾಯ, ಪಾರದರ್ಶಕತೆ ಖಚಿತಪಡಿಸಿಕೊಳ್ಳಲಾಗುವುದು ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಲಾಯಿತು ಎಂದು ಸಂಸದ ಯದುವೀರ್ ಒಡೆಯರ್ ಹೇಳಿದ್ದಾರೆ.

ಪಿರಿಯಾಪಟ್ಟಣ, ಬೆಟ್ಟದಪುರದಲ್ಲಿ ನೌಕರರಿಲ್ಲದೆ ರೇಷ್ಮೆ ಇಲಾಖೆ ಕಚೇರಿಗೆ ಬೀಗ

ಸಚಿವ ವೆಂಕಟೇಶ್ ತವರಲ್ಲಿ ಇದೆಂತಹ ಸ್ಥಿತಿ

ಬೆಟ್ಟದಪುರ/ಪಿರಿಯಾಪಟ್ಟಣ: ಸಚಿವ ವೆಂಕಟೇಶ್ ಅವರ ತವರು ಕ್ಷೇತ್ರ ಪಿರಿಯಾಪಟ್ಟಣ ಮತ್ತು ಬೆಟ್ಟದಪುರದ ರೇಷ್ಮೆ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ನೌಕರರಿಲ್ಲದೆ ಬೀಗ ಜಡಿಯಲಾಗಿದೆ.



ಪಿರಿಯಾಪಟ್ಟಣ ತಾಲೂಕಿನಲ್ಲಿ ಸುಮಾರು 300 ಎಕರೆ ಪ್ರದೇಶದಲ್ಲಿ ರೇಷ್ಮೆ ಬೆಳೆಯುತ್ತಿದ್ದು ಪಿರಿಯಾಪಟ್ಟಣ ಮತ್ತು ಬೆಟ್ಟದಪುರದ ರೇಷ್ಮೆ ತಾಂತ್ರಿಕ ಕಚೇರಿಗಳಲ್ಲಿ ಹಲವು ತಿಂಗಳುಗಳಿಂದ ನೌಕರರು ಇಲ್ಲದೆ ಬೀಗ ಹಾಕಲಾಗಿದೆ. ಇದರಿಂದ ರೇಷ್ಮೆ ಬೆಳೆಗಾರರು ರೇಷ್ಮೆ ಇಲಾಖೆಯ ಸವಲತ್ತು ಪಡೆಯಲು ಪರದಾಡುವಂತಾಗಿದೆ.

ತಾಲೂಕಿನಲ್ಲಿ ಇಬ್ಬರೆ ಅಧಿಕಾರಿಗಳು ಇರುವುದರಿಂದ ಎಲ್ಲವನ್ನು ನಿರ್ವಹಿಸಲು ಕಷ್ಟವಾಗುತ್ತಿರುವುದರಿಂದ ರೇಷ್ಮೆ ಫಾರಂ ಕಚೇರಿಗಳಲ್ಲಿ ನೌಕರರು ಇಲ್ಲದೆ ರೈತರಿಗೆ ಮಾಹಿತಿ ಕೊಡುವವರು ಇಲ್ಲ.

ಕೂಡಲೇ ಸಚಿವ ಕೆ.ವೆಂಕಟೇಶ್ ಅವರು ತಮ್ಮ ತವರು ತಾಲೂಕಿನ ರೇಷ್ಮೆ ಇಲಾಖೆಗೆ ನೌಕರರನ್ನು ನೇಮಿಸಿ ತಾಲೂಕಿನಲ್ಲಿ ತಂಬಾಕು ಬೆಳೆಗೆ ಪರ್ಯಾಯವಾಗಿ ರೇಷ್ಮೆ ಕೃಷಿಯನ್ನು ಅವಲಂಬಿಸಬೇಕೆಂಬ ಆಶಯ ಹೊಂದಿರುವ ರೈತರಿಗೆ ಪ್ರೋತ್ಸಾಹಿಸುವ ಕೆಲಸ ಮಾಡಬೇಕೆಂದು ರೈತರು ಮನವಿ ಮಾಡಿದ್ದಾರೆ.

ಮಲ್ಲನಮೂಲೆ ಮಠದ ಶ್ರೀಗಳಿಗೆ ಶ್ರದ್ಧಾಂಜಲಿ

ನಂಜನಗೂಡು: ಸೋಮವಾರ ಲಿಂಗೈಕ್ಯರಾದ ಮಲ್ಲನ ಮೂಲೆ ಗುರು ಕಂಬಳೀಶ್ವರ ಮಠದ ಶ್ರೀ ಚನ್ನಬಸವೇಶ್ವರ ಸ್ವಾಮೀಜಿರವರಿಗೆ ತಾಲೂಕು ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ತಾಲೂಕು ವೀರಶೈವ ಲಿಂಗಾಯಿತ ಮಹಾಸಭಾ ಅಧ್ಯಕ್ಷ ಎಸ್‌ಎಂ ಕೆಂಪಣ್ಣ ಮಾತನಾಡಿ ಶ್ರೀ ಚನ್ನಬಸವೇಶ್ವರ ಸ್ವಾಮೀಜಿ, 1975ರಲ್ಲಿ ಮಠದ 5ನೇ ಪೀಠಾಧಿಪತಿಯಾಗಿ ಪಟ್ಟಾಭಿಷೇಕ ಸ್ವೀಕರಿಸಿ ನಿರಂತರವಾಗಿ 50 ವರ್ಷಗಳ ಕಾಲ ಸೇವೆ ಸಲ್ಲಿಸಿ ಮಠದ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಗ್ರಾಮೀಣ ಭಾಗದ ವಿದ್ಯಾಭ್ಯಾಸಕ್ಕೆ ಒತ್ತು ನೀಡಿದ ಸ್ವಾಮೀಜಿಯವರು ಶಿಕ್ಷಣ ಸಂಸ್ಥೆಯನ್ನು ತೆರೆದುದಲ್ಲದೆ, ವಿದ್ಯಾರ್ಥಿನಿಲಯಗಳನ್ನು ತೆರೆದು ಅನ್ನ ಅಕ್ಷರ ದಾಸೋಹ ನೀಡಿದ ಫಲವಾಗಿ ಇಂದು ಗುರು ಕಂಬಳೀಶ್ವರ ಮಠದಲ್ಲಿ ವಿದ್ಯಾಭ್ಯಾಸ ಮಾಡಿದ ಸಾಕಷ್ಟು ವಿದ್ಯಾರ್ಥಿಗಳು ಇಂದು ರಾಜಕಾರಣಿಗಳಾಗಿ, ಶಾಸಕರಾಗಿ, ಉನ್ನತ ಮಟ್ಟದ ಅಧಿಕಾರಿಗಳಾಗಿ ಆಯ್ಕೆಯಾಗಿದ್ದಾರೆ. ಜೊತೆಗೆ ಈ ಭಾಗದ ಜನರಿಗೆ ಧಾರ್ಮಿಕ ಸಂಸ್ಕೃತಿಯನ್ನು ತೋರಿಸಿ ಸನ್ಮಾರ್ಗದಲ್ಲಿ ನಡೆಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಅವರ ನಿಧನದಿಂದ ಮಠದ ಲಕ್ಷಾಂತರ ಭಕ್ತರು ಶೋಕ ಸಾಗರದಲ್ಲಿ ಮುಳುಗಿದ್ದಾರೆ ಎಂದರು.


ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಶ್ರೀಗಳಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇದೆ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಶಿವಪ್ಪ ದೇವರು, ಖಜಾಂಚಿ ನಟರಾಜು, ಮುಖಂಡರಾದ ಮಾದಪ್ಪ ನಂದಿನಿ, ಯುವ ಸಮಿತಿ ಅಧ್ಯಕ್ಷ ಮಲ್ಕುಂಡಿ ಮಹದೇವಸ್ವಾಮಿ ಸೇರಿದಂತೆ ವೀರಶೈವ ಮಹಾಸಭಾದ ನಿರ್ದೇಶಕರುಗಳು ಉಪಸ್ಥಿತರಿದ್ದರು.

ಕುಪ್ಯಾದಲ್ಲಿ ಕನಕ ಜಯಂತಿ ಆಚರಣೆ



ತಿ.ನರಸೀಪುರ, ನ.13– ಭಕ್ತ ಕನಕದಾಸರು ಕೇವಲ ಒಂದು ಜಾತಿಗೆ ಸೀಮಿತರಾದವರಲ್ಲ. ಇಡೀ ಸಮಾಜಕ್ಕೆ ಉತ್ತಮ ಸಾಹಿತ್ಯ ನೀಡುವುದರ ಮೂಲಕ ಸಮಾನತೆ ಸಾರಿದರು ಎಂದು ಕುಪ್ಯಾ ಗ್ರಾಪಂ ಮಾಜಿ ಅಧ್ಯಕ್ಷ ರಾಘವೇಂದ್ರ ಹೇಳಿದರು.

ತಾಲೂಕು ಕುಪ್ಯಾ ಗ್ರಾಪಂ ಕಚೇರಿಯಲ್ಲಿ ಕನಕದಾಸರ ಜಯಂತಿಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಕೀರ್ತನೆಗಳ ಮೂಲಕ ಸಮಾಜದ ಬದಲಾವಣೆಗೆ ಕನಕದಾಸರು ಶ್ರಮಿಸಿದರು. ಸಮಾಜದಲ್ಲಿನ ಕಂದಾಚಾರಗಳನ್ನು ಹೋಗಲಾಡಿಸಲು ತಮ್ಮ ಕೀರ್ತನೆಗಳ ಮೂಲಕ ಶ್ರಮಿಸಿದ್ದಾರೆ. ಕೀರ್ತನೆಗಳ ಮೂಲಕ ಜನರ ಮನೋಭಾವನೆಗಳನ್ನು ಬದಲಾಯಿಸಿ ಒಳ್ಳೆಯ ಆಲೋಚನೆಗಳನ್ನು ಮಾಡುವಂತೆ ಮಾಡಿದ ಸಾಮಾಜಿಕ ಕ್ರಾಂತಿಕಾರಿ ಸಂತರು ಕನಕದಾಸರಾಗಿದ್ದಾರೆ. ಸಮಾಜದಲ್ಲಿ ಸಮಾನತೆಯನ್ನು ತರಲು ಕನಕದಾಸರು ತಮ್ಮ ಕೀರ್ತನೆಗಳಲ್ಲಿ ಹೆಚ್ಚಿನ ಒತ್ತು ನೀಡಿದ್ದರು. ತಮ್ಮ ಭಕ್ತಿಯ ಮೂಲಕ ದೇವರನ್ನು ಒಲಿಸಿಕೊಂಡು ಮಹಾನ್ ಸಂತ ಕನಕರು ಎಂದರು.

ಸಮಾಜದಲ್ಲಿನ ಕಂದಾಚಾರ, ಮೂಢನಂಬಿಕೆ, ಜಾತಿ ವ್ಯವಸ್ಥೆ, ಅಸಮಾನತೆಯನ್ನು ಖಂಡಿಸಿ ಸಮಾಜವನ್ನು ಕೀರ್ತನೆಗಳ ಮೂಲಕ ತಿದ್ದುವ ಕಾರ್ಯ ಮಾಡಿದ್ದಾರೆ. ಅವರ ಚಿಂತನೆಗಳನ್ನು ಯುವ ಸಮುದಾಯ ಅಳವಡಿಸಿಕೊಂಡು ಉತ್ತಮ ಸಮಾಜವನ್ನು ನಿರ್ಮಿಸಬೇಕು. ವರ್ಗ ತಾರತಮ್ಯಕ್ಕೆ ಕೊನೆ ಹಾಡಲು ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಪ್ರಯತ್ನಿಸಿದರು. ಹುಟ್ಟಿನಿಂದ ಶೂದ್ರನಾದರೂ ಜೀವನದಲ್ಲಿ ಶ್ರೇಷ್ಠರಾಗಿ ಸಮಾಜದಲ್ಲಿ ಬೇರುಬಿಟ್ಟಿರುವ ಜಾತಿಪದ್ಧತಿಯನ್ನು ವಾಸ್ತವ ನೆಲೆಗಟ್ಟಿನಲ್ಲಿ ವಿವರಿಸಿ ಜನರಿಗೆ ತಿಳಿವು ನೀಡಿದ ಮಹಾನ್ ದಾರ್ಶನಿಕರಾಗಿದ್ದರು ಎಂದು ಅವರು ನುಡಿದರು.

ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ನಂದಿನಿ ರಾಜೇಶ್ ಪುಷ್ಪಾರ್ಚನೆ ಮಾಡಿದರು ಸದಸ್ಯರಾದ ಭಾಗ್ಯಮ್ಮ, ಗವಿಸಿದ್ದಯ್ಯ, ಗೋವಿಂದ, ಪುಟ್ಟರಾಜು ಅಭಿವೃದ್ಧಿ ಅಧಿಕಾರಿ ಗಜೇಂದ್ರ ಕುಮಾರ, ಕಾರ್ಯದರ್ಶಿ ನಾಗೇಂದ್ರ, ಸಿಬ್ಬಂದಿಗಳಾದ ಕುಮಾರ್, ಸಿದ್ದಪ್ಪಾಜಿ, ಶಿವಸ್ವಾಮಿ ಸೇರಿದಂತೆ ಇತರರು ಹಾಜರಿದ್ದರು.

ಜಮೀನಿನ ವಿಚಾರಕ್ಕೆ ವ್ಯಕ್ತಿ ಮೇಲೆ ಹಲ್ಲೆ

ಹುಣಸೂರು, ನ.13– ದಲಿತನೊಬ್ಬ ತಮ್ಮ ಜಮೀನಿನಲ್ಲಿ ಕೃಷಿ ಚಟುವಟಿಕೆಯಲ್ಲಿ ತೊಡಗಿದ್ದ ವೇಳೆ ವ್ಯಕ್ತಿಯೊಬ್ಬ ಜಮೀನು ನಮ್ಮದೆಂದು ತಕರಾರು ತೆಗೆದು ಗಲಾಟೆ ಮಾಡಿ ಹಲ್ಲೆ ನಡೆಸಿರುವ ಘಟನೆ ಬನ್ನಿಬೀದಿಯಲ್ಲಿ ಸಂಭವಿಸಿದೆ. ನಗರದ ಬನ್ನಿಬೀದಿಯ ಈರಯ್ಯ ಅವರ ಮಗ ಮಹದೇವು(65) ಎಂಬುವವರೆ ಹಲ್ಲೆಗೊಳಗಾಗಿ ಅಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೆಂಡಗಣ್ಣಸ್ವಾಮಿ ಗದ್ದಿಗೆ ಸಮೀಪದ ಹನುಮಂತಪುರ ಗ್ರಾಮದ ವ್ಯಕ್ತಿ ಹಲ್ಲೆ ನಡೆಸಿದವರಾಗಿದ್ದಾರೆ. ಈ ಸಂಬಂಧ ನಗರ ಪೊಲೀಸ್ ಠಾಣೆಯಲ್ಲಿ ಜಾತಿ ನಿಂದನೆ ಮತ್ತು ದೌರ್ಜನ್ಯ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.



ಎನ್.ಸುಕುಮಾರ್ ನಿಧನ



ಹುಣಸೂರು: ಹುಣಸೂರು ನಗರದ ಮಂಜುನಾಥ ಪ್ಲೈನಿಂಗ್ ಮಿಲ್ ಮಾಲಿಕ ಮಾರುತಿ ಬಡಾವಣೆ ನಿವಾಸಿ ಎನ್.ಸುಕುಮಾರ್(73) ಇಂದು ನಿಧನರಾದರು. ಇವರು ಪತ್ನಿ ಇಬ್ಬರು ಪುತ್ರರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ನಾಳೆ (ಶುಕ್ರವಾರ) ಬೆಳಗ್ಗೆ 11 ಗಂಟೆಗೆ ನಗರದ ಬೈಪಾಸ್ ರಸ್ತೆಯ ತಾಲೂಕು ಕಚೇರಿಯ ಪಕ್ಕದಲ್ಲಿರುವ ಚಿರಶಾಂತಿ ಧಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗುರುಮೂರ್ತಿ

ಸರಗೂರು: ಪಟ್ಟಣದ ವೀರಶೈವ ಸಮಾಜದ ರೈತ ಮುಖಂಡ 7ನೇ ವಾರ್ಡ್ ನಿವಾಸಿ ಗುರುಮೂರ್ತಿ (ಮೂರ್ತಿ) ಗುರುವಾರ ಬೆಳಿಗ್ಗೆ ಮೈಸೂರಿನ ನಿವಾಸದಲ್ಲಿ ನಿಧನರಾಗಿದ್ದಾರೆ. ಅವರಿಗೆ 60 ವರ್ಷ ವಯಸ್ಸಾಗಿತ್ತು.

ಮೃತರು ಪತ್ನಿ ಒರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ಮೈಸೂರಿನ ವಿದ್ಯಾರಣ್ಯಪುರಂ ವೀರಶೈವ ಲಿಂಗಾಯಿತ ರುದ್ರಭೂಮಿಯಲ್ಲಿ ಗುರುವಾರ ಸಂಜೆ ನಡೆಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ನ.17ರಂದು ಲಕ್ಷ ದೀಪೋತ್ಸವ, ಕಪಿಲಾ ನದಿಯಲ್ಲಿ ತೆಪ್ಪೋತ್ಸವ

ತಿ.ನರಸೀಪುರ, ನ.13– ಪಟ್ಟಣದ ಪುರಾತನ ಪ್ರಸಿದ್ಧ ಶ್ರೀ ಗುಂಜಾ ನರಸಿಂಹಸ್ವಾಮಿ ದೇವಾಲಯದಲ್ಲಿ ಕಾರ್ತಿಕ ಮಾಸದ ಪ್ರಯುಕ್ತ ನ.17ರ ಸೋಮವಾರ ಸಂಜೆ 6 ಗಂಟೆಗೆ 14 ನೇ ವರ್ಷದ ಲಕ್ಷ ದೀಪೋತ್ಸವವನ್ನು ಹಾಗೂ 6.30 ಗಂಟೆಗೆ ಕಪಿಲಾ ನದಿಯಲ್ಲಿ ತೆಪ್ಪೋತ್ಸವನ್ನು ಶ್ರೀಗುಂಜಾ ನರಸಿಂಹ ಸ್ವಾಮಿ ಸೇವಾ ಸಮಿತಿ ವತಿಯಿಂದ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸೋಮವಾರ ಬೆಳಗ್ಗೆಯಿಂದಲೇ ದೇವಾಲಯದಲ್ಲಿ ಹೋಮ, ಪೂಜೆ ಹಾಗೂ ಮಹಾಮಂಗಳಾರತಿ ನಡೆಯಲಿದ್ದು, ಸೂರ್ಯಾಸ್ತವಾಗುತ್ತಿದ್ದಂತೆ ಲಕ್ಷ ದೀಪೋತ್ಸವದ ದೀಪ ಹಚ್ಚುವ ಕಾರ್ಯ ಪ್ರಾರಂಭಗೊಳ್ಳಲಿದೆ. ಬಳಿಕ ತೆಪ್ಪೋತ್ಸವ ನಡೆಯಲಿದೆ. ದೀಪೋತ್ಸವಕ್ಕೆ ಎಳ್ಳೆಣ್ಣೆ, ಬತ್ತಿ ಹಾಗೂ ಹಣತೆ ಇತ್ಯಾದಿಗಳನ್ನು ಭಕ್ತರು ನೀಡಬಹುದು. ದೇವಾಲಯದ ಆವರಣದಲ್ಲಿ ರಂಗೋಲಿ ಬಿಡಲು, ಹಣತೆ, ಎಣ್ಣೆ ಬತ್ತಿ ಸಜ್ಜುಗೊಳಿಸಲು ಬೆಳಗ್ಗೆ 10 ಗಂಟೆಗೆ ಭಕ್ತಾದಿಗಳು ಆಗಮಿಸಿ ಸೇವೆ ಸಲ್ಲಿಸಬಹುದು. ರಂಗೋಲಿ ಪುಡಿಯನ್ನು ಸಮಿತಿ ವತಿಯಿಂದಲೇ ನೀಡಲಾಗುತ್ತದೆ.



ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಶ್ರೀ ಗುಂಜಾ ನರಸಿಂಹಸ್ವಾಮಿ ಪಾರು ಪತ್ತೆದಾರ್ ಮನವಿ ಮಾಡಿದ್ದಾರೆ.

ಮೂರನೇ ಪುಟದಿಂದ

ಮೇಕೆದಾಟು ಯೋಜನೆಗೆ ಶುಭ ಕಾಲ

ಯಾವುದೇ ಸಮಸ್ಯೆಗಳಿದ್ದರೆ, ನೀವುಗಳು ಕಾವೇರಿ ನೀರು ನಿಯಂತ್ರಣ ಸಮಿತಿ (ಕೆಡಬ್ಲ್ಯೂಆರ್‌ಸಿ) ಹಾಗೂ ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯೂಎಂಎ) ಮತ್ತು ಕೇಂದ್ರ ಜಲ ಆಯೋಗದ ಮುಂದೆ ಅಹವಾಲು ಇಡಬಹುದು ಎಂದು ತಿಳಿಸಿದೆ.

ಕಾವೇರಿ ಜಲ ವಿವಾದಕ್ಕೆ ಸಂಬಂಧಿಸಿದಂತೆ ಯಾವುದೇ ಅರ್ಜಿ ಬಂದರೂ ತ್ವರಿತವಾಗಿ ವಿಲೇವಾರಿ ಮಾಡುವಂತೆಯೂ ಮೂರೂ ಸಂಸ್ಥೆಗಳ ಅಧಿಕಾರಿಗಳಿಗೆ ನ್ಯಾಯಪೀಠ ಸೂಚಿಸಿದೆ. ನಿಮ್ಮ ಆಕ್ಷೇಪಣೆಗಳು ಏನಿದ್ದರೂ ಕಾವೇರಿ ಜಲ ವಿವಾದ ನಿರ್ವಹಣಾ ಅಧಿಕಾರಿಗಳ ಮುಂದಿಡಿ ಎಂದು ಹೇಳುವ ಮೂಲಕ ತಮಿಳುನಾಡು ಸರ್ಕಾರದ ತತ್‌ಕ್ಷಣದ ಅರ್ಜಿಯನ್ನೂ ನ್ಯಾಯಪೀಠ ತಿರಸ್ಕರಿಸಿತು.

ಜಲಾಶಯ ನಿರ್ಮಾಣ ವಿಚಾರದಲ್ಲಿ ನ್ಯಾಯಾಲಯ ಮಧ್ಯಪ್ರವೇಶ ಮಾಡುವುದಿಲ್ಲ. ಮೇಕೆದಾಟು ಯೋಜನೆ ಇನ್ನೂ ಆರಂಭಿಕ ಹಂತದಲ್ಲಿದ್ದು, ಯಾವುದೇ ನಿರ್ಮಾಣ ಕಾರ್ಯ ಆರಂಭವಾಗಿಲ್ಲ. ಈ ಯೋಜನೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಜಲ ಆಯೋಗದಂತಹ ತಜ್ಞ ಸಂಸ್ಥೆಗಳ ಪರಿಶೀಲನೆಯಲ್ಲಿದೆ. ಹೀಗಾಗಿ ನಾವು ಮಧ್ಯಪ್ರವೇಶ ಮಾಡುವುದಿಲ್ಲ ಎಂದು ನ್ಯಾಯಪೀಠ ತಮಿಳುನಾಡು ಅರ್ಜಿಯನ್ನು ವಜಾಗೊಳಿಸಿತು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಅಂಗೀಕರಿಸಿದ ಆದೇಶದ ಪ್ರಕಾರ ಕೇವಲ ವಿಸ್ತೃತ ಯೋಜನಾ ವರದಿಯಷ್ಟೇ ಸಿದ್ಧವಾಗಿದೆ. ಅರ್ಜಿದಾರರ ಆಕ್ಷೇಪಣೆಗಳನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ನಿಯಂತ್ರಣ ಸಮಿತಿ ತಜ್ಞರು ಪರಿಗಣಿಸಿದ ನಂತರ ಕರ್ನಾಟಕ ಸರ್ಕಾರ ಡಿಪಿಆರ್ ಸಿದ್ಧಪಡಿಸಿದೆ.

ಡಿಪಿಆರ್ ಪರಿಗಣನೆಗೆ ಎರಡೂ ಸಂಸ್ಥೆಗಳ ಪೂರ್ವಾನುಮೋದನೆ ಪೂರ್ವಾಪೇಕ್ಷಿತವಾಗಿರುತ್ತದೆ ಎಂಬ ಬಗ್ಗೆ ನಾವು ಗಮನಹರಿಸಬೇಕಿದೆ. ಇದರಿಂದ ತಮಿಳುನಾಡು ತಕರಾರು ಅಪ್ರಸ್ತುತ ಎಂಬುದಾಗಿ ಭಾವಿಸಿ ಅರ್ಜಿಯನ್ನು ವಜಾಗೊಳಿಸಲಾಗಿದೆ ಎಂದು ನ್ಯಾಯಪೀಠ ತಿಳಿಸಿದೆ.

ನಮಗೆ ನ್ಯಾಯ ಸಿಕ್ಕಿದೆ: ಡಿಕೆಶಿ

ಯಾರಿಗೂ ಯಾವುದೇ ಹಿನ್ನಡೆಯಲ್ಲ, ಬದಲಿಗೆ ನ್ಯಾಯಪೀಠದಿಂದ ನ್ಯಾಯ ಸಿಕ್ಕಂತಾಗಿದೆ. ಮೇಕೆದಾಟು, 'ನಮ್ಮ ನೀರು, ನಮ್ಮ ಹಕ್ಕು' ಯೋಜನೆ. ನಾವು ತಮಿಳುನಾಡಿಗೆ ಯಾವುದೇ ರೀತಿ ಅಡ್ಡಿ ಮಾಡುತ್ತಿಲ್ಲ. ಈ ಯೋಜನೆಯಿಂದ ತಮಿಳುನಾಡಿಗೇ ಹೆಚ್ಚು ಲಾಭವಾಗಲಿದೆ. ರಾಜ್ಯದ ಜನರ ಪ್ರಾರ್ಥನೆ, ಜನರ ಕಷ್ಟಕ್ಕೆ ನ್ಯಾಯಾಲಯ ಸ್ಪಂದಿಸಿದೆ ಎಂದರು.

ನ್ಯಾಯಾಲಯದ ತೀರ್ಮಾನದಂತೆ ತಮಿಳುನಾಡು ತನ್ನ ಪಾಲಿನ ನೀರನ್ನು ಪಡೆಯಲಿದೆ, ನಾವು ಮೇಕೆದಾಟು ಯೋಜನೆ ಮುಂದುವರಿಸಿಕೊಂಡು ಹೋಗುತ್ತೇವೆ. ಯೋಜನೆ ನಮ್ಮ ನೆಲದಲ್ಲಿ, ನಮ್ಮ ಹಣದಲ್ಲಿ ಸಾಕಾರಗೊಳ್ಳುತ್ತಿದೆ. ಕರ್ನಾಟಕಕ್ಕೆ ನೀರಿನ ಕೊರತೆ ಎದುರಾದಾಗ ತಮಿಳುನಾಡಿಗೆ ನ್ಯಾಯಮಂಡಳಿ ತೀರ್ಪಿನ ಅನ್ವಯ ನೀರು ಹರಿಸಲು ಸಮತೋಲಿತ ಅಣೆಕಟ್ಟೆ ನೆರವಾಗಲಿದೆ. ಸುಪ್ರೀಂಕೋರ್ಟ್ ತೀರ್ಪು ಬೆಂಗಳೂರು ನಾಗರಿಕರ ಗೆಲುವಾಗಿದೆ, ನಾವೆಲ್ಲರೂ ಮಾನವೀಯತೆ ದೃಷ್ಟಿಯಿಂದ ಒಟ್ಟಾಗಿ ಕೆಲಸ ಮಾಡೋಣ, ತಮಿಳುನಾಡು ಈಗಲಾದರೂ ಯೋಜನೆಗೆ ಸಹಕಾರ ನೀಡಲಿ ಎಂದು ಮನವಿ ಮಾಡುತ್ತೇನೆ. ಯೋಜನೆಗೆ ಸಹಕಾರ ನೀಡದೇ ಸಿಡಬ್ಲ್ಯೂಸಿ ಮುಂದೆ ಬೇರೆ ಆಯ್ಕೆಯೇ ಇಲ್ಲ. ನ್ಯಾಯಾಲಯ ಇಂತಹ ವಿಚಾರದಲ್ಲಿ ಕೇಂದ್ರ ಜಲ ಆಯೋಗಕ್ಕೆ (ಸಿಡಬ್ಲ್ಯೂಸಿ) ಮಾರ್ಗದರ್ಶನ ನೀಡಲಿದ್ದು, ಮಧ್ಯಪ್ರವೇಶ ಮಾಡುವುದಿಲ್ಲ ಎಂದಿದೆ.

ನಿರ್ಮಾಣ ಆರಂಭಕ್ಕೆ ಸಂಪುಟ ಅಸ್ತು

ಚಳವಳಿ ಹಾಗೂ ಕಾನೂನು ಹೋರಾಟ ಎಲ್ಲವೂ ಸಫಲವಾಗಿವೆ. ಇನ್ನು ಯೋಜನೆ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಲು ತೀರ್ಮಾನಿಸಿದ್ದೇವೆ.

ಇದೊಂದು ಸೂಕ್ಷ್ಮ ವಿಷಯವಾಗಿರುವುದರಿಂದ ಸರ್ಕಾರ ಕೈಗೊಳ್ಳುವ ತೀರ್ಮಾನಗಳನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದರು. ಜಲಾನಯನ ಪ್ರದೇಶದಲ್ಲಿ ಹೆಚ್ಚು ಮಳೆ ಬಿದ್ದ ಸಂದರ್ಭದಲ್ಲಿ ಸಮುದ್ರಕ್ಕೆ ವ್ಯರ್ಥವಾಗಿ ಹರಿದು ಹೋಗುವ ನೀರನ್ನು ಸಂಗ್ರಹಿಸಿ ಕುಡಿಯಲು ಮತ್ತು ವಿದ್ಯುತ್ ಉತ್ಪಾದನೆಗೆ ಬಳಕೆ ಮಾಡಿಕೊಳ್ಳುವುದು ಇದರ ಉದ್ದೇಶವಾಗಿದೆ. ಸಂಕಷ್ಟ ಸಮಯದಲ್ಲಿ ಹಿಡಿದಿಟ್ಟ ನೀರನ್ನು ತಮಿಳುನಾಡಿಗೆ ಹರಿಸುವುದು ಯೋಜನೆಯ ಪ್ರಮುಖ ಉದ್ದೇಶ, ಕರ್ನಾಟಕ ಸರ್ಕಾರದ ಈ ನಿಲುವಿನಿಂದ ತಮಿಳುನಾಡು ಆತಂಕಪಡುವ ಅಗತ್ಯವಿಲ್ಲ.

ಸಂಗ್ರಹಿತ ನೀರನ್ನು ಯಾವುದೇ ಕಾರಣಕ್ಕೂ ಕೃಷಿಗೆ ಬಳಕೆ ಮಾಡುವುದಿಲ್ಲ ಎಂಬುದನ್ನು ನಾವು ಈಗಾಗಲೇ ಕೇಂದ್ರಕ್ಕೆ ಮನದಟ್ಟು ಮಾಡಿದ್ದೇವೆ. ಯೋಜನೆಯ ಡಿಪಿಆರ್ ಸಿದ್ಧವಾಗಿದ್ದು ಸುಮಾರು 9,000 ಕೋಟಿ ರೂ. ವೆಚ್ಚದಲ್ಲಿ ಅಣೆಕಟ್ಟೆ ಮತ್ತು ವಿದ್ಯುತ್ ಉತ್ಪಾದನಾ ಘಟಕ ನಿರ್ಮಿಸಿ, 67.16 ಟಿಎಂಸಿ ನೀರನ್ನು ಶೇಖರಣೆ ಮಾಡುವುದು ಇದರ ಉದ್ದೇಶ ಎಂದರು.

ಬೆಳಗಾವಿಯ ಸುವರ್ಣಸೌಧದಲ್ಲಿ ಡಿಸೆಂಬರ್ 8ರಿಂದ ವಿಧಾನಮಂಡಲದ ಚಳಿಗಾಲದ ಅಧಿವೇಶನ 10 ದಿನ ನಡೆಸಲು ಸಂಪುಟ ನಿರ್ಧರಿಸಿದೆ ಎಂದರು.

ಇಂದು ಬಿಹಾರ ವಿಧಾನಸಭಾ ಚುನಾವಣೆ ಫಲಿತಾಂಶ

ಪಟ್ನಾ, ನ.13–ಬಿಹಾರ ವಿಧಾನಸಭಾ ಚುನಾವಣೆಯ ಮತ ಎಣಿಕೆ ಶುಕ್ರವಾರ ಬೆಳಿಗ್ಗೆ 8ಕ್ಕೆ ಆರಂಭವಾಗಲಿದೆ. ಸೋಲು–ಗೆಲುವಿನ ಟ್ರೆಂಡ್ ಬೆಳಿಗ್ಗೆ 9ಕ್ಕೆ ಆರಂಭವಾಗುವ ಸಾಧ್ಯತೆಗಳಿವೆ. ಬಿಹಾರದ 38 ಜಿಲ್ಲೆಗಳಲ್ಲಿ ಒಟ್ಟು 46 ಮತ ಎಣಿಕೆ ಕೇಂದ್ರಗಳನ್ನು ಚುನಾವಣಾ ಆಯೋಗ ವ್ಯವಸ್ಥೆ ಮಾಡಿದೆ.

ಈ ಬಾರಿ ಬಿಹಾರ ಚುನಾವಣೆಯಲ್ಲಿ ದಾಖಲೆಯ ಶೇ.67.13ರಷ್ಟು ಮತದಾನವಾಗಿದೆ. ಒಟ್ಟು 243 ಸದಸ್ಯ ಬಲದ ಬಿಹಾರ ವಿಧಾನಸಭೆಗೆ ನ.6 ಹಾಗೂ ನ.11ರಂದು ಎರಡು ಹಂತಗಳಲ್ಲಿ ಮತದಾನ ನಡೆದಿತ್ತು.

ಮತದಾನಕ್ಕೆ ಒಟ್ಟು 7.45 ಕೋಟಿ ಮತದಾರರು ಅರ್ಹತೆ ಪಡೆದಿದ್ದರು. ಕಣದಲ್ಲಿ 2,616 ಅಭ್ಯರ್ಥಿಗಳಿದ್ದರು. ಮತಗಳು ದಾಖಲಾಗಿರುವ ವಿದ್ಯುನ್ಮಾನ ಮತಯಂತ್ರಗಳು ಮತ್ತು ವಿವಿಪ್ಯಾಟ್‌ಗಳನ್ನು ಭದ್ರತಾ ಕೊಠಡಿಯಲ್ಲಿ ಇಟ್ಟು ಬಿಗಿ ಭದ್ರತೆ ಒದಗಿಸಲಾಗಿದೆ ಎಂದು ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

ಕೇಂದ್ರ ವೀಕ್ಷಕರು ಮತ್ತು ಅಭ್ಯರ್ಥಿಗಳ ಏಜೆಂಟರ ಸಮ್ಮುಖದಲ್ಲಿ ಮತ ಎಣಿಕೆ ನಡೆಯಲಿದೆ. ಇದರ ಸಂಪೂರ್ಣ ಪ್ರಕ್ರಿಯೆಯನ್ನು ನಿರಂತರ ವಿಡಿಯೊ ಮಾಡಲಾಗುತ್ತದೆ. ಮತ ಎಣಿಕೆ ಕೇಂದ್ರಕ್ಕೆ ಎರಡು ಹಂತಗಳ ಭದ್ರತೆ ಒದಗಿಸಲಾಗಿದೆ. ಅರೆ ಸೇನಾ ಪಡೆ, ರಾಜ್ಯ ಪೊಲೀಸ್ ಜತೆಗೆ 24 ಗಂಟೆಗಳ ಸಿಸಿಟಿವಿ ಕ್ಯಾಮೆರಾಗಳ ನಿಗಾ ಕೂಡ ಇರಲಿದೆ ಎಂದು ಆಯೋಗ ಹೇಳಿದೆ.

ಪ್ರತಿಯೊಂದು ಸ್ಟ್ರಾಂಗ್ ರೂಂ ಇರುವಲ್ಲಿ ನಿಯಂತ್ರಣ ಕೊಠಡಿಗಳನ್ನು ತೆರೆಯಲಾಗಿದೆ. ಇಲ್ಲಿ ಆಯಾ ಜಿಲ್ಲೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಭದ್ರತೆ ಹೊಣೆ ಹೊತ್ತಿದ್ದಾರೆ.

ಶುಕ್ರವಾರ ನಡೆಯಲಿರುವ ಮತ ಎಣಿಕೆಯಲ್ಲಿ ಮತಗಟ್ಟೆಗಳ ಸಮೀಕ್ಷೆಗಳಂತೆ ಜೆಡಿಯು ಮುಖ್ಯಸ್ಥ ನಿತೀಶ್ ಕುಮಾರ್ 5ನೇ ಬಾರಿ ಮುಖ್ಯಮಂತ್ರಿ ಗದ್ದುಗೆಗೇರಲಿದ್ದಾರೆಯೇ ಅಥವಾ ತೇಜಸ್ವಿ ಯಾದವ್ ನೇತೃತ್ವದ ಮಹಾಘಟಬಂಧನ್ ಮ್ಯಾಜಿಕ್ ಮಾಡಲಿದೆಯೇ ಎಂಬುದನ್ನು ಇಡೀ ದೇಶವೇ ಕಾತುರದಿಂದ ಕಾದಿದೆ.

ನ. 11ರಂದು ಸಂಜೆ 6ಕ್ಕೆ 2ನೇ ಹಾಗೂ ಕೊನೆಯ ಹಂತದ ಮತದಾನ ಪೂರ್ಣಗೊಂಡ ನಂತರ ವಿವಿಧ ಸಂಸ್ಥೆಗಳು ಚುನಾವಣೋತ್ತರ ಮತಗಟ್ಟೆ ಸಮೀಕ್ಷೆಗಳನ್ನು ಪ್ರಕಟಿಸಿದವು. ಇವುಗಳಲ್ಲಿ ಬಹುತೇಕ ಸಮೀಕ್ಷೆಗಳು ಜೆಡಿಯು–ಬಿಜೆಪಿಯ ಎನ್‌ಡಿಎಗೆ ಬಹುಮತ ನೀಡಿವೆ. ವಿರೋಧ ಪಕ್ಷಗಳ ಇಂಡಿಯಾ ಒಕ್ಕೂಟವು ಆರ್‌ಜೆಡಿ ಪಕ್ಷದ ತೇಜಸ್ವಿ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿ ಎಂದು ಘೋಷಿಸಿತ್ತು. ಸಮೀಕ್ಷೆಗಳು ಈ ಬಣಕ್ಕೆ ಬಹುಮತ ಸಿಗುವುದು ಕಷ್ಟ ಎಂದೇ ಹೇಳಿವೆ. ಆದರೂ ಮತದಾರರ ಚಿತ್ತ ಯಾರತ್ತ ಎಂಬುದಕ್ಕೆ ಶುಕ್ರವಾರ ನಡೆಯಲಿರುವ ಮತ ಎಣಿಕೆ ತೆರೆ ಎಳೆಯಲಿದೆ.

ನಾಳೆ ಸಿಎಂ ನವದೆಹಲಿಗೆ

ಮೈಸೂರು,ನ.13(ಪಿಎಂ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ.15ರಂದು ನವದೆಹಲಿ ಪ್ರವಾಸ ಕೈಗೊಂಡಿದ್ದಾರೆ. ಅಂದು ಬೆಳಗ್ಗೆ 11ಕ್ಕೆ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್–2ರಿಂದ ವಿಮಾನದಲ್ಲಿ ಪ್ರಯಾಣ ಬೆಳೆಸುವ ಮುಖ್ಯಮಂತ್ರಿಗಳು, ಅಂದು ಮಧ್ಯಾಹ್ನ 2.10ಕ್ಕೆ ನವದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತಲುಪಲಿದ್ದಾರೆ.

ಬಳಿಕ ಕೇಂದ್ರ ಸಚಿವರುಗಳ ಸಭೆಯಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ. ನಂತರ ಸಂಜೆ 7ಕ್ಕೆ ನವದೆಹಲಿಯ ದಿ ಒಬೆರಾಯ್ ಬಾಲ್ ರೂಂನಲ್ಲಿ ನಡೆಯುವ 'ದಿಲ್ ಸೇ ವಿತ್ ಕಪಿಲ್‌ಸಿಬಲ್' ಎಂಬ 100ನೇ ಕೃತಿನ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಆ ಬಳಿಕ ರಾತ್ರಿ 10ಕ್ಕೆ ನವದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವ ಅವರು, ಇಲ್ಲಿಂದ ವಿಶೇಷ ವಿಮಾನದಲ್ಲಿ ದೆಹಲಿಯಿಂದ ನಿರ್ಗಮಿಸಿ, 12.30ಕ್ಕೆ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದ್ದಾರೆ.

ಮತ್ತೆ ಪೆಟ್ರೋಲ್, ಡೀಸೆಲ್ ದರ ಏರಿಕೆ ಮೂಲಕ ಜನರ ಜೇಬಿಗೆ ಕತ್ತರಿ

ರಾಜ್ಯ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ

ಬೆಂಗಳೂರು, ನ.13(ಕೆಎಂಶಿ)–ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತೆ ಪೆಟ್ರೋಲ್, ಡೀಸೆಲ್ ದರ ಹೆಚ್ಚಳಕ್ಕೆ ಮುಂದಾಗಿದ್ದು ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ವಿಧಾನ ಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.



ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಕಳೆದ ಜೂನ್ 2024ರಲ್ಲಿ ಪ್ರತಿ ಲೀಟರ್ ಪೆಟ್ರೋಲ್ 3 ರೂ., ಡೀಸೆಲ್ 3.50 ರೂ. ದರ ಏರಿಕೆ ಮಾಡಲಾಗಿತ್ತು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಕಳೆದ ಎರಡೂವರೆ ವರ್ಷದಲ್ಲಿ ಇದುವರೆಗೆ ಡೀಸೆಲ್ ಬೆಲೆ 5.50 ರೂ. ಹಾಗೂ ಪೆಟ್ರೋಲ್ ಬೆಲೆ 3 ರೂ. ಹೆಚ್ಚಳ ಮಾಡುವ ಮೂಲಕ ಜನರ ಮೇಲೆ ತೆರಿಗೆಯ ಭಾರಿ ಹೊರೆ ಹೊರಿಸಲಾಗಿದೆ. ಪ್ರಸಕ್ತ ಸಾಲಿನ ಏಪ್ರಿಲ್‌ನಲ್ಲಿ ಡೀಸೆಲ್ ದರ 2 ರೂ. ಏರಿಕೆ ಮಾಡಿದ್ದು, ಇದೀಗ ಮತ್ತೆ ಪೆಟ್ರೋಲ್, ಡೀಸೆಲ್ ದರ ಪ್ರತಿ ಲೀಟರ್‌ಗೆ ತಲಾ ಒಂದು ರೂ. ಏರಿಕೆ ಮಾಡಲು ರಾಜ್ಯ ಸರ್ಕಾರ ಮುಂದಾಗಿರುವುದು ನಾಚಿಕೇಡಿನ ವಿಷಯ ಎಂದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜನ ವಿರೋಧಿಯಾಗಿದ್ದು, ಇಂತಹ ಆಡಳಿತದಿಂದ ರಾಜ್ಯದ ಜನತೆ ತೀವ್ರ ಬೇಸರಗೊಂಡಿದ್ದಾರೆ.

ಜನರ ಶೋಷಣೆ, ಸರ್ಕಾರದ ದುರಾಡಳಿತ, ಅಸಮರ್ಥತೆ, ಭ್ರಷ್ಟಾಚಾರಕ್ಕೆ ಕನ್ನಡಿಗರು ಬೆಲೆ ತೆರುವಂತಾಗಿದೆ, ಇಂತಹ ಆಡಳಿತ ನಡೆಸುವುದಕ್ಕಿಂತ ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ಮನೆಗೆ ಹೋಗುವುದು ಉತ್ತಮ. ಜನರ ಶೋಷಣೆ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದಿಂದ ಕರ್ನಾಟಕವನ್ನು ಉಳಿಸಬೇಕಿದೆ ಎಂದಿದ್ದಾರೆ.

ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಹೈಕೋರ್ಟ್ ಷರತ್ತುಬದ್ಧ ಅನುಮತಿ

ಬೆಂಗಳೂರು, ನ.13– ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಕೆಲ ಷರತ್ತುಗಳನ್ನು ವಿಧಿಸಿ ಹೈಕೋರ್ಟ್ ಕೊನೆಗೂ ಗುರುವಾರ ಅನುಮತಿ ನೀಡಿದೆ.

ಪಥಸಂಚಲನಕ್ಕೆ ಅನುಮತಿ ಕೋರಿ ಆರ್‌ಎಸ್‌ಎಸ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ. ಶುಕುರೆ ಕಮಲ್ ಅವರು, ನವೆಂಬರ್ 16 ರಂದು 300 ಜನರು ಮತ್ತು 50 ಸದಸ್ಯರ ಬ್ಯಾಂಡ್‌ನೊಂದಿಗೆ ರೂಟ್ ಮಾರ್ಚ್ ನಡೆಸಲು ಅನುಮತಿ ನೀಡಿದ್ದಾರೆ.

ನವೆಂಬರ್ 16ರ ಮಧ್ಯಾಹ್ನ 3.30ರಿಂದ ಸೂರ್ಯಾಸ್ತದವರೆಗೆ ಪಥ ಸಂಚಲನಕ್ಕೆ ಅವಕಾಶ ನೀಡಲಾಗಿದೆ. ಪಥಸಂಚಲನದಲ್ಲಿ 300 ಕಾರ್ಯಕರ್ತರು ಹಾಗೂ 50 ಬ್ಯಾಂಡ್ ವಾದಕರಿಗೆ ಅವಕಾಶ ನೀಡಲಾಗಿದ್ದು, ಒಟ್ಟು 350 ಜನ ಮಾತ್ರ ಭಾಗಿಯಾಗಬೇಕು ಎಂದು ತಿಳಿಸಿದೆ.

ವಿಚಾರಣೆಯ ಸಮಯದಲ್ಲಿ, ಅರ್ಜಿದಾರರನ್ನು ಪ್ರತಿನಿಧಿಸುವ ಹಿರಿಯ ವಕೀಲ ಅರುಣಾ ಶ್ಯಾಮ್, ಕಾರ್ಯಕ್ರಮಕ್ಕೆ ಅವಕಾಶ ನೀಡಿದ್ದಕ್ಕಾಗಿ ಅಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದರು. ಆದರೆ ತಹಶೀಲ್ದಾರ್ ಅವರ ಆದೇಶದಲ್ಲಿನ ಎರಡು ಷರತ್ತುಗಳನ್ನು ಮಾರ್ಪಡಿಸುವಂತೆ ನ್ಯಾಯಾಲಯವನ್ನು ಕೋರಿದರು.

ಸಂಘದ ಶತಮಾನೋತ್ಸವ ಆಚರಣೆ ಮತ್ತು ಈ ಸಂದರ್ಭಕ್ಕೆ ಸಂಬಂಧಿಸಿದ ಸಾರ್ವಜನಿಕ ಭಾವನೆಗಳನ್ನು ಉಲ್ಲೇಖಿಸಿ, ಭಾಗವಹಿಸುವವರ ಮಿತಿಯನ್ನು 300 ರಿಂದ 600ಕ್ಕೆ ಮತ್ತು ಬ್ಯಾಂಡ್ ಸದಸ್ಯರ ಸಂಖ್ಯೆಯನ್ನು 25 ರಿಂದ 50 ಕ್ಕೆ ಹೆಚ್ಚಿಸಬೇಕೆಂದು ಅವರು ಕೋರಿದರು.

ರಾಜ್ಯದ ಪರವಾಗಿ ಹಾಜರಾದ ಅಡ್ವೊಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ, ಭಾಗವಹಿಸುವವರ ಸಂಖ್ಯೆಯನ್ನು ಹೆಚ್ಚಿಸುವ ಮನವಿಯನ್ನು ವಿರೋಧಿಸಿದರು, ಅರ್ಜಿದಾರರು ಹತ್ತಿರದ ಪ್ರದೇಶಗಳಲ್ಲಿ ನಡೆಸಿದ ಇದೇ ರೀತಿಯ ಮೆರವಣಿಗೆಗಳನ್ನು ನಿರ್ಣಯಿಸಿದ ನಂತರ 300 ರ ಸಂಖ್ಯೆಯನ್ನು ನಿಗದಿಪಡಿಸಲಾಗಿದೆ ಎಂದು ಹೇಳಿದರು. ಆದಾಗ್ಯೂ, ಬ್ಯಾಂಡ್ ಬಲವನ್ನು 25 ರಿಂದ 50 ಸದಸ್ಯರನ್ನು ಹೆಚ್ಚಿಸಲು ಅವರು ಆಕ್ಷೇಪಿಸಲಿಲ್ಲ.

ಪ್ರಕರಣ ರದ್ದಿಗೆ ಹೈಕೋರ್ಟ್ ನಕಾರ!

ಪ್ರಕರಣವು ರಾಜಕೀಯ ಪ್ರೇರಿತವಾಗಿದ್ದು, ದೂರಿನಲ್ಲಿ ವಿಶ್ವಾಸಾರ್ಹತೆಯ ಕೊರತೆಯಿದೆ ಎಂದು ವಾದಿಸಿದರು. ದೂರುದಾರರು ಮತ್ತು ಅವರ ಮಗಳು 2024ರ ಫೆಬ್ರವರಿಯಲ್ಲಿ ಬೆಂಗಳೂರು ಪೊಲೀಸ್ ಆಯುಕ್ತರನ್ನು ಹಲವು ಬಾರಿ ಭೇಟಿಯಾಗಿದ್ದರು. ಆದರೆ, ಮಾರ್ಚ್ 14ರವರೆಗೆ ಯಾವುದೇ ಆರೋಪವನ್ನು ಉಲ್ಲೇಖಿಸಲಿಲ್ಲ. ಆಪಾದಿತ ಘಟನೆಯ ಸಮಯದಲ್ಲಿ ಹಾಜರಿದ್ದ ಸಾಕ್ಷಿಗಳು ಯಾವುದೇ ಅಹಿತಕರ ಘಟನೆ ನಡೆದಿಲ್ಲ ಎಂದು ಹೇಳಿದ್ದಾರೆ ಎಂದು ಅವರು ಗಮನಸೆಳೆದರು.

ವಿಶೇಷ ನ್ಯಾಯಾಲಯವು ದಾಖಲೆಯಲ್ಲಿರುವ ವಿಷಯವನ್ನು ಸರಿಯಾಗಿ ಮೌಲ್ಯಮಾಪನ ಮಾಡದೆ ಕಾಗ್ನಿಜೆನ್ಸ್ ಆದೇಶವನ್ನು ಹೊರಡಿಸುವಾಗ ಯಾಂತ್ರಿಕವಾಗಿ ವರ್ತಿಸಿದೆ. ಆರೋಪಗಳು ಆಧಾರರಹಿತ ಮತ್ತು ದುರುದ್ದೇಶಗಳಿಂದ ಕೂಡಿವೆ. ಹೀಗಾಗಿ, ವಿಚಾರಣೆಯನ್ನು ರದ್ದುಗೊಳಿಸುವಂತೆ ಅವರು ಹೈಕೋರ್ಟ್ ಅನ್ನು ಒತ್ತಾಯಿಸಿದರು. ಇದನ್ನು ವಿರೋಧಿಸಿದ ವಿಶೇಷ ಅಭಿಯೋಜಕ ಪ್ರೊಫೆಸರ್ ರವಿವರ್ಮ ಕುಮಾರ್, ವಿಶೇಷ ನ್ಯಾಯಾಲಯವು ಸಂತ್ರಸ್ತೆಯ ಹೇಳಿಕೆ ಸೇರಿದಂತೆ ಸಾಕ್ಷ್ಯಗಳನ್ನು ಸರಿಯಾಗಿ ಪರಿಗಣಿಸಿದೆ. ವಿಚಾರಣಾ ನ್ಯಾಯಾಲಯದ ಆದೇಶವು ತಾರ್ಕಿಕವಾಗಿದೆ ಮತ್ತು ಸರಿಯಾದ ಕಾನೂನಿನ ಅಡಿಯಲ್ಲಿದೆ ಎಂದು ವಾದಿಸಿದರು.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಡಿ.ಕೆ.ಶಿವಕುಮಾರ್ 'ನೀರಿನ ಹೆಜ್ಜೆ' ಪುಸ್ತಕ ಬಿಡುಗಡೆ

ಬೆಂಗಳೂರು, ನ.13– ಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಅವರು ಬರೆದಿರುವ 'ನೀರಿನ ಹೆಜ್ಜೆ' ಪುಸ್ತಕವನ್ನು ನವೆಂಬರ್ 14ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡಲಿದ್ದಾರೆ.



ಕರ್ನಾಟಕದ ಜಲಸಂಪನ್ಮೂಲಗಳ ಇತಿಹಾಸ, ಸವಾಲುಗಳು ಮತ್ತು ಅವಕಾಶಗಳ ಮೇಲೆ ಈ ಪುಸ್ತಕ ಬೆಳಕು ಚೆಲ್ಲುತ್ತದೆ ಎಂದು ಉಪಮುಖ್ಯಮಂತ್ರಿ ಕಚೇರಿ ಗುರುವಾರ ತಿಳಿಸಿದೆ.

ಈ ಕಾರ್ಯಕ್ರಮವು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿದೆ. ಸಚಿವರಾದ ಹೆಚ್.ಕೆ.ಪಾಟೀಲ್, ಎಂ.ಬಿ. ಪಾಟೀಲ್, ಎನ್‌ಎಸ್ ಬೋಸರಾಜು, ಸುಪ್ರೀಂಕೋರ್ಟ್‌ನ ಹಿರಿಯ ವಕೀಲ ಮೋಹನ್ ವಿ ಕಾತರಕಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿಕೆ ತಿಳಿಸಿದೆ.

ರಾಜ್ಯ, ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಜಲ ವಿವಾದಗಳು, ಒಪ್ಪಂದಗಳು, ನ್ಯಾಯಾಲಯದ ತೀರ್ಪುಗಳು, ನೀರಾವರಿ ಯೋಜನೆಗಳು, ಸಮಸ್ಯೆಗಳು ಮತ್ತು ಪರಿಹಾರಗಳ ಚಿತ್ರಣವಿರುವ ನಾನು ಬರೆದಿರುವ ನೀರಿನ ಹೆಜ್ಜೆ ಕೃತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನವೆಂಬರ್ 5ರಂದು ಬಿಡುಗಡೆ ಮಾಡಲಿದ್ದಾರೆ ಎಂದು ಈ ಹಿಂದೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದರು. ಮಾಜಿ ಸಚಿವ ಮತ್ತು ಕಾಂಗ್ರೆಸ್ ಶಾಸಕರಾದ ಹೆಚ್.ವೈ.ಮೇಟಿ ಅವರ ನಿಧನದ ಹಿನ್ನೆಲೆಯಲ್ಲಿ ಬುಧವಾರ ನಿಗದಿಯಾಗಿದ್ದ ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು.

ಮೈಸೂರು, ಮಂಡ್ಯ, ಚಾ.ನಗರ, ಹಾಸನ ಸೇರಿ 9 ಜಿಲ್ಲೆಗಳಲ್ಲಿ

ಕೈಗಾರಿಕಾ ಕಾರಿಡಾರ್ ಯೋಜನೆ ಜಾರಿ ಸಂಬಂಧ ವಾಣಿಜ್ಯ ಸಚಿವ ಪಿಯೂಶ್ ಗೋಯಲ್ ಜೊತೆ ಕುಮಾರಸ್ವಾಮಿ ಚರ್ಚೆ

ನವದೆಹಲಿ,ನ.13– ಮೈಸೂರು, ಮಂಡ್ಯ, ಚಾ.ನಗರ, ಹಾಸನ ಸೇರಿದಂತೆ 9 ಜಿಲ್ಲೆಗಳನ್ನು ಒಳಗೊಂಡ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಯೋಜನೆ(ಎನ್ಐಸಿಡಿಪಿ)ಯ ಅನುಷ್ಠಾನ ಕುರಿತು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವ ಪಿಯೂಶ್ ಗೋಯಲ್ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಿದರು.



ಕೇಂದ್ರ ಸಚಿವರುಗಳಾದ ಪಿಯೂಶ್ ಗೋಯಲ್ ಹಾಗೂ ಹೆಚ್.ಡಿ.ಕುಮಾರಸ್ವಾಮಿ ಎನ್ಐಸಿಡಿಪಿ ಅನುಷ್ಠಾನ ಸಂಬಂಧ ಮಹತ್ವದ ಚರ್ಚೆ ನಡೆಸಿದರು.

ನವದೆಹಲಿಯಲ್ಲಿ ಗುರುವಾರ ವಾಣಿಜ್ಯ ಸಚಿವಾಲಯದ ಕಚೇರಿಯಲ್ಲಿ ಸಚಿವ ಗೋಯಲ್ ಅವರನ್ನು ಭೇಟಿಯಾದ ಕುಮಾರಸ್ವಾಮಿ ಅವರು, ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ, ಕೋಲಾರ, ಮಂಗಳೂರು, ಹುಬ್ಬಳ್ಳಿ–ಧಾರವಾಡ, ರಾಯಚೂರು ಮತ್ತು ಬೀದರ್ ಜಿಲ್ಲೆಗಳನ್ನು ಒಳಗೊಂಡ ಬಹುವ್ಯಾಪಿಯ ಎನ್ಐಸಿಡಿಪಿಯನ್ನು ಅನುಷ್ಠಾನಗೊಳಿಸುವುದರಿಂದ ರಾಜ್ಯದ ಕೈಗಾರಿಕೆ ಕ್ಷೇತ್ರದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದಂತಾಗುತ್ತದೆ ಎಂದು ಮನವಿ ಮಾಡಿದರು.

ಕೈಗಾರಿಕೆ ಕ್ಷೇತ್ರದಲ್ಲಿ ಮುಂಚೂಣಿ ರಾಜ್ಯವಾಗಿರುವ ಕರ್ನಾಟಕದಾದ್ಯಂತ ಸೂಕ್ತ ಕೈಗಾರಿಕಾ ಕಾರಿಡಾರ್ ಯೋಜನೆಯ ಚೌಕಟ್ಟಿನಡಿ ಕೈಗಾರಿಕಾ ಪಾರ್ಕ್‌ಗಳನ್ನು ಸ್ಥಾಪಿಸುವುದು, ಪ್ರಧಾನಿ ಮೋದಿ ಅವರ ಸಂಕಲ್ಪದಂತೆ ಪ್ರಾದೇಶಿಕ ಕೈಗಾರಿಕಾ ಬೆಳವಣಿಗೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಸಾಗಾಣಿಕೆ ಮೂಲಸೌಕರ್ಯ ಬಲಪಡಿಸುವುದು, ಕರ್ನಾಟಕದ ಉದ್ದಗಲಕ್ಕೂ ಬೃಹತ್ ಪ್ರಮಾಣದಲ್ಲಿ ಉದ್ಯೋಗಾವಕಾಶ ಸೃಷ್ಟಿಸುವುದು ಸೇರಿದಂತೆ ಹಲವು ಆಶಯಗಳಿಗೆ ಈ ಯೋಜನೆ ನೆರವಾಗಲಿದೆ ಎಂದು ಮನವರಿಕೆ ಮಾಡಿಕೊಟ್ಟರು.

ಈ ಯೋಜನೆ ಅನುಷ್ಠಾನದಿಂದ ಸಾಗಾಣಿಕೆ ಸುಲಭವಾಗುವ ಮೂಲಕ ಕೈಗಾರಿಕಾಭಿವೃದ್ಧಿ ವೇಗ–ಗತಿಯಲ್ಲಿ ಸಾಗುತ್ತದೆ. ಉದ್ದೇಶಿತ ಜಿಲ್ಲೆಗಳಲ್ಲಿ ಈ ಯೋಜನೆ ಬಂದರೆ ಇಡೀ ರಾಜ್ಯಕ್ಕೆ ಸಮಗ್ರವಾಗಿ ಅನುಕೂಲ ಸಾಧ್ಯವಿದೆ. ಮುಖ್ಯವಾಗಿ ಈ ಪ್ರದೇಶಗಳು ಸಾಮೂಹಿಕ ಕೈಗಾರಿಕಾ ಅಭಿವೃದ್ಧಿ ಜೊತೆಗೆ ಸಮತೋಲಿತ ಪ್ರಾದೇಶಿಕ ಬೆಳವಣಿಗೆಗೂ ಸಹಕಾರಿಯಾಗಲಿದೆ. ಒಟ್ಟಾರೆ ಈ ಯೋಜನೆಯು ರಾಜ್ಯದ ಕೈಗಾರಿಕೆ ಅಭಿವೃದ್ಧಿಯ ದಿಕ್ಕು ಬದಲಿಸಲಿದೆ ಎಂದು ಮನದಟ್ಟು ಮಾಡಿದರು.

ಸಚಿವರ ಸಕಾರಾತ್ಮಕ ಸ್ಪಂದನೆ: ಸಚಿವ ಗೋಯಲ್ ಅವರೊಂದಿಗಿನ ಮಹತ್ವದ ಚರ್ಚೆ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಸಚಿವ ಕುಮಾರಸ್ವಾಮಿ ಅವರು, ಈ ಪ್ರಸ್ತಾವನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿ, ಯೋಜನೆಯ ಅನುಷ್ಠಾನದ ಬಗ್ಗೆ ಆಸಕ್ತಿ ವ್ಯಕ್ತಪಡಿಸಿದ್ದಲ್ಲದೆ, ಪ್ರಧಾನಿ ಮೋದಿ ನೇತೃತ್ವದಲ್ಲಿ ಉತ್ಪಾದನೆ ಮತ್ತು ಕೈಗಾರಿಕಾ ಸ್ಪರ್ಧಾತ್ಮಕತೆಯನ್ನು ಬಲಪಡಿಸುವ ಕೇಂದ್ರ ಸರ್ಕಾರದ ವಿಶಾಲ ದೃಷ್ಟಿಕೋನಕ್ಕೆ ಅನುಗುಣವಾಗಿ ಈ ಉಪಕ್ರಮವನ್ನು ದೊಡ್ಡ ಪ್ರಮಾಣದಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾಗಿ ತಿಳಿಸಿದ್ದಾರೆ.

ಸಮತೋಲಿತ ಬೆಳವಣಿಗೆ: ಪ್ರಸ್ತಾವಿತ ಕೈಗಾರಿಕಾ ಪಾರ್ಕ್‌ಗಳು ದೊಡ್ಡ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಸುವ, ಪ್ರಾದೇಶಿಕ ಪೂರೈಕೆ ಸರಪಳಿಯ ಸಂಪರ್ಕಗಳನ್ನು ಮತ್ತಷ್ಟು ಬಲಪಡಿಸುತ್ತವೆ. ಹುಬ್ಬಳ್ಳಿ–ಧಾರವಾಡ ಮತ್ತು ಮಂಗಳೂರಿನಲ್ಲಿ ಸಾಗಣೆ ಮತ್ತು ಉತ್ಪಾದನೆ, ರಾಯಚೂರಿನಲ್ಲಿ ಕೃಷಿ ಸಂಸ್ಕರಣೆ, ಮೈಸೂರು ಮತ್ತು ಕೋಲಾರದಲ್ಲಿ ಮೌಲ್ಯವರ್ಧಿತ ವಲಯಗಳ ವಿಸ್ತರಣೆ ಸೇರಿದಂತೆ ವಿಶೇಷ ಕೈಗಾರಿಕಾ ಸಮೂಹಗಳಿಗೆ ಉತ್ತೇಜನ ದೊರಕುತ್ತದೆ ಎಂದು ಸಚಿವ ಕುಮಾರಸ್ವಾಮಿ ಆಶಯ ವ್ಯಕ್ತಪಡಿಸಿದ್ದಾರೆ.

ಕಬ್ಬು ತುಂಬಿದ ಟ್ರ್ಯಾಕ್ಟರ್ ಬೆಂಕಿಗಾಹುತಿ ಸರ್ಕಾರದ ವೈಫಲ್ಯಕ್ಕೆ ಸ್ಪಷ್ಟ ನಿದರ್ಶನ

ಬೆಂಗಳೂರು, ನ.13– ಕಬ್ಬು ತುಂಬಿದ್ದ ಟ್ರ್ಯಾಕ್ಟರ್‌ಗಳು ಬೆಂಕಿಗೆ ಆಹುತಿಯಾಗಿರುವುದು ರಾಜ್ಯದ ಕಾಂಗ್ರೆಸ್ ಸರ್ಕಾರದ ವೈಫಲ್ಯಕ್ಕೆ ಸ್ಪಷ್ಟ ನಿದರ್ಶನ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಪ್ರತಿಕ್ರಿಯಿಸಿರುವ ಅವರು, ಕಬ್ಬು ಬೆಳೆಗಾರರ ಸಂಕಷ್ಟ ಬಿಗಡಾಯಿಸಿದೆ. ಮುಧೋಳದ ಸಕ್ಕರೆ ಕಾರ್ಖಾನೆ ಯಾರ್ಡ್‌ನಲ್ಲಿ ನಿಂತಿದ್ದ ಕಬ್ಬು ತುಂಬಿದ್ದ ಟ್ರ್ಯಾಕ್ಟರುಗಳು ಬೆಂಕಿಗೆ ಆಹುತಿ ಆಗಿರುವುದು ನನಗೆ ತೀವ್ರ ದಿಗ್ಭ್ರಮೆ ಉಂಟು ಮಾಡಿದೆ. ಇದು ಕಾಂಗ್ರೆಸ್ ಸರ್ಕಾರದ ವೈಫಲ್ಯಕ್ಕೆ ಸ್ಪಷ್ಟ ನಿದರ್ಶನ. ಬೆಳಗಾವಿಯಲ್ಲಿ ರೈತರು ಹೋರಾಟಕ್ಕಿಳಿದಾಗ ಆ ಕ್ಷಣಕ್ಕೆ ಮೂಗಿಗೆ ತುಪ್ಪ ಸವರಿದ ಸರ್ಕಾರ, ಇಡೀ ಕಬ್ಬು ಬೆಳೆಗಾರರ ಬಿಕ್ಕಟ್ಟನ್ನು ನಿರ್ವಹಿಸುವಲ್ಲಿ ವೈಫಲ್ಯ ಕಂಡಿತು. ಅದರ ಪರಿಣಾಮವೇ ಮುಧೋಳದಲ್ಲಿ ರೈತರ ತಾಳ್ಮೆಯ ಕಟ್ಟೆಯೊಡೆಯುವಂತೆ ಮಾಡಿದೆ ಎಂದಿದ್ದಾರೆ.

ಅಕ್ಕಿ ಮೇಲೆ ಆಸೆ, ನೆಂಟರ ಮೇಲೆ ಪ್ರೀತಿ ಅನ್ನುವ ಲಾಭಕೋರ ಧೋರಣೆಯನ್ನು ಸರ್ಕಾರ ಬಿಡಬೇಕು. ರೈತರ ಸಂಕಷ್ಟವನ್ನು ಅಧಿಕಾರದ ಅಮಲುಗಣ್ಣಿನಿಂದ ನೋಡಬಾರದು. ಹೃದಯ ವೈಶಾಲ್ಯದಿಂದ ಕಾಣುವ ಔದಾರ್ಯ ತೋರಬೇಕು. ಮುಧೋಳದ ರೈತರ ಜತೆ ನಾನೂ ಇದ್ದೇನೆ. ರಾಜ್ಯ ಸರ್ಕಾರ ತಕ್ಷಣವೇ ಮಧ್ಯಪ್ರವೇಶಿಸಿ, ಬಿಕ್ಕಟ್ಟನ್ನು ತಿಳಿಗೊಳಿಸಬೇಕು. ಕಬ್ಬು ಬೆಳೆಗಾರರ ಸಂಕಷ್ಟ ಮತ್ತೆ ಸೃಷ್ಟಿಯಾಗದಂತೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಸರಕಾರವನ್ನು ಆಗ್ರಹಿಸುತ್ತೇನೆ ಎಂದಿದ್ದಾರೆ.

ಪತ್ನಿ ಮನೆಯಲ್ಲಿದ್ದಾಗಲೇ ಬೀಗ ಮುರಿದು ಕಳ್ಳತನ; ಪತಿ ದೂರು

ಕ್ರೈಂ ಬಾಕ್ಸ್

ಮೈಸೂರು, ನ.13– ಮಹಿಳೆ ಮನೆಯಲ್ಲಿ ಮಲಗಿದ್ದಾಗಲೇ ಖದೀಮರು ಬಾಗಿಲು ಬೀಗ ಮೀಟಿ ಹಾಡಹಗಲೇ ಕಳ್ಳತನ ಮಾಡಿರುವುದಾಗಿ ಮೈಸೂರಿನ ಕೆ.ಆರ್. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ದತ್ತನಗರ ನಿವಾಸಿ, ಚಾಲಕ ನಾಗೇಂದ್ರ ಅವರ ಮನೆಯಲ್ಲಿ ನ.1ರಂದು ಮಧ್ಯಾಹ್ನ ಈ ಘಟನೆ ನಡೆದಿದೆ ಎಂದು ತಡವಾಗಿ ನಿನ್ನೆ ದೂರು ನೀಡಲಾಗಿದೆ. 25 ಸಾವಿರ ನಗದು ಹಾಗೂ 95 ಸಾವಿರ ಮೌಲ್ಯದ 2 ಚಿನ್ನದ ಉಂಗುರಗಳು ಕಳುವಾಗಿವೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಅಂದು ಸರ್ಕಾರಿ ರಜೆ ಇದ್ದ ಕಾರಣ ಮನೆಯಲ್ಲಿಯೇ ಇದ್ದೆ. ಪತ್ನಿಯೂ ತಾವು ಕೆಲಸ ಮಾಡುವ ಸ್ಥಳದಲ್ಲಿ ರಾಜ್ಯೋತ್ಸವ ಆಚರಣೆಯಲ್ಲಿ ಭಾಗವಹಿಸಿ, ಮನೆಗೆ ಬಂದು ಕೊಠಡಿಯಲ್ಲಿ ಮಲಗಿದ್ದರು. ಮಧ್ಯಾಹ್ನ 1.30ರ ವೇಳೆಗೆ ಮನೆಗೆ ಬೀಗ ಹಾಕಿಕೊಂಡು, ಸ್ನೇಹಿತನನ್ನು ಭೇಟಿ ಮಾಡಲು ಹೋಗಿದ್ದೆ. ಮಧ್ಯಾಹ್ನ 2.45ರ ವೇಳೆಗೆ ವಾಪಸ್ಸಾದಾಗ ಮನೆಯ ಬಾಗಿಲು ಸ್ವಲ್ಪ ತೆರೆದಿತ್ತು. ಅದರ ಲಾಕ್ ಮುರಿದಿದ್ದರಿಂದ ಗಾಬರಿಯಿಂದ ಒಳಹೋಗಿ ನೋಡಿದಾಗ ಹಾಲ್‌ನಲ್ಲಿದ್ದ ಬೀರುವಿನ ಲಾಕರ್ ಮೀಟಿ, ತೆಗೆಯಲಾಗಿತ್ತು. ಅದರಲ್ಲಿದ್ದ ಹಣ ಹಾಗೂ ಉಂಗುರಗಳು ಕಳುವಾಗಿದ್ದವು. ಇದು ಪತ್ನಿಯ ಗಮನಕ್ಕೂ ಬಂದಿಲ್ಲ ಎಂದು ನಾಗೇಂದ್ರ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮನೆಯಲ್ಲೇ ವೇಶ್ಯಾವಾಟಿಕೆ; ಸಿಸಿಬಿ ಪೊಲೀಸರಿಂದ ವ್ಯಕ್ತಿ ವಶ

ಮೈಸೂರು, ನ.13– ಮನೆಯಲ್ಲೇ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಆರೋಪದಡಿ ವ್ಯಕ್ತಿಯೊಬ್ಬನನ್ನು ಸಿಸಿಬಿ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಆಲನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಶಾಂತವೇರಿ ಗೋಪಾಲಗೌಡನಗರದ ಮನೆಯೊಂದರಲ್ಲಿ ಮಹಿಳೆಯನ್ನು ಕರೆಸಿಕೊಂಡು ವೇಶ್ಯಾವಾಟಿಕೆ ದಂಧೆ ನಡೆಸುತ್ತಿರುವ ಬಗ್ಗೆ ಖಚಿತ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಸಿಸಿಬಿ ಸಬ್‌ಇನ್ಸ್‌ಪೆಕ್ಟರ್ ಜ್ಯೋತ್ಸ್ನಾರಾಜ್ ಹಾಗೂ ಸಿಬ್ಬಂದಿ ದಾಳಿ ನಡೆಸಿದ್ದಾರೆ. ಈ ಸಂಬಂಧ ಆಲನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಳೆ ಶಾಶ್ವತ ಸೇವಾ ಶಾಲೆಯಲ್ಲಿ ರಾಜ್ಯೋತ್ಸವ

ಮೈಸೂರು,ನ13(ಎಂಟಿವೈ)– ಆಲನಹಳ್ಳಿಯ ಗಿರಿದರ್ಶಿನಿ ಬಡಾವಣೆಯ ಶಾಶ್ವತ ಸೇವಾ ಶಾಲೆಯಲ್ಲಿ ನ. 15 ರ ಸಂಜೆ 5.30ಕ್ಕೆ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಚರಿಸಲಾಗಿದ್ದು, ಎಸ್‌ಎಸ್‌ಎಲ್‌ಸಿಯಲ್ಲಿ 625 ಕ್ಕೆ 625 ಅಂಕ ಪಡೆದ ವಿದ್ಯಾರ್ಥಿಗಳಿಗೆ ಪುರಸ್ಕಾರ ಹಾಗೂ ಪೂಜ್ಯ ಆಯಿ ಮಾತಾಜಿ ಪುರಸ್ಕಾರ ಪ್ರದಾನ ಮಾಡುತ್ತಿರುವುದಾಗಿ ಎಂದು ನಿವೃತ್ತ ಪ್ರಾಚಾರ್ಯ ಶಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625 ಅಂಕ ಪಡೆದಿರುವ ಒಟ್ಟು 13 ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಗುವುದು. ಕಾರ್ಯಕ್ರಮವನ್ನು ಅಪರ ಜಿಲ್ಲಾಧಿಕಾರಿ ಡಾ.ಪಿ. ಶಿವರಾಜು ಉದ್ಘಾಟಿಸಿ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಿದ್ದಾರೆ. ಬಿಇಓ ಎಂ.ಪ್ರಕಾಶ್ ಜ್ಞಾನಲೋಕ ಸಂಚಿಕೆ ಬಿಡುಗಡೆಗೊಳಿಸಲಿದ್ದಾರೆ. ಆರು ಮಂದಿ ಪ್ರಸಿದ್ಧ ಕಲಾವಿದರಿಗೆ ಶಾಶ್ವತ ಕಲಾಸೇವಾ ಪ್ರಶಸ್ತಿ ಪ್ರದಾನ ಮಾಡಲಾಗುವುದು. ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ಸಹಾ ನಡೆಸಿಕೊಡಲಿದ್ದಾರೆಂದರು.

ಮೈಸೂರು ವೆಸ್ಟ್ ಲಯನ್ಸ್ ಸೇವಾನಿಕೇತನ ಶಾಲೆಯಲ್ಲಿ ರಾಜ್ಯೋತ್ಸವ

ಮೈಸೂರು, ನ.13– ಮೈಸೂರಿನ ಗೋಕುಲಂನಲ್ಲಿರುವ ಮೈಸೂರು ವೆಸ್ಟ್ ಲಯನ್ಸ್ ಸೇವಾನಿಕೇತನ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಅದ್ಧೂರಿಯಾಗಿ ಆಚರಿಸಲಾಯಿತು.

ಶಾಲೆಯ ಪ್ರಾಂಶುಪಾಲರಾದ ಡಾ.ರೂಪಾ ಕರುಂಬಯ್ಯ ಹಾಗೂ ಉಪ ಪ್ರಾಂಶುಪಾಲರಾದ ಶ್ರೀಮತಿ ಪ್ರತಿಮಾ ಅವರು ಕನ್ನಡ ಜ್ಯೋತಿಯನ್ನು ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಮೈಸೂರು ವೆಸ್ಟ್ ಲಯನ್ಸ್ ಸೇವಾನಿಕೇತನ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಬಳಿಕ ಪ್ರಾಂಶುಪಾಲೆ ಡಾ.ರೂಪಾ ಕರುಂಬಯ್ಯ ಮಾತನಾಡಿ, ನಮ್ಮ ನೆಲ, ಜಲ, ಭಾಷೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ. ಈ ನೆಲದಲ್ಲಿರುವ ಪ್ರತಿಯೊಬ್ಬರೂ ಕನ್ನಡಿಗರಾಗಿಯೇ ಬಾಳಬೇಕು. ಕನ್ನಡ ಭಾಷೆಯ ಗತ ವೈಭವವನ್ನು ಅರಿತು, ಸಂಸ್ಕಾರವಂತರಾಗಿ ಬದುಕಬೇಕು. ಯಾವುದೇ ಭಾಷೆಗಳನ್ನೂ ಕಲಿತರೂ ಕನ್ನಡವನ್ನು ಬಳಸಿ ಮೆರೆಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲೆಯ ಕನ್ನಡ ವಿಭಾಗದ ಮುಖ್ಯಸ್ಥ ಎಸ್.ಶಾಂತಕುಮಾರ್, ರಮಾಮಣಿ, ಹೇಮಲತಾ, ಶ್ವೇತಾ ಸೇರಿದಂತೆ ಎಲ್ಲಾ ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ದೆಹಲಿ ಸ್ಫೋಟದ 'ಬ್ಲೂ ಪ್ರಿಂಟ್' ರೆಡಿಯಾಗಿದ್ದ 'ಅಲ್ ಫಲಾಹ್' ವಿವಿ ವೆಬ್‌ಸೈಟ್ ಬಂದ್

ಫರೀದಾಬಾದ್, ನ.13– ದೆಹಲಿ ಬಾಂಬ್ ಸ್ಫೋಟ ಪ್ರಕರಣದ ಆರೋಪಿಗಳು ನಂಟು ಹೊಂದಿರುವ ಹರ್ಯಾಣದ ಫರೀದಾಬಾದ್‌ನಲ್ಲಿರುವ ಅಲ್ ಫಲಾದ್ ವಿಶ್ವವಿದ್ಯಾಲಯವು ತನ್ನ ಅಧಿಕೃತ ಜಾಲತಾಣವನ್ನು ನಿಷ್ಕ್ರಿಯಗೊಳಿಸಿದೆ. ದೆಹಲಿ ಸ್ಫೋಟದ ಆರೋಪಿಗಳು ಈ ವಿವಿಯೊಂದಿಗೆ ನಂಟು ಹೊಂದಿರುವ ಹಿನ್ನೆಲೆಯಲ್ಲಿ ಆ ವಿವಿಯ ಆಡಳಿತ ಮಂಡಳಿಗೆ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ (ನ್ಯಾಕ್) ನೋಟಿಸ್ ನೀಡಿತ್ತು. ಅದರ ಬೆನ್ನಲ್ಲೇ, ಆ ವೆಬ್‌ಸೈಟ್ ಹ್ಯಾಕ್ ಆಗಿತ್ತು. ಈ ಎಲ್ಲಾ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಆ ವಿವಿಯ ಅಧಿಕೃತ ವೆಬ್ ಸೈಟ್ ಅನ್ನು ನಿಷ್ಕ್ರಿಯಗೊಳಿಸಲಾಗಿದೆ.

ದೆಹಲಿ ಬಾಂಬ್ ಸ್ಫೋಟದಲ್ಲಿ ಭಾಗಿಯಾಗಿರುವ ಎಲ್ಲಾ ವೈದ್ಯ ಆರೋಪಿಗಳು ಇದೇ ವಿವಿಯೊಂದಿಗೆ ನಂಟು ಹೊಂದಿದ್ದವರು ಎಂದು ತಿಳಿದುಬಂದಿದೆ. ವಿಶ್ವವಿದ್ಯಾಲಯದ ನಂ. 17 ಕಟ್ಟಡದಲ್ಲಿರುವ ದೆಹಲಿ ಸ್ಫೋಟದ ಆರೋಪಿಗಳಲ್ಲೊಬ್ಬನಾದ ಡಾ. ಮುಜಾಮ್ಮಿಲ್‌ಗೆ ಸೇರಿದ ರೂಮ್‌ನಲ್ಲಿ ನಡೆಯುತ್ತಿದ್ದ ಸಭೆಯಲ್ಲಿ ಮುಜಾಮ್ಮಿಲ್ ಜೊತೆಗೆ ಉಗ್ರ ಡಾ. ಉಮರ್, ಡಾ. ಶಾಹೀನ್, ಸಯ್ಯದ್ ಕೂಡ ಭಾಗವಹಿಸುತ್ತಿದ್ದರು. ಇವರೊಂದಿಗೆ ಉಗ್ರ ಆದೀಲ್ ಕೂಡ ರಹಸ್ಯವಾಗಿ ಪಾಲ್ಗೊಳ್ಳುತ್ತಿದ್ದರು. ಆ ಸಭೆಗಳಲ್ಲಿ ದೆಹಲಿ, ಉತ್ತರ ಪ್ರದೇಶದಲ್ಲಿ ಸ್ಫೋಟಗಳನ್ನು ನಡೆಸುವ ಬಗ್ಗೆ ಸಂಚು ರೂಪಿಸುತ್ತಿದ್ದರು.

ಸಾಮಾನ್ಯವಾಗಿ ವಿಶ್ವವಿದ್ಯಾಲಯಗಳಲ್ಲಿನ ಬೋಧನಾ ಗುಣಮಟ್ಟ, ಅಲ್ಲಿನ ವಿದ್ಯಾರ್ಥಿಗಳ ಜ್ಞಾನಾರ್ಜನೆಯ ಗುಣಮಟ್ಟ, ಅಲ್ಲಿರುವ ಕಲಿಕಾ ಸೌಕರ್ಯಗಳನ್ನು ಪರಿಶೀಲಿಸಿ ನ್ಯಾಕ್ ಸಮಿತಿಯು, ನಾನಾ ವಿಶ್ವವಿದ್ಯಾಲಯಗಳಿಗೆ ಎ, ಬಿ, ಸಿ, ಡಿ ಶ್ರೇಣಿಗಳನ್ನು ನೀಡುತ್ತದೆ. ಅಲ್ ಫಲಾಹ್ ವಿಶ್ವವಿದ್ಯಾಲಯವು ತನ್ನ ವೆಬ್‌ಸೈಟ್‌ನಲ್ಲಿ ನ್ಯಾಕ್ ವತಿಯಿಂದ 'ಎ' ಗ್ರೇಡ್ ಪಡೆದಿರುವ ವಿಶ್ವವಿದ್ಯಾಲಯ ಎಂದು ಹೇಳಿಕೊಂಡಿತ್ತು. ಅಸಲಿಗೆ ಆ ವಿವಿಯು ನ್ಯಾಕ್‌ನಲ್ಲಿ ತನ್ನ ಹೆಸರನ್ನು ನೊಂದಾಯಿಸಿಯೇ ಇಲ್ಲ. ಜೊತೆಗೆ ತನ್ನ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ಗ್ರೇಡಿಂಗ್ ನೀಡಬೇಕೆಂದು ಅದು ನ್ಯಾಕ್ ಸಮಿತಿಗೆ ಈವರೆಗೆ ಒಂದೇ ಒಂದು ಅರ್ಜಿಯನ್ನೂ ಸಲ್ಲಿಸಿಲ್ಲ. ಹಾಗಿದ್ದರೂ ತನಗೆ ನ್ಯಾಕ್ ವತಿಯಿಂದ 'ಎ' ಗ್ರೇಡ್ ಸಿಕ್ಕಿದೆ ಎಂದು ವೆಬ್‌ಸೈಟ್‌ನಲ್ಲಿ ಹಾಕಿಕೊಂಡಿತ್ತು. ಈ ವಿಚಾರವನ್ನು ಕೂಡ ನ್ಯಾಕ್ ಸಮಿತಿಯು ಗಂಭೀರವಾಗಿ ಪರಿಗಣಿಸಿದೆ.


ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಗೆ ಪತ್ರ ಬರೆದಿರುವ ನ್ಯಾಕ್, ವೆಬ್‌ಸೈಟ್‌ನಲ್ಲಿ ಹಾಕಲಾಗಿರುವ ನ್ಯಾಕ್ ಮಾಹಿತಿಯನ್ನು ಡಿಲೀಟ್ ಮಾಡಬೇಕು ಎಂದು ಸೂಚಿಸಿದೆಯಲ್ಲದೆ, ವಿಶ್ವವಿದ್ಯಾಲಯದ ವಿರುದ್ಧ ಕ್ರಮ ಜರುಗಿಸುವುದಾಗಿಯೂ ತಿಳಿಸಿದೆ ಅಷ್ಟೇ ಅಲ್ಲದೆ, ಯುಜಿಸಿ, ಎನ್ಎಂಸಿ, ಅಲ್ – ಫಲಾಹ್ ವಿವಿಯ ಮಾನ್ಯತೆಯನ್ನು ರದ್ದುಗೊಳಿಸಲು ಸೂಚಿಸುವುದಾಗಿ ಎಚ್ಚರಿಸಿದೆ.

ಮುಕ್ತ ವಿವಿ ಬ್ಯಾಂಕಿಂಗ್ ಪರೀಕ್ಷೆ ತರಬೇತಿ ಶಿಬಿರ ಪ್ರಯುಕ್ತ ಮಾರ್ಗದರ್ಶನ ಕಾರ್ಯಕ್ರಮ

ಬ್ಯಾಂಕಿಂಗ್ ಕ್ಷೇತ್ರದ ಉದ್ಯೋಗ ಆಯ್ಕೆ ಪ್ರಕ್ರಿಯೆ ಭ್ರಷ್ಟಾಚಾರ ಮುಕ್ತ

ಮೈಸೂರು,ನ.13(ಪಿಎಂ)– ಪ್ರಸ್ತುತ ಬ್ಯಾಂಕಿಂಗ್ ಕ್ಷೇತ್ರದ ಉದ್ಯೋಗ ಭ್ರಷ್ಟಾಚಾರ ಮುಕ್ತ ಮತ್ತು ಪಾರದರ್ಶಕ ಆಯ್ಕೆಗೆ ದೇಶದಲ್ಲೇ ಹೆಸರಾಗಿದೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ್‌ನ (ಎಸ್‌ಬಿಐ) ಮುಖ್ಯ ವ್ಯವಸ್ಥಾಪಕ ಕಲ್ಯಾಣ್ ಕುಮಾರ್ ಅಭಿಪ್ರಾಯಪಟ್ಟರು.

ಮೈಸೂರಿನ ಮುಕ್ತ ಗಂಗೋತ್ರಿಯ ಸಭಾಂಗಣದಲ್ಲಿ ಮುಕ್ತ ವಿವಿಯ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದಿಂದ ಆಯೋಜನೆಗೊಂಡಿರುವ ಬ್ಯಾಂಕಿಂಗ್ ಮತ್ತು ಕೇಂದ್ರ ಸರ್ಕಾರದ ಹುದ್ದೆಗಳ ನೇಮಕಾತಿ ಪರೀಕ್ಷೆಗಳ 50 ದಿನಗಳ ತರಬೇತಿ ಶಿಬಿರದ ಪ್ರಯುಕ್ತ ಶಿಬಿರಾರ್ಥಿಗಳಿಗೆ ಮಂಗಳವಾರ ಹಮ್ಮಿಕೊಂಡಿದ್ದ ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಬ್ಯಾಂಕಿಂಗ್ ಪರೀಕ್ಷೆಯ ತರಬೇತಿ ಶಿಬಿರಾರ್ಥಿಗಳಿಗೆ ಮಾರ್ಗದರ್ಶನ ಕಾರ್ಯಕ್ರಮ ನಡೆಯಿತು.

ಸರ್ಕಾರಿ ಉದ್ಯೋಗಗಳ ಆಯ್ಕೆ ಪ್ರಕ್ರಿಯೆ ಹಲವು ಬಾರಿ ವಿವಾದಗಳಿಗೆ ಒಳಗಾಗಿ ನಾಲ್ಕೈದು ವರ್ಷಗಳು ಹಿಡಿಯುತ್ತಿವೆ. ಆದರೆ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕೇವಲ ಆರು ತಿಂಗಳೊಳಗಾಗಿ ಅರ್ಜಿ ಸಲ್ಲಿಕೆಯಿಂದ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ. ಜೊತೆಗೆ ಬ್ಯಾಂಕಿಂಗ್ ಮತ್ತು ಕೇಂದ್ರ ಸರ್ಕಾರದ ಹುದ್ದೆಗಳಿಗೆ ಅತ್ಯುತ್ತಮ ವೇತನ ಮತ್ತು ಇತರೆ ಆಕರ್ಷಕ ಭತ್ಯೆಗಳಿರುವುದರಿಂದ ಗೌರವಯುತ ಜೀವನ ನಡೆಸಲು ಸಾಧ್ಯವಿದೆ ಎಂದು ಹೇಳಿದರು.

ಕರ್ನಾಟಕದ ಬಹುತೇಕ ಬ್ಯಾಂಕುಗಳಲ್ಲಿ ಉತ್ತರ ಭಾರತದವರೇ ಹೆಚ್ಚಿನ ಸಂಖ್ಯೆಯಲ್ಲಿರುವುದನ್ನು ನಾವೆಲ್ಲ ನೋಡುತ್ತಿದ್ದೇವೆ. ಈ ಭಾಗದಲ್ಲಿ ಬ್ಯಾಂಕ್ ಪರೀಕ್ಷೆಗಳು ಕಷ್ಟ ಎನ್ನುವ ತಪ್ಪು ಮನೋಭಾವ ಇರುವುದೇ ಇದಕ್ಕೆ ಕಾರಣ. ಇತ್ತೀಚೆಗೆ ಕರ್ನಾಟಕ ಸರ್ಕಾರ ಬ್ಯಾಂಕಿಂಗ್ ಮತ್ತು ಕೇಂದ್ರ ಸರ್ಕಾರದ ಪರೀಕ್ಷೆಗಳನ್ನು ಕನ್ನಡದಲ್ಲೂ ಬರೆಯಲು ಕೇಂದ್ರದ ಮೇಲೆ ಒತ್ತಡ ಹೇರಿ ಸಫಲರಾಗಿರುವುದು ಸ್ವಾಗತಾರ್ಹ. ವಿದ್ಯಾರ್ಥಿ ಜೀವನದಲ್ಲಿ 15 ವರ್ಷ ಓದಿದವರು ಕೇವಲ 6 ತಿಂಗಳು ಛಲಬಿಡದೆ ನಿರಂತರ ಅಧ್ಯಯನ ಮಾಡಿದರೆ, ಬ್ಯಾಂಕಿಂಗ್ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿ ಜೀವನ ಕಟ್ಟಿಕೊಳ್ಳುವುದಲ್ಲದೆ ಕುಟುಂಬದವರೂ ಬದುಕನ್ನು ಕಟ್ಟಿಕೊಳ್ಳಲು ನೆರವಾಗಬಹುದು ಎಂದರು.

ಇಂದಿನ ಪೋಷಕರು ಮಕ್ಕಳಿಗೆ ಶ್ರಮ ವಹಿಸುವ ಗುಣ ಬೆಳೆಸಿದರೆ ಮಾತ್ರ ಅವರ ಅಭಿವೃದ್ಧಿ ಸಾಧ್ಯ. ಆದರೆ ಇಂದಿನ ಪೋಷಕರು ಇದನ್ನು ಮಾಡುತ್ತಿಲ್ಲ. ಹೀಗಾಗಿ ಯುವ ಸಮುದಾಯ ದಾರಿ ತಪ್ಪುತ್ತಿದೆ. ಕಡಿಮೆ ಹುದ್ದೆಗಳಿಗೆ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಗಾಬರಿಯಿಂದ ಹಿಂದೇ ಸರಿಯುವುದು ಸೂಕ್ತವಲ್ಲ. ಕೇವಲ ಒಂದೇ ಹುದ್ದೆ ಇದ್ದರೂ ಪ್ರಯತ್ನಿಸುವ ಛಲ ನಿಮ್ಮದಾಗಬೇಕು. ಕೂಡು, ಕಳೆ, ಗುಣಿಸು, ಭಾಗಿಸು ಇಷ್ಟೇ ಬ್ಯಾಂಕಿಂಗ್ ಮತ್ತು ಕೇಂದ್ರ ಸರ್ಕಾರದ ಪರೀಕ್ಷೆಗಳ ಅಧ್ಯಯನ ವಿಷಯ ಎಂದು ಶಿಬಿರಾರ್ಥಿಗಳಿಗೆ ತಿಳಿ ಹೇಳಿದರು.

ರಾಜ್ಯ ಪುರಾತತ್ವ ವಸ್ತು ಸಂಗ್ರಾಹಾಲಯ ಮತ್ತು ಪರಂಪರೆ ಇಲಾಖೆ ಆಯುಕ್ತ ಎ.ದೇವರಾಜು ಮಾತನಾಡಿ, ಮುಕ್ತ ವಿವಿ ಸ್ಪರ್ಧಾತ್ಮಕ ತರಬೇತಿ ಕೇಂದ್ರಕ್ಕೆ ನೀವು ಸೇರಿದರೆ ಅರ್ಧ ಯಶಸ್ಸು ಪಡೆದಂತೆಯೇ ಸರಿ. ಅಸಂಖ್ಯಾತ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದು ಜೀವನ ರೂಪಿಸಿಕೊಂಡಿದ್ದಾರೆ. ಸಿದ್ಧತೆಯ ಹಾದಿ ಜಟಿಲವಿದ್ದರೂ ಗುರಿ ತಲುಪಬೇಕು. ನಿರಂತರ ಶ್ರಮದಿಂದ ಯಶಸ್ಸು ಗಳಿಸಲು ಸಾಧ್ಯವಿದೆ. ನಿಮ್ಮ ಪಠ್ಯಕ್ರಮವನ್ನು ಪುನಃ ಪುನಃ ತಿರುವು ಹಾಕುತ್ತಿರಿ. ಸಮಯದ ನಿರ್ವಹಣೆ ಇರಲಿ. ಪರೀಕ್ಷಾ ಕೇಂದ್ರದಲ್ಲಿ ಕುಳಿತು ಯೋಚಿಸುವುದು ಕೂಡ ಸಮಯದ ವ್ಯರ್ಥಕ್ಕೆ ದಾರಿಯಾಗುತ್ತದೆ. ಹಾಗಾಗಿ ಅಣುಕು ಪರೀಕ್ಷೆಗೆ ಒತ್ತು ನೀಡಬೇಕು ಎಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಬ್ಯಾಂಕಿಂಗ್ ಕ್ಷೇತ್ರಗಳ ಹುದ್ದೆಗಳು ಸಮಾಜದಲ್ಲಿ ಒಳ್ಳೆಯ ಗೌರವ ಮತ್ತು ಘನತೆಯನ್ನು ತಂದುಕೊಡುತ್ತವೆ. ದೊಡ್ಡ ಗುರಿಯನ್ನು ಹೊಂದಿ ಅಧ್ಯಯನ ಮಾಡಿ ವಿಶ್ವವಿದ್ಯಾನಿಲಯಕ್ಕೆ ಗೌರವ ತನ್ನಿ ಎಂದು ಶಿಬಿರಾರ್ಥಿಗಳಿಗೆ ಶುಭ ಕೋರಿದರು.

ಮುಕ್ತ ವಿವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ, ವಿವಿಯ ಸಿದ್ದೇಶ್ ಹೊನ್ನೂರು, ಕೆ.ಜಿ.ಕೊಪ್ಪಲ್ ಗಣೇಶ್, ಸಹಾಯಕ ಪ್ರಾಧ್ಯಾಪಕ ಡಾ.ಬೀರಪ್ಪ, ಡಾ.ನಾಗೇಶ್, ಸ್ಟುಡಿಯೋ ನಿರ್ದೇಶಕ ಸಿದ್ದೇಗೌಡ ಮತ್ತಿತರರು ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ದಾವೂದ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಐ ಆ್ಯಮ್ ಗಾಡ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ದೇ ದೇ ಪ್ಯಾರ್ ದೇ–2 (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಬ್ರ್ಯಾಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ರಾಜಕಮಲ್	
ಅದರ್ಸ್ (ತ)	4 ಪ್ರದರ್ಶನಗಳು
ಸಂಗಂ	
ಗತವೈಭವ (ಕ)	4 ಪ್ರದರ್ಶನಗಳು
ಲಿಡೋ	
ಬ್ರ್ಯಾಟ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಯಜಮಾನ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	**ಕಾಂತಾರ ಚಾಪ್ಟರ್ 1(ಕ):** ಮ.1.25ಕ್ಕೆ, ಸಂ.4.45ಕ್ಕೆ
	ಪ್ರೆಡೆಟರ್ ಬ್ಯಾಡ್‌ಲ್ಯಾಂಡ್ಸ್ (ಇ): ಬೆ.11.00ಕ್ಕೆ, ರಾ.8.05, ರಾ.10.25ಕ್ಕೆ
ಸ್ಕ್ರೀನ್ 2	**ಡೈಸ್ ಇರೇ (ಮ):** ಬೆ.10.40ಕ್ಕೆ, **ಆರೋಮಲೆ (ತ):** ಮ.1.25ಕ್ಕೆ, **ಬ್ರ್ಯಾಟ್(ಕ):** ಸಂ.4.05ಕ್ಕೆ, ಸಂ.7.15ಕ್ಕೆ **ಜಟಾಧರ (ತೆ):** ರಾ.10.20ಕ್ಕೆ
ಸ್ಕ್ರೀನ್ 3	**ಹಕ್ (ಹಿ):** ಬೆ.10.35ಕ್ಕೆ, ಮ. 1.25ಕ್ಕೆ, ಸಂ. 7.15ಕ್ಕೆ **ಲವ್ ಯು ಮುದ್ದು(ಕ):** ಸಂ. 4.20ಕ್ಕೆ, **ಇನ್ನೊಸೆಂಟ್ (ಮ):** ರಾ.10.10ಕ್ಕೆ,
ಸ್ಕ್ರೀನ್ 4	**ಕಾಂತಾರ ಚಾಪ್ಟರ್ 1(ಕ):** ಸಂ. 7.00ಕ್ಕೆ, **ಬ್ರಾಟ್(ಕ):** ಬೆ.10.20ಕ್ಕೆ, **ಯಜಮಾನ(ಕ):** ಮ.1.30ಕ್ಕೆ, **ದಿ ಗರ್ಲ್‌ಫ್ರೆಂಡ್ (ತೆ):** ಸಂ.4.10ಕ್ಕೆ, ರಾ. 10.20ಕ್ಕೆ

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಕಾಂತಾರ –1(ಕ): ಬೆ.10.30, ಮ.1.35, ರಾ.7.15ಕ್ಕೆ

ಬ್ರ್ಯಾಟ್ (ಕ): ಬೆ.10.45ಕ್ಕೆ, ಮ.1.45, ಸಂ.4.45, ರಾ.7.45ಕ್ಕೆ

ನಿಷಿದ್ಧ (ಕ): ಬೆ.10.50ಕ್ಕೆ, **ದಿ ಗರ್ಲ್‌ಫ್ರೆಂಡ್ (ತೆ):** ಬೆ.11, ಸಂ.6.30, ರಾ.9.15ಕ್ಕೆ

ಕೋಣ (ಕ): ಮ.1.15ಕ್ಕೆ, **ಐ ಆ್ಯಮ್ ಗಾಡ್ (ಕ):** ಸಂ.3.40ಕ್ಕೆ,

ಲವ್ ಯು ಮುದ್ದು(ಕ): ಸಂ.6.40ಕ್ಕೆ, **ಡೈಸ್ ಇರೇ (ಮ):** ರಾ. 9.15ಕ್ಕೆ,

ನೆಕ್ಸಸ್ ಮಾಲ್

ಕಾಂತಾರ ಚಾಪ್ಟರ್ 1(ಕ) : ಬೆ: 10.00ಕ್ಕೆ, ಸಂ.4.15ಕ್ಕೆ, ರಾ.10.30ಕ್ಕೆ

ಬ್ರ್ಯಾಟ್ (ಕ): ಬೆ: 9.45ಕ್ಕೆ, ಸಂ.4.05ಕ್ಕೆ.

ದಿ ಗರ್ಲ್‌ಫ್ರೆಂಡ್ (ತೆ): ಬೆ: 9.55ಕ್ಕೆ, ಮ.12.50ಕ್ಕೆ, ಸಂ.6.55, ರಾ: 9.50ಕ್ಕೆ

ಹಕ್ (ಹಿ): ಬೆ: 10.05ಕ್ಕೆ, ಮ.1.25, ಸಂ.7.40, ರಾ.10.00ಕ್ಕೆ

ಪ್ರೆಡೆಟರ್ ಬ್ಯಾಡ್‌ಲ್ಯಾಂಡ್ಸ್ (ಇ): ಬೆ. 10.05ಕ್ಕೆ, ಮ.12.30, ಸಂ.7.15, ರಾ.9.40ಕ್ಕೆ

ದಿ ತಾಜ್ ಸ್ಟೋರಿ (ಹಿ): ಬೆ: 10.05, ಮ: 3.50ಕ್ಕೆ,

ಯಜಮಾನ (ಕ): ಮ: 12.40ಕ್ಕೆ, **ಜಟಾಧರ (ತೆ):** ಮ: 1.00ಕ್ಕೆ,

ಡೈಸ್ ಇರೇ (ಮ): ಮ. 1.35ಕ್ಕೆ, ರಾ: 7.40ಕ್ಕೆ, **ಬಾಹುಬಲಿ (ಹಿ):** ಮ. 2.55ಕ್ಕೆ,

ತಮ್ಮಾ (ಹಿ): ಮ.3.45ಕ್ಕೆ, **ಚೆನ್ನೈ ಎಕ್ಸ್‌ಪ್ರೆಸ್ (ಹಿ):** ಸಂ. 4.05ಕ್ಕೆ,

ಆರೋಮಲೆ (ತ): ಸಂ.7.15ಕ್ಕೆ, **ಏಕ್ ದಿವಾನೆ ಕಿ ದೀವಾನಿಯಾತ್ (ಹಿ):** ಸಂ.7.15ಕ್ಕೆ

ಇನ್ನೋಸೆಂಟ್(ಮ): ರಾ.10.10ಕ್ಕೆ, **ಮರ್ಡರ್ ರಿಪೋರ್ಟ್(ಕೋ):** ರಾ.10.20ಕ್ಕೆ,

ಗರುಡ ಮಾಲ್

ಕಾಂತಾರ ಚಾಪ್ಟರ್ 1(ಕ) : ಬೆ: 9.50ಕ್ಕೆ, ಮ.1.10ಕ್ಕೆ, ಸಂ.7.05

ಪ್ರೆಡೆಟರ್ ಬ್ಯಾಡ್‌ಲ್ಯಾಂಡ್ಸ್ (ಇ): ಬೆ. 10.00ಕ್ಕೆ, ಸಂ.4.45, ರಾ.10.20ಕ್ಕೆ

ದಿ ಗರ್ಲ್‌ಫ್ರೆಂಡ್ (ತೆ): ಬೆ: 10.10ಕ್ಕೆ, ಸಂ.7.05, ರಾ.10.00ಕ್ಕೆ

ಹಕ್ (ಹಿ): ಬೆ: 10.40ಕ್ಕೆ, ಸ.4.15, ರಾ.10.30ಕ್ಕೆ

ಬಾಹುಬಲಿ (ತೆ): ಮ. 12.25ಕ್ಕೆ,

ಬ್ರ್ಯಾಟ್ (ಕ): ಮ. 1.05ಕ್ಕೆ, ಸಂ.7.10ಕ್ಕೆ

ಜಟಾಧರ (ತೆ): ಮ: 1.30ಕ್ಕೆ,

ಲವ್ ಯು ಮುದ್ದು(ಕ): ಸಂ.4.20ಕ್ಕೆ, **ಡೈಸ್ ಇರೇ (ಮ):** ಸಂ.4.35, ರಾ.10.10ಕ್ಕೆ

ಐ ಆ್ಯಮ್ ಗಾಡ್ (ಕ): ಸಂ.7.05ಕ್ಕೆ,

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನಾಳೆ 'ಭಗಿನಿ ರಾಗ ಸೌರಭ' ಗಾಯನ ಕಾರ್ಯಕ್ರಮ



ಮೈಸೂರು,ನ.13(ಪಿಎಂ)– ಬಿಎಸ್‌ಎಸ್ ವಿದ್ಯೋದಯ, ರಾಗಾ ಮ್ಯೂಸಿಕ್ ಅಕಾಡೆಮಿ ಮೈಸೂರು ಹಾಗೂ ಸಂಸ್ಕಾರ ಭಾರತಿ ಸಂಯುಕ್ತಾಶ್ರಯದಲ್ಲಿ ನ.15ರಂದು 'ಭಗಿನಿ ರಾಗ ಸೌರಭ' ಶೀರ್ಷಿಕೆಯಡಿ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರಿನ ಕೃಷ್ಣಮೂರ್ತಿಪುರಂನ ಬಿಎಸ್‌ಎಸ್ ವಿದ್ಯೋದಯ ಶಾಲೆಯಲ್ಲಿ ಅಂದು ಸಂಜೆ 6ಕ್ಕೆ ನಡೆಯುವ ಕಾರ್ಯಕ್ರಮದಲ್ಲಿ ವಿದುಷಿ ಕೆ.ಆತ್ರೇಯಿ ಕೃಷ್ಣ ಅವರು ಸಂಗೀತ ಕಛೇರಿ ನಡೆಸಿಕೊಡಲಿದ್ದಾರೆ. ಇವರಿಗೆ ಪಕ್ಕ ವಾದ್ಯದಲ್ಲಿ ವಿದುಷಿ ಕೆ.ಮಹಾತೀ (ಪಿಟೀಲು), ವಿದ್ವಾನ್ ನಂದನ್ ಕಶ್ಯಪ್ (ಮೃದಂಗ), ವಿದ್ವಾನ್ ವಿ.ಎಸ್.ರಮೇಶ್ (ಮೋರ್ಚಿಂಗ್) ಅವರು ಸಹಕಾರ ನೀಡಲಿದ್ದಾರೆ.


ಸ್ವಯಂ ಪ್ರೇರಿತ ರಕ್ತದಾನ ಶಿಬಿರ

ಮೈಸೂರು, ನ.13– ಇನ್ಸ್ಪೈರ್ ಫೌಂಡೇಷನ್ ವತಿಯಿಂದ ನ್ಯೂ ಮೆಡ್ ಹೆಲ್ತ್ ಹಾಗೂ ಸ್ಪೆಕ್ಸ್ ಎಕ್ಸ್‌ವರ್ಲ್ಡ್ ಸಹಯೋಗದೊಂದಿಗೆ ನ.14 ರಂದು ರಕ್ತದಾನ ಶಿಬಿರ ಆಯೋಜಸಲಾಗಿದೆ. ಅಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 6 ಗಂಟೆ ವರೆಗೆ ವಿವೇಕಾನಂದ ವೃತ್ತದ ಎಲ್‌ಎಲ್1, 5ನೇ ಕ್ರಾಸ್‌ನಲ್ಲಿರುವ ಇನ್ಸ್ಪೈರ್ ಫೌಂಡೇಷನ್ ಕಚೇರಿಯಲ್ಲಿ ಆಸಕ್ತರು ಸ್ವಯಂ ಪ್ರೇರಿತರಾಗಿ ಬಂದು ರಕ್ತದಾನ ಮಾಡಬಹುದಾಗಿದೆ. ಶಿಬಿರದಲ್ಲಿ ಭಾಗವಹಿಸಿದವರಿಗೆ ಪ್ರಮಾಣ ಪತ್ರ ನೀಡಲಾಗುತ್ತದೆ.

ಸುರೇಶ್ ನಿಧನ



ಮೈಸೂರು, ನ.13– ತಾಲೂಕಿನ ಬೊಮ್ಮೇನಹಳ್ಳಿ ಗ್ರಾಮದ ಲೇಟ್ ನಾರಾಯಣಗೌಡರ ಪುತ್ರ ಸುರೇಶ್(50) ಅವರು ಗುರುವಾರ ಮಧ್ಯಾಹ್ನ ನಿಧನರಾದರು. ಇವರು ತಾಯಿ ಜಯಮ್ಮ, ಪತ್ನಿ ಶ್ರೀಮತಿ ವಿಜಯಲಕ್ಷ್ಮೀ, ಇಬ್ಬರು ಪುತ್ರಿಯರು, ಓರ್ವ ಪುತ್ರ, ಸಹೋದರ ರವಿ, ಮೂವರು ಸಹೋದರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮದ ತೋಟದಲ್ಲಿ ಇಂದು ಸಂಜೆ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.


ಕರ್ನಾಟಕ ವಸ್ತ್ರಪ್ರದರ್ಶನ ಮಾಜಿ ಅಧ್ಯಕ್ಷರಾದ
ಅಬ್ದುಲ್ ಅಜೀಜ್ ರವರಿಗೆ
ಜನ್ಮದಿನದ
ಶುಭಾಶಯಗಳು